

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ | ಏಪ್ರಿಲ್ 22 ಸೋಮವಾರ 2024

ಸಂಪುಟ: 45 | ಸಂಚಿಕೆ: 7 | ಪುಟಗಳು: 10

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4



ಸಿದ್ದರಾಮಯ್ಯ ಸರ್ಕಾರದಲ್ಲಿ ಕನ್ನಡಿಗರ ಬದುಕಿಗೆ

ಗ್ಯಾರಂಟಿ ಇಲ್ಲ

ಮಾಜಿ ಸಿಎಂ ಬಿ.ಎಸ್.ಯಡಿಯೂರಪ್ಪ ಕಿಡಿನುಡಿ

ಬೆಂಗಳೂರು, ಏ.21– ಲೋಕಸಭೆ ಚುನಾವಣೆ 2024ಕ್ಕೆ ಕರ್ನಾಟಕದಲ್ಲಿ ಮೊದಲ ಹಂತದ ಚುನಾವಣೆಗೆ ಇನ್ನು ಐದು ದಿನಗಳು ಬಾಕಿಯುಷ್ಟೆ. ಈ ಸಂದರ್ಭದಲ್ಲಿ ಭಾನುವಾರ ಬೆಂಗಳೂರಿನಲ್ಲಿ ಬಿಜೆಪಿಯ ಮಾಜಿ ಮುಖ್ಯಮಂತ್ರಿಗಳಾದ ಬಿ.ಎಸ್. ಯಡಿಯೂರಪ್ಪ, ಡಿ.ವಿ.ಸದಾನಂದಗೌಡ ಜಂಟಿ ಸುದ್ದಿಗೋಷ್ಠಿ ನಡೆಸಿದರು.

ಕಾಂಗ್ರೆಸ್ ಸರ್ಕಾರ ವಿರುದ್ಧ ಟೀಕಾಪ್ರಹಾರ ನಡೆಸಿದ ಬಿ.ಎಸ್. ಯಡಿಯೂರಪ್ಪ, ಮುಖ್ಯಮಂತ್ರಿ ಸಿದ್ದರಾಮಯ್ಯ ಸರ್ಕಾರದಲ್ಲಿ ಕನ್ನಡಿಗರ ಬದುಕಿಗೆ ಗ್ಯಾರಂಟಿ ಇಲ್ಲ. ರಾಜ್ಯದಲ್ಲಿ ಕೊಲೆ, ಹಲ್ಲೆ, ದೌರ್ಜನ್ಯ ಪ್ರಕರಣಗಳು ಹೆಚ್ಚುತ್ತಿವೆ. ಇದೊಂದು ಕ್ರೂರ ಸರ್ಕಾರ ಎಂದು ಕಿಡಿಕಾರಿದರು. ಹುಬ್ಬಳ್ಳಿಯಲ್ಲಿ ವಿದ್ಯಾರ್ಥಿನಿ ನೇಹಾ ಹಿರೇಮಠ ಕೊಲೆ ನಡೆದಿದೆ. ಸಿದ್ದರಾಮಯ್ಯ ಅವರು ತಮ್ಮದೇ ಪಕ್ಷದ ಕಾರ್ಯಕರ್ತನಿಗೆ ನ್ಯಾಯ ಕೊಡಿಸಿಲ್ಲ ಎಂದು ವಾಗ್ದಾಳಿ ಮಾಡಿದರು.



ಭಾರತದ ಭವಿಷ್ಯಕ್ಕೆ ಮತ ಕೇಳುತ್ತಿದ್ದ ಬಿಜೆಪಿ ಕಾರ್ಯಕರ್ತರ ಮೇಲೆ ಕಾರು ಹಾಯಿಸಿದ್ದಾರೆ. ಕಲಾವಿದರಾದ ಹರ್ಷಿಕಾ ಪೂಣಚ್ಚ ಮೇಲೆ ಹಲ್ಲೆ ಮಾಡಿದ್ದಾರೆ. ವಂಟಮೂರಿಯಲ್ಲಿ ಮಹಿಳೆಯನ್ನು ಬೆತ್ತಲೆ ಮಾಡಿ ಅಮಾನುಷವಾಗಿ ನಡೆದುಕೊಂಡರೂ ಕ್ರಮ ಕೈಗೊಂಡಿಲ್ಲ. ಕೋಲಾರ ಮತ್ತು ಶಿವಮೊಗ್ಗದಲ್ಲಿ ಔರಂಗಜೇಬ್ ಕಟೌಟ್ ಹಾಕಿದ್ದರು. ಮಂಡ್ಯದಲ್ಲಿ ಪೊಲೀಸ್ ಅಧಿಕಾರಿಗಳ ಮೂಲಕ ಹನುಮ ಧ್ವಜ ಇಳಿಸಿದ್ದಾರೆ. ಇದೊಂದು ಕ್ರೂರ ಸರ್ಕಾರ. ಆರೋಪಿಗಳ ವಿರುದ್ಧ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಕಳೆದೊಂದು ವರ್ಷದಿಂದ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಬಂದ ನಂತರ ಆಗಿರುವ ಅಪರಾಧ ಪ್ರಕರಣಗಳನ್ನು ಉಲ್ಲೇಖಿಸಿದರು.

ಗ್ಯಾರಂಟಿ ಬಗ್ಗೆ ಗ್ಯಾರಂಟಿಯಿಲ್ಲ: ರಾಜ್ಯದ ಜನತೆ ಸರ್ಕಾರದ ಗ್ಯಾರಂಟಿ ಬಗ್ಗೆ ವಿಶ್ವಾಸ ಕಳೆದುಕೊಂಡಿದ್ದಾರೆ. ಜನರಿಗೆ ನೀರು, ವಿದ್ಯುತ್ ಗ್ಯಾರಂಟಿ ಇಲ್ಲ. ತೆರಿಗೆ ಹೆಚ್ಚಳವಾಗಿದೆ. ಸಿದ್ದರಾಮಯ್ಯ ಸರ್ಕಾರ ಮತಾಂಧ ಶಕ್ತಿಯನ್ನು ತಮ್ಮ ಆಡಳಿತದ ಭಾಗವಾಗಿ ಮಾಡಿಕೊಂಡಿದೆ. ಸರ್ಕಾರ ಬಂದು ಒಂದೇ ವರ್ಷದಲ್ಲಿ ಮತಾಂಧರು ರಾಜ್ಯವನ್ನು ಯುದ್ಧಭೂಮಿ ಮಾಡಿಕೊಂಡಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ರೈತರ ಆತ್ಮಹತ್ಯೆ ಹೆಚ್ಚಳವಾಗಿದೆ. ಕಿಸಾನ್ ಸಮ್ಮಾನ್ ಯೋಜನೆಗೆ ನೀಡುತ್ತಿದ್ದ ಹಣ ನಿಲ್ಲಿಸಿದ್ದಾರೆ. ಇದೊಂದು ಕಲ್ಲು ಬಂಡೆ ಸರ್ಕಾರ. ಸರ್ಕಾರ ದಿವಾಳಿಯಾಗಿದೆ. ಸರ್ಕಾರದ ಖಜಾನೆಯಲ್ಲಿ ● 8ನೇ ಪುಟಕ್ಕೆ

ಯದುವೀರ್ ಗೆಲುವಿಗಾಗಿ ಬೆಟ್ಟದ ಮೆಟ್ಟಿಲು ಹತ್ತಿ ಚಾಮುಂಡೇಶ್ವರಿ ದೇವಿಗೆ ಪೂಜೆ ಸಲ್ಲಿಸಿದ ಮಹಿಳಾಮಣಿಯರು



ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಗೆಲುವಿಗಾಗಿ ಪ್ರಾರ್ಥಿಸಿ ಮಹಿಳಾ ಮೋರ್ಚಾ ಕಾರ್ಯಕರ್ತರು ಮೆಟ್ಟಿಲು ಮೂಲಕ ಚಾಮುಂಡಿಬೆಟ್ಟ ಹತ್ತಿದರು.

ಮೈಸೂರು, ಏ.21(ಎಂಟಿವೈ)– ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಗೆಲುವಿಗಾಗಿ ಪ್ರಾರ್ಥಿಸಿ ಬಿಜೆಪಿ ಮಹಿಳಾ ಮೋರ್ಚಾ ಕಾರ್ಯಕರ್ತೆಯರು ಭಾನುವಾರ ಮೆಟ್ಟಿಲುಗಳ ಮೂಲಕ ಚಾಮುಂಡಿ ಬೆಟ್ಟ ಹತ್ತಿ ವಿಶೇಷ ಪೂಜೆ ಸಲ್ಲಿಸಿದರು.

ಚಾಮುಂಡಿಬೆಟ್ಟದ ತಪ್ಪಲಿನಲ್ಲಿ ಬೆಟ್ಟ ಹತ್ತುವ ಅಭಿಯಾನಕ್ಕೆ ಮಾಜಿ ಶಾಸಕ ಎಸ್.ಎ.ರಾಮದಾಸ್, ಶಾಸಕ ಟಿ.ಎಸ್. ಶ್ರೀವತ್ಸ, ಮಾಜಿ ಶಾಸಕ, ಬಿಜೆಪಿ ನಗರಾಧ್ಯಕ್ಷ ಎಲ್.ನಾಗೇಂದ್ರ, ಜಿಲ್ಲಾಧ್ಯಕ್ಷ ಎಲ್.ಆರ್.ಮಹದೇವಸ್ವಾಮಿ ಚಾಲನೆ ನೀಡಿದರು. ಬಳಿಕ 'ವರವ ಕೊಡೆ ಚಾಮುಂಡಿ.. ವರವ ಕೊಡೆ ಎಂದು ಘೋಷಣೆ ಕೂಗುತ್ತಾ ಮೆಟ್ಟಿಲು ಹತ್ತುವ ಮೂಲಕ ಚಾಮುಂಡಿಬೆಟ್ಟ ತಲುಪಿ ನಾಡದೇವಿಗೆ ಪೂಜೆ ಸಲ್ಲಿಸಿದರು.

ಇದೇ ವೇಳೆ ಮಾಜಿ ಶಾಸಕ ಎಸ್.ಎ. ರಾಮದಾಸ್ ಮಾತನಾಡಿ, ದೇಶದಲ್ಲಿ ಮತ್ತೊಮ್ಮೆ ಮೋದಿ ಪ್ರಧಾನಿಯಾಗಬೇಕೆಂಬ ಬಯಕೆ ಜನರಲ್ಲಿದೆ. ಇದರಿಂದ ಕರ್ನಾಟಕ ಸೇರಿದಂತೆ ವಿವಿಧೆಡೆ ಬಿಜೆಪಿ ಪರವಾದ ಅಲೆ ಇದೆ. ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದಲ್ಲಿ ಬಿಜೆಪಿ ಅಭ್ಯರ್ಥಿ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಅವರ ಗೆಲುವಿಗೆ ಪೂರಕವಾದ ವಾತಾವರಣವಿದೆ. ಕೆ.ಆರ್.ಕ್ಷೇತ್ರದಲ್ಲಿಯೇ ಅತಿ ಹೆಚ್ಚು ಲೀಡ್ ದೊರೆಯಲಿದೆ. ಮೋದಿ ಅವರ ಕೈ ಬಲಪಡಿಸುವ ನಿಟ್ಟಿನಲ್ಲಿ ಕ್ಷೇತ್ರದ ಜನತೆ ಉತ್ಸುಕರಾಗಿದ್ದಾರೆ. ಈ ವೇಳೆ ● 8ನೇ ಪುಟಕ್ಕೆ

ಬಿಜೆಪಿ ಡಿಎನ್‌ಎನಲ್ಲಿ ಸಂವಿಧಾನ ಬದಲಿಸುವ ಗುಣವಿದೆ

ಕರ್ನಾಟಕ ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ ಆರೋಪ



ಮೈಸೂರಿನ ಖಾಸಗಿ ಹೋಟೆಲ್‌ನಲ್ಲಿ ಭಾನುವಾರ ಕಾಂಗ್ರೆಸ್ ರಾಜ್ಯ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ ಸುದ್ದಿಗೋಷ್ಠಿಯಲ್ಲಿ ಕೇಂದ್ರ ಸರ್ಕಾರದ ವಿರುದ್ಧ ಖಾಲಿ ಚೊಂಬು ಪ್ರದರ್ಶಿಸಿದರು.

ಮೈಸೂರು,ಏ.21(ಎಂಟಿವೈ)– ಬಿಜೆಪಿ ರಕ್ತ ಹಾಗೂ ಡಿಎನ್‌ಎನಲ್ಲಿ ಸಂವಿಧಾನ ಬದಲಾವಣೆ ಮಾಡುವ ಹಾಗೂ ದಲಿತರು, ರೈತ, ಮಹಿಳಾ ವಿರೋಧಿ ಗುಣಗಳಿವೆ ಎಂದು ಕಾಂಗ್ರೆಸ್ ರಾಜ್ಯ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ ಬಿಜೆಪಿ ವಿರುದ್ಧ ವಾಗ್ದಾಳಿ ನಡೆಸಿದರು.

ಮೈಸೂರಿನ ಖಾಸಗಿ ಹೋಟೆಲ್‌ನಲ್ಲಿ ಭಾನುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ ನಾಯಕರು ಪದೇ ಪದೆ 400 ಸ್ಥಾನ ಬರಬೇಕು ಎನ್ನುತ್ತಿರುವುದು ಸಂವಿಧಾನ ಬದಲಿಸುವುದಕ್ಕೆ ಎನ್ನುವುದನ್ನು ಜನ ಅರ್ಥ ಮಾಡಿಕೊಳ್ಳಬೇಕು. ಕಳೆದ 10 ವರ್ಷದಿಂದ ದೇಶದಲ್ಲಿ ಸಂವಿಧಾನ ವಿರೋಧಿ ಆಡಳಿತ ನಡೆಸಿದ್ದಾರೆ. ಇದನ್ನು ಗಮನಿಸಿದರೆ ಬಿಜೆಪಿಯವರ ಡಿಎನ್‌ಎನಲ್ಲಿಯೇ ದಲಿತ, ರೈತ, ಮಹಿಳಾ ವಿರೋಧಿ ಹಾಗೂ ಸಂವಿಧಾನ ವಿರೋಧಿಸುವ ಗುಣಗಳಿರುವುದು ಖಚಿತವಾಗಿದೆ. ಪ್ರಧಾನಿ ಮೋದಿ ಅಂತರರಾಷ್ಟ್ರೀಯ ಮಟ್ಟದಲ್ಲಿ ನನ್ನನ್ನು ಸೋಲಿಸಲು ಸಂಚು ನಡೆಸುತ್ತಿದ್ದಾರೆ ಎಂದು ಭ್ರಮೆಗೆ ಒಳಗಾಗಿ ಹೇಳಿಕೆ ನೀಡಿದ್ದಾರೆ. ಅನಂತಕುಮಾರ್ ಹೆಗಡೆ ಸಂವಿಧಾನ ಬದಲಿಸುತ್ತೇವೆ ಎಂದು ಹೇಳಿದಾಗ ಅವರನ್ನು ಸಚಿವ ಸ್ಥಾನದಿಂದ ವಜಾ ಮಾಡಲಿಲ್ಲ. ಅರುಣ್ ಗೋಯಲ್ ಸಂವಿಧಾನ ಬದಲಿಸುವ ಹೇಳಿಕೆ ನೀಡಿದಾಗ ಅವರ ಮೇಲೆ ಕ್ರಮ ಕೈಗೊಳ್ಳಲಿಲ್ಲ. ಈಗ ಚುನಾವಣೆಗೆ ಸ್ಪರ್ಧೆ ಮಾಡಿರುವ ಲಾಲು ಸಿಂಗ್ ಯಾದವ್, ಜ್ಯೋತಿ ಮಿರ್ದಾ ಸಂವಿಧಾನ ಬದಲಾವಣೆ ಹೇಳಿಕೆ ಕೊಟ್ಟಿದ್ದಾರೆ. ಅವರನ್ನು ಚುನಾವಣೆಯಿಂದ ಹಿಂದೆ ಸರಿಯುವಂತೆ ಮಾಡಲಿಲ್ಲ. ಈ ಎಲ್ಲಾ ಬೆಳವಣಿಗೆಗಳು ಸಂವಿಧಾನ ಬದಲಿಸಲು ನಡೆಸುತ್ತಿರುವ ಹುನ್ನಾರ ಬಯಲಿಗೆ ಬಂದಂತಾಗಿದೆ ಎಂದರು.

ರಾಜ್ಯದಲ್ಲಿ ಮಹಿಳೆಯರಿಗೆ ನೀಡುತ್ತಿರುವ ಗ್ಯಾರಂಟಿ ಯೋಜನೆಗಳನ್ನು ಬಿಜೆಪಿ–ಜೆಡಿಎಸ್ ವಿರೋಧಿಸುತ್ತಿದೆ. ಇದು ಕೂಡ ಇವರ ಡಿಎನ್‌ಎಯಲ್ಲಿದೆ. ಗೃಹಲಕ್ಷ್ಮಿ ಯೋಜನೆಯಿಂದ 1.25 ಕೋಟಿ ಮಹಿಳೆಯರು ಅನುಕೂಲ ಪಡೆದುಕೊಳ್ಳುತ್ತಿದ್ದಾರೆ. ಗೃಹಜ್ಯೋತಿ, ಶಕ್ತಿ, ● 8ನೇ ಪುಟಕ್ಕೆ

ರಾಜ್ಯದಲ್ಲಿ ನಾಯಕತ್ವ ಬದಲಾವಣೆ ಊಹಾಪೋಹ

ಮೈಸೂರು, ಏ.21(ಎಂಟಿವೈ)– ರಾಜ್ಯದಲ್ಲಿ ನಾಯಕತ್ವ ಬದಲಾವಣೆ ಕೇವಲ ಊಹಾಪೋಹವಷ್ಟೆ, ಅದನ್ನು ನಂಬಬಾರದು ಎಂದು ಕಾಂಗ್ರೆಸ್‌ನ ರಾಜ್ಯ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ ಸ್ಪಷ್ಟಪಡಿಸಿದ್ದಾರೆ.

ಮೈಸೂರಲ್ಲಿ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ಲೋಕಸಭಾ ಚುನಾವಣೆ ನಂತರ ರಾಜ್ಯದಲ್ಲಿ ನಾಯಕತ್ವ ಬದಲಾವಣೆಯಾಗುತ್ತಿದೆ ಎಂಬ ವದಂತಿಗೆ ಯಾವುದೇ ಪುಷ್ಟಿಯಿಲ್ಲ ಕೇವಲ ಅದು ವದಂತಿಯಷ್ಟೇ. ಬದಲಾವಣೆಗೆ ಸಂಬಂಧಿಸಿದಂತೆ ಕೆಲ ಸಚಿವರು, ಶಾಸಕರುಗಳು ನೀಡಿರುವ ಹೇಳಿಕೆಗಳು ಅದು ಅವರ ವೈಯಕ್ತಿಕ ಹೇಳಿಕೆಯಾಗಿದೆ ಎಂದು ಸುರ್ಜೇವಾಲ ಹೇಳಿದರು.

ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಬಿಜೆಪಿ ಸರ್ಕಾರ ರಾಜ್ಯಕ್ಕೆ ಚೊಂಬು ಕೊಟ್ಟಿರುವುದು ಸತ್ಯ. ನಾವು ವಾಪಸ್ ಖಾಲಿ ಚೊಂಬು ಕೊಡುತ್ತಿದ್ದೇವೆ. ಮೋದಿ ಮಾಡೆಲ್ ಅಂದರೆ ಚೊಂಬು, ಅವರಿಗೆ ರಾಜ್ಯದ ಜನರ ಹಿತಬೇಕಿಲ್ಲ. ಮತ ಮಾತ್ರಬೇಕು. ಅದಕ್ಕಾಗಿಯೇ ಅವರು ಇಲ್ಲಿವರೆಗೂ ಚೊಂಬು ಕೊಟ್ಟಿದ್ದಾರೆ. ನಾವು ಈಗ ವಾಪಸ್ ಖಾಲಿ ಚೊಂಬು ಕೊಡಬೇಕು. ಬರಗಾಲದ ಪರಿಹಾರ ಕೊಡಲಿಲ್ಲ, ತೆರಿಗೆ ಬಾಕಿ ನೀಡಲಿಲ್ಲ, ರೈತರ ಹಾಗೂ ದುಪ್ಪಟ್ಟು ಮಾಡಲಿಲ್ಲ ಎಂದರು.

ನೇಹಾ ಹಿರೇಮಠ್ ಹತ್ಯೆ ಪ್ರಕರಣ

ಇಂದು ರಾಜ್ಯಾದ್ಯಂತ ಪ್ರತಿಭಟನೆಗೆ ಬಿಜೆಪಿ ಕರೆ

ಬೆಂಗಳೂರು, ಏ.21– ಹುಬ್ಬಳ್ಳಿಯ ವಿದ್ಯಾರ್ಥಿನಿ ನೇಹಾ ಹಿರೇಮಠ್ ಹತ್ಯೆ ಖಂಡಿಸಿ ರಾಜ್ಯ ಬಿಜೆಪಿ ನಾಳೆ ರಾಜ್ಯಾದ್ಯಂತ ಬೃಹತ್ ಪ್ರತಿಭಟನೆಗೆ ಕರೆ ನೀಡಿದೆ. ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ತಿಳಿಸಿರುವ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ, ಹುಬ್ಬಳ್ಳಿಯ ನೇಹಾ ಹಿರೇಮಠ್ ಹತ್ಯೆ ಅತ್ಯಂತ ಅಮಾನುಷ ಘಟನೆಯಾಗಿದೆ. ಇದನ್ನು ಪೊಲೀಸರು ಎಲ್ಲಾ ಮಗ್ಗಲುಗಳಿಂದಲೂ ತನಿಖೆ ನಡೆಸಬೇಕಾಗಿರುವುದು ಸಾರ್ವಜನಿಕರ ಆಗ್ರಹವಾಗಿದೆ. ಆದರೆ ಮುಖ್ಯಮಂತ್ರಿಗಳು, ಗೃಹ ಸಚಿವರು ಹಾಗೂ ಕೆಲ ಸಚಿವರು ಘಟನೆಯ ಕುರಿತು ಲಘುವಾಗಿ ಪ್ರತಿಕ್ರಿಯಿಸಿರುವುದು ನೋಡಿದರೆ ದುಷ್ಟರಿಗೆ ಹಾಗೂ ಹಿಂದೂ ಧರ್ಮದ ಕಂಟಕರಿಗೆ ಸರ್ಕಾರದ ಕೃಪಾ ಪೋಷಣೆಯ ಉದಾರತೆ ದೊರೆಯುತ್ತಿರುವುದು ಸ್ಪಷ್ಟವಾಗಿದೆ, ಅಲ್ಪಸಂಖ್ಯಾತರ ಓಲೈಕೆಯೇ ಈ ಸರ್ಕಾರದ ಆದ್ಯತೆಯಾಗಿದೆ ಎಂದು ಟೀಕಿಸಿದ್ದಾರೆ. ಏಪ್ರಿಲ್ 22 ರ ಸೋಮವಾರದಂದು ನಮ್ಮ ಮುಖಂಡರು ಹಾಗೂ ಪಕ್ಷದ ಕಾರ್ಯಕರ್ತರು ರಾಜ್ಯಾದ್ಯಂತ ಬೀದಿಗಿಳಿದು ಹೋರಾಟ ನಡೆಸಲು ಕರೆ ನೀಡಲಾಗಿದೆ ಎಂದು ತಿಳಿಸಿದ್ದಾರೆ.

ಸಿಬಿಐಗೆ ವಹಿಸಲು ಜೆ.ಪಿ.ನಡ್ಡಾ ಒತ್ತಾಯ

ಹುಬ್ಬಳ್ಳಿ, ಏ.21– ವಿದ್ಯಾರ್ಥಿನಿ ನೇಹಾ ಹಿರೇಮಠ್ ಹತ್ಯೆ ಪ್ರಕರಣವನ್ನು ಸಿಬಿಐ ತನಿಖೆಗೆ ಒಪ್ಪಿಸಬೇಕು ಎಂದು ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ. ಪಿ. ನಡ್ಡಾ ಒತ್ತಾಯಿಸಿದರು. ಇಂದು ಹುಬ್ಬಳ್ಳಿಗೆ ಆಗಮಿಸಿದ್ದ ಅವರು ನೇಹಾ ನಿವಾಸಕ್ಕೆ ಭೇಟಿ ನೀಡಿ, ಅವರ ತಂದೆ ಕಾಂಗ್ರೆಸ್ ಕೌನ್ಸಿಲರ್ ನಿರಂಜನ ಹಿರೇಮಠ ಅವರಿಗೆ ಸಾಂತ್ವನ ಹೇಳಿದರು.




ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಜೆಪಿ ನಡ್ಡಾ, ಇದೊಂದು ಆಘಾತಕಾರಿ ಘಟನೆಯಾಗಿದ್ದು, ನಾವು ಖಂಡಿಸುತ್ತೇವೆ. ಈ ಕುರಿತು ಸಿಎಂ ಸಿದ್ದರಾಮಯ್ಯ ಮತ್ತು ಗೃಹ ಸಚಿವ ಜಿ. ಪರಮೇಶ್ವರ ಅವರ ಹೇಳಿಕೆಗಳು ಆಕ್ಷೇಪಾರ್ಹವಾಗಿವೆ. ಅವರ ಹೇಳಿಕೆಗಳು ತನಿಖೆಯನ್ನು ದುರ್ಬಲಗೊಳಿಸುತ್ತವೆ. ನಿರಂಜನ್ ಹಿರೇಮಠ್ ಅವರಿಗೆ ರಾಜ್ಯ ಪೊಲೀಸರ ಮೇಲಿನ ನಂಬಿಕೆ ಕಡಿಮೆಯಾಗಿದ್ದು, ರಾಜ್ಯ ಪೊಲೀಸರು ತನಿಖೆ ನಡೆಸಲು ಅಸಮರ್ಥರಾಗಿದ್ದರೆ ಪ್ರಕರಣವನ್ನು ಸಿಬಿಐಗೆ ವಹಿಸಬೇಕು ಎಂದು ಜೆ.ಪಿ. ನಡ್ಡಾ ಒತ್ತಾಯಿಸಿದರು.

ಮೈಸೂರಲ್ಲಿ ಕಾಯಕ ಸಮುದಾಯಗಳ ಸಮಾವೇಶ

ಕಾಂಗ್ರೆಸ್ ಸರ್ಕಾರದ ಅಲ್ಪಸಂಖ್ಯಾತರ ತುಷ್ಟೀಕರಣದಿಂದ ಹಾಡಹಗಲೇ ಕೊಲೆ

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಆರೋಪ



ಮೈಸೂರಿನ ದಸರಾ ವಸ್ತು ಪ್ರದರ್ಶನದ ಆವರಣದಲ್ಲಿ ಭಾನುವಾರ ನಡೆದ ರಾಜ್ಯ ಹಿಂದುಳಿದ ವರ್ಗಗಳ ಮೋರ್ಚಾದ ಕಾಯಕ ಸಮುದಾಯಗಳ ಸಮಾವೇಶವನ್ನು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಉದ್ಘಾಟಿಸಿದರು.

ಮೈಸೂರು, ಏ.21(ಬಿಎಲ್‌ಯು)– ಕಾಂಗ್ರೆಸ್ ಸರ್ಕಾರದ ಅಲ್ಪಸಂಖ್ಯಾತರ ತುಷ್ಟೀಕರಣದಿಂದ ಕರ್ನಾಟಕದಲ್ಲಿ ಹಾಡಹಗಲೇ ಕೊಲೆಗಳು ನಡೆಯುತ್ತಿವೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆರೋಪಿಸಿದರು.

ಮೈಸೂರಿನ ದಸರಾ ವಸ್ತು ಪ್ರದರ್ಶನದ ಆವರಣದಲ್ಲಿ ರಾಜ್ಯ ಹಿಂದುಳಿದ ವರ್ಗಗಳ ಮೋರ್ಚಾದ ಕಾಯಕ ಸಮುದಾಯಗಳ ಸಮಾವೇಶ ಉದ್ಘಾಟಿಸಿ ಮಾತನಾಡಿದ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ತಾನು ಅಹಿಂದ ಪರ ಎಂದು ಹೇಳುತ್ತಿದ್ದರು. ಆದರೆ ಈಗ ಹಿಂದುಳಿದ ಸಮಾಜವನ್ನು ದೂರ ತಳ್ಳಿ ಅಲ್ಪಸಂಖ್ಯಾತರ ಹಿಂದೆ ಹೋಗಿದ್ದಾರೆ ಎಂದು ಟೀಕಿಸಿದರು.

ರಾಜ್ಯದಲ್ಲಿ ಹೆಣ್ಣು ಮಕ್ಕಳಿಗೆ ರಕ್ಷಣೆ ಇಲ್ಲದಂತಾಗಿದೆ. ಮಗಳು ಹೊರಗೆ ಹೋದರೆ ಮತ್ತೆ ಯಾವಾಗ ಸುರಕ್ಷತೆಯಿಂದ ಮನೆಗೆ ವಾಪಸಾಗುತ್ತಾಳೆ ಎಂದು ತಾಯಂದಿರು ದಾರಿ ಕಾಯುವ ಪರಿಸ್ಥಿತಿ ನಿರ್ಮಾಣವಾಗಿದೆ. ಇದರಿಂದ ಮಹಿಳೆಯರಿಗೆ ಸುರಕ್ಷತೆ ದೊಡ್ಡ ಸವಾಲಾಗಿದೆ ಎಂದು ಹೇಳಿದರು.

ಗ್ಯಾರಂಟಿ ಭರಾಟೆಯಲ್ಲಿ ಮುಳುಗಿರುವ ಕಾಂಗ್ರೆಸ್ ಸರ್ಕಾರಕ್ಕೆ ಮಹಿಳೆಯರ ಸುರಕ್ಷತೆ ಬಗ್ಗೆ ಕಿಂಚಿತ್ತೂ ಕಾಳಜಿ ಇಲ್ಲ. ನೇಹಾ ಕೊಲೆ ಪ್ರಕರಣದಲ್ಲಿ ಸಿದ್ದರಾಮಯ್ಯ ಸೇರಿದಂತೆ ಸಚಿವರು ಲಘುವಾದ ಹೇಳಿಕೆ ನೀಡಿರುವುದೇ ಇದಕ್ಕೆ ಸ್ಪಷ್ಟ ನಿದರ್ಶನ ಎಂದು ವಿಜಯೇಂದ್ರ ಹೇಳಿದರು. ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಯದುವೀರ್ ಅವರನ್ನು ಜಾತಿ ದೃಷ್ಟಿಯಿಂದ ನೋಡಬೇಡಿ. ಸಮ ಸಮಾಜದ ಪರಿಕಲ್ಪನೆಯಲ್ಲಿ ಅವರ ಹಿರಿಯರು ನೋಡಿದಂತೆ ಯದುವೀರ್ ಅವರ ಚಿಂತನೆ ಇದೆ. ಆದ ಕಾರಣ ಎಲ್ಲಾ ವರ್ಗದ ಜನರು ಯದುವೀರ್ ಬೆಂಬಲಿಸಬೇಕು ಎಂದು ಮನವಿ ಮಾಡಿದರು. ಮೈಸೂರು ರಾಜಮನೆತನ ರಾಜ್ಯ ● 8ನೇ ಪುಟಕ್ಕೆ

ಗ್ಯಾರಂಟಿ ಹೆಸರಿನಲ್ಲಿ ಜನರಿಗೆ ಖಾಲಿ ಚೊಂಬು– ರಘು ಕೌಟಿಲ್ಯ

ರಾಜ್ಯದಲ್ಲಿ ಯಾವುದೇ ಅಭಿವೃದ್ಧಿ ಕಾರ್ಯ ಮಾಡದ ಕಾಂಗ್ರೆಸ್ ಸರ್ಕಾರ ಗ್ಯಾರಂಟಿ ಯೋಜನೆ ಹೆಸರಿನಲ್ಲಿ ಜನರಿಗೆ ಖಾಲಿ ಚೊಂಬು ನೀಡಿದೆ ಎಂದು ಬಿಜೆಪಿ ಹಿಂದುಳಿದ ಮೋರ್ಚಾ ರಾಜ್ಯಾಧ್ಯಕ್ಷ ರಘು ಕೌಟಿಲ್ಯ ಆರೋಪಿಸಿದರು.

ಗ್ಯಾರಂಟಿ ಯೋಜನೆಯಲ್ಲಿ ಉಚಿತ ಸೌಲಭ್ಯ ಕಲ್ಪಿಸುತ್ತಿದ್ದೇವೆ ಎಂದು ಕಾಂಗ್ರೆಸ್‌ನವರು ಹೇಳುತ್ತಿದ್ದಾರೆ. ಆದರೆ ಬಸ್ ದರ, ಅಗತ್ಯ ವಸ್ತುಗಳ ಬೆಲೆ ಹೆಚ್ಚಳ ಮಾಡಿ ಮತ್ತೊಂದು ಮೂಲದಿಂದ ಜನರನ್ನು ಸುಲಿಗೆ ಮಾಡುತ್ತಿದ್ದಾರೆ ಎಂದು ಆಪಾದಿಸಿದರು. ಸರ್ಕಾರದ ಯಾವುದೇ ನಿಗಮಗಳಿಗೂ ಅನುದಾನ ನೀಡಿಲ್ಲ. ಇದರಿಂದ ಕಾಯಕ ಸಮುದಾಯಕ್ಕೆ ಕಾಂಗ್ರೆಸ್ ಸರ್ಕಾರದಿಂದ ಯಾವುದೇ ಪ್ರಯೋಜನವಾಗುತ್ತಿಲ್ಲ ಎಂದು ದೂರಿದರು. ಬಸವಣ್ಣನವರ ಅನುಭವ ಮಂಟಪದ ಮಾದರಿಯಲ್ಲಿ ನರೇಂದ್ರ ಮೋದಿ ಸರ್ಕಾರ ಕಾಯಕ ಸಮಾಜಕ್ಕೆ ಹಲವು ಯೋಜನೆ ಜಾರಿಗೊಳಿಸಿದೆ. ಈ ಹಿನ್ನೆಲೆ ಮತ್ತೊಂದು ಬಾರಿ ಬಿಜೆಪಿ ಬೆಂಬಲಿಸಿದರೆ ಎಲ್ಲಾ ವರ್ಗದವರ ಶ್ರೇಯೋಭಿವೃದ್ಧಿಗೆ ನರೇಂದ್ರ ಮೋದಿ ಸರ್ಕಾರ ಹಲವು ವಿಶಿಷ್ಟ ಯೋಜನೆ ಜಾರಿಗೊಳಿಸುತ್ತದೆ ಎಂದು ರಘು ಕೌಟಿಲ್ಯ ಭರವಸೆ ನೀಡಿದರು.

ಮುಖ್ಯಮಂತ್ರಿ, ಗೃಹ ಸಚಿವರು ಸೂಕ್ಷ್ಮತೆಯಿಂದ ಮಾತನಾಡಬೇಕು

ಮಹಿಳಾ ಆಯೋಗದ ಅಧ್ಯಕ್ಷೆ ನಾಗಲಕ್ಷ್ಮಿ ಚೌಧರಿ

ಹುಬ್ಬಳ್ಳಿ, ಏ.21– ನೇಹಾ ಕೊಲೆಯನ್ನು ಜಾತಿ, ಧರ್ಮ ಹಾಗೂ ರಾಜಕಾರಣದಂತಹ ವಿಚಾರಕ್ಕೆ ಬಳಸಿಕೊಳ್ಳಬಾರದು. ಇಂತಹ ಪ್ರಕರಣಗಳು ನಡೆದಾಗ ಮುಖ್ಯಮಂತ್ರಿ, ಗೃಹ ಸಚಿವರು ಸೂಕ್ಷ್ಮತೆಯಿಂದ ಮಾತನಾಡಬೇಕು. ಕುಟುಂಬಸ್ಥರಿಗೆ ನೋವು ಹಾಗೂ ಅವಮಾನ ಆಗದಂತೆ ನಡೆದುಕೊಳ್ಳಬೇಕು ಎಂದು ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ನಾಗಲಕ್ಷ್ಮಿ ಚೌಧರಿ ಹೇಳಿದರು.



ಕೊಲೆಯಾದ ವಿದ್ಯಾರ್ಥಿನಿ ನೇಹಾ ಹಿರೇಮಠ ಅವರ ನಿವಾಸಕ್ಕೆ ಭಾನುವಾರ ಭೇಟಿ ನೀಡಿ, ಕುಟುಂಬಸ್ಥರಿಗೆ ಸಾಂತ್ವನ ಹೇಳಿದ ನಂತರ ಮಾಧ್ಯಮದವರೊಂದಿಗೆ ಅವರು ಮಾತನಾಡಿದರು.

ಇಂತಹ ಪ್ರಕರಣದಲ್ಲಿ ಆರೋಪಿ ಒಬ್ಬನೇ ಇರುವುದಿಲ್ಲ. ತನಿಖೆ ಸಾಗುತ್ತ ಹೋದಂತೆ ಸಾಕ್ಷ್ಯಗಳು ಸಂಗ್ರಹವಾಗುತ್ತ ಹೋಗುತ್ತವೆ. ಆಗ ಹೊಸ ವಿಷಯಗಳು ದೊರಕುತ್ತದೆ. ಆರೋಪಿಗೆ ಗಲ್ಲು ಶಿಕ್ಷೆಯಾಗಬೇಕು. ನೇಹಾ ಕುಟುಂಬಸ್ಥರಿಗೆ ನ್ಯಾಯ ಸಿಗುವವರೆಗೂ ನಾವು ಜೊತೆಗೆ ನಿಲ್ಲುತ್ತೇವೆ ಎಂದರು. ಶಾಲೆ, ಕಾಲೇಜುಗಳಿಗೆ ಹೋದ ಮಕ್ಕಳು ಕೊಲೆಯಾಗುತ್ತಾರೆ ಎಂದರೆ, ಪಾಲಕರಿಗೆ ಮಕ್ಕಳ ಸುರಕ್ಷತೆ ಬಗ್ಗೆ ● 8ನೇ ಪುಟಕ್ಕೆ


DGF JEWELLERS
ನೀವು ಗಿರವಿ ಇಟ್ಟು ಬಿಡಿಸಿಕೊಳ್ಳಲಾಗದ ಚಿನ್ನವನ್ನು ನಾವೇ ಹಣಕೊಟ್ಟು ಬಿಡಿಸಿ ಉಳಿದ ಹಣ ತಕ್ಷಣ ಕೊಡುತ್ತೇವೆ. (T&C)
ಒಂದು ಗ್ರಾಂ ಚಿನ್ನಕ್ಕೆ 7000
8884171888

ಬೇಕಾಗಿದ್ದಾರೆ
ಮೈಸೂರಿನ ಖಾಸಗಿ ಕಂಪನಿಗೆ, Fortuner ಮತ್ತು Automatic ಕಾರು ಓಡಿಸುವ ಡ್ರೈವರ್‌ಗಳು ಬೇಕಾಗಿದ್ದಾರೆ.
ಸಂಬಳ: 20,000
ಮತ್ತು ಟೆಲಿಕಾಲಿಂಗ್ ಕಛೇರಿಯ ಕೆಲಸ ಮಾಡಲು ಹುಡುಗಿಯರು ಬೇಕಾಗಿದ್ದಾರೆ.
8884304444

ಸಾಲ ದೊರೆಯುತ್ತದೆ
ಅಂಗಡಿ ಮುಗ್ಗಟ್ಟುಗಳು ಇರುವವರಿಗೆ ರೂ. 5000/- ದಿಂದ ರೂ 10000/- ವರೆಗೆ ನಿತ್ಯ ಕಲೆಕ್ಷನ್ ಆಧಾರದಲ್ಲಿ ಸಾಲ ದೊರೆಯುತ್ತದೆ.
ಎಂ.ಆರ್.ಟಿ ಫೈನಾನ್ಸ್, 155/A, 3ನೇ ಹಂತ, ಪೊಲೀಸ್ ಲೇಔಟ್, ಐ.ಪಿ.ಎಸ್ ನಗರ ಮೈಸೂರು. (ಪರವಾನಿಗೆ ಸಂಖ್ಯೆ : FMLL/06/2024-25)
ದಿನಾಂಕ: 16.04.2024
ಸಂಪರ್ಕಿಸಿ: ಲಿಕಿತ್ ಪ್ರಕಾಶ್, ಮೊ: 9019418889
*ಷರತ್ತುಗಳು ಅನ್ವಯ

ಐಷಾರಾಮಿ ಲೇಖನಗಳು ಜೀವನ, ವೃತ್ತಿ ನಿರ್ಣಯಿಸುವ ಮಾನದಂಡಗಳಾಗಿವೆ

ಹಿರಿಯ ಪತ್ರಕರ್ತ ಕೃಷ್ಣ ಪ್ರಸಾದ್ ವಿಷಾದ



ಮೈಸೂರಿನ ಗಾನಭಾರತಿ ಸಭಾಂಗಣದಲ್ಲಿ ನಡೆದ ಸಂವಾದದಲ್ಲಿ ಪತ್ರಕರ್ತ ಕೃಷ್ಣಪ್ರಸಾದ್ ಮಾತನಾಡಿದರು.

ಮೈಸೂರು,ಏ.21(ಜಿಎ)–ಇಂದಿನ ಜಗತ್ತಿನಲ್ಲಿ ಐಷಾರಾಮಿ ಲೇಖನಗಳು ಜೀವನ ಮತ್ತು ವೃತ್ತಿಯನ್ನು ನಿರ್ಣಯಿಸುವ ಮಾನದಂಡಗಳಾಗಿವೆ ಎಂದು ಹಿರಿಯ ಪತ್ರಕರ್ತ ಕೃಷ್ಣ ಪ್ರಸಾದ್ ವಿಷಾದ ವ್ಯಕ್ತಪಡಿಸಿದರು.

ಮೈಸೂರಿನ ದೇವಗೀತಂ ಚಾರಿಟಬಲ್ ಟ್ರಸ್ಟ್ ವತಿಯಿಂದ ಮೈಸೂರಿನ ಕುವೆಂಪು ನಗರದ ಗಾನಭಾರತಿ ಸಭಾಂಗಣದಲ್ಲಿ ಪ್ರಧಾನ ಮಂತ್ರಿಗಳ ಮಾಧ್ಯಮ ಸಲಹೆಗಾರ, ಸಾಹಿತಿ ಮತ್ತು ಪತ್ರಕರ್ತರೂ ಆಗಿದ್ದ ಹೆಚ್.ವೈ.ಶಾರದ ಪ್ರಸಾದ್ ಅವರ ಜನ್ಮ ಶತಮಾನೋತ್ಸವದ ಸ್ಮರಣಾರ್ಥ ಆಯೋಜಿಸಿದ್ದ ಸುಳ್ಳು ಸುದ್ದಿ, ಪ್ರಚಾರ ಮತ್ತು ಸಾಮೂಹಿಕ ಭ್ರಮೆಯ ಕಾಲದಲ್ಲಿ ಪತ್ರಿಕೋದ್ಯಮ' ಸಂವಾದದಲ್ಲಿ ಅವರು ಮಾತನಾಡಿದರು.

ಪತ್ರಿಕೋದ್ಯಮವು ಶಾರದ ಪ್ರಸಾದ್ ಅವರ ವೃತ್ತಿಜೀವನದ ಪ್ರಾರಂಭ ಮತ್ತು ಅಂತ್ಯದ ಪುಸ್ತಕವಾಗಿತ್ತು. ಅವರು 1990ರ ತಮ್ಮ ಜೀವನದ ಸಂಧ್ಯಾ ಕಾಲದಲ್ಲಿ ಡೆಕ್ಕನ್ ಕ್ರಾನಿಕಲ್‌ಗೆ ಅಂಕಣಗಳನ್ನು ಬರೆದಿದ್ದಾರೆ. ರಾಜಕೀಯ, ದೊಡ್ಡ ಉದ್ಯಮಗಳು ಮತ್ತು ತಂತ್ರಜ್ಞಾನವು ನಾಗರಿಕರ ಮನಸ್ಸನ್ನು ಹೇಗೆ ತಿರುಗಿಸುತ್ತಿದೆ ಮತ್ತು ಪ್ರಪಂಚದಾದ್ಯಂತದ ಪ್ರಜಾಪ್ರಭುತ್ವವನ್ನು ಹೇಗೆ ವಿರೂಪಗೊಳಿಸುತ್ತಿದೆ ಎಂಬುದರ ಕುರಿತು ಅವರು ಹೇಳಿದ್ದರು.

"ಶಾರದ ಪ್ರಸಾದ್ ಅವರು ಇಂದಿರಾ ಗಾಂಧಿ, ಮೊರಾರ್ಜಿ ದೇಸಾಯಿ ಮತ್ತು ರಾಜೀವ್ ಗಾಂಧಿ ಈ ಮೂರು ಪ್ರಧಾನ ಮಂತ್ರಿಗಳಿಗೆ ಮಾಧ್ಯಮ ಸಲಹೆಗಾರರಾಗಿ ಸೇವೆ ಸಲ್ಲಿಸಿದ ಅವರು ಅತ್ಯಂತ ಸರಳ ವ್ಯಕ್ತಿತ್ವ ಹೊಂದಿದವರಾಗಿದ್ದರು. ಕೆಲಸದಿಂದ ನಿವೃತ್ತರಾದ ನಂತರ ದೆಹಲಿಯ ಜನಕಪುರಿಯಲ್ಲಿರುವ ಅವರ ಮಗನ ಮನೆಗೆ ತೆರಳಿ ಮಧ್ಯಮ ವರ್ಗದ ಜೀವನ ನಡೆಸಿದರು. ಹೀಗೆ ಅವರ ಸರಳತೆಗೆ ಮತ್ತೊಂದು ಉದಾಹರಣೆಯಾಗಿ ಒಮ್ಮೆ ರಾಜೀವ್ ಗಾಂಧಿ ಪ್ರಧಾನಿಯಾಗಿದ್ದಾಗ, ಶಾರದ ಪ್ರಸಾದ್ ಅವರಿಗೆ ತಡರಾತ್ರಿ ಕರೆ ಮಾಡಿ ಪಿಎಂ ಕಚೇರಿಗೆ ಧಾವಿಸುವಂತೆ ತಿಳಿಸಿದರು. ಆದರೆ ಈ ಸಮಯದಲ್ಲಿ ಪಿಎಂ ಕಚೇರಿಗೆ ಬರಲು ತಮ್ಮ ಬಳಿ ಕಾರು ಇರಲಿಲ್ಲ ಎಂದು ಪ್ರಸಾದ್ ಹೇಳಿದ್ದಾರೆ. ನಂತರ ಅವರನ್ನು ಕರೆದುಕೊಂಡು ಹೋಗಲು ಕಾರನ್ನು ಕಳುಹಿಸಲಾಯಿತು. ಆದರೆ, ಇಂದು ಕೆಲಸಕ್ಕೆ ಬಂದ ಕೆಲವೇ ದಿನಗಳಲ್ಲಿ ಪತ್ರಕರ್ತರು ಐಷರಾಮಿ ಜೀವನ, ಕಾರು, ಮನೆ ಮಾಡಿಕೊಳ್ಳಬೇಕೆಂದು ಆಸೆ ಇಟ್ಟುಕೊಳ್ಳುತ್ತಾರೆ ಎಂದು ವಿಷಾದಿಸಿದರು.

ನಂತರ 'ಸುಳ್ಳು ಸುದ್ದಿ, ಪ್ರಚಾರ ಮತ್ತು ಸಾಮೂಹಿಕ ಭ್ರಮೆಯ ಕಾಲದಲ್ಲಿ ಪತ್ರಿಕೋದ್ಯಮ' ಕುರಿತು ಸಂವಾದ ನಡೆಸಲಾಯಿತು. ಈ ವೇಳೆ ಕಾರ್ಯಕ್ರಮದಲ್ಲಿ ಪ್ರೊ.ಸಿ.ಎನ್. ಮೈಸೂರಿನ ಧ್ವನ್ಯಾಲೋಕ ನಿರ್ದೇಶಕ ಶ್ರೀನಾಥ್ ಅಧ್ಯಕ್ಷತೆ ವಹಿಸಿದ್ದರು. ಡಾ.ಕೆಜಾವೀದ್ ನಯೀಮ್, ಮೇಜರ್ ಜನರಲ್ (ನಿವೃತ್ತ) ಎಸ್.ಜಿ.ಹೊಂಬತ್ಕೆರೆ, ಅಶ್ವಿನಿ ರಂಜನ್, ರವಿ ಜೋಶಿ ಇದ್ದರು.

ಸಾಂಸ್ಕೃತಿಕ ಚಟುವಟಿಕೆಗಳ ವಿನಿಮಯದಿಂದಲೂ ಅಂತರರಾಷ್ಟ್ರೀಯ ಸಂಬಂಧಗಳ ಸುಧಾರಣೆ

ಮೈಸೂರು ವಿವಿ ಕುಲಪತಿ ಪ್ರೊ.ಲೋಕನಾಥ್ ಅಭಿಮತ

ಮೈಸೂರು,ಏ.21(ಎಸ್‌ಪಿಎನ್)–



ಪ್ರೊ.ಲೋಕನಾಥ್

ನಮ್ಮ ದೇಶದ ಕಲೆಗಳನ್ನು ಬೇರೆಬೇರೆ ದೇಶದ ವಿದ್ಯಾರ್ಥಿಗಳಿಗೆ ಸಾಂಸ್ಕೃತಿಕ ಚಟುವಟಿಕೆಗಳ ವಿನಿಮಯ ಯೋಜನೆಯಡಿ ಪರಿಚಯಿಸುವ ಮೂಲಕ ಅಂತರರಾಷ್ಟ್ರೀಯ ಸಂಬಂಧಗಳನ್ನು ಉತ್ತಮಗೊಳಿಸಲು ಕೇಂದ್ರ ಸರ್ಕಾರ ಯತ್ನಿಸುತ್ತಿರುವುದು ಮೆಚ್ಚುಗೆಯ ವಿಷಯ ಎಂದು ಮೈಸೂರು ವಿವಿ ಕುಲಪತಿ ಪ್ರೊ.ಲೋಕನಾಥ್ ಅಭಿಪ್ರಾಯಪಟ್ಟರು.

ಮೈಸೂರು ವಿವಿ ಮಾನಸಗಂಗೋತ್ರಿ ಆವರಣದ ವಿಜ್ಞಾನ ಭವನದಲ್ಲಿ ಇಂಡಿಯನ್ ಕೌನ್ಸಿಲ್ ಫಾರ್ ಕಲ್ಚರಲ್ (ಐಸಿಸಿಆರ್) ಸಂಸ್ಥೆ ವತಿಯಿಂದ ಸಾಂಸ್ಕೃತಿಕ ವಿನಿಮಯ ಯೋಜನೆಯಡಿ ಆಯೋಜಿಸಿದ್ದ ಭರತನಾಟ್ಯ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಐಸಿಸಿಆರ್ ಸಂಸ್ಥೆ ಭಾರತ ಸರ್ಕಾರದ ಸ್ವಾಯತ್ತ ಸಂಸ್ಥೆಯಾಗಿದ್ದು, ಈ ಸಂಸ್ಥೆಯು ಬೇರೆಬೇರೆ ದೇಶಗಳ ಸಾಂಸ್ಕೃತಿಕ ಚಟುವಟಿಕೆಗಳ ವಿನಿಮಯದ ಮೂಲಕ ಆಯಾಯ ದೇಶದ ಸಂಬಂಧಗಳನ್ನು ಗಟ್ಟಿಗೊಳಿಸುತ್ತಿರುವುದು ಉತ್ತಮ ಅಂಶ. ಅಲ್ಲದೆ, ಭಾರತ ಜಾಗತಿಕ ಮಟ್ಟದಲ್ಲಿ ಸಾಂಸ್ಕೃತಿಕ ಚಟುವಟಿಕೆಗಳು ಮತ್ತು ಅಲ್ಲಿನ ಜನರ ಕಲೆಗಳೊಂದಿಗಿನ ಸಂಬಂಧಗಳ ಕುರಿತು ವಿಶೇಷ ಅಧ್ಯಯನಕ್ಕಾಗಿ ಸ್ಥಾಪಿಸಿರುವ ಪಿಜಿ ಮತ್ತು ಸ್ನಾತಕೋತ್ತರ ಪದವಿ ಮತ್ತು ಎಂಫಿಲ್, ಪಿಎಚ್‌ಡಿ ವಿಷಯಗಳ ಕಲಿಕೆಗೂ ಆದ್ಯತೆ ನೀಡಿದೆ ಎಂದರು.

ಈ ವೇಳೆ ಐಸಿಸಿಆರ್‌ನ ನಿರ್ದೇಶಕ ಪ್ರದೀಪ್‌ಕುಮಾರ್ ಮಾತನಾಡಿದರು. ಕಾರ್ಯಕ್ರಮದಲ್ಲಿ ಮೈಸೂರು ವಿಶ್ವವಿದ್ಯಾನಿಲಯದ ವಿವಿಧ ವಿಭಾಗದ ಸಿಬ್ಬಂದಿ ಹಾಗೂ ಬೇರೆಬೇರೆ ದೇಶದ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ವಿದುಷಿ ಯಾಮಿನಿ ಮುತ್ತಣ್ಣ ಭರತನಾಟ್ಯ ಪ್ರದರ್ಶಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಗೆಲ್ಲಿಸಲು ಬಿ.ಸುಬ್ರಹ್ಮಣ್ಯ ಕರೆ



ಪಿರಿಯಾಪಟ್ಟಣ,ಏ.21–ರಾಜ್ಯದಲ್ಲಿ ಗ್ಯಾರಂಟಿ ಯೋಜನೆಗಳಿಂದ ಜನರ ಏಳಿಗೆಗೆ ಶ್ರಮಿಸುತ್ತಿರುವ ಕಾಂಗ್ರೆಸ್ ಸರ್ಕಾರವನ್ನು ಕೇಂದ್ರದಲ್ಲಿಯೂ ಅಧಿಕಾರಕ್ಕೆ ತರಲು ಪ್ರತಿಯೊಬ್ಬರೂ ಶ್ರಮಿಸಬೇಕು ಎಂದು ಕರ್ನಾಟಕ ಪ್ರದೇಶ ಕುರುಬರ ಸಂಘದ ಮಾಜಿ ಅಧ್ಯಕ್ಷ ಬಿ.ಸುಬ್ರಹ್ಮಣ್ಯ ಕರೆ ನೀಡಿದರು.

ತಾಲೂಕಿನ ಆಯಿತನಹಳ್ಳಿ ಗ್ರಾಮದಲ್ಲಿ ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಎಂ.ಲಕ್ಷ್ಮಣ್ ಪರ ಪ್ರಚಾರ ನಡೆಸಿದ ಅವರು, ದೇಶದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಲ್ಲಿ ಮಹಿಳೆಯರಿಗೆ ಒಂದು ಲಕ್ಷ ಸಹಾಯಧನ, ಜಾತಿ ಗಣತಿ ಅನುಷ್ಠಾನ, ರೈತರಿಗೆ ಬೆಂಬಲ ಬೆಲೆ ಜಾರಿ ಸೇರಿದಂತೆ ಇನ್ನೂ ಹಲವು ಜನಪರ ಕಾರ್ಯಕ್ರಮಗಳು ಬರಲಿದೆ ಎಂದರು. ಕಾಂಗ್ರೆಸ್ ಅಭ್ಯರ್ಥಿ ಲಕ್ಷ್ಮಣ್ ಅವರನ್ನು ಅತ್ಯಂತ ಹೆಚ್ಚಿನ ಮತಗಳಿಂದ ಗೆಲ್ಲಿಸಿ ಇವರನ್ನು ಲೋಕಸಭೆಗೆ ಕಳಿಸಬೇಕೆಂದು ಮನವಿ ಮಾಡಿದರು.

ಈ ವೇಳೆ ಮುಖಂಡರಾದ ಸುನಿಲ್, ಸರಸ್ವತಿ, ಪದ್ಮಲತಾ, ಕಿನ್ನಹಳ್ಳಿ ಜಯರಾಂ, ನಾಗೇಗೌಡ, ಕಾಂತೇಗೌಡ, ತಾಯಿಮಣಿ ಮತ್ತಿತರರು ಹಾಜರಿದ್ದರು.



ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರದ ಆಲನಹಳ್ಳಿ ವ್ಯಾಪ್ತಿಯ ನೇತಾಜಿನಗರದಲ್ಲಿ ಕರ್ನಾಟಕ ಸರ್ಕಾರದ ಸಾಧನೆಯ ಕರಪತ್ರವನ್ನು ವಿತರಿಸಿ, ಕಾಂಗ್ರೆಸ್ ಗ್ಯಾರಂಟಿ ಕಾರ್ಡ್ ವಿತರಿಸಿ, ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಎಂ.ಲಕ್ಷ್ಮಣ ಪರ ಕೆಪಿಸಿಸಿ ಸದಸ್ಯ ನಜರ್‌ಬಾದ್ ನಟರಾಜ್ ಮತ ಯಾಚಿಸಿದರು ಈ ವೇಳೆ ನಜರ್‌ಬಾದ್ ಲೋಕೇಶ್, ಸಕ್ಕಳಿ ಬಸವರಾಜ್, ಕೃಷ್ಣಪ್ಪ, ಮರಳಿಗಂಯ, ಬಸಪ್ಪ, ಮಹದೇವ್, ಪುನೀತ್, ತರುಣ್, ರಾಚಪ್ಪ, ಜಗದೀಶ್ ಉಪಸ್ಥಿತರಿದ್ದರು.

ವಿಶ್ವ ಪರಿಸರ ದಿನಾಚರಣೆ; ಪ್ರಬಂಧ–ರಸಪ್ರಶ್ನೆ ಸ್ಪರ್ಧೆ

ಮೈಸೂರು: ವಿಶ್ವ ಪರಿಸರ ದಿನಾಚರಣೆ ಅಂಗವಾಗಿ "ಭೂಮಿ ಮತ್ತು ಮಣ್ಣಿನ ಮೇಲೆ ಹವಾಮಾನ ಬದಲಾವಣೆ" ಶೀರ್ಷಿಕೆಯಡಿಯಲ್ಲಿ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಪ್ರಬಂಧ ಸ್ಪರ್ಧೆ (ಕನ್ನಡ & ಇಂಗ್ಲೀಷ್–1000 ಪದಗಳಿಗೆ ಮೀರದಂತೆ) ಮತ್ತು ಪದವಿ ವಿದ್ಯಾರ್ಥಿಗಳಿಗೆ ರಸಪ್ರಶ್ನೆ ಸ್ಪರ್ಧೆ ಏರ್ಪಡಿಸಲಾಗಿದೆ. ರಸಪ್ರಶ್ನೆ ಸ್ಪರ್ಧೆಯಲ್ಲಿ ಭಾಗವಹಿಸಲು ಬಯಸುವ ವಿದ್ಯಾರ್ಥಿಗಳು (ಇಬ್ಬರು ವಿದ್ಯಾರ್ಥಿಗಳ ಟೀಂ) ಹಾಗೂ ಪ್ರಬಂಧಗಳನ್ನು ksta.gok@gmail.comಗೆ ಏ.27ರೊಳಗಾಗಿ ನೋಂದಾಯಿಸಿಕೊಳ್ಳಬಹುದು. ರಸಪ್ರಶ್ನೆ ಸ್ಪರ್ಧೆಯನ್ನು ಜೂ.6.ರಂದು ಅಕಾಡೆಮಿಯ ಸಭಾಂಗಣದಲ್ಲಿ ನಡೆಸಲಾಗುವುದು. ವಿವರಗಳಿಗೆ https://kstacademy.in ವೀಕ್ಷಿಸಬಹುದು. ಹೆಚ್ಚಿನ ಮಾಹಿತಿಗೆ ಡಾ.ಆನಂದ್ ಮೊ.ಸಂ: 9880405181 ಅನ್ನು ಸಂಪರ್ಕಿಸಿ.

ಶ್ರೀನಿವಾಸಪ್ರಸಾದ್ ಬೆಂಬಲಿಗರ ಬಲ ನನ್ನ ಗೆಲುವಿಗೆ ಸಹಕಾರಿ

–ಸುನೀಲ್ ಬೋಸ್

ಕಾಂಗ್ರೆಸ್ ಅಭ್ಯರ್ಥಿ, ಚಾಮರಾಜನಗರ ಲೋಕಸಭಾ ಕ್ಷೇತ್ರ

● ಸಿದ್ದಲಿಂಗಸ್ವಾಮಿ

ಚಾಮರಾಜನಗರ ಮೀಸಲು ಲೋಕಸಭಾ ಕ್ಷೇತ್ರದಿಂದ ಕಾಂಗ್ರೆಸ್ ಅಭ್ಯರ್ಥಿಯಾಗಿ ಸುನೀಲ್ ಬೋಸ್ ಕಣಕ್ಕಿಳಿದಿದ್ದಾರೆ. ಮೈಸೂರು ಭಾಗದ ಹಿರಿಯ ರಾಜಕಾರಣಿ, ಹಾಲಿ ಸಮಾಜ ಕಲ್ಯಾಣ ಸಚಿವ ಡಾ.ಎಚ್.ಸಿ.ಮಹದೇವಪ್ಪ ಅವರ ಪುತ್ರರಾಗಿರುವ ಅವರು ಚಾಮರಾಜನಗರದಿಂದ ಸಂಸದರಾಗಿ ಆಯ್ಕೆಯಾಗುವ ವಿಶ್ವಾಸ ಹೊಂದಿದ್ದು, ಪ್ರಚಾರದ ವೇಳೆ ಅವರು 'ಮೈಸೂರು ಮಿತ್ರ'ನಿಗೆ ನೀಡಿದ ಕಿರು ಸಂದರ್ಶನವಿದು.

ಮೈಸೂರು ಮಿತ್ರ: ಮೊದಲ ಬಾರಿ ಚುನಾವಣೆ ಎದುರಿಸುತ್ತಿದ್ದೀರಿ. ಅದರ ಅನುಭವ ಹೇಗಿದೆ?

ಸುನೀಲ್‌ಬೋಸ್: ನನಗೆ ಚುನಾವಣೆ ಹೊಸದಲ್ಲ. ತಂದೆಯವರ ಪರವಾಗಿ ಸಾಕಷ್ಟು ವಿಧಾನಸಭೆ ಚುನಾವಣೆಗಳಲ್ಲಿ ಕೆಲಸ ಮಾಡಿದ್ದೇನೆ. ಸ್ಥಳೀಯ ಸಂಸ್ಥೆ ಚುನಾವಣೆಗಳಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳಿಗಾಗಿ ಕೆಲಸ ಮಾಡಿದ ಅನುಭವ ನನಗಿದೆ. 2008ರಿಂದ ರಾಜಕಾರಣ ಮಾಡುತ್ತಿದ್ದೇನೆ. ಆದರೆ ನಾನೇ ಅಭ್ಯರ್ಥಿಯಾಗಿ ಸ್ಪರ್ಧಿಸುತ್ತಿರುವ ಮೊದಲ ಚುನಾವಣೆ ಇದು. 17–18 ವರ್ಷಗಳಿಂದ ಜನರೊಂದಿಗೆ ಬೆರೆತು ಕೆಲಸ ಮಾಡುತ್ತಿದ್ದೇನೆ. ಹೀಗಾಗಿ ನನಗೆ ರಾಜಕೀಯ ಹೊಸದಲ್ಲ.

ಕಳೆದ ವಿಧಾನಸಭಾ ಚುನಾವಣೆಯಲ್ಲಿ ನಾನು ತಿ. ನರಸೀಪುರ ಕ್ಷೇತ್ರದ ಟಿಕೆಟ್‌ಗೆ ಪ್ರಯತ್ನಿಸಿದ್ದೆ. ತಂದೆಯವರು ನಂಜನಗೂಡಿನಿಂದ ಸ್ಪರ್ಧಿಸಲು ಇಚ್ಛಿಸಿದ್ದರು. ಆದರೆ, ಧ್ರುವನಾರಾಯಣ್ ಅವರ ಅಕಾಲಿಕ ನಿಧನದಿಂದ ನಂಜನಗೂಡು ಕ್ಷೇತ್ರದಲ್ಲಿ ಅವರ ಪುತ್ರ ದರ್ಶನ್ ಸ್ಪರ್ಧೆಗೆ ಹೆಚ್ಚು ಒತ್ತಾಯ ಬಂದ ಹಿನ್ನೆಲೆಯಲ್ಲಿ ತಂದೆ ನರಸೀಪುರದಲ್ಲಿ ಸ್ಪರ್ಧೆ ಮಾಡಿದರು. ಹೀಗಾಗಿ, ನನಗೆ ಆಗ ಅವಕಾಶ ಕೈ ತಪ್ಪಿತ್ತು. ಈಗ ರಾಜ್ಯ ಹಾಗೂ ರಾಷ್ಟ್ರ ನಾಯಕರು ನನಗೆ ಅವಕಾಶ ನೀಡಿದ್ದಾರೆ.



ಸುನೀಲ್ ಬೋಸ್

ಮಿತ್ರ: ನಿಮಗೆ ಕ್ಷೇತ್ರದ ಮತದಾರರ ಸ್ಪಂದನೆ ಹೇಗಿದೆ?

ಸುನೀಲ್‌ಬೋಸ್: ನಾನು ಹೋದ ಕಡೆಗಳಲ್ಲೆಲ್ಲಾ ಮತದಾರರಿಂದ ಉತ್ತಮ ಸ್ಪಂದನೆ ವ್ಯಕ್ತವಾಗುತ್ತಿದೆ. ಕ್ಷೇತ್ರದ ಜನರು ನನ್ನನ್ನು ಪ್ರೀತಿಯಿಂದ ಬರ ಮಾಡಿಕೊಳ್ಳುತ್ತಿದ್ದಾರೆ, ಗೆಲ್ಲಿಸುವ ಭರವಸೆ ನೀಡುತ್ತಿದ್ದಾರೆ. ಜನರ ಪ್ರೀತಿ, ವಿಶ್ವಾಸವನ್ನು ನೋಡಿದಾಗ ನನಗೆ ಗೆಲ್ಲುವ ವಿಶ್ವಾಸವಿದೆ.

ಮಿತ್ರ: ಶ್ರೀನಿವಾಸಪ್ರಸಾದ್ ಅವರ ಸಹಕಾರವಿದೆಯಾ?

ಸುನೀಲ್‌ಬೋಸ್: ಶ್ರೀನಿವಾಸಪ್ರಸಾದ್ ಅವರು ಹಿರಿಯ ನಾಯಕರು. ಅವರ ಆಶೀರ್ವಾದ ಪಡೆದುಕೊಂಡು ಬಂದಿದ್ದೇನೆ. ಅವರು ರಾಜಕೀಯ ನಿವೃತ್ತಿ ಘೋಷಣೆ ಮಾಡಿದ್ದಾರೆ. ಹೀಗಾಗಿ ಅಧಿಕೃತವಾಗಿ ಬೆಂಬಲ ನೀಡುವ ಬಗ್ಗೆ ಅವರು ಏನನ್ನೂ ಹೇಳಿಲ್ಲ. ಯಾರ ಪರವಾಗಿಯೂ ಪ್ರಚಾರ ಮಾಡುವುದಿಲ್ಲ ಎಂದಿದ್ದಾರೆ. ಗೆದ್ದು ಬರುವಂತೆ ಆಶೀರ್ವಾದ ಮಾಡಿದ್ದಾರೆ. ಆದರೆ, ಅವರ ಬೆಂಬಲಿಗರು ನಮ್ಮ ಪಕ್ಷ ಸೇರ್ಪಡೆಗೊಂಡು ಬೆಂಬಲ ಸೂಚಿಸಿದ್ದಾರೆ. ಇದು ನನ್ನ ಗೆಲುವಿಗೆ ಪೂರಕ ವಾತಾವರಣ ಉಂಟು ಮಾಡಿದೆ.

ಮಿತ್ರ: ಬಿಜೆಪಿಯವರು ನಿಮ್ಮ ವಿರುದ್ಧ ವೈವಾಹಿಕ ವಿಚಾರದಲ್ಲಿ ನೀಡಿರುವ ದೂರಿನ ಬಗ್ಗೆ ಏನೂ ಹೇಳುತ್ತೀರಾ?

ಸುನೀಲ್‌ಬೋಸ್: ಇದು ನನ್ನ ವೈಯಕ್ತಿಕ ವಿಚಾರವಾಗಿದೆ. ಇದರ ಸಂಬಂಧ ಕಾನೂನಾತ್ಮಕವಾಗಿ ಎದುರಿಸಲು ಸಿದ್ಧನಿದ್ದೇನೆ.

ಮಿತ್ರ: ಬಿಜೆಪಿ ಅಭ್ಯರ್ಥಿ ಬಾಲರಾಜು ಅವರು ಧ್ರುವನಾರಾಯಣ್ ಸ್ನೇಹಿತರಾಗಿದ್ದರು. ಹೀಗಾಗಿ ಅವರಿಗೆ ಧ್ರುವನಾರಾಯಣ್ ಅಭಿಮಾನಿಗಳ ಬೆಂಬಲ ದೊರೆಯುವ ಸಾಧ್ಯತೆ ಇದೆಯಾ?

ಸುನೀಲ್‌ಬೋಸ್: ಬಾಲರಾಜು ಅವರು ಧ್ರುವನಾರಾಯಣ್ ಅವರ ಹೆಸರನ್ನು ಬಳಸುತ್ತಿರುವುದು ಗೊತ್ತು. ಆದರೆ, ಅವರಿಗೆ ಧ್ರುವನಾರಾಯಣ್ ಹೆಸರನ್ನು ಹೇಳಲು ನೈತಿಕತೆ ಇಲ್ಲ. ಅವರ ಹೆಸರನ್ನು ಬಳಸಬಾರದು ಎಂದು ಧ್ರುವನಾರಾಯಣ್ ಪುತ್ರ ದರ್ಶನ್ ಅವರು ಬಾಲರಾಜು ಅವರಿಗೆ ಹೇಳಿದ್ದಾರೆ. ಅಲ್ಲದೆ, ಧ್ರುವನಾರಾಯಣ್ ಅವರು ಅಪ್ಪಟ ಕಾಂಗ್ರೆಸ್ಸಿಗರು, ಕಾಂಗ್ರೆಸ್‌ನ ಸಿದ್ಧಾಂತವನ್ನು ನಂಬಿದವರು. ಹೀಗಾಗಿ ಅವರ ಬೆಂಬಲಿಗರು, ಅಭಿಮಾನಿಗಳು ಕಾಂಗ್ರೆಸ್ ಬಿಟ್ಟು ಹೋಗುವುದಿಲ್ಲ.

ಮಿತ್ರ: ಗೆದ್ದರೇ ಕ್ಷೇತ್ರಕ್ಕೆ ನಿಮ್ಮ ಯೋಜನೆ ಏನಿದೆ?

ಸುನೀಲ್‌ಬೋಸ್: ಜಿಲ್ಲೆಯ ಅಭಿವೃದ್ಧಿಗೆ ಕೇಂದ್ರದ ಹೆಚ್ಚಿನ ಅನುದಾನ ಅಗತ್ಯವಾಗಿದೆ. ನಾನು ಸಂಸದನಾಗಿ ಆಯ್ಕೆಯಾದರೆ ಕೇಂದ್ರದಿಂದ ಹೆಚ್ಚಿನ ಅನುದಾನ ತಂದು ಜಿಲ್ಲೆಯ ಅಭಿವೃದ್ಧಿಗೆ ಆದ್ಯತೆ ನೀಡುತ್ತೇನೆ. ಕಾಡಂಚಿನ ಗ್ರಾಮಗಳಲ್ಲಿ ಮೂಲಸೌಲಭ್ಯ, ಸಂಚಾರಿ ಆರೋಗ್ಯ ಸೇವೆ ಕಲ್ಪಿಸುವುದು, ಗಾರ್ಮೆಂಟ್ಸ್ ಸೇರಿದಂತೆ ಇನ್ನಿತರ ಕೈಗಾರಿಕೆಗಳ ಸ್ಥಾಪನೆಗೆ ಉತ್ತೇಜನ ನೀಡುವ ಮೂಲಕ ಹೆಚ್ಚಿನ ಉದ್ಯೋಗ ಸೃಷ್ಟಿಸಿ, ನಿರುದ್ಯೋಗ ಸಮಸ್ಯೆಯನ್ನು ನೀಗಿಸುವುದು ನನ್ನ ಮೊದಲ ಆದ್ಯತೆಯಾಗಿರುತ್ತದೆ.



ಮೈಸೂರಿನ 44ನೇ ವಾರ್ಡ್ ವ್ಯಾಪ್ತಿಯ ಬೋಗಾದಿ ಎರಡನೇ ಹಂತ ಉತ್ತರ ಭಾಗದ ಟೆಲಿಕಾಂ ಬಡಾವಣೆಯಲ್ಲಿ ಎನ್‌ಡಿಎ ಅಭ್ಯರ್ಥಿ ಯದುವೀರ್ ಒಡೆಯರ್ ಪರವಾಗಿ ಮತಯಾಚನೆ ಮಾಡಲಾಯಿತು. ಈ ವೇಳೆ ಬಿಜೆಪಿ ಮುಖಂಡ ವೈ.ವಿ.ರವಿಶಂಕರ್, ನಗರಪಾಲಿಕೆ ಮಾಜಿ ಸದಸ್ಯೆ ಸವಿತಾ ಸುರೇಶ್, ದಿ ಮೈಸೂರು ಕೋ–ಆಪರೇಟಿವ್ ಬ್ಯಾಂಕ್ ಮಾಜಿ ಅಧ್ಯಕ್ಷ ಉಮಾಶಂಕರ್, ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಸುರೇಶ್, ಈರೇಗೌಡ, ಭರತ್, ಲಿಂಗೇಗೌಡ, ಕೃಷ್ಣೇಗೌಡ, ರವಿಶಂಕರ್, ಕುಮಾರ್, ಮಂಜು, ಸುನಿಲ್, ಅನಿಲ್ ಸೇರಿದಂತೆ ಜೆಡಿಎಸ್–ಬಿಜೆಪಿ ಕಾರ್ಯಕರ್ತರು ಹಾಜರಿದ್ದರು



ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೆವಾಲಾ, ಸಚಿವರಾದ ಡಾ.ಎಚ್.ಸಿ.ಮಹದೇವಪ್ಪ, ಕೆ.ವೆಂಕಟೇಶ್, ಶಾಸಕರಾದ ತನ್ವೀರ್ ಸೇಠ್, ಕೆ.ಹರೀಶ್‌ಗೌಡ, ಮಾಜಿ ಶಾಸಕರಾದ ಡಾ.ಯತೀಂದ್ರ, ಎಂ.ಕೆ. ಸೋಮಶೇಖರ್, ಮುಡಾ ಮಾಜಿ ಅಧ್ಯಕ್ಷ ಎಚ್.ವಿ.ರಾಜೀವ್, ಮುಖಂಡ ಅಬ್ದುಲ್ ಅಜೀಜ್ ಸಮ್ಮುಖದಲ್ಲಿ ಮೈಸೂರು–ಚಾಮರಾಜನಗರ ಜಿಲ್ಲಾ ಒಕ್ಕಲಿಗರ ಸಂಘದ ನಿಕಟಪೂರ್ವ ಅಧ್ಯಕ್ಷ, ಮೈಸೂರು ನಗರ ಜೆಡಿಎಸ್ ಪ್ರಧಾನ ಕಾರ್ಯದರ್ಶಿ ಜಿ.ಮಂಜುಗೌಡರು ಕಾಂಗ್ರೆಸ್ ಸೇರ್ಪಡೆಯಾದರು.

ಸಿಎಂ, ಗೃಹ ಸಚಿವರ ರಾಜೀನಾಮೆಗೆ ಆಗ್ರಹ

ಮೈಸೂರು, ಏ. 21–ಹುಬ್ಬಳ್ಳಿ–ಧಾರವಾಡ ಮಹಾನಗರಪಾಲಿಕೆಯ ಕಾಂಗ್ರೆಸ್ ಕಾರ್ಪೊರೇಟರ್ ನಿರಂಜನ ಹಿರೇಮಠ ಅವರ ಪುತ್ರಿ ನೇಹಾಳ ಕೊಲೆ ಘಟನೆ ಕುರಿತು ಮುಖ್ಯಮಂತ್ರಿ ಸಿದ್ದರಾಮಯ್ಯ, ಗೃಹಮಂತ್ರಿ ಪರಮೇಶ್ವರ, ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ ನೀಡಿರುವ ಹೇಳಿಕೆಗಳು ಒಪ್ಪುವಂಥದ್ದಲ್ಲ. ನೈತಿಕ ಹೊಣೆ ಹೊತ್ತು ಅವರು ತಕ್ಷಣ ತಮ್ಮ ಸ್ಥಾನಗಳಿಗೆ ರಾಜೀನಾಮೆ ನೀಡಬೇಕು ಎಂದು ಬಿಜೆಪಿ ನಗರ ಉಪಾಧ್ಯಕ್ಷೆ ಹೇಮಾ ನಂದೀಶ್ ಆಗ್ರಹಿಸಿದ್ದಾರೆ.



ಹೇಮಾ ನಂದೀಶ್

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಗೃಹಮಂತ್ರಿ ಲವ್ ಜಿಹಾದ್, ಆಕಸ್ಮಿಕ ಘಟನೆ ಎನ್ನುತ್ತಾರೆ. ಮುಖ್ಯಮಂತ್ರಿ ಇದು ವೈಯಕ್ತಿಕ ಕಾರಣ ಎನ್ನುತ್ತಾರೆ. ಕೈಗಾರಿಕೆ ಸಚಿವರು ಅವನು ಸಮಾಜ ಪ್ರತಿನಿಧಿಸುವುದಿಲ್ಲ ಎನ್ನುತ್ತಾರೆ. ತಮ್ಮದೇ ಪಕ್ಷದ ನಾಯಕ ನಿಗೆ ಸಾಂತ್ವನ ಹೇಳಿ ಅವರ ಪರ ನಿಲ್ಲುವುದು ಬಿಟ್ಟು ಕೊಲೆಗಾರನ ಪರ ವಕಾಲತ್ತು ವಹಿಸುವ ಭಾವನೆ ಬರುವಂಥ ಹೇಳಿಕೆಗಳು ರಾಜ್ಯದ ಕಾನೂನು ಸುವ್ಯವಸ್ಥೆಗೆ ಮಾರಕ. ಜೊತೆಗೆ ತನಿಖೆಯ ಮೇಲೂ ಪರಿಣಾಮ ಬೀರುತ್ತದೆ ಎಂದು ತಿಳಿಸಿದ್ದಾರೆ. ಬೆಂಗಳೂರಿನಿಂದ ಹುಬ್ಬಳ್ಳಿಗೆ ಬಂದು ಆ ಕುಟುಂಬಕ್ಕೆ ಸಾಂತ್ವನ ಹೇಳುವ ಕನಿಷ್ಠ ಸೌಜನ್ಯವನ್ನೂ ತೋರಿಸದಿರುವುದು ಖಂಡನೀಯ ಎಂದು ಟೀಕಿಸಿದ್ದಾರೆ.

ನಾಳೆ ಶನಿ ಮಹಾಶಾಂತಿ

ಮೈಸೂರು: ಮೈಸೂರಿನ ದೇವರಾಜ ಮೊಹಲ್ಲಾದಲ್ಲಿರುವ ಶ್ರೀ ಅಮೃತೇಶ್ವರ ದೇವಸ್ಥಾನದಲ್ಲಿ ಹುಣ್ಣಿಮೆ ಪ್ರಯುಕ್ತ ಏ.23ರಂದು ಕರ್ಕಾಟಕ, ತುಲಾ, ಮಕರ, ಕುಂಭ, ಮೀನ ರಾಶಿಯವರಿಗೆ ಶನಿಮಹಾಶಾಂತಿ, ಬಾದಾನಿವಾರಕ ಸುದರ್ಶನ ಹೋಮ, ಉತ್ತಮ ಆರೋಗ್ಯಕ್ಕೆ ಮಹಾ ಮೃತ್ಯುಂಜಯ ಹೋಮ, ಕುಜ ಶಾಂತಿ, ಗುರು ಶಾಂತಿ ಮತ್ತು ಶ್ರೀ ಸತ್ಯನಾರಾಯಣ ಪೂಜೆ ಏರ್ಪಡಿಸಲಾಗಿದೆ. ಅಂದು ಬೆಳಗ್ಗೆ 9.30ಕ್ಕೆ ಪ್ರಾರಂಭವಾಗಿ 12.30ಕ್ಕೆ ಪೂರ್ಣಾಹುತಿ. ಪ್ರತ್ಯೇಕ ಸಂಕಲ್ಪ ಮಾಡಿಸಲಾಗು ತ್ತದೆ. ವಿವರಗಳಿಗೆ ಮೈಕುಮಾರ್ ಜಾತಕ ವಿಮರ್ಶಕರು 9845183392 9845183399 ಸಂಪರ್ಕಿಸಬಹುದು.

ಅಂಬೇಡ್ಕರ್ ಸಂವಿಧಾನದಿಂದ ಎಲ್ಲಾ ವರ್ಗದವರಿಗೂ ಸಮಾನ ಬದುಕು

ಡಾ.ಬಿ.ಆರ್.ಅಂಬೇಡ್ಕರ್ ಜಯಂತ್ಯುತ್ಸವದಲ್ಲಿ ಕಲ್ಬುರ್ಗಿಯ ಸಾಮಾಜಿಕ ಹೋರಾಟಗಾರ ಡಾ.ವಿಠಲ್ ವಗ್ಗನ್ ಅಭಿಮತ

ಮೈಸೂರು, ಏ.21(ಎಸ್‌ಪಿಎನ್)– ಡಾ.ಬಿ.ಆರ್. ಅಂಬೇಡ್ಕರ್ ರಚಿತ 'ಭಾರತ ಸಂವಿಧಾನ' ಎಲ್ಲಾ ವರ್ಗದವರಿಗೂ ಸಮಾನ ಬದುಕು ಕಲ್ಪಿಸಿದೆ ಎಂದು ಕಲ್ಬುರ್ಗಿಯ ಸಾಮಾಜಿಕ ಹೋರಾಟಗಾರ ಡಾ.ವಿಠಲ್ ವಗ್ಗನ್ ಅಭಿಪ್ರಾಯಪಟ್ಟರು.

ಮೈಸೂರು ಜಿಲ್ಲಾ ನ್ಯಾಯಾಲಯ ಆವರಣದಲ್ಲಿ ಮೈಸೂರು ವಕೀಲರ ಸಂಘದ ವತಿಯಿಂದ ಆಯೋಜಿಸಿದ್ದ ಡಾ.ಬಿ.ಆರ್.ಅಂಬೇಡ್ಕರ್ ಅವರ 133ನೇ ಜಯಂತ್ಯುತ್ಸವ ಕಾರ್ಯಕ್ರಮದಲ್ಲಿ ಮುಖ್ಯ ಭಾಷಣಕಾರರಾಗಿ ಭಾಗವಹಿಸಿ ಮಾತನಾಡಿದ ಅವರು, ಯಾವುದೇ ಹೋರಾಟಗಳಿಗೂ ಡಾ.ಅಂಬೇಡ್ಕರ್ ಅವರ ಭಾವಚಿತ್ರ ಇಟ್ಟು ಹೋರಾಟ ಮಾಡಿದರೆ ಆ ಹೋರಾಟದ ಗತ್ತು ಬೇರೆಯೇ ಇರುತ್ತದೆ ಎಂದರು.

ದಲಿತರು, ಶೋಷಿತರು, ರೈತರು, ಕಾರ್ಮಿಕರು ಹಾಗೂ ಮಹಿಳೆಯರಿಗೆ ಸ್ವಾತಂತ್ರ್ಯ ಪೂರ್ವದಲ್ಲಿ ಇದ್ದ ಸ್ಥಾನಮಾನಕ್ಕೂ ಸ್ವಾತಂತ್ರ್ಯ ನಂತರದ ಸ್ಥಾನಮಾನಕ್ಕೂ ಸಾಕಷ್ಟು ವ್ಯತ್ಯಾಸಗಳಿವೆ. ಸ್ವಾತಂತ್ರ್ಯ ಪೂರ್ವ ದಲ್ಲಿ ಹೆಣ್ಣು ಮಕ್ಕಳು, ದಲಿತರು ಹಾಗೂ ಒಬಿಸಿ ವರ್ಗದವರಿಗೆ ಶಿಕ್ಷಣದಿಂದ ದೂರ ಇಡಲಾಗಿತ್ತು. ಸಂವಿಧಾನ ಅಳವಡಿಕೆ ನಂತರ ಎಲ್ಲರಿಗೂ ಸರಿ ಸಮಾನದ ಶಿಕ್ಷಣ ದೊರಕುವಂತೆ ಅವಕಾಶ ಕಲ್ಪಿಸಿದ್ದು, ಸಂವಿಧಾನ. ಇದರಲ್ಲಿ ಯಾವುದೇ ಸಂದೇಹ ಬೇಡ ಎಂದು ತಿಳಿಸಿದರು.



ಮೈಸೂರು ವಕೀಲರ ಸಂಘದ ವತಿಯಿಂದ ಆಯೋಜಿಸಿದ್ದ ಡಾ.ಅಂಬೇಡ್ಕರ್ ಅವರ 133ನೇ ಜಯಂತ್ಯುತ್ಸವ ಕಾರ್ಯಕ್ರಮದಲ್ಲಿ ಕಲ್ಬುರ್ಗಿಯ ಸಾಮಾಜಿಕ ಹೋರಾಟಗಾರ ಡಾ.ವಿಠಲ್ ವಗ್ಗನ್ ಮಾತನಾಡಿದರು.

ಡಾ.ಬಿ.ಆರ್.ಅಂಬೇಡ್ಕರ್ ಅವರ ಜೀವನ, ವಿಚಾರಧಾರೆಗಳನ್ನು ಅಧ್ಯಯನ ಮಾಡಿದರೆ, ನಮ್ಮ ದೇಶದ ಪ್ರತಿಯೊಂದು ವರ್ಗದ ಬಹುತ್ವದ ಆಚರಣೆಗಳು ಗೋಚರಿಸುತ್ತವೆ. ಜಾತಿವಾದಿ ಮನಸ್ಥಿತಿಯಿಂದ ಅಂಬೇಡ್ಕರ್ ಬದುಕು–ಬರಹಗಳನ್ನು ಅಧ್ಯಯನ ನಡೆಸಿದರೆ ಇದರ ಮಹತ್ವ ಅರಿಯಲು ಸಾಧ್ಯವಿಲ್ಲ ಎಂದರು.

ಉರಿಲಿಂಗಿ ಪೆದ್ದಿಮಠದ ಶ್ರೀ ಜ್ಞಾನಪ್ರಕಾಶ ಸ್ವಾಮೀಜಿ ಮಾತನಾಡಿ, ನ್ಯಾಯಾಧೀಶರು, ನ್ಯಾಯವಾದಿಗಳು ನೊಂದ ಕಕ್ಷಿದಾರರಿಗೆ ಕೋರ್ಟ್‌ನಲ್ಲಿ ನ್ಯಾಯ ಒದಗಿಸಬೇಕಾದರೆ, ಐಪಿಸಿ, ಸಿಆರ್‌ಪಿಸಿ ಕಾನೂನುಗಳನ್ನು ಓದುವುದರ ಜೊತೆಗೆ, ಅಂಬೇಡ್ಕರ್ ಸೇರಿದಂತೆ ಇತರೆ ಸಾಧಕರ ಬದುಕು–ಬರಹ ಹಾಗೂ ಸಂವಿಧಾನದ ಅಂಶಗಳನ್ನು ವಿಶೇಷ ಅಧ್ಯಯನ ನಡೆಸಿದಾಗ ಮಾತ್ರ ಸಾಧ್ಯ ಎಂದರು. ವೇದಿಕೆಯಲ್ಲಿ ಮೈಸೂರು ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶೆ ಪ್ರಭಾವತಿ ಎಂ.ಹಿರೇಮಠ್, ಮೈಸೂರು ವಕೀಲರ ಸಂಘದ ಎಸ್.ಲೋಕೇಶ್, ಕಾರ್ಯದರ್ಶಿ ಎ.ಜಿ.ಸುಧೀರ್, ಉಪಾಧ್ಯಕ್ಷ ಎಂ.ವಿ. ಚಂದ್ರಶೇಖರ್, ಖಜಾಂಚಿ ಹೆಚ್.ಜಿ.ಭರತ್, ಜಂಟಿ ಕಾರ್ಯದರ್ಶಿಗಳಾದ ಕೆ.ಅರ್.ಚರಣ್‌ರಾಜ್, ಬಿ.ವಿನೋದ, ಸಮಿತಿ ಹಿರಿಯ ಸದಸ್ಯರಾದ ಬಿ.ಎಸ್. ಶಿವಸ್ವಾಮಿ, ಆರ್.ಕನ್ಯಾ ಕುಮಾರಿ, ಕೆ.ಎಸ್.ಅಂದಾನಿ, ಕೃಷ್ಣ, ಎಸ್.ಕಟಾವ್ ಕರ್, ಪ್ರದೀಪ್ ಬಿಡ್ಡನ್ ಹಾಗೂ ಸಮಿತಿಯ ಕಿರಿಯ ಸದಸ್ಯರಾದ ಕೆ.ದೇವರಾಜು, ಎಂ.ಉಮೇಶ್, ಎಂ.ಕಿಶೋರ್ ಕೀರ್ತಿ, ಜೆ.ಲೋಕೇಶ್, ಎಂ.ಜಿ.ದೀಪು ಸೇರಿದಂತೆ ಇತರರಿದ್ದರು.

> **"ಬಡವರು, ದಲಿತರು, ರೈತರು, ದುಡಿಯುವ ವರ್ಗ ಹಾಗೂ ಮಹಿಳೆಯರಿಗೆ ಸಮಾನ ಬದುಕು ರೂಪಿಸಲು ಸಹಕಾರಿ ಯಾಗಿದ್ದು ಡಾ.ಬಿ.ಆರ್.ಅಂಬೇಡ್ಕರ್ ರಚಿತ ಸಂವಿಧಾನದಿಂದ.**
> **–ಆರ್.ದೇವದಾಸ್, ಹಿರಿಯ ನ್ಯಾಯಮೂರ್ತಿ, ಕರ್ನಾಟಕ ಹೈಕೋರ್ಟ್**

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

22.04.2024 ಭಾನುವಾರ, ಮಳೆ ನಕ್ಷತ್ರ: ಅಶ್ವಿನಿ 13.04.2024 ರಿಂದ 26.04.2024 ಕ್ರೋಧಿ ನಾಮ ಸಂವತ್ಸರ, ಉತ್ತರಾಯಣ, ವಸಂತ ಋತು, ಚೈತ್ರ ಮಾಸ, ಶುಕ್ಲ ಪಕ್ಷ, ತಿಥಿ: ಚತುರ್ದಶಿ, ನಕ್ಷತ್ರ: ಹಸ್ತ, ರಾಹುಕಾಲ: ಬೆಳಗ್ಗೆ 7.30ರಿಂದ 9ರವರೆಗೆ

■ **ಮೈಸೂರು ಯೋಗ ಅಸೋಸಿಯೇಷನ್:** ಉಚಿತ ಸರಳ ಯೋಗಾಸನ, ಪ್ರಾಣಾಯಾಮ, ಧ್ಯಾನ, ಪ್ರಾಕೃತಿಕ ಅಹಾರ ಕ್ರಮದ ಬಗ್ಗೆ ತರಬೇತಿ, ಸ್ಥಳ: ನಮೋ ಯೋಗ ಭವನ, ರಾಮಾನುಜ ರಸ್ತೆ, ಬೆಳಗ್ಗೆ 6ರಿಂದ 7, ಸಂಜೆ 6ರಿಂದ 7ರವರೆಗೆ.

■ **ಕಾವೇರಿ ಗ್ರೂಪ್ ಆಫ್ ಇನ್‌ಸ್ಟಿಟ್ಯೂಷನ್:** ಲೋಕಸಭಾ ಚುನಾವಣೆಯಲ್ಲಿ ಮತದಾನ ಕುರಿತು ವಿದ್ಯಾರ್ಥಿಗಳಿಂದ ಪಾದಯಾತ್ರೆ ಅಭಿಯಾನ, ಸ್ಥಳ: ಮೈಸೂರು ನಗರ ರೈಲ್ವೆ ನಿಲ್ದಾಣದ ಮುಂಭಾಗ, ಬೆಳಗ್ಗೆ 8 ಗಂಟೆಗೆ.

■ **ರಾಮ್‌ಸನ್ಸ್ ಬೊಂಬೆ ಮನೆ:** ದಸರೆ ಬೊಂಬೆ ಪ್ರದರ್ಶನ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, ನಜರ್‌ಬಾದ್ ಮುಖ್ಯ ರಸ್ತೆ, ಬೆಳಗ್ಗೆ 10 ರಿಂದ ಸಂಜೆ 7ರವರೆಗೆ

■ **ಶ್ರೀರಾಮ ದೇವಸ್ಥಾನ:** ಶ್ರೀರಾಮ ನವಮಿ ಮಹೋತ್ಸವ, ಹನುಮಂತೋತ್ಸವ ಹಾಗೂ ರಾತ್ರಿ ಶ್ರೀರಾಮಸೀತಾ ಶಯನೋತ್ಸವ, ಸ್ಥಳ: ಅರಮನೆ ಕೋಟೆ, ಉತ್ತರ ದ್ವಾರ, ಬೆಳಗ್ಗೆ 8.30ರಿಂದ


■ **ಶ್ರೀರಾಮ ಸೇವಾ ಚಾರಿಟಬಲ್ ಟ್ರಸ್ಟ್ ಅಂಗ ಸಂಸ್ಥೆ ಶ್ರೀ ರಾಮ ಸೇವಾ ಮಂಡಲಿ:** 71ನೇ ವರ್ಷದ ಶ್ರೀ ರಾಮೋತ್ಸವ, ವಿದುಷಿ ಶ್ರೀಮತಿ ಶೃತಿ ನರಸಿಂಹ ಬೋಡೆ ಯಲ್ಲಾಪುರ, (ಉತ್ತರ ಕನ್ನಡ) ಅವರಿಂದ ಭಕ್ತಿ ಸಂಗೀತ, ವಿದ್ವಾನ್ ಸತೀಶ್ ಭಟ್, ಹೆಗ್ಗಾರ್–ಹಾರ್ಮೋನಿಯಂ, ವಿದ್ವಾನ್ ವಿಜೇತ್ ಹೆಗ್ಗಡೆ–ತಬಲ, ಸ್ಥಳ: ದೇವಸ್ಥಾನದ ಆವರಣ, ವಿದ್ಯಾರಣ್ಯಪುರಂ, ಸಂಜೆ 6.30ಕ್ಕೆ

■ **ಕಾದಂಬರಿ ಏಜೆನ್ಸೀಸ್ ಮತ್ತು ವಿಕಲ ವಿಕಾಸ ಟ್ರಸ್ಟ್ :** ಮಕ್ಕಳ ಪುಸ್ತಕಗಳ ಪ್ರದರ್ಶನ ಮತ್ತು ಮಾರಾಟ, ಸ್ಥಳ: ನಂ.45, ಕೆ.ಆರ್. ಸರ್ಕಲ್, ದೇವರಾಜ ಅರಸು ರಸ್ತೆ, ಸಂಜೆ 5.30ಕ್ಕೆ

■ **ಶ್ರೀ ರಾಮಾಭ್ಯುದಯ ಸಭಾ, ಪಬ್ಲಿಕ್ ಚಾರಿಟಬಲ್ ಟ್ರಸ್ಟ್:** ಶ್ರೀ ಕ್ರೋಧಿನಾಮ ಸಂವತ್ಸರದ 134ನೇ ವರ್ಷ ಶ್ರೀ ರಾಮೋತ್ಸವ, ಶಾಸ್ತ್ರೀಯ ಸಂಗೀತ, ಸ॥ ವಿ॥ ಸಾಕೇತ ರಾಮನ್ ಅವರಿಂದ, ವಿ ॥ ನಿಶಾಂತ್ ಚಂದರ್–ಪಿಟೀಲು, ವಿ॥ ಅರ್ಜುನ್ ಕುಮಾರ್–ಮೃದಂಗ, ವಿ॥ ಜಿ.ಎಸ್.ರಾಮಾನುಜಂ–ಘಟಂ, ಸ್ಥಳ: ಶ್ರೀರಾಮಮಂದಿರ, ವಿನೋಬ ರಸ್ತೆ, ಶ್ರೀರಾಮಪೇಟೆ ಸಂಜೆ 5ರಿಂದ.

■ **ಶ್ರೀರಾಮಮಂದಿರ:** 58ನೇ ವರ್ಷದ ರಾಮೋತ್ಸವ, ಬೆಳಗ್ಗೆ 7 ಗಂಟೆಗೆ ಶ್ರೀ ರುದ್ರಹೋಮ, ಸಂಜೆ 6 ಗಂಟೆಗೆ ವಿದ್ವಾನ್ ಬಳ್ಳಾರಿ ಎಂ.ರಾಘವೇಂದ್ರ ಅವರಿಂದ ಕರ್ನಾಟಕ ಶಾಸ್ತ್ರೀಯ ಸಂಗೀತ ಗಾಯನ, ಸ್ಥಳ: ರಾಮಮಂದಿರ ಆವರಣ, ಜಯನಗರ.


ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ–ಶ್ರೀ ಬಸವಾನಂದ ಸ್ವಾಮಿಗಳು, 6.15 ಗೀತಾರಾಧನ, 6.35. 6.10 "ವಿಶ್ವ ವಿಖ್ಯಾತ ವಿಜ್ಞಾನಿಗಳು " ಬಾನುಲಿ ಸರಣಿ, ಪ್ರಸ್ತುತಿ: ಶ್ರೀನಿವಾಸಪ್ರಸಾದ್, 6.40–ಪದ ಸಂಸ್ಕೃತಿ: ಪ್ರಸ್ತುತಿ: ಪ್ರೊ.ಲಕ್ಷ್ಮೀನಾರಾಯಣ ಅರೋರಾ, 6.50–ರೈತರಿಗೆ ಸಲಹೆ, 7.15 ಚುನಾವಣಾ ಪರ್ವ–ದೇಶದ ಗರ್ವ–2024ರ ಲೋಕಸಭಾ ಚುನಾವಣೆಯ ಸಂದರ್ಭದಲ್ಲಿ ವಿಶೇಷ ಸರಣಿ Part–1 ವಿಷಯ–ಚುನಾವಣೆ ಸಂದರ್ಭದಲ್ಲಿ ವಿಕಲಚೇತನರಿಗೆ ಇರುವ ಸೌಲಭ್ಯಗಳು ಭಾಗವಹಿಸುತ್ತಾರೆ–ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಜಂಟಿ ನಿರ್ದೇಶಕ S.ನಟರಾಜ್ ಇವರೊಂದಿಗೆ M.S. ಅನುಪಮ, 9.05 ನೆನಪಿನಂಗಳ (ಧ್ವನಿ ಭಂಡಾರದಿಂದ) 1) "ತಿಥಿ ಅರಿಯದ ಅತಿಥಿಗಳು" ಪ್ರೊ.ಅ.ರಾ.ಮಿತ್ರ ಅವರಿಂದ ವಿನೋದ ಭಾಷಣ, 2) ಸಾಹಿತ್ಯ ಪ್ರೇರಣೆಯ ಮೊದಲ ಹೆಜ್ಜೆಗಳು, ಮಾತನಾಡಿರುವವರು ಮಾಸ್ತಿ ವೆಂಕಟೇಶ ಅಯ್ಯಂಗಾರ್, 10.00– ಶಾಸ್ತ್ರೀಯ ಸಂಗೀತ–ಬಿ.ಡಿ.ವೇಣುಗೋಪಾಲ, ಜಲತರಂಗಮ್, 11.00–ಮಿಶ್ರ ಮಾಧುರ್ಯ, 12.30–ದೇವರ ನಾಮ, 12.45 ನಮ್ಮ ಆರೋಗ್ಯ–"ಷೋಗ್ರನ್ ಸಿಂಡ್ರೋಮ್ ಲಕ್ಷಣಗಳು ಮತ್ತು ಚಿಕಿತ್ಸೆ" ಕುರಿತು ಮೈಸೂರಿನ ಜೆಎಸ್‌ಎಸ್ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯ ಕೀಲುರೋಗ ಮತ್ತು ಸಂಧೀವಾತ ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಡಾ.ಮಹಾಬಲೇಶ್ವರ ಮಮದಾಪುರ ಅವರೊಂದಿಗೆ ಮಾತುಕತೆ. ಇವರೊಂದಿಗೆ ಭಾಗವಹಿಸುತ್ತಾರೆ–ಬೇದ್ರೆ ಮಂಜುನಾಥ್, 1.20 ಭಾವಗೀತೆಗಳು, 4.00–ಮಹಿಳಾರಂಗ "ಡಾಕ್ಟರ್ ಸಮಯ" –ಮಧ್ಯವಯಸ್ಸಿನ ಹೆಣ್ಣು ಮಕ್ಕಳಲ್ಲಿ ಕಂಡು ಬರುವ ಕಣ್ಣಿನ ಸಮಸ್ಯೆಗಳು, ಚಿಕಿತ್ಸೆ ಹಾಗೂ ಪರಿಹಾರ ಭಾಗವಹಿಸುವ ವೈದ್ಯರು: ನೇತ್ರತಜ್ಞೆ ಡಾ.ದೀಪ್ತಿ, ಪ್ರಸ್ತುತಿ: ಕೆ.ಬಿ.ಮೀನಾ, 4.45 ಹಿಂದಿ ಪಾಠ–ಪ್ರಸ್ತುತಿ: ಡಾ.ಮಾಧವಿ ಭಂಡಾರಿ, 6.50 ಕೃಷಿರಂಗ ಹಣ್ಣು ಹೊನ್ನು? ತೋಟಗಾರಿಕಾ ಬೆಳೆಗಳ ಸಮಗ್ರ ಬೇಸಾಯ ವಿಧಾನ ಕುರಿತ ಬಾನುಲಿ ಸರಣಿ ಕಿರುಹಣ್ಣುಗಳ ಬೇಸಾಯ ಕುರಿತು ಟಿ.ನರಸೀಪುರ ತಾಲೂಕು ತೋಟಗಾರಿಕಾ ಇಲಾಖೆ ಹಿರಿಯ ಸಹಾಯಕ ನಿರ್ದೇಶಕರಾದ ಎಂ.ಶಾಂತಾ ಅವರೊಂದಿಗೆ ಸಂದರ್ಶನ, ಸಂದರ್ಶಕರು: ಎನ್.ಕೇಶವಮೂರ್ತಿ, 10.30–ಸವಿನೆನಪು

ಲೋಕಸಭಾ ಚುನಾವಣೆ ಹಿನ್ನೆಲೆ ; ಮೈಸೂರು ಜಿಲ್ಲೆಯ 11 ವಿಧಾನಸಭಾ ಕ್ಷೇತ್ರಗಳಲ್ಲಿ ಮತದಾರರಿಗೆ

ಇವಿಎಂ, ವಿವಿ ಪ್ಯಾಟ್ ಬಳಕೆ ವಿಧಾನ ಸೇರಿದಂತೆ ಮತದಾನದ ಮಾಹಿತಿ ಒಳಗೊಂಡ 'ವೋಟರ್ ಗೈಡ್' ವಿತರಣೆ



ಮೈಸೂರು ಜಿಲ್ಲೆಯ ಹೆಚ್‌ಡಿ ಕೋಟೆಯ ಡಿಬಿ ಕುಪ್ಪೆಯಲ್ಲಿ ರಾಜ್ಯ ಸ್ವೀಪ್ ನೋಡಲ್ ಅಧಿಕಾರಿ ಪಿ.ಎಸ್.ವಸ್ತ್ರದ್ ಹಾಗೂ ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷರೂ ಆದ ಮೈಸೂರು ಜಿಪಂ ಸಿಇಓ ಕೆ.ಎಂ.ಗಾಯತ್ರಿ ವೋಟರ್ ಗೈಡ್ ಹಾಗೂ ಸ್ಲಿಪ್ ಅನ್ನು ವಿತರಣೆ ಮಾಡುತ್ತಿರುವುದು.

ಎಂ.ಬಿ.ಪವನ್‌ಮೂರ್ತಿ

ಮೈಸೂರು, ಏ.21– ಲೋಕಸಭಾ ಚುನಾವಣೆಗೆ ದಿನಗಣನೆ ಆರಂಭಗೊಂಡಿದ್ದು, ಮೈಸೂರು ಜಿಲ್ಲಾ ಚುನಾವಣಾಧಿಕಾರಿ ಕಚೇರಿ ವತಿಯಿಂದ ಜಿಲ್ಲೆಯ 11 ವಿಧಾನಸಭಾ ಕ್ಷೇತ್ರಗಳಲ್ಲಿ ಮತದಾರರ ಮನೆಗಳಿಗೆ 'ವೋಟರ್ ಗೈಡ್ (ಮತದಾರರ ಮಾರ್ಗದರ್ಶಿ ಕೈಪಿಡಿ)' ವಿತರಣೆಗೆ ಈಗಾಗಲೇ ಚಾಲನೆ ನೀಡಲಾಗಿದೆ.

ಆ ಮೂಲಕ ವಿದ್ಯುನ್ಮಾನ ಮತಯಂತ್ರದಲ್ಲಿ (ಇವಿಎಂ) ಮತದಾನ ಮಾಡುವ ವಿಧಾನ ಹಾಗೂ ವಿವಿ ಪ್ಯಾಟ್‌ನಲ್ಲಿ ಮತದಾನ ಮಾಡಿದ್ದು ಯಾವ ಅಭ್ಯರ್ಥಿ ಮತ್ತು ಪಕ್ಷಕ್ಕೆ ಎಂದು ಖಾತ್ರಿಪಡಿಸಿಕೊಳ್ಳುವ ವಿಧಾನ ಸೇರಿದಂತೆ ಚುನಾವಣೆ ಪ್ರಕ್ರಿಯೆ ಹಲವು ಮಹತ್ವದ ಅಂಶಗಳನ್ನು ಈ ಮಾರ್ಗದರ್ಶಿಯಲ್ಲಿ ವಿವರಿಸುವ ಮೂಲಕ ಮತದಾನದ ಬಗ್ಗೆ ಶಿಕ್ಷಣ ನೀಡಲಾಗುತ್ತಿದೆ.

ಭಾರತ ಚುನಾವಣಾ ಆಯೋಗದ ನಿರ್ದೇಶನದ ಮೇರೆಗೆ ಜಿಲ್ಲೆಯಲ್ಲಿ ವೋಟರ್ ಗೈಡ್ ವಿತರಣೆ ಮಾಡಲಾಗುತ್ತಿದೆ. ಜಿಲ್ಲೆಯಲ್ಲಿ 11 ವಿಧಾನಸಭಾ ಕ್ಷೇತ್ರಗಳ ಪೈಕಿ ಕೆಆರ್ ನಗರ ವಿಧಾನಸಭಾ ಕ್ಷೇತ್ರವು ಮಂಡ್ಯ ಲೋಕಸಭಾ ಕ್ಷೇತ್ರಕ್ಕೆ ಹಾಗೂ ಹೆಚ್‌ಡಿ ಕೋಟೆ, ನಂಜನಗೂಡು, ವರುಣ ಮತ್ತು ಟಿ.ನರಸೀಪುರ ವಿಧಾನಸಭಾ ಕ್ಷೇತ್ರಗಳು ಚಾಮರಾಜನಗರ ಲೋಕಸಭಾ ಕ್ಷೇತ್ರಕ್ಕೆ ಹಂಚಿಕೆ ಆಗಿವೆ. ಮೈಸೂರು–ಕೊಡಗು ಲೋಕಸಭಾ ಕ್ಷೇತ್ರ ವ್ಯಾಪ್ತಿಗೆ ಮೈಸೂರು ಜಿಲ್ಲೆಯ ಪಿರಿಯಾಪಟ್ಟಣ, ಹುಣಸೂರು, ಚಾಮುಂಡೇಶ್ವರಿ, ಕೃಷ್ಣರಾಜ, ಚಾಮರಾಜ ಮತ್ತು ನರಸಿಂಹರಾಜ ವಿಧಾನಸಭಾ ಕ್ಷೇತ್ರಗಳು ಬರಲಿವೆ.

ಪ್ರತಿಯೊಂದು ಮತಗಟ್ಟೆಯ ಬಿಎಲ್‌ಓಗಳು (ಬೂತ್ ಮಟ್ಟದ ಅಧಿಕಾರಿಗಳು) ತಮ್ಮ ವ್ಯಾಪ್ತಿಯ ಮತದಾರರಿಗೆ ವೋಟರ್ ಸ್ಲಿಪ್ ನೀಡುವ ವೇಳೆಯಲ್ಲೇ 'ವೋಟರ್ ಗೈಡ್' ಸಹ ವಿತರಣೆ ಮಾಡುತ್ತಿದ್ದಾರೆ. ಜಿಲ್ಲಾ ಚುನಾವಣಾಧಿಕಾರಿ ಕಚೇರಿ ಹಾಗೂ ಜಿಲ್ಲಾ ಸ್ವೀಪ್ ಕಚೇರಿಯು ಈ ಸಂಬಂಧ ಮೇಲ್ವಿಚಾರಣೆ ಮಾಡುತ್ತಿದೆ. ಒಬ್ಬೊಬ್ಬ ಬಿಎಲ್‌ಓ ವ್ಯಾಪ್ತಿಯಲ್ಲಿ 1,200ರಿಂದ 1,300 ವೋಟರ್‌ಗಳು ಬರಲಿದ್ದು, ಅಂದಾಜು 600 ಮನೆಗಳು ಇರಲಿವೆ. ಮತದಾನಕ್ಕೆ ಒಂದು ದಿನ ಬಾಕಿ ಇರುವಾಗಲೇ ವಿತರಣೆ ಪ್ರಕ್ರಿಯೆ ಪೂರ್ಣಗೊಳಿಸುವ ಗುರಿ ಹೊಂದಲಾಗಿದೆ.

ಕರ್ನಾಟಕದಲ್ಲಿ ಮೊದಲ ಹಂತದ ಮತದಾನವು ಏ.26ರಂದು 14 ಕ್ಷೇತ್ರಗಳಲ್ಲಿ ನಡೆಯಲಿದ್ದು, ಈ ಪೈಕಿ ಮೈಸೂರು–ಕೊಡಗು ಲೋಕಸಭಾ ಕ್ಷೇತ್ರ, ಚಾಮರಾಜನಗರ ಲೋಕಸಭಾ ಕ್ಷೇತ್ರ ಹಾಗೂ ಮಂಡ್ಯ ಲೋಕಸಭಾ ಕ್ಷೇತ್ರಗಳಲ್ಲಿಯೂ ಮತದಾನ ನಡೆಯಲಿದೆ. ಅಂದು ಬೆಳಗ್ಗೆ 7ರಿಂದ ಸಂಜೆ 6ರವರೆಗೆ ಮತದಾನ ಪ್ರಕ್ರಿಯೆಗೆ ಸಮಯ ನಿಗದಿಗೊಳಿಸಲಾಗಿದೆ.

ವಿದ್ಯುನ್ಮಾನ ಮತಯಂತ್ರ (ಇವಿಎಂ) ಬಳಕೆಯು ಚುನಾವಣಾ ವ್ಯವಸ್ಥೆಯನ್ನು ಕ್ರಾಂತಿಕಾರಿಯಾಗಿಸಿದ್ದು, ಇದರ ಜೊತೆಗೆ ಮತದಾರರು ತಮ್ಮ ಮತದಾನದ ಬಗ್ಗೆ ಖಾತ್ರಿಪಡಿಸಿಕೊಳ್ಳಲು ಕಾಗದ ತಾಳೆ ದರ್ಶಕ (ವಿವಿಪ್ಯಾಟ್) ವ್ಯವಸ್ಥೆಯನ್ನೂ ಕಲ್ಪಿಸಿ ಮತದಾನ ಪ್ರಕ್ರಿಯೆಗೆ ಪಾರದರ್ಶಕತೆ ಒದಗಿಸಲಾಗಿದೆ ಎಂದು ಚುನಾವಣಾ ಆಯೋಗ ಹೇಳಿಕೊಂಡಿದೆ

ಮತದಾರರು ತಿಳಿದುಕೊಳ್ಳಬೇಕಾದ ಅಂಶಗಳು ಉಲ್ಲೇಖ

8 ಪುಟಗಳ ಈ ಮಾರ್ಗದರ್ಶಿಯಲ್ಲಿ ಮತದಾರರು ಚುನಾವಣೆ ಪ್ರಕ್ರಿಯೆ ಬಗ್ಗೆ ತಿಳಿದುಕೊಳ್ಳಬೇಕಾದ ಹತ್ತು ಹಲವು ಅಂಶಗಳನ್ನು ಉಲ್ಲೇಖಿಸಲಾಗಿದೆ. 'ವೋಟರ್ ಹೆಲ್ಪ್‌ಲೈನ್' ಆ್ಯಪ್ ಬಳಕೆ ಮೂಲಕ ಮತದಾರರ ಪಟ್ಟಿಯಲ್ಲಿ ಮತದಾರರು ತಮ್ಮ ಹೆಸರು ಇರುವುದನ್ನು ಪರಿಶೀಲಿಸಬಹುದು. ಮತ ಚಲಾಯಿಸಲು ಮತದಾರರ ಪಟ್ಟಿಯಲ್ಲಿ ಮತದಾರರ ಹೆಸರು ಇರುವುದು ಅತ್ಯಗತ್ಯ ಎಂದು ತಿಳಿಸಲಾಗಿದೆ.



ಕೆವೈಸಿ ಆ್ಯಪ್ ಮೂಲಕ ಅಭ್ಯರ್ಥಿಗಳ ಬಗ್ಗೆಯೂ ಮತದಾರರು ಮಾಹಿತಿ ಪಡೆಯಲು ಅವಕಾಶ ಕಲ್ಪಿಸಲಾಗಿದೆ. ಅಭ್ಯರ್ಥಿ ಸಲ್ಲಿಸಿರುವ ಅಫಿಡವಿಟ್ ಸಹ ನೋಡಬಹುದು. ಚುನಾವಣೆ ಘೋಷಣೆಯಾಗುವ ದಿನ ಸಕ್ರಿಯಗೊಳ್ಳುವ 'ಸಿ–ವಿಜಿಲ್ ಆ್ಯಪ್' ಮೂಲಕ ಕಾನೂನುಬಾಹಿರ ಚಟುವಟಿಕೆಗಳು, ಮಾದರಿ ನೀತಿ ಸಂಹಿತೆ ಉಲ್ಲಂಘನೆ ಸಂಬಂಧ ದೂರು ದಾಖಲಿಸಬಹುದು ಎಂಬಿತ್ಯಾದಿ ಅಂಶಗಳನ್ನು ಈ ಗೈಡ್‌ನಲ್ಲಿ ನೀಡಲಾಗಿದೆ. ಮತ ಚಲಾಯಿಸಲು ಯಾವ ದಾಖಲೆ ಕೊಂಡೊಯ್ಯಬೇಕು ಎಂಬ ಮಾಹಿತಿಯನ್ನೂ ಒದಗಿಸಲಾಗಿದೆ.

ಗೈಡ್‌ನಲ್ಲಿ ಯಾವ್ಯಾವ ಅಂಶಗಳಿವೆ

ಇವಿಎಂನಲ್ಲಿ ಮತ ಚಲಾಯಿಸುವುದು, ವಿವಿಪ್ಯಾಟ್‌ನಲ್ಲಿ ಯಾರಿಗೆ ಮತದಾನ ಮಾಡಿದ್ದೇವೆ ಎಂದು ಮತದಾರರು ಪರಿಶೀಲಿಸಿಕೊಳ್ಳುವ ಬಗ್ಗೆ ಸೇರಿದಂತೆ ಅನೇಕ ಮಾಹಿತಿ ಒದಗಿಸಲಾಗಿದೆ. ಮತ ಚಲಾವಣೆಗೆ ಪ್ರವೇಶಿಸುತ್ತಿದ್ದಂತೆ 3ನೇ ಮತಗಟ್ಟೆ ಅಧಿಕಾರಿಯು ಇವಿಎಂ ಸಕ್ರಿಯಗೊಳಿಸಲಿದ್ದಾರೆ. ಮತಯಂತ್ರದಲ್ಲಿ ಸಿದ್ಧವಿರುವ ದೀಪವು ಬೆಳಗುತ್ತದೆ. ಇವಿಎಂನಲ್ಲಿ ನಿಮ್ಮ ಆಯ್ಕೆಯ ಅಭ್ಯರ್ಥಿಯ ಹೆಸರು, ಚಿಹ್ನೆ ಅಥವಾ ನೋಟಾ ಆಯ್ಕೆ ಮುಂದಿರುವ ನೀಲಿ ಗುಂಡಿ ಒತ್ತಬೇಕು. ಬಳಿಕ ಮತದಾರರ ಆಯ್ಕೆಯ ಅಭ್ಯರ್ಥಿ, ಚಿಹ್ನೆ ಅಥವಾ ನೋಟಾ ಮುಂದಿರುವ ದೀಪವು ಬೆಳಗಲಿದೆ. ಆಯ್ಕೆಯ ಅಭ್ಯರ್ಥಿಯ ಕ್ರಮ ಸಂಖ್ಯೆ, ಹೆಸರು ಮತ್ತು ಚಿಹ್ನೆ ಅಥವಾ ನೋಟಾ ಮಾಹಿತಿಯುಳ್ಳ ಮತಪತ್ರದ ಚೀಟಿಯನ್ನು ವಿವಿಪ್ಯಾಟ್ ಯಂತ್ರವು ಮುದ್ರಿಸಿ ಪ್ರದರ್ಶನ ಮಾಡಲಿದೆ.

7 ಸೆಕೆಂಡ್ ಕಾಣಿಸುವ ಮತಪತ್ರ: ವಿವಿಪ್ಯಾಟ್ ಯಂತ್ರದಲ್ಲಿ ಮತಪತ್ರ ಚೀಟಿ ಕಾಣಿಸದಿದ್ದಲ್ಲಿ ಅಥವಾ ಜೋರಾದ ಬೀಪ್ ಶಬ್ದ ಕೇಳಿಸದಿದ್ದಲ್ಲಿ ಮತಗಟ್ಟೆ ಅಧಿಕಾರಿ ಸಂಪರ್ಕಿಸಬೇಕು. ಮತಪತ್ರವು ವಿವಿಪ್ಯಾಟ್ ಯಂತ್ರದ ಗಾಜಿನೊಳಗೆ 7 ಸೆಕೆಂಡ್‌ಗಳ ಕಾಲ ಕಾಣಿಸಲಿದೆ. ಈ ಮುದ್ರಿತ ಚೀಟಿಯು ವಿವಿಪ್ಯಾಟ್ ಯಂತ್ರದಲ್ಲಿ ಭದ್ರವಾಗಿರಲಿದೆ.

ಇದಕ್ಕೂ ಮುನ್ನ ಮತದಾನದ ಪ್ರಕ್ರಿಯೆ ಬಗ್ಗೆಯೂ ವಿವರಿಸಲಾಗಿದೆ. ಮತದಾರರು ಮತಗಟ್ಟೆಯ ಬಳಿ ಸರತಿ ಸಾಲಿನಲ್ಲಿ ನಿಲ್ಲಬೇಕು. ನಂತರ ಮತಗಟ್ಟೆ ಅಧಿಕಾರಿಯು ಮತದಾರರ ಹೆಸರನ್ನು ಹಾಗೂ ಗುರುತಿನ ಚೀಟಿಯನ್ನು ಪರಿಶೀಲಿಸಲಿದ್ದಾರೆ. ಮತಗಟ್ಟೆ ಅಧಿಕಾರಿಯು ಮತದಾರರ ಬೆರಳಿನ ಉಗುರಿಗೆ ಅಳಿಸಲಾಗದಂತಹ ಶಾಹಿಯಿಂದ ಗುರುತು ಮಾಡಲಿದ್ದಾರೆ. ಬಳಿಕ ಒಂದು ಚೀಟಿಯನ್ನು ಕೊಟ್ಟು ಮತದಾರರ ಸಹಿ ಪಡೆಯಲಿದ್ದಾರೆ. ನಂತರ ಮತದಾನ ಪ್ರಕ್ರಿಗೆ ಅಣಿಯಾಗಬಹುದು ಎಂಬಿತ್ಯಾದಿ ಅಂಶಗಳನ್ನು ನೀಡಲಾಗಿದೆ.

ಬಿಜೆಪಿ ಮಹಾ ಸಂಪರ್ಕ ಅಭಿಯಾನಕ್ಕೆ ವಿಜಯೇಂದ್ರ ಚಾಲನೆ



ಮೈಸೂರಿನ ಚಾಮರಾಜ ಕ್ಷೇತ್ರದಲ್ಲಿ ಭಾನುವಾರ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಬಿಜೆಪಿಯ ಮಹಾ ಸಂಪರ್ಕ ಅಭಿಯಾನಕ್ಕೆ ಚಾಲನೆ ನೀಡಿದರು.


ಮೈಸೂರು, ಏ.21(ಬಿಎಲ್‌ಯು)– ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ ಬೆಂಬಲಿಸುವಂತೆ ಮತದಾರರಲ್ಲಿ ಮನವಿ ಮಾಡುವ ಬಿಜೆಪಿಯ ಮಹಾ ಸಂಪರ್ಕ ಅಭಿಯಾನಕ್ಕೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಇಂದು ಚಾಲನೆ ನೀಡಿದರು.

ಮೈಸೂರಿನ ಚಾಮರಾಜ ಕ್ಷೇತ್ರದ ಬೂತ್ ನಂಬರ್ 232 ಮತ್ತು 233 ರ ಬಿಡಾರಂ ಕೃಷ್ಣಪ್ಪ ರಸ್ತೆಯಲ್ಲಿ ಮತದಾರರನ್ನು ಭೇಟಿ ಮಾಡಿದ ವಿಜಯೇಂದ್ರ, ಬಿಜೆಪಿ ಬೆಂಬಲಿಸುವಂತೆ ಮನವಿ ಮಾಡಿದರು.

ಕಳೆದ ಹತ್ತು ವರ್ಷದ ಅವಧಿಯಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಸರ್ಕಾರ ಬಹಳಷ್ಟು ಕೊಡುಗೆಗಳನ್ನು ನೀಡಿದೆ. ಇದರಿಂದ ವಿಶ್ವದಲ್ಲಿ ಭಾರತ ಪ್ರಖ್ಯಾತಿ ಗಳಿಸಿದೆ. ವಿಕಸಿತ ಭಾರತ ಪರಿಕಲ್ಪನೆಯಲ್ಲಿ ಜಾರಿಗೊಳಿಸಿರುವ ಹಲವು ಯೋಜನೆಗಳು ಸಾಕಾರಗೊಂಡು ಜನರ ಆರ್ಥಿಕ ಶಕ್ತಿ ವೃದ್ಧಿಗೊಂಡಿದೆ ಎಂದು ಮತದಾರರಿಗೆ ಮನವರಿಕೆ ಮಾಡಿಕೊಟ್ಟರು.

ಈಗ ಮತ್ತೆ ಬಿಜೆಪಿ ಬೆಂಬಲಿಸಿ ನರೇಂದ್ರ ಮೋದಿ ಪುನಾರಾಯ್ಕೆಗೊಂಡರೆ ಭಾರತ ಮತ್ತಷ್ಟು ಅಭಿವೃದ್ಧಿ ಹೊಂದಲಿದೆ. ಈ ಮೂಲಕ ಮಹತ್ವದ ಯೋಜನೆಗಳು ಜಾರಿಗೊಳ್ಳಲಿವೆ ಎಂದು ಭರವಸೆ ನೀಡಿದರು.


ನಗರ ಬಿಜೆಪಿ ಅಧ್ಯಕ್ಷ ಎಲ್.ನಾಗೇಂದ್ರ, ಮಾಜಿ ಕಾರ್ಪೋರೇಟರ್ ಪ್ರಮೀಳಾ, ಬಿಜೆಪಿ ಚಾಮರಾಜ ಕ್ಷೇತ್ರದ ಅಧ್ಯಕ್ಷ ದಿನೇಶ್ ಗೌಡ, ಯುವ ಮೋರ್ಚಾ ಪ್ರಧಾನ ಕಾರ್ಯದರ್ಶಿ ಸಚಿನ್. ಆರ್.ಪರಮೇಶ್, ಮೈಕಾ ಪ್ರೇಮ್‌ಕುಮಾರ್ ಸೇರಿದಂತೆ ಹಲವರು ಈ ವೇಳೆ ಹಾಜರಿದ್ದರು.



ಮೈಸೂರಿನ ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಬ್ಯಾತಹಳ್ಳಿ ಗ್ರಾಮದಲ್ಲಿ ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಯದುವೀರ್ ಅವರು ಶಾಸಕ ಜಿ.ಟಿ.ದೇವೇಗೌಡರೊಂದಿಗೆ ಪ್ರಚಾರ ನಡೆಸಿದರು. ಈ ಸಂದರ್ಭದಲ್ಲಿ ಗೆಜ್ಜಗಳ್ಳಿ ಲೋಕೇಶ್ ಮತ್ತಿತರರಿದ್ದರು.

ಮನೆ ಮನೆಗೆ ತೆರಳಿ, ಕಾಂಗ್ರೆಸ್ ಅಭ್ಯರ್ಥಿಗೆ ಓಟು ಹಾಕಿಸಿ

ಬೂತ್ ಮಟ್ಟದ ಕಾರ್ಯಕರ್ತರಿಗೆ ಶಾಸಕ ಕೆ.ಹರೀಶ್‌ಗೌಡ ಕರೆ



ಮೈಸೂರು, ಏ.21(ಎಂಕೆ)– ಚಾಮರಾಜ ವಿಧಾನಸಭಾ ಕ್ಷೇತ್ರದ ಮನೆ ಮನೆಗೂ ತೆರಳಿ ಕಾಂಗ್ರೆಸ್ ಅಭ್ಯರ್ಥಿ ಎಂ.ಲಕ್ಷ್ಮಣರಿಗೆ ಮತ ನೀಡುವಂತೆ ಮತದಾರರ ಮನವೊಲಿಸಿ ಎಂದು ಶಾಸಕ ಕೆ.ಹರೀಶ್‌ಗೌಡ ಬೂತ್ ಮಟ್ಟದ ಪದಾಧಿಕಾರಿಗಳಿಗೆ ಕರೆ ನೀಡಿದರು.

ನಗರದ ಗೋಕುಲಂನಲ್ಲಿರುವ ಡಾಕ್ಟರ್ ಕಾರ್ನರ್ ಸಮೀಪದ ಪಾರ್ಕ್‌ನಲ್ಲಿ ಬೂತ್ ಮಟ್ಟದ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರ ಸಭೆ ನಡೆಸಿ ಮಾತನಾಡಿದ ಅವರು, ಎಲ್ಲಾ ವಾರ್ಡ್ ಬೂತ್ ಅಧ್ಯಕ್ಷ, ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ತಮ್ಮ ತಮ್ಮ ಜವಾಬ್ದಾರಿ ಅರಿತು ಶ್ರಮಪಟ್ಟು ಕೆಲಸ ಮಾಡಬೇಕು. ರಾಜ್ಯ ಸರ್ಕಾರದ ಐದು ಗ್ಯಾರಂಟಿ ಯೋಜನೆಗಳ ಜೊತೆಗೆ ಕೇಂದ್ರದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ನೀಡುವುದಾಗಿ ಘೋಷಣೆ ಮಾಡಿರುವ ಗ್ಯಾರಂಟಿ ಯೋಜನೆಗಳ ಬಗ್ಗೆ ಮಾಹಿತಿ ನೀಡಿ ಮತದಾರರ ಮನವೊಲಿಸಿ ಎಂದರು.

ಅಖಿಲ ಭಾರತ ರಾಷ್ಟ್ರೀಯ ಕಾಂಗ್ರೆಸ್ ಸಮಿತಿಯ ಚುನಾವಣಾ ಪ್ರಣಾಳಿಕೆಯಲ್ಲಿ ಘೋಷಿಸಿರುವ ಗ್ಯಾರಂಟಿಗಳ ಬಗ್ಗೆ ಮಹಿಳೆಯರಿಗೆ ವರ್ಷಕ್ಕೆ ಒಂದು ಲಕ್ಷ ಬರುವ ಮಹಾಲಕ್ಷ್ಮಿ ಯೋಜನೆ, ರೈತರ ಸಾಲ ಮನ್ನಾ, ಉದ್ಯೋಗ ನೀಡುವ ಗ್ಯಾರಂಟಿ ಯೋಜನೆಗಳ ಬಗ್ಗೆ ಮಾಹಿತಿ ನೀಡಿ, ಪ್ರತಿ ತಿಂಗಳು ರಾಜ್ಯ ಸರ್ಕಾರ ಗೃಹಲಕ್ಷ್ಮಿ ಗ್ಯಾರಂಟಿ ಯೋಜನೆ ಜೊತೆಗೆ ಮಹಾಲಕ್ಷ್ಮಿ ಗ್ಯಾರಂಟಿ ಯೋಜನೆಯೂ ಜಾರಿಯಾಗಬೇಕಾದರೆ ತಪ್ಪದೆ ಕಾಂಗ್ರೆಸ್ ಅಭ್ಯರ್ಥಿಗೆ ಮತ ನೀಡಿ ಅವರನ್ನು ಗೆಲ್ಲಿಸುವ ಮೂಲಕ ಎಐಸಿಸಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆ ಹಾಗೂ ರಾಹುಲ್ ಗಾಂಧಿ ಯವರ ಕೈ ಬಲಪಡಿಸಿ ಎಂದು ಕೋರಿದರು.

ಇಂದಿರಾ ಬ್ಲಾಕ್ ಅಧ್ಯಕ್ಷ ರವಿ ಮಂಚೇಗೌಡನಕೊಪ್ಪಲು, ದೇವರಾಜ ಬ್ಲಾಕ್ ಅಧ್ಯಕ್ಷ ರಮೇಶ್ ರಾಯಪ್ಪ ಸೇರಿದಂತೆ ಚಾಮರಾಜ ಕ್ಷೇತ್ರದ ಕಾಂಗ್ರೆಸ್ ಮುಖಂಡರು, ಬೂತ್ ಮಟ್ಟದ ಪದಾಧಿಕಾರಿಗಳು, ಕಾರ್ಯಕರ್ತರು ಉಪಸ್ಥಿತರಿದ್ದರು.



ಮೈಸೂರಿನ 55 ನೇ ವಾರ್ಡ್‌ನ ರಾಮಲಿಂಗೇಶ್ವರ ದೇವಸ್ಥಾನ ರಸ್ತೆಯಲ್ಲಿ ಮಾಜಿ ಸಚಿವ ಎಸ್.ಎ.ರಾಮದಾಸ್ ಮನೆ ಮನೆಗೆ ತೆರಳಿ ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಯದುವೀರ್ ಪರವಾಗಿ ಮತಯಾಚಿಸಿದರು.

ಚಾಮುಂಡೇಶ್ವರಿ ಕ್ಷೇತ್ರದ ವಿವಿಧೆಡೆ ಬಿಜೆಪಿ ಅಭ್ಯರ್ಥಿ ಯದುವೀರ್ ಮತ ಯಾಚನೆ

● ಕ್ಷೇತ್ರದ ಶಾಸಕ ಜಿ.ಟಿ.ದೇವೇಗೌಡರ ನೇತೃತ್ವ ● ಎಲ್ಲೆಡೆ ಭರ್ಜರಿ ರೋಡ್ ಶೋ



ಚಾಮುಂಡೇಶ್ವರಿ ಕ್ಷೇತ್ರದ ಆಲನಹಳ್ಳಿಯಲ್ಲಿ ಭಾನುವಾರ ಸಂಜೆ ಕ್ಷೇತ್ರದ ಶಾಸಕ ಜಿ.ಟಿ.ದೇವೇಗೌಡ ಅವರ ನೇತೃತ್ವದಲ್ಲಿ ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಮತ ಯಾಚಿಸಿದರು.

ಮೈಸೂರು,ಏ.21(ಪಿಎಂ)– ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಭಾನುವಾರ ಚಾಮುಂಡೇಶ್ವರಿ ಕ್ಷೇತ್ರದ ವಿವಿಧ ಭಾಗಗಳಲ್ಲಿ ಕ್ಷೇತ್ರ ಶಾಸಕರೂ ಆದ ಜೆಡಿಎಸ್ ಕೋರ್ ಕಮಿಟಿ ಅಧ್ಯಕ್ಷ ಜಿ.ಡಿ.ದೇವೇಗೌಡರ ನೇತೃತ್ವದಲ್ಲಿ ಮತ ಯಾಚಿಸಿದರು.

ಎಲ್ಲಾ ಗ್ರಾಮಗಳಲ್ಲಿ ಭರ್ಜರಿ ರೋಡ್ ಶೋ ನಡೆಸಿದ ಯದುವೀರ್ ಹಾಗೂ ಜಿ.ಟಿ.ದೇವೇಗೌಡರು ಭಾರಿ ಮತಗಳ ಅಂತರದಲ್ಲಿ ಗೆಲ್ಲಿಸಬೇಕೆಂದು ಕೋರಿದರು. ಎಲ್ಲಾ ಗ್ರಾಮಗಳಲ್ಲಿ ಮಂಗಳವಾದ್ಯ, ತಮಟೆ ವಾದ್ಯ ಗಿದರೆ, ಭಾರಿ ಸಂಖ್ಯೆಯಲ್ಲಿ ನೆರೆದಿದ್ದ ಬಿಜೆಪಿ–ಜೆಡಿಎಸ್ ಕಾರ್ಯಕರ್ತರಲ್ಲಿ ಉತ್ಸಾಹ ವ್ಯಕ್ತವಾಯಿತು.

ಕ್ಷೇತ್ರದ ಉದ್ಬೂರು ಗ್ರಾಮದಲ್ಲಿ ಭಾರಿ ರೋಡ್ ಶೋ ನಡೆಸಿ ಮತ ಯಾಚಿಸಲಾಯಿತು. ಅದೇ ರೀತಿ ಕ್ಷೇತ್ರದ ಅನಗಳ್ಳಿ, ಗೋಪಾಲಪುರ, ಜಯಪುರ, ದಾರಿಪುರ, ಕೆಲ್ಲಹಳ್ಳಿ, ತಳೂರು, ಆಲನಹಳ್ಳಿ ಸೇರಿದಂತೆ ಕ್ಷೇತ್ರ ವ್ಯಾಪ್ತಿಯ ವಿವಿಧ ಭಾಗಗಳಲ್ಲಿ ಯದುವೀರ್ ಮತ ಯಾಚಿಸಿದರು. ಶಾಸಕ ಜಿ.ಟಿ.ದೇವೇಗೌಡರ ನೇತೃತ್ವದಲ್ಲಿ ನಡೆದ ಮತ ಯಾಚನೆಯಲ್ಲಿ ಆಯಾಯ ಗ್ರಾಮದ ಮುಖಂಡರು ಹಾಗೂ ಜೆಡಿಎಸ್–ಬಿಜೆಪಿ ಕಾರ್ಯಕರ್ತರು ಪಾಲ್ಗೊಂಡಿದ್ದರು.

ಜಯಪುರ ಗ್ರಾಮದಲ್ಲಿ ನಡೆದ ಪ್ರಚಾರದಲ್ಲಿ ಮಾತನಾಡಿದ ಜಿ.ಟಿ.ದೇವೇಗೌಡರು, ತಮ್ಮ ಪವಿತ್ರ ಮತವನ್ನು ಕಮಲದ ಗುರುತಿಗೆ ನೀಡಿ ಹೆಚ್ಚಿನ ಮತಗಳ ಅಂತರದಲ್ಲಿ ಯದುವೀರ್ ಅವರನ್ನು ಗೆಲ್ಲಿಸಬೇಕೆಂದು ಕೋರಿದರು.

ಜಯಪುರ ಗ್ರಾಮದಲ್ಲಿ ಅರಮನೆ ಕಾವಲ್ ಜಮೀನುಗಳನ್ನು ಹಲವು ಗ್ರಾಮಸ್ಥರು ಉಳುಮೆ ಮಾಡುತ್ತಿದ್ದು, ಅವರಿಗೆ ಖಾತೆ ಮಾಡಿಸಿಕೊಡಲು ಯದುವೀರ್ ಅವರೊಂದಿಗೆ ಮಾತನಾಡಿದ್ದೇನೆ. ಇಂತಹ ಜಮೀನು 500ರಿಂದ 600 ಎಕರೆವರೆಗೆ ಇದೆ. ತಾವು ಗ್ರಾಮಸ್ಥರು ಯಾರೂ ಏನೇ ಹೇಳಿದರೂ ತಮ್ಮ ಮತವನ್ನು ಕಮಲಕ್ಕೆ ಹಾಕುವ ಮೂಲಕ ಜಯಪುರದಲ್ಲಿ ಒಂದು ದಾಖಲೆ ನಿರ್ಮಾಣ ಆಗಬೇಕು ಎಂದು ಗ್ರಾಮಸ್ಥರಲ್ಲಿ ಮನವಿ ಮಾಡಿದರು.

ಇದೇ ವೇಳೆ ಯದುವೀರ್ ಮಾತನಾಡಿ, ನಮ್ಮ ತಾತನವರ ಹೆಸರಿನಲ್ಲಿ ನಾಮಕರಣವಾಗಿರುವ ಈ ಜಯಪುರ ಗ್ರಾಮಕ್ಕೆ ಭೇಟಿ ನೀಡಿ ಮತ ಯಾಚನೆ ಮಾಡುತ್ತಿರುವುದು ನನಗೆ ಅತ್ಯಂತ ಸಂತಸ ತಂದಿದೆ ಎಂದರಲ್ಲದೆ, ತಮಗೆ ಮತದಾನ ಮಾಡುವಂತೆ ಕೋರಿದರು.

ಆಲನಹಳ್ಳಿಯಲ್ಲಿ ಹಬ್ಬದ ವಾತಾವರಣ

ಪ್ರಚಾರಕ್ಕೆ ಆಗಮಿಸಿದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಸ್ವಾಗತಕ್ಕೆ ಆಲನಹಳ್ಳಿ ಜನತೆ ಇಡೀ ಗ್ರಾಮವನ್ನೇ ತಳಿರು ತೋರಣಗಳಿಂದ ಸಿಂಗರಿಸಿದ್ದರು. ರಸ್ತೆಯುದ್ದಕ್ಕೂ ಬಣ್ಣ ಬಣ್ಣದ ರಂಗೋಲಿ ಬಿಡಿಸಿ, ಗ್ರಾಮದಲ್ಲಿ ಹಬ್ಬದ ವಾತಾವರಣ ನಿರ್ಮಾಣ ಮಾಡಿದ್ದರು.

ಚಾಮುಂಡೇಶ್ವರಿ ಕ್ಷೇತ್ರದ ಆಲನಹಳ್ಳಿ ಗ್ರಾಮಕ್ಕೆ ಯದುವೀರ್ ಆಗಮಿಸುತ್ತಿದ್ದುತೆಯೇ ಹರ್ಷಚಿತ್ತರಾದ ಗ್ರಾಮಸ್ಥರು, ಜಯಘೋಷ ಕೂಗುತ್ತಾ ಅವರಿಗೆ ಹೂಮಳೆಗರೆದರು. ಈ ವೇಳೆ ಮಾತನಾಡಿದ ಯದುವೀರ್, ಭವ್ಯ ಸ್ವಾಗತಕ್ಕಾಗಿ ಧನ್ಯವಾದ ತಿಳಿಸಿದರು. ವಿಕಸಿತ ಭಾರತದ ಪರಿಕಲ್ಪನೆಯನ್ನು ಸಾಕಾರಗೊಳಿಸಲು ಮೋದಿಯವರ ಕೈ ಬಲಪಡಿಸಬೇಕಿದೆ ಅದಕ್ಕಾಗಿ ನನಗೆ ಮತ ನೀಡಿ, ಗೆಲ್ಲಿಸಿ. ನಾನು ನಿಮ್ಮೊಡನೆ ಇದ್ದು ನಿಮ್ಮ ಸೇವೆ ಮಾಡುತ್ತೇನೆಂದರು.

ಚಾಮುಂಡೇಶ್ವರಿ ಕ್ಷೇತ್ರದಲ್ಲಿ ಸತತ ಮೂರ್‍ನಾಲ್ಕು ದಿನಗಳಿಂದ ಕ್ಷೇತ್ರದ ಶಾಸಕ ಜಿ.ಟಿ.ದೇವೇಗೌಡರು, ಪ್ರಚಾರದಲ್ಲಿ ಯದುವೀರರನ್ನು ಮುನ್ನಡೆಸುತ್ತಿದ್ದು, ಪ್ರಚಾರದಲ್ಲಿ ಬಿಜೆಪಿ ಯುವ ಮುಖಂಡ ಕವೀಶ್‌ಗೌಡ ಸಾಥ್ ನೀಡುತ್ತಿದ್ದಾರೆ.

ಕೆಲ್ಲಹಳ್ಳಿ ಗ್ರಾಮದಲ್ಲಿ ಮತಯಾಚನೆ ವೇಳೆ ಮಾತನಾಡಿದ ಜಿ.ಟಿ.ದೇವೇಗೌಡರು, ಮೈಸೂರು ಮಹಾರಾಜರ ಕೊಡುಗೆ ಅಪಾರವಾಗಿದೆ. ಇದನ್ನು ನೆನಪು ಮಾಡಿಕೊಂಡು ಯದುವೀರ್ ಅವರಿಗೆ ಬೆಂಬಲಿಸಬೇಕೆಂದು ವಿನಂತಿಸಿದರು. ಬಿಜೆಪಿ–ಜೆಡಿಎಸ್ ಮೈತ್ರಿ ಅಭ್ಯರ್ಥಿಯಾಗಿ ಮೈಸೂರು–ಕೊಡಗು ಕ್ಷೇತ್ರಕ್ಕೆ ಯದುವೀರ್ ಅವರನ್ನು ಪ್ರಧಾನಿ ನರೇಂದ್ರ ಮೋದಿಯವರು ಆಯ್ಕೆ ಮಾಡಿದ್ದಾರೆ ಇಲ್ಲಿ ಯದುವೀರ್ ಹಾಗೂ ಮಂಡ್ಯದಲ್ಲಿ ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಹೆಚ್.ಡಿ.ಕುಮಾರಸ್ವಾಮಿ ಅವರನ್ನು ಗೆಲ್ಲಿಸಿಕೊಡಿ ಎಂದು ಮನವಿ ಮಾಡಿದರು.

ಮೈಸೂರಲ್ಲಿ ಭಗವಾನ್ ಮಹಾವೀರ ಜಯಂತಿ





ಕಲಾಮಂದಿರದ ಸುಚಿತ್ರ ಆರ್ಟ್ ಗ್ಯಾಲರಿಯಲ್ಲಿ ಜಿಲ್ಲಾಡಳಿತದ ವತಿಯಿಂದ ಮಹಾವೀರರ ಜಯಂತಿ ಆಚರಿಸಲಾಯಿತು. ಮೈಸೂರಿನ ವಿವಿಧ ಜೈನ ಸಂಘಟನೆಗಳಿಂದ ಮಹಾವೀರರ ಪ್ರತಿಮೆ ಮೆರವಣಿಗೆ ನಡೆಸಲಾಯಿತು.

ಮೈಸೂರು, ಏ.21(ಎಂಟಿವೈ)– ಮೈಸೂರಲ್ಲಿ ಭಗವಾನ್ ಮಹಾವೀರರ ಜಯಂತಿಯನ್ನು ಸಡಗರ ಸಂಭ್ರಮದಿಂದ ಆಚರಿಸಲಾಯಿತು.

ಮೈಸೂರಿನ ಕಲಾಮಂದಿರುವ ಸುಚಿತ್ರ ಆರ್ಟ್ ಗ್ಯಾಲರಿಗೆ ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವತಿಯಿಂದ ಮಹಾವೀರರ ಜಯಂತಿಯನ್ನು ಸರಳವಾಗಿ ಆಚರಿಸಲಾಯಿತು. ಮಹಾವೀರರ ಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಗೌರವ ಸಮರ್ಪಿಸಲಾಯಿತು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಜಂಟಿ ನಿರ್ದೇಶಕ ಮಲ್ಲಿಕಾರ್ಜುನ ಸ್ವಾಮಿ, ಜೈನ ಸಮುದಾಯದ ಮುಖಂಡ ಸುರೇಶ್ ಕುಮಾರ್ ಜೈನ್ ಸೇರಿದಂತೆ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಮಹಾವೀರರ ಪ್ರತಿಮೆ ಮೆರವಣಿಗೆ: ಮೈಸೂರಿನ ಹಳ್ಳದಕೇರಿಯಲ್ಲಿರುವ ಜೈನ ಮಂದಿರದಿಂದ ವಿವಿಧ ಜೈನ ಸಮುದಾಯದ ಮಂಡಲಗಳ ವತಿಯಿಂದ ಭಗವಾನ್ ಮಹಾವೀರರ ಜಯಂತಿ ಅಂಗವಾಗಿ ಮಹಾವೀರರ ಪ್ರತಿಮೆ ಮೆರವಣಿಗೆ ಆಯೋಜಿಸಲಾಗಿತ್ತು. ಜೈನ ಮಂದಿರದ ಆವರಣದಿಂದ ಹೊರಟ ಮೆರವಣಿಗೆಯಲ್ಲಿ ಜೈನ ಮಹಿಳಾ ಸಂಘಟನೆ, ಯುವಕ ಮಂಡಲಿ ಹಾಗೂ ಇನ್ನಿತರ ಸಂಘಟನೆಗಳ ಕಾರ್ಯಕರ್ತರು ಪಾಲ್ಗೊಂಡಿದ್ದರು. ಬಳಿಕ ದೊಡ್ಡ ಗಡಿಯಾರ ವೃತ್ತದ ಬಳಿ ಮಹಾವೀರರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಲಾಯಿತು. ಈ ವೇಳೆ ಜೈನ ಸಮುದಾಯ ಮುಖಂಡರಾದ ಸುರೇಶ್ ಕುಮಾರ್ ಜೈನ್, ಮಹಿಳಾ ಸಂಘಟನೆಗಳ ರೀನಾ ಪಾಲ್, ಸುಚೇತ, ಸುಜಾತ, ಆಶಾ, ಅಕ್ಷತಾ, ವಿನುತಾ, ದೀಪ, ಅಶ್ವಿನಿ ಹಾಗೂ ಇನ್ನಿತರರು ಪಾಲ್ಗೊಂಡಿದ್ದರು.

SHOE WORLD™
ESTD. 1998
Best Brands at Your Feet...
RAMASWAMY CIRCLE, MYSURU. PH: 2424252
COUNTDOWN
2024 LS Polls on APRIL 26
4 DAYS TO GO

ನಕ್ಕರೆ ಅದೇ ಸ್ವರ್ಗ

ಆಗ ತಾನೇ ಜನಿಸಿದ ಮಗು : ಡಾಕ್ಟ್ರೇ ಸ್ವಲ್ಪ ಮೊಬೈಲ್ ಕೊಡ್ತೀರಾ?
ಡಾಕ್ಟರ್ : ಯಾಕೆ ಪುಟ್ಟ?
ಮಗು : ಏನಿಲ್ಲ ಡಾಕ್ಟ್ರೆ... ನಾನು ಸೇಫಾಗಿ ಭೂಮಿಗೆ ಬಂದಿರುವೆ ಅಂತಾ ಸ್ಟೇಟಸ್ ಅಪ್‌ಡೇಟ್ ಮಾಡಬೇಕಾಗಿದೆ, ಅರ್ಜೆಂಟಾಗಿ...

ಮೈಸೂರು ಮಿತ್ರ

ಸೋಮವಾರ, 22 ಏಪ್ರಿಲ್ 2024

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತವಾಹಿನಿ.........

'ಶಿಕ್ಷಣ ಮತ್ತು ಸಂಸ್ಕಾರ ಬದುಕಿನ ಮೂಲ ಮಂತ್ರ... ಶಿಕ್ಷಣ ಎಂದಿಗೂ ಎಡವಲು ಬಿಡುವುದಿಲ್ಲ. ಸಂಸ್ಕಾರ ಕೆಡಲು ಬಿಡುವುದಿಲ್ಲ.

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಕೊಟ್ಟಿದ್ದು ತನಗೆ ಬಚ್ಚಿಟ್ಟಿದ್ದು ಪರರಿಗೆ

ನಿಮ್ಮ ಪತ್ರಗಳು

ಪಾತ್ರಗಳಿಗೆ ಜೀವ ತುಂಬಿದ್ದ ನಟ




ಮಾನ್ಯರೆ,

ತಮಗೆ ನಮಸ್ತೆ, ಅಗಲಿದ ಜೀವಕೆ ನಮನ... ನಾಡಿನ ತುಂಬೆಲ್ಲಾ ಪ್ರೀತಿಯಿಂದಲೇ ಕರ್ನಾಟಕದ ಕುಳ್ಳನೆನಿಸಿ, ಮೇರು ನಟನೆಯಲ್ಲಿ ಜೀವಂತ ಪಾತ್ರಗಳಲ್ಲಿ ನಟಿಸಿ, ಮನದಲ್ಲಿ ಉಳಿಯುವ ಅಭಿನಯ ಚತುರ, ನಿರ್ಮಾಣದ ನಿರ್ಮಿತಿಯಲ್ಲಿ ಸದಭಿರುಚಿಯ ಚಿತ್ರಗಳ ನೀಡಿ, ವಿನೂತನ ದಾಖಲೆಗಳ ನಿರ್ಮಿಸಿದ ಕನ್ನಡದ ಕುವರ ದ್ವಾರಕೀಶ್. ಹೃದಯವಂತ ವ್ಯಕ್ತಿತ್ವದ ವ್ಯಕ್ತಿ, ಸ್ಯಾಂಡಲ್‌ವುಡ್ಡಿನ ಧೀಮಂತ ಶಕ್ತಿ, ನಾಡಿಮಿಡಿತದಲ್ಲಿ ಮಾತುಗಳ ಅಭಿವ್ಯಕ್ತಿ, ಕನ್ನಡಿಗರ ಮನದಲ್ಲಿಹುದು ಅನಂತ ಭಕ್ತಿ.

ನಟನೆಂದರೆ ಅಭಿನಯದಿ ಜೀವಿಸಬೇಕು, ನಟನೆಂದರೆ ಅಭಿನಯದಲ್ಲಿ ಬದುಕಬೇಕು, ನಟನೆಂದರೆ ಅಭಿನಯದಲ್ಲಿ ಬಾಳಬೇಕೆಂದು ತಿಳಿಸಿದವರು ದ್ವಾರಕೀಶ್ ಅವರು. ಹಾಸ್ಯದಲ್ಲಿ ನಗುವನ್ನು ಉಕ್ಕಿಸಿ, ವಿವಿಧ ಪಾತ್ರಗಳಲ್ಲಿ ನಟನೆಯನ್ನು ಜೀವಂತಗೊಳಿಸಿ, ಯುವ–ನವ ನಟರನ್ನು ಚಿತ್ರರಂಗಕ್ಕೆ ಪರಿಚಯಿಸಿ, ಜೀವನದ ರಾಗವ ಸುಮಧುರಗೊಳಿಸಿದವರು. ಹಲವು ಏಳು–ಬೀಳುಗಳಲ್ಲಿ ಕುಗ್ಗದೆ, ಎದೆಗಾರಿಕೆಯಿಂದ ಯಾವುದಕ್ಕೂ ಜಗ್ಗದೆ ಸದಾಕಾಲ ಸ್ಫೂರ್ತಿಯ ಬೆಳಕು, ನಾಡಿಗೆ ನಾಡೇ ಮೆಚ್ಚಿದ ವ್ಯಕ್ತಿ ದ್ವಾರಕೀಶ್ ಸರ್ ಅವರು. ನೀವು ಸವೆಸಿದ ದಾರಿ ನಮಗದುವೇ ಹೆದ್ದಾರಿ–ನೀವು ಬದುಕಿದ ಹಿರಿಯ ಬದುಕು ನಮಗದುವೇ ಹಿರಿಯ ಬೆಳಕು, ನಿಮ್ಮ ಹಿರಿಯ ಅನುಭವ– ಕರುಣಿಸಲಿ ಉಳಿದವರಿಗೂ ಬೆಳಕು. ಭಾವಪೂರ್ಣ ಶ್ರದ್ಧಾಂಜಲಿ–ಚಿರಶಾಂತಿ ಕರುಣಿಸಲಿ ಸರ್.

–ಪರಮೇಶ ಕೆ.ಉತ್ತನಹಳ್ಳಿ, ಮೈಸೂರು.

ಬೀದಿದೀಪ ಅಳವಡಿಸಿ



ಮಾನ್ಯರೆ,

ರಾಷ್ಟ್ರೀಯ ಹೆದ್ದಾರಿ 209 ರಾಜ್ಯದ ರಾಜಧಾನಿ ಬೆಂಗಳೂರಿನಿಂದ ಕೊಳ್ಳೇಗಾಲದ ಮೂಲಕ ತಮಿಳುನಾಡು ರಾಜ್ಯದ ಡಿಂಡಿಗಲ್‌ಗೆ ಸಂಪರ್ಕ ಕಲ್ಪಿಸುತ್ತದೆ.

ಕೊಳ್ಳೇಗಾಲ ಪಟ್ಟಣದ ಹೃದಯದ ಭಾಗ ಎಂದೇ ಹೆಸರುವಾಸಿಯಾಗಿರುವ ಸಂವಿಧಾನ ಶಿಲ್ಪಿ ಡಾ.ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಪ್ರತಿಮೆ ಇರುವ ಮುಖ್ಯ ರಸ್ತೆಯಲ್ಲಿ ವಿದ್ಯುತ್ ದೀಪಗಳಿಲ್ಲದೆ ಪರಿತಪಿಸುವಂತಾಗಿದೆ. ಈ ರಸ್ತೆಯ ಅಕ್ಕಪಕ್ಕದಲ್ಲಿ ಸರ್ಕಾರಿ ಎಸ್‌ವಿಕೆ ಶಿಕ್ಷಣ ಸಂಸ್ಥೆ, ಎಂಸಿಕೆಸಿ ಹೈಸ್ಕೂಲ್, ಸರ್ಕಾರಿ ಸಾರ್ವಜನಿಕ ವಿದ್ಯಾರ್ಥಿಗಳ ನಿಲಯಗಳಿದ್ದು ಸರ್ಕಾರಿ ಆಸ್ಪತ್ರೆ ಮತ್ತು ಶವಾಗಾರ, ಕೋರ್ಟ್, ಕಚೇರಿಗಳಿರುವ ಕಾರಣ ಪ್ರತಿ ನಿತ್ಯ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು, ಮತ್ತು ಕೊಳ್ಳೇಗಾಲ ಜನರು ಬಳಸುವ ಮುಖ್ಯರಸ್ತೆ ಆಗಿದ್ದರು ಸಹ ಈ ರಸ್ತೆಯಲ್ಲಿರುವ ಕೆಲವು ವಿದ್ಯುತ್ ಕಂಬಗಳಲ್ಲಿ ಬೀದಿದೀಪಗಳಿಲ್ಲದೆ ಕತ್ತಲಾಗಿದೆ.

ವಾಹನಗಳು ಬೆಳಕನ್ನೆ ಅವಲಂಬಿಸಿರುವುದರಿಂದ ರಾತ್ರಿ ವೇಳೆ ಸಂಚರಿಸುವಾಗ ಮಿತಿ ಮೀರಿದ, ವೇಗದಲ್ಲಿ ಸಹ ಅನೇಕ ವಾಹನಗಳು ಓಡಾಡುವುದರಿಂದ ಅಪಘಾತಗಳು ಸಂಭವಿಸುವ ಆತಂಕ ಎದುರಾಗಿದೆ. ಕೂಡಲೇ ಸಂಬಂಧಪಟ್ಟ ಅಧಿಕಾರಿಗಳು ಬೀದಿ ದೀಪಗಳನ್ನು ಅಳವಡಿಸಬೇಕೆಂದು ಈ ಮೂಲಕ ಮನವಿ.

–ನಾಗೇಶ್, ಮಾನಸಗಂಗೋತ್ರಿ, ಮೈಸೂರು

ಮಧ್ಯಾಹ್ನ ವೇಳೆ ಸಿಗ್ನಲ್ ಲೈಟ್‌ಗಳು ಬೇಡ

ಮಾನ್ಯರೆ,

ಮೈಸೂರು ನಗರದಲ್ಲಿ ಹಿಂದೆಂದೂ ಕಾಣದಂತಹ ಬಿಸಿಲಿನ ತಾಪ ಏರಿಕೆಯಾಗುತ್ತಿದೆ. ಮಧ್ಯಾಹ್ನ 12 ಗಂಟೆಯಿಂದ ಸಂಜೆ 5 ಗಂಟೆಯವರೆಗೆ ಹೊರಗೆ ಹೋಗಿ–ಬರುವುದೇ ಒಂದು ರೀತಿಯ ಸಾಹಸ ಎನ್ನುವಂತಾಗಿದೆ. ಯಾವುದಾದರೂ ತುರ್ತು ಸಂದರ್ಭದಲ್ಲಿ ಹೋಗಬೇಕಾದರೆ, ಕೆಲವು ಸಿಗ್ನಲ್ ಲೈಟ್‌ಗಳು ಬಳಿ 2ರಿಂದ 3 ನಿಮಿಷಗಳ ಕಾಲ ಈ ಉರಿ ಬಿಸಿಲಿನಲ್ಲಿ ನಿಲ್ಲಬೇಕಾದ ಅನಿವಾರ್ಯತೆ ಇದೆ, ಮೈಸೂರಿನ ಕೆಲವು ಸಿಗ್ನಲ್ ಲೈಟ್ಸ್‌ಗಳ ಬಳಿ ಮಧ್ಯಾಹ್ನದ ವೇಳೆಗೆ ವಾಹನ ಸಂಚಾರ ತೀರಾ ಕಡಿಮೆ ಇರುತ್ತದೆ. ಉದಾಹರಣೆಗೆ ಕುವೆಂಪುನಗರದ ವಿಜಯ ಬ್ಯಾಂಕ್ ಸರ್ಕಲ್, ಅಗರ್ವಾಲ್ ಹಾಸ್ಪಿಟಲ್ ಸೇರಿದಂತೆ ನಗರದ ಅನೇಕ ಕಡೆಗಳಲ್ಲಿ ಮಧ್ಯಾಹ್ನದ ವೇಳೆ ವಾಹನ ಸಂಚಾರ ಕಡಿಮೆ ಇರುತ್ತದೆ.

ವಾಹನ ಸಂಚಾರ ಕಡಿಮೆ ಇರುವ ಕಡೆಗಳಲ್ಲಿ ಮಧ್ಯಾಹ್ನದ ವೇಳೆಗೆ ಸಿಗ್ನಲ್ ಲೈಟ್‌ಗಳನ್ನು ಆಫ್ ಮಾಡಿ, ಇದು ಸಾಧ್ಯವೇ ಇಲ್ಲ ಎಂದಾದರೆ, ಸಿಗ್ನಲ್ ಲೈಟ್‌ಗಳ ಅವಧಿಯನ್ನಾದರೂ ಕಡಿಮೆ ಮಾಡಿ, ಇದರಿಂದಾಗಿ ಸಮಯ ಮತ್ತು ಪೆಟ್ರೋಲ್ ಎರಡೂ ಉಳಿತಾಯವಾಗುತ್ತದೆ. ಮೈಸೂರು ನಗರದ ಪೋಲೀಸ್ ಆಯುಕ್ತರಲ್ಲಿ ಈ ಬಗ್ಗೆ ಮನವಿಯನ್ನು ಮಾಡಿದ್ದೇನೆ. ಆಯುಕ್ತರು ಈ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಬೇಕು. **–ಬೂಕನಕೆರೆ ವಿಜೇಂದ್ರ, ಕುವೆಂಪುನಗರ, ಮೈಸೂರು.**

ಸೈಬರ್ ವಂಚನೆಯಿಂದ ಪಾರಾಗಲು ಒಂದು ಸುಲಭ ಉಪಾಯ

ಮಾನ್ಯರೆ,

ಸೈಬರ್ ವಂಚನೆಯಿಂದ ಬ್ಯಾಂಕ್ ಖಾತೆಯ ಹಣವನ್ನು ಕಳೆದುಕೊಳ್ಳುತ್ತಿರುವ ಪ್ರಸಂಗಗಳು ದಿನೇ ದಿನೇ ಹೆಚ್ಚಾಗುತ್ತಿದೆ. ಇದು ಆತಂಕಕಾರಿ ವಿಷಯ.



ಉಳಿತಾಯ ಖಾತೆಯಲ್ಲಿ ಆದಷ್ಟೂ ಕಡಿಮೆ ಹಣ ಉಳಿಸಿಕೊಳ್ಳುವುದರಿಂದ ದೊಡ್ಡ ಮಟ್ಟದ ವಂಚನೆಯಿಂದ ಪಾರಾಗಬಹುದು. ಇದೀಗ ಬ್ಯಾಂಕ್‌ಗಳು 'Sweeping' ಫಿಕ್ಸೆಡ್ ಡೆಪಾಸಿಟ್ ಸೌಲಭ್ಯ ಒದಗಿಸುತ್ತಿವೆ. ಹೆಚ್ಚುವರಿ ಹಣವನ್ನು ಫಿಕ್ಸೆಡ್ ಖಾತೆಯಲ್ಲಿ ಹೂಡಬಹುದು. ಉಳಿತಾಯ ಖಾತೆಗೆ ಅಗತ್ಯವಿದ್ದಷ್ಟು ಮಾತ್ರ ಹಣವನ್ನು ಫಿಕ್ಸೆಡ್ ಖಾತೆಯಿಂದ ವರ್ಗಾವಣೆ ಮಾಡಿಕೊಳ್ಳುವ ಸೌಲಭ್ಯ ಲಭ್ಯವಿದೆ. ಇದರ ಸದುಪಯೋಗ ಪಡೆದು ದೊಡ್ಡ ಮೊತ್ತದ ವಂಚನೆಯಿಂದ ಪಾರಾಗಬಹುದು.


–ಲಕ್ಷ್ಮಣ್ ಗೋರ್ಲಕಟ್ಟೆ, ವಿಜಯನಗರ, ಮೈಸೂರು.



ಜಿ. ಎಲ್. ತ್ರಿಪುರಾಂತಕ
ಮೊ: 96866–77284

ಬೆರಗು

ಅಕ್ಷರಸ್ಥರು ವಿದ್ಯಾವಂತರಾಗೋದು ಯಾವಾಗ?



> "ಇಂದು ಸಮಾಜದಲ್ಲಿ ನಡೆಯುತ್ತಿರುವ ಕೊಲೆ, ಸುಲಿಗೆ, ಅತ್ಯಾಚಾರ, ಅನಾಚಾರ, ದೇಶದ್ರೋಹದ ಕೆಲಸಗಳು, ಶೋಷಣೆ, ಕಾನೂನಿನ ಉಲ್ಲಂಘನೆ, ಪರಿಸರ ಮಾಲಿನ್ಯ ಎಲ್ಲವನ್ನು ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾವಂತ ಸಮೂಹವೇ ಮಾಡುತ್ತಿರುವುದು ದುರದೃಷ್ಟಕರ. ದೇಶದ ಆಸ್ತಿಯಾಗ ಬೇಕಿದ್ದ ವಿದ್ಯಾವಂತ ಸಮೂಹ ತಮ್ಮ ಬೇಜವಾಬ್ದಾರಿಯಿಂದ ದೇಶಕ್ಕೆ ಹೊರಲಾಗದ ಹೊರೆಯಾಗುತ್ತಿರುವುದು ಅನಾರೋಗ್ಯಕರ ಬೆಳವಣಿಗೆಯಾಗಿದೆ. ದೇಶದ ಪ್ರಜೆಯಾಗಿ ತನ್ನ ಕರ್ತವ್ಯಗಳೇನು, ತನ್ನ ಜವಾಬ್ದಾರಿಗಳೇನು? ಎಂದು ಅರಿಯದೆ ಮಾರಕ ಕೃತ್ಯಗಳನ್ನು ಎಸಗಿ ತಮಗೆ ಅರಿವಿಲ್ಲದೆ ದೇಶದ್ರೋಹಿಗಳಾಗುತ್ತಿರುವುದು ವಿನಾಶಕಾರಿ ಸಂಗತಿ."

ಅಕ್ಷರಸ್ಥರೆಲ್ಲಾ ವಿದ್ಯಾವಂತರಲ್ಲ, ವಿದ್ಯಾವಂತರೆಲ್ಲಾ ಅಕ್ಷರಸ್ಥರೇ ಆಗಬೇಕಿಲ್ಲ. ಇಂದಿನ ನಾಗರಿಕ ಸಮಾಜದಲ್ಲಿ ವಿದ್ಯೆ ಅಂದರೆ ಅಕ್ಷರಜ್ಞಾನ ಎಂಬ ಸಂಕುಚಿತ ಅರ್ಥ ಪಡೆದುಕೊಂಡಿರುವುದು ವಿಪರ್ಯಾಸ. ಓದು ಬರಹ ಬರುವವರನ್ನೆಲ್ಲಾ ವಿದ್ಯಾವಂತರೆಂದು ಕರೆಯುವ ವಾತಾವರಣ ಸೃಷ್ಟಿಯಾಗಿದೆ. ಆದರೆ ಅಕ್ಷರಸ್ಥರ ಲಕ್ಷಣವೇ ಬೇರೆ, ವಿದ್ಯಾವಂತರ ಲಕ್ಷಣವೇ ಬೇರೆ. ಅಕ್ಷರವಂತನಿಗೆ ಓದು ಬರಹದ ಹೊರತಾಗಿ ಬೇರಾವ ಗುಣಗಳು ಇರಬೇಕು ಅಂತೇನಿಲ್ಲ. ಆದರೆ ವಿದ್ಯಾವಂತ ಎಂದರೆ ಅವನ ವ್ಯಾಪ್ತಿ ವಿಸ್ತಾರವಾಗಿರುತ್ತದೆ. ವಿದ್ಯಾವಂತನಿಗೆ ಓದು ಬರಹ ಒಂದು ಹೆಚ್ಚುವರಿ ಕೌಶಲ್ಯವಷ್ಟೆ. ಯಾವುದಾದರೂ ಒಂದು ಕಸುಬಿನಲ್ಲಿ ಕೌಶಲ್ಯ ಹೊಂದಿದ್ದರೆ ಅವನು ವಿದ್ಯಾವಂತನೆ. ವಿದ್ಯಾವಂತನಾದವನು ಪ್ರಜ್ಞಾವಂತನಾಗಿ ಇರಬೇಕಾಗುತ್ತದೆ. ವಿನಯ, ವಿವೇಕ, ವಿಧೇಯತೆ, ನೆಲದ ಕಾನೂನನ್ನು ಗೌರವಿಸುವ ಗುಣ, ದೇಶಭಕ್ತಿ, ನಾಗರಿಕ ಕರ್ತವ್ಯ ಹಾಗೂ ಜವಾಬ್ದಾರಿಯ ಅರಿವು, ಸಹಜೀವನ, ಸೌಹಾರ್ದತೆ....... ಹೀಗೆ ಇನ್ನೂ ಅನೇಕ ಗುಣಲಕ್ಷಣಗಳು ಇರಬೇಕಾಗುತ್ತದೆ. ಆದರೆ ಇಂದು ವಿದ್ಯಾವಂತರು ಎಂದು ಕರೆಯಿಸಿಕೊಳ್ಳುವ ಯುವ ಸಮೂಹ ಇವುಗಳನ್ನು ಅರಿಯದೆ, ಶಿಕ್ಷಣದ ಉದ್ದೇಶ ಒಂದು ಕೆಲಸ ಗಿಟ್ಟಿಸಲು ಮಾತ್ರ ಎಂದು ಸಂಕುಚಿತವಾಗಿ ಚಿಂತಿಸುತ್ತಿರುವುದು ವಿಷಾದಕರ ಸಂಗತಿ.

ಇಂದು ಸಮಾಜದಲ್ಲಿ ನಡೆಯುತ್ತಿರುವ ಕೊಲೆ, ಸುಲಿಗೆ, ಅತ್ಯಾಚಾರ, ಅನಾಚಾರ, ದೇಶದ್ರೋಹದ ಕೆಲಸಗಳು, ಶೋಷಣೆ, ಕಾನೂನಿನ ಉಲ್ಲಂಘನೆ, ಪರಿಸರ ಮಾಲಿನ್ಯ ಎಲ್ಲವನ್ನು ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾವಂತ ಸಮೂಹವೇ ಮಾಡುತ್ತಿರುವುದು ದುರದೃಷ್ಟಕರ. ದೇಶದ ಆಸ್ತಿಯಾಗಬೇಕಿದ್ದ ವಿದ್ಯಾವಂತ ಸಮೂಹ ತಮ್ಮ ಬೇಜವಾಬ್ದಾರಿಯಿಂದ ದೇಶಕ್ಕೆ ಹೊರಲಾಗದ ಹೊರೆಯಾಗುತ್ತಿರುವುದು ಅನಾರೋಗ್ಯಕರ ಬೆಳವಣಿಗೆಯಾಗಿದೆ. ದೇಶದ ಪ್ರಜೆಯಾಗಿ ತನ್ನ ಕರ್ತವ್ಯಗಳೇನು, ತನ್ನ ಜವಾಬ್ದಾರಿಗಳೇನು? ಎಂದು ಅರಿಯದೆ ಮಾರಕ ಕೃತ್ಯಗಳನ್ನು ಎಸಗಿ ತಮಗೆ ಅರಿವಿಲ್ಲದೆ ದೇಶದ್ರೋಹಿಗಳಾಗುತ್ತಿರುವುದು ವಿನಾಶಕಾರಿ ಸಂಗತಿ.

ಸರ್ಕಾರವು ದೇಶಕ್ಕೆ ಉಚಿತವಾದ ಪ್ರಜೆಗಳನ್ನು ರೂಪಿಸಲು ಉಚಿತ ಶಿಕ್ಷಣ ನೀಡುತ್ತಿರುವುದು ನೀರಿನಲ್ಲಿ ಮಾಡಿದ ಹೋಮದ ರೀತಿ ಆಗುತ್ತಿದೆ. ಇತ್ತೀಚೆಗೆ ಕರ್ನಾಟಕ ರಾಜ್ಯದಲ್ಲಿ ಆಘಾತಕಾರಿ ಕೃತ್ಯವೊಂದು ನಡೆದಿದೆ. ಸರಸ್ವತಿ ಮಂದಿರವಾದ ಕಾಲೇಜಿನ ಆವರಣದಲ್ಲಿ ಅವಿವೇಕಿಯೊಬ್ಬ ಯುವತಿಯೋರ್ವಳಿಗೆ ಅಮಾನುಷವಾಗಿ ಕತ್ತಿಯಲ್ಲಿ ಹಲವು ಬಾರಿ ಇರಿದು ಕೊಂದಿದ್ದಾನೆ. ಆತನ ಪೋಷಕರು, ಶಿಕ್ಷಕರು, ಸಾವಿರಾರು ವಿದ್ಯಾರ್ಥಿಗಳ ಬದುಕಿಗೆ ದಾರಿದೀಪವಾಗಿರುವ ಮಗನೊಬ್ಬ ತನ್ನ ಹುಚ್ಚುತನದಿಂದ ಯುವತಿಯನ್ನು ಕಗ್ಗೊಲೆ ಮಾಡಿರುವುದು ಅಮಾನುಷವಾಗಿದೆ. ಈ ಘಟನೆಯು ಅನೇಕರಿಗೆ ಆಘಾತವನ್ನು ನೀಡಿದೆ. ಎತ್ತ ಸಾಗುತ್ತಿದೆ ನಾಗರಿಕ ಪ್ರಪಂಚ ಎಂಬ ಪ್ರಶ್ನೆ ಮೂಡುತ್ತಿದೆ. ಕೃತ್ಯ ಎಸಗಿದವನು ಅವಿದ್ಯಾವಂತನೇನಲ್ಲ, ಬುದ್ಧಿ ಮಾಂದ್ಯನೂ ಅಲ್ಲ. ಅವನನ್ನು ವಿದ್ಯಾವಂತ ಎಂದು ಕರೆಯಬೇಕೋ ? ಅಥವಾ ಕೇವಲ ಅಕ್ಷರಸ್ಥ ಎಂದು ಕರೆಯಬೇಕೋ?

ಕೆಲ ತಿಂಗಳ ಹಿಂದೆ ಬೆಂಗಳೂರು ನಗರದಲ್ಲಿ ಎಳೆಯ ವಯಸ್ಸಿನ ಮಗುವೊಂದಕ್ಕೆ ಹೆತ್ತತಾಯಿಯೇ ದೈಹಿಕವಾಗಿ ನಿರಂತರವಾಗಿ ಹಿಂಸಿಸಿದ ವರದಿ ನೋಡಿ ಮನ ಕಲಕಿತು. ಹೆತ್ತತಾಯಿಯೇ ತನ್ನ ಮಗುವನ್ನು ಅಮಾನವೀಯವಾಗಿ ಹಿಂಸಿಸುತ್ತಾಳೆ ಎಂದರೆ ಅವಳ ಮನಸ್ಥಿತಿ ಹೇಗಿರಬೇಡ? ಆಕೆ ಒಬ್ಬಳು ಟೆಕ್ಕಿಯಾಗಿದ್ದು, ತನ್ನ ವೈಯಕ್ತಿಕ ಸಮಸ್ಯೆಗೆ ಏನೂ ಅರಿಯದ ಮಗುವಿಗೆ ಶಿಕ್ಷೆ ನೀಡಿದ್ದಾಳೆ. ಅನೇಕ ವಿದ್ಯಾವಂತರು ಎನಿಸಿಕೊಂಡಿರುವವರ ಕಥೆಯೇ ಇದು. 'ಎತ್ತಿಗೆ ಜ್ವರ ಬಂದರೆ ಎಮ್ಮೆಗೆ ಬರೆ' ಎಳೆದಂತೆ ತಾವು ಮಾಡಿದ ತಪ್ಪಿಗೆ ಅನ್ಯರಿಗೆ ಶಿಕ್ಷೆ ನೀಡಿ ಸಮಾಧಾನ ಮಾಡಿಕೊಳ್ಳುತ್ತಾರೆ. ವಿವೇಕವೇ ಇಲ್ಲದವರನ್ನು ಹೇಗೆ ವಿದ್ಯಾವಂತರೆನ್ನುವುದು, ಅಲ್ಲವೇ?

ಅನೇಕ ಮುಂದುವರಿದ ರಾಷ್ಟ್ರಗಳ ಪ್ರಜೆಗಳ ನಡೆಗಳನ್ನು ನೋಡಿ ನಮ್ಮ ದೇಶದ ಪ್ರಜೆಗಳು ಕಲಿಯಬಹುದಾದ ಅಂಶಗಳು ಅನೇಕ ಇವೆ. ಪಾಶ್ಚಿಮಾತ್ಯ ರಾಷ್ಟ್ರಗಳಿಂದ ಕೇವಲ ಫ್ಯಾಶನ್, ಆಹಾರ ಪದ್ಧತಿ, ಅವರ ಜೀವನಶೈಲಿಯನ್ನು ಅನುಕರಣೆ ಮಾಡಲು ಯತ್ನಿಸುವ ನಮ್ಮ ದೇಶದ ಪ್ರಜೆಗಳಿಗೆ ಅವರಲ್ಲಿ ಮೈಗೂಡಿರುವ ದೇಶಪ್ರೇಮ, ಸರಳ ಜೀವನ, ಸಾರ್ವಜನಿಕ ಆಸ್ತಿ ರಕ್ಷಣೆ ಇಂತಹ ಅಂಶಗಳ ಕುರಿತಾಗಿ ಜಾಣ ಕುರುಡು ಮೆರೆಯುತ್ತಿರುವುದು ವಿಡಂಬನೆಯೆನಿಸುತ್ತದೆ. ಮಾತೆತ್ತಿದರೆ ಜಪಾನ್, ಅಮೇರಿಕ ರಾಷ್ಟ್ರಗಳಲ್ಲಿ ಇರುವ ಸವಲತ್ತುಗಳ ಬಗ್ಗೆ ಪುಂಖಾನುಪುಂಖವಾಗಿ ಭಾಷಣ ಮಾಡುವ ಡೋಂಗಿ ವಿದ್ಯಾವಂತರು ಆ ದೇಶದ ಜನರಿಗೆ ಇರುವ ನಾಗರಿಕ ಪ್ರಜ್ಞೆ ಬಗ್ಗೆ ಚಕಾರ ಎತ್ತುವುದಿಲ್ಲ. ಭಾರತ ಅಭಿವೃದ್ಧಿಯಾಗಿಲ್ಲ ಎಂದು ಬೊಬ್ಬೆ ಇಡುವ ಮಂದಿ ಸರ್ಕಾರಕ್ಕೆ ಕಟ್ಟಬೇಕಾದ ಹಣದಲ್ಲಿ ಕಳ್ಳಾಟ ಆಡಿ, ಸುಳ್ಳು ಲೆಕ್ಕ ಕೊಟ್ಟು ಸಾವಿರ ರೂಪಾಯಿ ತೆರಿಗೆ ಹಣ ಕಟ್ಟುವ ಬದಲು ನೂರು ರೂಪಾಯಿ ಕಟ್ಟಿ ದೊಡ್ಡ ಮನುಷ್ಯರಂತೆ ಪೋಸು ಕೊಡುವುದನ್ನು ಕಾಣಬಹುದು. ಅನೇಕ ಜನ ವಿದ್ಯಾವಂತ ಸಿರಿವಂತರು ಸರ್ಕಾರದ ಸೌಲಭ್ಯಗಳನ್ನು ಪಡೆಯಲು ಸುಳ್ಳು ದಾಖಲೆ ಸೃಷ್ಟಿಸಿ ಅಕ್ರಮವಾಗಿ ಬಿಪಿಎಲ್ ಕಾರ್ಡ್ ಪಡೆದು, ಎಲ್ಲಾ ಸವಲತ್ತುಗಳನ್ನು ಪಡೆದು ಸರ್ಕಾರ ಏನೂ ಮಾಡುತ್ತಿಲ್ಲ ಎಂದು ಹೇಳಿಕೆ ಕೊಡುತ್ತಿರುವುದು ಹಾಸ್ಯಾಸ್ಪದ ಎನಿಸದೆ ಇರದು. ದೇಶ ನನಗೇನು ಮಾಡಿತು ಎನ್ನುವುದಕ್ಕಿಂತ ದೇಶಕ್ಕೆ ನಾನು ಏನು ಮಾಡಿದೆ ಎಂದು ಪ್ರಶ್ನಿಸಿಕೊಳ್ಳುವುದು ವಿದ್ಯಾವಂತರ ಲಕ್ಷಣವಲ್ಲವೇ?

'ಯಥಾ ರಾಜ ತಥಾ ಪ್ರಜಾ' ಎಂಬ ಮಾತಿಗೆ ಇಂಬು ಕೊಡುವಂತೆ ನಮ್ಮನ್ನಾಳುವ ಮಹನೀಯರು ದೇಶದ ಸಂಪತ್ತನ್ನು ಕೊಳ್ಳೆ ಹೊಡೆಯಲು ವ್ಯಾಪಾರಸ್ಥರಿಗೆ ಅವಕಾಶ ಮಾಡಿಕೊಟ್ಟು, ಸರ್ಕಾರದ ಖಜಾನೆಯನ್ನು ಬಹುಬಗೆಯಲ್ಲಿ ಲೂಟಿ ಮಾಡಲು ಯೋಜನೆಗಳನ್ನು ರೂಪಿಸಿ, ಸಾರ್ವಜನಿಕರ ಕಣ್ಣಿಗೆ ಮಣ್ಣೆರಚಿ ಆಡಳಿತ ನಡೆಸುತ್ತಿರುವುದು ಯಾರಿಗೂ ತಿಳಿಯದೇ ಉಳಿದ ವಿಷಯವಲ್ಲ. ಈಗ ಚುನಾವಣಾ ಸಮಯ. ಜನನಾಯಕರು ಮುಖವಾಡ ಧರಿಸಿ ಜನರ ಮುಂದೆ ಬಂದು ನಾಟಕ ಮಾಡುವ ಕಾಲ. ಸಾಮಾನ್ಯ ಜನರು ಈ ಸಮಯದಲ್ಲಿ ಪ್ರಜ್ಞಾವಂತರಾಗಿ ವರ್ತಿಸಬೇಕಿದೆ. ತಾವು ಹಣ ಪಡೆದು ಮತ ನೀಡಿದರೆ ಅವರು ಗೆದ್ದ ಮೇಲೆ ಭ್ರಷ್ಟಾಚಾರ ಮಾಡಿದರೆ ಪ್ರಶ್ನಿಸಲು ಸಾಧ್ಯವೇ? ವಿದ್ಯಾವಂತರೂ ಸಹ ಓಟು ನೀಡಲು ಹಣಕ್ಕಾಗಿ ಕೈ ಒಡ್ಡುತ್ತಿರುವುದು ಅವರ ವಿದ್ಯೆಗೆ ಮಾಡಿದ ಅವಮಾನವಲ್ಲವೇ? ಇಂತಹ ಜನರನ್ನು ಪಡೆದ ದೇಶದ ದೌರ್ಭಾಗ್ಯ ಎಷ್ಟಿರಬೇಡ?

ನಾಗರಿಕರಿಗೆ ತಮ್ಮ ಜವಾಬ್ದಾರಿಗಳನ್ನು ತಿಳಿಯುವಂತೆ ಮಾಡುವ ಕೆಲಸ ಸರ್ಕಾರಗಳಿಂದ ಆಗಬೇಕು. ಅದಬಿಟ್ಟು ಅನೇಕ ಯೋಜನೆಗಳ ಮೂಲಕ ಜನರನ್ನು ಮತ್ತಷ್ಟು ಮೈಗಳ್ಳರನ್ನಾಗಿ ಮಾಡುತ್ತಿರುವುದು ದೇಶದ ಪ್ರಗತಿ ದೃಷ್ಟಿಯಿಂದ ಒಳ್ಳೆಯ ಬೆಳವಣಿಗೆ ಅಲ್ಲ. ನಿರುದ್ಯೋಗ ಸಮಸ್ಯೆ ದೇಶದ ದೊಡ್ಡ ಸಮಸ್ಯೆ ಎನ್ನುತ್ತಾರೆ. ಆದರೆ ಅನೇಕ ಕಡೆ ಕೆಲಸಗಳಿಗೆ ಕೆಲಸಗಾರರೇ ಸಿಗುತ್ತಿಲ್ಲ. ಇದಕ್ಕೆ ಅನೇಕ ಕಾರಣಗಳಿವೆ. ಕಾಲೇಜಿನಲ್ಲಿ ಸರ್ಟಿಫಿಕೇಟ್ ಪಡೆದವನು ತಾನು ಇಚ್ಛೆಪಟ್ಟ ಕೆಲಸ ಸಿಗುವವರೆವಿಗೆ ಬೇರೆ ಕೆಲಸ ಮಾಡುವುದೇ ಇಲ್ಲ. ತಾನು ಕೆಲಸ ಮಾಡದೇ ಕುಳಿತರೆ, ತನ್ನ ಮನೆಗಷ್ಟೇ ಅಲ್ಲ, ನಾನು ದೇಶಕ್ಕೆ ಹೊರೆಎನ್ನುವ ಕನಿಷ್ಠ ಜ್ಞಾನ ಇಲ್ಲದ ಬೇಜವಾಬ್ದಾರಿ ಪ್ರಜೆಗಳು ನಮ್ಮ ನಡುವೆ ಇದ್ದಾರೆ. ಇವರನ್ನು ವಿದ್ಯಾವಂತರೆನ್ನಲಾದೀತೆ?

ನಮಗೆ ಖಾಯಿಲೆ ಉಂಟಾದಾಗ ಉತ್ತಮ ವೈದ್ಯರನ್ನು ಹುಡುಕಿ ಚಿಕಿತ್ಸೆ ಪಡೆಯುತ್ತೇವೆ. ಮನೆ ಕಟ್ಟಲು ಯೋಜನೆ ಮಾಡಿದರೆ ಉತ್ತಮ ಇಂಜಿನಿಯರ್ ಹಾಗೂ ಗುತ್ತಿಗೆದಾರರನ್ನು ಹುಡುಕುತ್ತೇವೆ. ಕೋರ್ಟಿನಲ್ಲಿ ಕೇಸ್ ಇದ್ದರೆ ಉತ್ತಮ ವಕೀಲರನ್ನು ಸಂಪರ್ಕಿಸುತ್ತೇವೆ. ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸಲು ಉತ್ತಮ ಆಡಳಿತ ಮಂಡಳಿ ಇರುವ ಶಿಕ್ಷಣ ಸಂಸ್ಥೆ ಹುಡುಕುತ್ತೇವೆ. ಆದರೆ ದೇಶವನ್ನಾಳುವ ಜನನಾಯಕರನ್ನು ಆರಿಸಬೇಕಾದರೆ ಉತ್ತಮ ಅಭ್ಯರ್ಥಿಯನ್ನು ಹುಡುಕುವುದಿಲ್ಲ. ಬದಲಿಗೆ ಜಾತಿ, ಧರ್ಮ, ನಮ್ಮ ಜಿಲ್ಲೆಯವ ಎಂಬ ಮಾನದಂಡಗಳನ್ನು ಅನುಸರಿಸಿ ಮತ ಚಲಾಯಿಸುತ್ತೇವೆ. ನಮ್ಮ ರಾಜ್ಯವನ್ನಾಗಲಿ ಅಥವಾ ದೇಶವನ್ನಾಗಲಿ ಆಡಳಿತ ನಡೆಸಲು ಉತ್ತಮರನ್ನು ಆರಿಸಬೇಕೆ ವಿನಃ ಸ್ವಜಾತಿಯ / ಸ್ವಧರ್ಮದ ಅಯೋಗ್ಯರನ್ನು ಅಲ್ಲ. ವಿದ್ಯಾವಂತರೆನಿಸಿಕೊಂಡವರೆ ನಮ್ಮ ಜಾತಿಯವರನ್ನು ಗೆಲ್ಲಿಸಿ ಎಂದು ಬಹಿರಂಗವಾಗಿ ಹೇಳಿಕೆ ಕೊಡುತ್ತಾರೆ ಎಂದು ಸಾಮಾಜಿಕ ಕಳಕಳಿ ಸತ್ತುಹೋಗಿದೆ ಎಂದರ್ಥ. ಅಷ್ಟೇ ಅಲ್ಲ ದೇಶದ ಹಿತಕ್ಕಿಂತ ಜಾತಿಯವನ ಹಿತವೇ ಹೆಚ್ಚಾಯಿತು ಅಂತಾಗುತ್ತದೆ ಅಲ್ಲವೇ? ಎಷ್ಟೋ ಜನರು ಸರ್ಕಾರಗಳ ವೈಫಲ್ಯಗಳ ಬಗ್ಗೆ ದೊಡ್ಡದಾಗಿ ದೂರುತ್ತಾರೆ. ಆದರೆ ಮತದಾನದ ದಿನ ಮತ ಚಲಾಯಿಸದೆ ಮನೆಯವರೊಂದಿಗೆ ಪಿಕ್‌ನಿಕ್ ಹೋಗಿ ತಮ್ಮ ಮೂಲಭೂತ ಜವಾಬ್ದಾರಿಯನ್ನು ಮರೆಯುತ್ತಾರೆ. ಇವರನ್ನು ವಿದ್ಯಾವಂತರೆನ್ನಲು ಸಾಧ್ಯವೇ?

ರಾಜಕಾರಣಿಗಳು ತಮಗೆ ತೊಂದರೆಯಾದಾಗ ಸಂವಿಧಾನದ ಬಗ್ಗೆ ದೊಡ್ಡ ಭಾಷಣ ಮಾಡುತ್ತಾರೆ. ಆದರೆ ಅವರು ಮಾಡುವ ಕಾರ್ಯಗಳು ಅನೇಕ ಸಂವಿಧಾನಕ್ಕೆ ವಿರುದ್ಧವಾದುದೇ ಆಗಿದೆ. ಶಿಕ್ಷಕರ ಕ್ಷೇತ್ರಕ್ಕೆ ಚುನಾವಣೆ, ಪದವೀಧರರ ಕ್ಷೇತ್ರಕ್ಕೆ ಚುನಾವಣೆ ನಡೆದಾಗ ಅನೇಕ ವಿದ್ಯಾವಂತ ಬಂಧುಗಳು ಹಣ, ಹೆಂಡಕ್ಕಾಗಿ ತಮ್ಮ ಮತ ಮಾರಿಕೊಂಡಿರುವುದು ಈಗ ರಹಸ್ಯವಾಗಿ ಉಳಿದಿಲ್ಲ. ಇನ್ನೊಂದು ದೊಡ್ಡ ದುರಂತವೆಂದರೆ ಅನೇಕರು ಸರಿಯಾಗಿ ಮತ ಚಲಾಯಿಸದೇ ಕುಲಗೆಟ್ಟ ಮತಗಳಾಗುವುದು. ಪದವೀಧರರು ಎನಿಸಿಕೊಂಡವರ ಯೋಗ್ಯತೆ ಏನು ಎಂದು ಇದರಿಂದಲೇ ತಿಳಿಯುತ್ತದೆ ಅಲ್ಲವೇ? ಇವರುಗಳು ವಿದ್ಯಾವಂತರೇ?

ದೇಶ ಮೊದಲು ಎಂಬುದು ಪ್ರತಿಯೊಬ್ಬ ಪ್ರಜೆಗೆ ಅರಿವಿರಬೇಕು. ಶಿಕ್ಷಣದ ಉದ್ದೇಶಗಳಲ್ಲಿ ಇದು ಸಹ ಒಂದು. ದೇಶದ ಬಗ್ಗೆ ಗೌರವ ಹೊಂದುವುದು ಒಬ್ಬ ಪ್ರಜೆಯ ಕರ್ತವ್ಯ. ಅನೇಕರು ನಮ್ಮ ದೇಶದಲ್ಲಿ ಎಲ್ಲಾ ಸವಲತ್ತನ್ನು ಪಡೆದರೂ ನೆರೆ ದೇಶದ ಪರ ಘೋಷಣೆ ಕೂಗುವುದು, ದೂರದ ದೇಶಗಳಲ್ಲಿನ ಸೌಲಭ್ಯಗಳ ಕುರಿತು ಹೊಗಳುವುದನ್ನು ಕಾಣಬಹುದು. ಒಂದು ದೇಶವನ್ನು ಕಟ್ಟುವುದು ಎಂದರೆ ವಿವಿಧ ಇಲಾಖೆಗಳಿಗೆ ಕಟ್ಟಡ ಕಟ್ಟುವುದಲ್ಲ, ಕೇವಲ ಉತ್ತಮ ರಸ್ತೆ ನಿರ್ಮಾಣ ಮಾಡುವುದಲ್ಲ. ದೇಶ ಕಟ್ಟುವ ಕೆಲಸ ಕೇವಲ ರಾಜಕಾರಣಿಗಳದ್ದೇ ಅಲ್ಲ. ಪ್ರತಿಯೊಬ್ಬ ಪ್ರಜೆಯ ಪಾತ್ರವೂ ಅಗತ್ಯ. ವಿದ್ಯಾವಂತರೆನಿಸಿಕೊಂಡ ಜನ ಪ್ರಜ್ಞಾವಂತರಾದರೆ ಮಾತ್ರ ದೇಶ ಅಭಿವೃದ್ಧಿ ಹೊಂದಲು ಸಾಧ್ಯ. ದೇಶದ ಅಭಿವೃದ್ಧಿಗೆ ಸಮರ್ಥ ನಾಯಕರ ಅವಶ್ಯವಿದೆ. ಚುನಾವಣೆ ದಿನದಂದು ತಪ್ಪದೇ ಮತ ಚಲಾಯಿಸುವ ಮೂಲಕ ಪ್ರಜೆಗಳು ಪ್ರಜ್ಞಾವಂತರಾಗಲಿ, ನಾವು ಕೇವಲ ಅಕ್ಷರಸ್ಥರಲ್ಲ, ವಿದ್ಯಾವಂತರು ಎಂಬುದನ್ನು ನಿರೂಪಿಸಲಿ.

ಪದ ತಾಂಬೂಲ:

ಅಕ್ಷರಸ್ಥ ಪ್ರಜ್ಞಾವಂತನಾದರೆ ಮಾತ್ರ ಆತ ವಿದ್ಯಾವಂತ

ಕಾಂಗ್ರೆಸ್ ಬೆಂಬಲಿಸಲು ಅಹಿಂದ ಸಮುದಾಯಕ್ಕೆ ದಸಂಸ ಮನವಿ

ಮೈಸೂರು, ಏ.21(ಜಿಎ)–ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಬಿಜೆಪಿ ಸರ್ಕಾರ ದೇಶದಲ್ಲಿ ಅಘೋಷಿತ ತುರ್ತು ಪರಿಸ್ಥಿತಿ ಜಾರಿಯಲ್ಲಿಟ್ಟಿದ್ದು, ಸಂವಿಧಾನ ರಕ್ಷಣೆಗಾಗಿ ಅಹಿಂದ ಸಮುದಾಯ ಕಾಂಗ್ರೆಸ್ ಬೆಂಬಲಿಸಬೇಕು ಎಂದು ದಲಿತ ಸಂಘರ್ಷ ಸಮಿತಿ ರಾಜ್ಯ ಸಂಘಟನಾ ಸಂಯೋಜಕ ದೇವಗಳ್ಳಿ ಸೋಮಶೇಖರ್ ಮನವಿ ಮಾಡಿದರು. ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬಿಜೆಪಿ ಸರ್ಕಾರ ದೇಶದಲ್ಲಿ ಪ್ರಜಾಪ್ರಭುತ್ವ ನಾಶಕ್ಕೆ ಮುಂದಾಗಿದ್ದು, ದಲಿತರು, ಅಲ್ಪಸಂಖ್ಯಾತರಲ್ಲಿ ಪರಸ್ಪರ ದ್ವೇಷ ಭಾವನೆಗಳನ್ನು ಮೂಡಿಸಿದೆ. ಸದಾ ಸುಳ್ಳು ಹೇಳುತ್ತಾ ಜನರ ದಿಕ್ಕು ತಪ್ಪಿಸುತ್ತಿದೆ. ಬಡವರ್ಗಗಳ ನೆಮ್ಮದಿಗೆ ಬಿಜೆಪಿ ಮತ್ತು ಮಿತ್ರ ಪಕ್ಷಗಳ ಸೋಲು ಅನಿವಾರ್ಯ. ಆ ಪಕ್ಷಗಳಲ್ಲಿರುವ ಅಹಿಂದ ಸಮುದಾಯದವರು ಕೂಡಲೇ ಹೊರಬಂದು ಕಾಂಗ್ರೆಸ್ ಬೆಂಬಲಕ್ಕೆ ಮುಂದಾಗಬೇಕು ಎಂದು ಒತ್ತಾಯಿಸಿದರು. ಸುದ್ದಿಗೋಷ್ಠಿಯಲ್ಲಿ ಜಿಲ್ಲಾ ಸಂಯೋಜಕ ಕಾರ್ಯ ಬಸವಣ್ಣ, ಕೆ.ಆರ್.ನಗರ ಉಸ್ತುವಾರಿ ಕಾಂತರಾಜ್ ಅರ್ಜುನಹಳ್ಳಿ, ಮುಖಂಡರಾದ ಮುರುಡಗಳ್ಳಿಯ ಮಂಜುನಾಥ್, ನಿರಂಜನ ಇದ್ದರು.



ಮೈಸೂರಿನ ಬಲ್ಲಾಳ್ ವೃತ್ತದಲ್ಲಿ ಪ್ರಗತಿಪರರು, ಚಿಂತಕರು, ಸಾಹಿತಿಗಳೊಂದಿಗೆ ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಎಂ.ಲಕ್ಷ್ಮಣ್ ಪರ ಮಾಜಿ ಶಾಸಕ ಎಂ.ಕೆ.ಸೋಮಶೇಖರ್ ಮತ ಯಾಚಿಸಿದರು. ಈ ವೇಳೆ ದೇವರಾಜ್ ಅರಸು ಸಮಿತಿ ಅಧ್ಯಕ್ಷ ಜಾಕಿರ್ ಹುಸೇನ್, ಡೈರಿ ವೆಂಕಟೇಶ್, ಮೈಲ್ಯಾಕ್ ಮಾಜಿ ಅಧ್ಯಕ್ಷ ಎಚ್.ಎ. ವೆಂಕಟೇಶ್, ಪ್ರೊ.ಅರವಿಂದ ಮಾಲಗತ್ತಿ, ಪುಸ್ತಕ ಪ್ರಾಧಿಕಾರದ ಅಧ್ಯಕ್ಷ ಮಾನಸ, ಪ್ರೊ.ಕಾಳೇಗೌಡ ನಾಗವಾರ, ಮಾಜಿ ಮೇಯರ್ ಪುರುಷೋತ್ತಮ್, ಭಾಸ್ಕರ್, ಪಿ.ರಾಜು, ರೆಡ್ಡಿಉಲ್ಲಾ, ಪವನ್, ಸಿದ್ದರಾಮ, ಸಿದ್ದು ಸ್ವಾಮಿಗಳು, ನಾಗೇಶ್ ಇನ್ನಿತರರಿದ್ದರು.

ನೀವೂ ಮತದಾನ ಮಾಡಿ, ಇತರರನ್ನು ಪ್ರೇರೇಪಿಸಿ

ಮೈಸೂರು ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಟಿ.ಪ್ರದೀಪ್ ಸಲಹೆ

ಮೈಸೂರು.ಏ.21–ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಮತದಾನ ಮಾಡುವುದು ಪ್ರತಿಯೊಬ್ಬರ ಕರ್ತವ್ಯವಾಗಿದ್ದು, ಈ ನಿಟ್ಟಿನಲ್ಲಿ ಎಲ್ಲರೂ ಮತದಾನ ಮಾಡುವ ಜೊತೆಗೆ ಸುತ್ತಮುತ್ತಲಿನವರಿಗೂ ಮತದಾನ ಮಾಡುವಂತೆ ಪ್ರೇರೇಪಿಸಿ ಎಂದು ಮೈಸೂರು ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಟಿ.ಪ್ರದೀಪ್ ತಿಳಿಸಿದರು.



ಲೋಕಸಭಾ ಸಾರ್ವತ್ರಿಕ ಚುನಾವಣೆ ಹಿನ್ನೆಲೆ ತಾಲೂಕಿನ ಇಲವಾಲ ಗ್ರಾಮ ಪಂಚಾಯಿತಿ ವತಿಯಿಂದ ಮತದಾನ ಕೇಂದ್ರದಲ್ಲಿ ಭಾನುವಾರ ಹಮ್ಮಿಕೊಳ್ಳಲಾಗಿದ್ದ 'ನಮ್ಮ ನಡೆ ಮತಗಟ್ಟೆಯ ಕಡೆ' ಕಾರ್ಯಕ್ರಮದಲ್ಲಿ ಧ್ವಜಾರೋಹಣ ನೆರವೇರಿಸಿ ಅವರು ಮಾತನಾಡಿದರು. ಮತದಾನ ದಿನವಾದ ಏಪ್ರಿಲ್ 26 ಶುಕ್ರವಾರದಂದು ಯಾವುದೇ ಪ್ರವಾಸ ಕೈಗೊಳ್ಳದೆ ತಪ್ಪದೇ ಎಲ್ಲರೂ ಮತದಾನ ಮಾಡಬೇಕು. ಪ್ರಜಾಪ್ರಭುತ್ವ ಹಬ್ಬವಾದ ಈ ಚುನಾವಣೆಯಲ್ಲಿ ಪಾಲ್ಗೊಂಡು ಸದೃಢ ರಾಷ್ಟ್ರ ನಿರ್ಮಾಣಕ್ಕೆ ಕೈಜೋಡಿಸಬೇಕು ಎಂದು ಹೇಳಿದರು.

ಮತದಾರಿಗೆ ಮತಗಟ್ಟೆಯಲ್ಲಿ ಅಗತ್ಯ ಮೂಲ ಸೌಕರ್ಯ ಕಲ್ಪಿಸಲಾಗಿದ್ದು ನೆರಳು, ಕುಡಿಯುವ ನೀರು, ಶೌಚಾಲಯ, ಓಆರ್‌ಎಸ್ ದ್ರಾವಣ, ಗಾಲಿ ಕುರ್ಚಿ ಸೇರಿದಂತೆ ವಿಶೇಷಚೇತನರಿಗೆ ಅನುಕೂಲವಾಗುವ ಸೌಲಭ್ಯ ಇರಲಿದೆ ಎಂದರು.

ಕೇಂದ್ರ ಚುನಾವಣಾ ಆಯೋಗವು ವಿವಿಧ ಮೊಬೈಲ್ ಅಪ್ಲಿಕೇಶನ್‌ಗಳನ್ನು ಬಿಡುಗಡೆ ಮಾಡಿದೆ. ಸಿ–ವಿಜಿಲ್, ಕೆವೈಸಿ, ಸಕ್ಷಮ್, ಸುವಿಧಾ, ವಿಎಚ್‌ಪಿ ಆ್ಯಪ್ ಮೂಲಕ ಮತದಾರರು ಚುನಾವಣೆಗೆ ಸಂಬಂಧಿಸಿದ ಎಲ್ಲಾ ಮಾಹಿತಿಯನ್ನು ಪಡೆಯಬಹುದು ಎಂದು ಮಾಹಿತಿ ನೀಡಿದರು.

ಇದೇ ವೇಳೆ ಗ್ರಾಮದಲ್ಲಿ ಜಾಥಾ ನಡೆಸಿ, ಬಸ್ ನಿಲ್ದಾಣದಲ್ಲಿ ಮಾನವ ಸರಪಳಿ ನಿರ್ಮಿಸಿ ಮತದಾರರಿಗೆ ಅರಿವು ಮೂಡಿಸಲಾಯಿತು. ಬಳಿಕ ಜನಸಂದಣಿ ಪ್ರದೇಶದಲ್ಲಿ ಪೋಸ್ಟರ್ ಹಾಗೂ ಮನೆ ಮನೆಗೆ ಸ್ಟಿಕ್ಕರ್ ಅಂಟಿಸಲಾಯಿತು.

ಕಾರ್ಯಕ್ರಮದಲ್ಲಿ ಪಿಡಿಒ ಡಿ.ಸಿ. ಶಿವಣ್ಣ, ಕಾರ್ಯದರ್ಶಿ ಕುಮಾರನಾಯ್ಕ, ಎನ್.ಆರ್.ಎಲ್.ಎಂ ಸಂಜೀವಿನಿ ಒಕ್ಕೂಟದ ಟಿಪಿಎಂ ನಾಗರಾಜು, ವಲಯ ಮೇಲ್ವಿಚಾರಕರಾದ ಪರಶಿವಮೂರ್ತಿ, ಮೇರಿ, ಎಂಬಿಕೆ ಸೌಮ್ಯ, ತಾಲ್ಲೂಕಿನ ಪಶುಸಖಿ, ಕೃಷಿ ಸಖಿ ಸೇರಿದಂತೆ ಗ್ರಾಮ ಪಂಚಾಯಿತಿ ಸಿಬ್ಬಂದಿ ಹಾಜರಿದ್ದರು.

ವೈದ್ಯರಿಗೆ ತುರ್ತು ಕಾಳಜಿ ಕುರಿತು ಕಾರ್ಯಾಗಾರ

ಮೈಸೂರು, ಏ. 21–ವೈದ್ಯಕೀಯ ವೃತ್ತಿಯಲ್ಲಿರುವವರಿಗಾಗಿ ಭಾರತೀಯ ಕ್ರಿಟಿಕಲ್ ಕೇರ್ ಮೆಡಿಸಿನ್ ಸೊಸೈಟಿ, ಮೈಸೂರು ಶಾಖೆ ವತಿಯಿಂದ ಮಿಡಿತಾ ಲೈಫ್‌ಕೇರ್ ಕಂಪನಿ ಆಶ್ರಯದಲ್ಲಿ ಅತ್ಯಾಧುನಿಕ ತಂತ್ರಜ್ಞಾನದ ವಿಧಾನವಾದ ಎಕ್ಸ್ಟ್ರಾ ಕಾರ್ಪೊರಿಯಲ್ ಮೆಂಬ್ರೇನ್ ಆಕ್ಸಿಜನ್ (ECMO) ಕುರಿತಂತೆ ಕಾರ್ಯಾಗಾರ ಆಯೋಜಿಸಲಾಗಿತ್ತು. ಕಾರ್ಯಾಗಾರದಲ್ಲಿ ಮೈಸೂರು ಹಾಗೂ ಅದರ ಹೊರಗಿನ ವೈದ್ಯರಿಗೆ ತುರ್ತು ಕಾಳಜಿ ಕುರಿತಂತೆ ಅರಿವು ಮೂಡಿಸಲಾಯಿತು.

ಎಕ್ಮೊ ಕುರಿತು ನಡೆದ ವಿಸ್ತೃತ ಚರ್ಚೆ ವೇಳೆ ಪ್ರಾಯೋಗಿಕ ಮಾಹಿತಿ ಒದಗಿಸಲಾಯಿತು. ಇದರಲ್ಲಿ ಸಂಬಂಧಿತ ಕ್ಷೇತ್ರಗಳ ತಜ್ಞ ವೈದ್ಯರಾದ ಡಾ.ಜೆ. ವೀನು, ಡಾ.ಡಿ.ಶಶಿರೇಖಾ, ಡಾ.ಮಧುಪ್ರಕಾಶ್, ಡಾ.ಅಚಲ್ ಶಂಕರಯ್ಯ ಅವರು ವಿಷಯ ಕುರಿತಂತೆ ಮಹತ್ವದ ಮಾಹಿತಿ ನೀಡಿದರು. ಕ್ರಿಟಿಕಲ್ ಕೇರ್ ಕಾರ್ಯಾಗಾರದಲ್ಲಿ ಎಕೊ ಕಾರ್ಡಿಯೊಗ್ರಫಿಯನ್ನು, ಎಕ್ಮೊ ಸೇವೆ ಒದಗಿಸುವ ಮಿಡಿತಾ ಲೈಫ್ ಕೇರ್ ಕಂಪನಿಯು ಆರ್ಯ ಆಸ್ಪತ್ರೆಯಲ್ಲಿ ನಡೆಸಿಕೊಟ್ಟಿತು. ಈ ವೇಳೆ ಮಿಡಿತಾ ಲೈಫ್‌ಕೇರ್ ಎಕ್ಸ್ಪರ್ಟ್ ಡಾ.ರಘುನಾಥ್ ಮಾತನಾಡಿ, ರೋಗಿಯ ಆರೋಗ್ಯ ಚೇತರಿಕೆಯಲ್ಲಿ ಇಂತಹ ಅತ್ಯಾಧುನಿಕ ಎಕ್ಮೊ ವಿಧಾನದ ಬಳಕೆಯ ಮಹತ್ವ ವಿವರಿಸಿದರು. ಇಎಸ್‌ಸಿಸಿಎಂ ಮೈಸೂರು ಶಾಖೆ ಅಧ್ಯಕ್ಷ ಡಾ.ಕೆ.ಮಹದೇವನ್ ಮಾತನಾಡಿ, ಈ ಪ್ರದೇಶದಲ್ಲಿ ಎಕ್ಮೊ ಬಳಕೆಯು ಭವಿಷ್ಯದ ಉಪಕ್ರಮವಾಗಿದೆ ಎಂದು ಹೇಳಿದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy News papers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com, website: www.mysurumithra.com

ಕೆನಡಾದ ಗ್ಯಾಬ್ರಿಯಲ್ ವಿವಿಯಿಂದ ಗಾಯಕ ವಿಜಯ್ ಪ್ರಕಾಶ್‌ಗೆ ಗೌರವ ಡಾಕ್ಟರೇಟ್



ಬೆಂಗಳೂರು, ಏ.21–ಜನಪ್ರಿಯ ಬಹುಭಾಷಾ ಗಾಯಕ ವಿಜಯ್ ಪ್ರಕಾಶ್ ಅವರಿಗೆ ಕೆನಡಾದ ಟೊರೆಂಟೊದ ರಿಚ್ಮಂಡ್ ಗ್ಯಾಬ್ರಿಯಲ್ ವಿಶ್ವವಿದ್ಯಾಲಯ ಗೌರವ ಡಾಕ್ಟರೇಟ್ ನೀಡಿ ಪುರಸ್ಕರಿಸಿದೆ.

ಸಂಗೀತ ಕ್ಷೇತ್ರದಲ್ಲಿನ ಸಾಧನೆಗೆ ವಿಜಯ್ ಅವರಿಗೆ ಗೌರವ ಡಾಕ್ಟರೇಟ್ ನೀಡಲಾಗಿದೆ. ವಿಜಯ್ ಪ್ರಕಾಶ್ ಜತೆಗೆ ತಮಿಳು ಗಾಯಕ ಶ್ರೀನಿವಾಸ್ ಅವರಿಗೂ ಗೌರವ ಡಾಕ್ಟರೇಟ್ ನೀಡಲಾಗಿದೆ.

ಈ ಕುರಿತು ಸಾಮಾಜಿಕ ಜಾಲತಾಣ ಇನ್‌ಸ್ಟಾಗ್ರಾಮ್‌ನಲ್ಲಿ ಪೋಸ್ಟ್ ಹಂಚಿಕೊಂಡಿರುವ ವಿಜಯ್ ಪ್ರಕಾಶ್ ಅವರು, ನನ್ನ ಮೊದಲ ಗೌರವ ಡಾಕ್ಟರೇಟ್ ಅನ್ನು ಗ್ಯಾಬ್ರಿಯಲ್ ವಿಶ್ವವಿದ್ಯಾಲಯದಿಂದ ಶ್ರೀನಿವಾಸ್ ಅವರೊಂದಿಗೆ ಸ್ವೀಕರಿಸುತ್ತಿರುವುದು ಖುಷಿ ನೀಡಿದೆ ಎಂದು ಬರೆದುಕೊಂಡಿದ್ದಾರೆ. ಜತೆಗೆ ಕೆಲವು ಫೋಟೊಗಳನ್ನೂ ಹಂಚಿಕೊಂಡಿದ್ದಾರೆ. ಟೊರೆಂಟೊದಲ್ಲಿ ವಿಜಯ್ ಪ್ರಕಾಶ್ ಅವರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಈ ಬಗ್ಗೆಯೂ ಪೋಸ್ಟ್ ಹಂಚಿಕೊಂಡಿದ್ದರು. ಕನ್ನಡ, ಹಿಂದಿ, ತಮಿಳು, ಮಲಯಾಳಂ ಸೇರಿದಂತೆ ಹಲವು ಭಾಷೆಗಳಲ್ಲಿ ವಿಜಯ್ ಪ್ರಕಾಶ್ ಅವರ ಹಾಡುಗಳು ಕೇಳುಗರ ಮನಗೆದ್ದಿವೆ. ಭಾರತ ಮಾತ್ರವಲ್ಲದೆ ವಿದೇಶಗಳಲ್ಲೂ ಸಂಗೀತ ಕಾರ್ಯಕ್ರಮಗಳನ್ನು ನೀಡುವ ಇವರು, ಕಂಚಿನ ಕಂಠದ ಗಾಯಕ ಎಂದೇ ಹೆಸರು ಪಡೆದಿದ್ದಾರೆ. ಈ ಹಿಂದೆ ವಿಜಯ್ ಪ್ರಕಾಶ್ ಹಾಡುಗಳಿಗೆ ಅನೇಕ ಪ್ರಶಸ್ತಿಗಳು ಬಂದಿದ್ದರೂ, ಸಂಗೀತ ಕ್ಷೇತ್ರದ ಅವರ ಸಾಧನೆಗೆ ದೊರೆತ ಮೊದಲ ಗೌರವ ಡಾಕ್ಟರೇಟ್ ಇದಾಗಿದೆ ಎನ್ನುವುದು ಗಮನಾರ್ಹ.

ನರೇಂದ್ರ ಮೋದಿ ಈ ದೇಶಕ್ಕೆ ಹಿಡಿದಿರುವ ಶನಿ

ಮಾಜಿ ಸ್ಪೀಕರ್ ರಮೇಶ್ ಕುಮಾರ್ ವಿವಾದಾತ್ಮಕ ಹೇಳಿಕೆ



ಕೋಲಾರ, ಏ.21– ಪ್ರಧಾನಿ ನರೇಂದ್ರ ಮೋದಿ ವಿರುದ್ಧ ಕಾಂಗ್ರೆಸ್ ನಾಯಕರು ತೀವ್ರ ವಾಗ್ದಾಳಿ ನಡೆಸುತ್ತಿದ್ದು, ಪ್ರಧಾನಿ ಮೋದಿ ಅವರನ್ನು ಟೀಕಿಸುವ ಭರದಲ್ಲಿ ಮಾಜಿ ಸ್ಪೀಕರ್ ರಮೇಶ್ ಕುಮಾರ್ ನಾಲಿಗೆ ಹರಿಬಿಟ್ಟಿದ್ದಾರೆ.

ಕೋಲಾರದಲ್ಲಿ ಮಾತನಾಡಿರುವ ರಮೇಶ್ ಕುಮಾರ್, ಮೋದಿ ಈ ದೇಶಕ್ಕೆ ಹಿಡಿದಿರುವ ಶನಿ ಎಂದು ಹೇಳಿದ್ದಾರೆ. ಜೂ.4ಕ್ಕೆ ಈ ದೇಶಕ್ಕೆ ಹಿಡಿದಿರುವ ಶನಿ ಬಿಟ್ಟು ಹೋಗಲಿ ಎಂದು ದೇವರಲ್ಲಿ ಪ್ರಾರ್ಥಿಸುತ್ತಿದ್ದೇವೆ. ಇಂದಿರಾ ಗಾಂಧಿ ಕೂತಿದ್ದ ಸೀಟಿನಲ್ಲಿ ಬಂದು ಕುಳಿತುಬಿಟ್ಟೆಯಲ್ಲಪ್ಪಾ ಮೋದಿ, ಎಂತಹವರ ಜಾಗಕ್ಕೆ ಎಂತಹವರು ಬಂದು ಕೂತಿದ್ದಾನೆ. ಸಂತೆಯಲ್ಲಿ ಹಾವಾಡಿಗ ಸುಳ್ಳು ಹೇಳೋದು ಕೇಳಿದ್ದೇವೆ. ಪ್ರಧಾನಿ ಸುಳ್ಳು ಹೇಳೋದು ಈ ಪ್ರಪಂಚದಲ್ಲಿಯೇ ಕೇಳಿರಲಿಲ್ಲ ಎಂದು ರಮೇಶ್ ಕುಮಾರ್ ಪ್ರಧಾನಿ ವಿರುದ್ಧ ವಾಗ್ದಾಳಿ ನಡೆಸಿದರು.

ಇದೇ ವೇಳೆ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ ವಿರುದ್ಧವೂ ವಾಗ್ದಾಳಿ ನಡೆಸಿರುವ ರಮೇಶ್ ಕುಮಾರ್, ರೈತನ ಮಗ ಎಂದು ದೇವೇಗೌಡರನ್ನು ಪ್ರಧಾನಿ ಮಾಡಿದ್ದೆವು, ಈಗ ಅವರು ಬಿಜೆಪಿ ಜತೆ ಸೇರಿದ್ದು, ಒಬ್ಬ ಪ್ರಧಾನ ಮಂತ್ರಿಯಾಗಿದ್ದವರು, ಒಬ್ಬ ಮುಖ್ಯಮಂತ್ರಿಯಾಗಿದ್ದವರು ಮೂರು ಸೀಟುಗಳನ್ನು ತೆಗೆದುಕೊಂಡಿದ್ದಾರೆ ಅದರಲ್ಲೂ ಒಂದು ಮಗನಿಗೆ ಇನ್ನೊಂದು ಮೊಮ್ಮಗನಿಗೆ ಎಂದು ವ್ಯಂಗ್ಯವಾಡಿದ್ದಾರೆ.

ಅಳಿಯನನ್ನು ನಿಮ್ಮ ಲೆಕ್ಕದಲ್ಲಿ ಕೊಡಿ ಎಂದು ಅಲ್ಲಿಗೆ ಕಳಿಸಿದರು. ಇವರ ಹಣೆಬರಹಕ್ಕೆ ಅವರ ಬಳಿ ಹೋಗಿ ಸಲಾಂ ಹೊಡೆಯುತ್ತಿದ್ದಾರೆ ಎಂದು ದೇವೇಗೌಡ ವಿರುದ್ಧ ರಮೇಶ್ ಕುಮಾರ್ ಟೀಕಾಪ್ರಹಾರ ನಡೆಸಿದ್ದಾರೆ.

ಅರಮನೆ ಬಳಿ ಮತದಾನ ಜಾಗೃತಿ



ಮೈಸೂರು ಅರಮನೆ ಬಳಿ ಟೀಂ ಮೈಸೂರು ವತಿಯಿಂದ ಮತದಾನ ಜಾಗೃತಿ ಹಮ್ಮಿಕೊಳ್ಳಲಾಗಿತ್ತು.

ಮೈಸೂರು, ಏ.21(ಎಸ್‌ಬಿಡಿ)– ಮೈಸೂರು ಅರಮನೆ ಬಳಿ 'ಟೀಂ ಮೈಸೂರು' ವತಿಯಿಂದ ವಿಶೇಷವಾಗಿ ಮತದಾನದ ಬಗ್ಗೆ ಜಾಗೃತಿ ಮೂಡಿಸಲಾಯಿತು.

ಅರಮನೆ ವರಹಾ ದ್ವಾರದ ಬಳಿ ಮತದಾನದ ಮಹತ್ವ ಸಾರುವ ಕನ್ನಡ ಹಾಗೂ ಇಂಗ್ಲಿಷ್ ಪೋಸ್ಟರ್ ಪ್ರದರ್ಶಿಸಿದ ಟೀಂ ಮೈಸೂರು ಸದಸ್ಯರು, ಪ್ರವಾಸಿಗರಿಗೆ ಗುಲಾಬಿ ನೀಡಿ ತಪ್ಪದೇ ಮತದಾನ ಮಾಡುವಂತೆ ಮನವಿ ಮಾಡಿದರು.

ಮತದಾನ ಪ್ರತಿಯೊಬ್ಬ ಪ್ರಜೆಯ ಹಕ್ಕು ಹಾಗೂ ಜವಾಬ್ದಾರಿ. ಯಾವುದೇ ಕಾರಣಕ್ಕೂ ಮತದಾನದಿಂದ ವಂಚಿತರಾಗಬೇಡಿ. ಮತದಾನದ ದಿನ ಪ್ರವಾಸಕ್ಕೆ ಯೋಜನೆ ಮಾಡಿಕೊಂಡಿದ್ದರೆ ದಯವಿಟ್ಟು ಮುಂದೂಡಿ. ಇಲ್ಲವೇ ಬೆಳಗ್ಗೆಯೇ ಮತದಾನ ಮಾಡಿ ನಂತರ ಪ್ರವಾಸ ಕೈಗೊಳ್ಳಿ. ನಿಮ್ಮ ಸ್ನೇಹಿತರು, ಸಂಬಂಧಿಕರು, ನೆರೆ ಹೊರೆಯವರಿಗೂ ಮತದಾನದ ಮಹತ್ವ ತಿಳಿಸಿಕೊಡಿ. ಎಲ್ಲರೂ ಸೇರಿ ಪ್ರಜಾಪ್ರಭುತ್ವದ ಹಬ್ಬವನ್ನು ಸಂಭ್ರಮದಿಂದ ಆಚರಿಸೋಣ ಎಂದು ಅರಿವು ಮೂಡಿಸಿದರು. ಈ ಕಾರ್ಯಕ್ರಮದಲ್ಲಿ ತಂಡದ ಗೋಕುಲ್ ಗೋವರ್ಧನ್, ಯಶವಂತ್, ಮುರಳಿ, ಯತೀಶ್, ಅಮರ್, ರಾಮಪ್ರಸಾದ್, ದಾಮೋದರ್, ಚೇತನ್ ರಾವ್, ಸುನಿಲ್, ಬಸವರಾಜ್, ಪಲ್ಲವಿ, ಪುಟಾಣಿ ವಿಸ್ಮಯ ಮತ್ತಿತರರು ಪಾಲ್ಗೊಂಡಿದ್ದರು.

ಏ.24ರಂದು ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ; ಆರು ಸಾಧಕರಿಗೆ ಭೀಮರತ್ನ ಪ್ರಶಸ್ತಿ ಪ್ರದಾನ

ಮೈಸೂರು, ಏ.21–ಜನಪರ ಸಾಹಿತ್ಯ ಪರಿಷತ್ತು, ಶ್ರೀ ನಟರಾಜ ಪ್ರತಿಷ್ಠಾನ, ವಾತ್ಸಲ್ಯ ಶಿಕ್ಷಣ ಮಹಾವಿದ್ಯಾಲಯ ವತಿಯಿಂದ ಏ.24ರಂದು ಬೆಳಗ್ಗೆ 10.30ಕ್ಕೆ ಶ್ರೀ ನಟರಾಜ ಸಭಾಂಗಣದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ ಏರ್ಪಡಿಸಿದೆ. ಇದೇ ಸಂದರ್ಭದಲ್ಲಿ ಆರು ಮಂದಿ ಸಾಧಕರಿಗೆ ಭೀಮರತ್ನ ಪ್ರಶಸ್ತಿ ಪ್ರದಾನ ಮಾಡಲಾಗುವುದು.

ಹೊಸಮಠದ ಶ್ರೀ ಚಿದಾನಂದ ಸ್ವಾಮೀಜಿ ಸಾನ್ನಿಧ್ಯ ವಹಿಸುವರು. ಭುವನೇಶ್ವರ ಎಎಸ್‌ಬಿಎಂ ವಿವಿಯ ವಿಶ್ರಾಂತ ಕುಲಪತಿ ಡಾ.ಮಹದೇವ ಕಾರ್ಯಕ್ರಮ ಉದ್ಘಾಟಿಸುವರು. ಶ್ರೀ ಮಲೈಮಹದೇಶ್ವರ ಸ್ವಾಮಿ ಕ್ಷೇತ್ರಾಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ಎ.ಇ.ರಘು ಪ್ರಶಸ್ತಿ ಪ್ರದಾನ ಮಾಡುವರು. ಮೈಸೂರು ವಿವಿ ಪರೀಕ್ಷಾಂಗ ಕುಲಸಚಿವ ಡಾ.ಬಸಪ್ಪ ಅಭಿನಂದನಾ ಭಾಷಣ ಮಾಡುವರು. ಶ್ರೀ ನಟರಾಜ ಪ್ರತಿಷ್ಠಾನದ ವಿಶೇಷಾಧಿಕಾರಿ ಪ್ರೊ. ಎಸ್.ಶಿವರಾಜಪ್ಪ ಅಧ್ಯಕ್ಷತೆ ವಹಿಸುವರು. ಪರಿಷತ್ತಿನ ಗೌರವಾಧ್ಯಕ್ಷ ಡಾ.ಡಿ.ರವಿ ಪ್ರಾಸ್ತಾವಿಕ ಭಾಷಣ ಮಾಡುವರು. ರಾಜ್ಯಾಧ್ಯಕ್ಷ ಡಾ. ಎಂ.ಮಹೇಶ್ ಚಿಕ್ಕಲ್ಲೂರು, ಗೌರವ ಸಲಹೆಗಾರ ಡಾ. ಆರ್.ನಾಗಭೂಷಣ್, ಉಪಾಧ್ಯಕ್ಷ ಸಾಲುಂಡಿ ದೊರೆಸ್ವಾಮಿ, ವಾತ್ಸಲ್ಯ ಶಿಕ್ಷಣ ಮಹಾವಿದ್ಯಾಲಯ ಪ್ರಾಂಶುಪಾಲ ಡಾ.ಮಹೇಶ್ ದಳಪತಿ ಉಪಸ್ಥಿತರಿರುವರು.

ಪ್ರಶಸ್ತಿ ಪುರಸ್ಕೃತರು: ಡಾ.ರಾಜಪ್ಪ ದಳವಾಯಿ–ಸಾಹಿತ್ಯ ಮತ್ತು ರಂಗಭೂಮಿ, ಅಂಶಿ ಪ್ರಸನ್ನಕುಮಾರ್–ಪತ್ರಿಕೋದ್ಯಮ, ಪ್ರೊ.ಎಸ್.ಶಿವರಾಜಪ್ಪ–ಸಾಹಿತ್ಯ, ಡಾ.ಅಬ್ದುಲ್ ಖಾದರ್–ವೈದ್ಯಕೀಯ, ಡಾ.ಜಿ.ಪ್ರಶಾಂತ ನಾಯಕ–ಸಾಹಿತ್ಯ, ಸಿ.ಎಂ.ನರಸಿಂಹಮೂರ್ತಿ–ಜನಪದ ಮತ್ತು ರಂಗಭೂಮಿ.

ಇದೇ ಸಮಾರಂಭದಲ್ಲಿ ಕೆ.ಆರ್.ಪ್ರಭಾವತಿ–ಬುಡಕಟ್ಟು ಸೇವೆ, ಯಶಸ್ವಿನಿ ಗಿರೀಶ್–ಯುವ ಪ್ರತಿಭೆ, ಚಂದ್ರಕಲಾ–ಸಂಘಟನೆ ಅವರನ್ನು ಅಭಿನಂದಿಸಲಾಗುವುದು.

ನೇಹಾ ಕೊಲೆ ಖಂಡಿಸಿ ಇಂದು ಮುಸ್ಲಿಮರಿಂದ ಮೌನ ಮೆರವಣಿಗೆ, ಸ್ವಯಂಪ್ರೇರಿತ ಬಂದ್

ಧಾರವಾಡ, ಏ.21– ಹುಬ್ಬಳ್ಳಿಯ ಬಿವಿಬಿ ಕಾಲೇಜು ವಿದ್ಯಾರ್ಥಿನಿ ನೇಹಾ ಕೊಲೆ ಪ್ರಕರಣ ಖಂಡಿಸಿ ಮತ್ತು ಪ್ರಕರಣದ ಆರೋಪಿಗೆ ಕಠಿಣ ಶಿಕ್ಷೆ ಆಗಬೇಕು ಎಂದು ಏಪ್ರಿಲ್ 22ರಂದು ಅಂಜುಮನ್ ಇ ಇಸ್ಲಾಂ ಸಂಸ್ಥೆ ವತಿಯಿಂದ ನಗರದಲ್ಲಿ ಮೌನ ಮೆರವಣಿಗೆ ನಡೆಸಲಾಗುವುದು. ಮುಸ್ಲಿಂ ಸಮುದಾಯದವರು ಸ್ವಯಂ ಪ್ರೇರಿತವಾಗಿ ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 3 ಗಂಟೆವರೆಗೆ ಅಂಗಡಿ, ಮಳಿಗೆಗಳನ್ನು ಬಂದ್ ಮಾಡುವುದಾಗಿ ತಿಳಿಸಿದ್ದಾರೆ ಎಂದು ಸಂಸ್ಥೆ ಅಧ್ಯಕ್ಷ ಇಸ್ಮಾಯಿಲ್ ತಮಟಗಾರ ತಿಳಿಸಿದರು.

ಭಾನುವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, 22ರಂದು ಬೆಳಿಗ್ಗೆ 10 ಗಂಟೆಗೆ ಅಂಜುಮನ್ ಸಂಸ್ಥೆ ಆವರಣದಿಂದ ಮೆರವಣಿಗೆ ಹೊರಟು ಜುಬಿಲಿ ವೃತ್ತ, ಕೋರ್ಟ್‌ವೃತ್ತ ಮಾರ್ಗವಾಗಿ ಜಿಲ್ಲಾಧಿಕಾರಿ ಕಚೇರಿ ತಲುಪಿ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಲಾಗುವುದು ಎಂದು ತಿಳಿಸಿದರು.

ಸ್ವಯಂಪ್ರೇರಿತವಾಗಿ ಅಂಗಡಿ, ಮಳಿಗೆಗಳನ್ನು ಬಂದ್ ಮಾಡುವುದಾಗಿ ಸಮುದಾಯದವರು ಹೇಳಿದ್ದಾರೆ. ಅಂಗಡಿ, ಮಳಿಗೆಗಳನ್ನು ಮುಚ್ಚುವಂತೆ ಯಾರಿಗೂ ತಾಕೀತು ಮಾಡುವುದಿಲ್ಲ ಎಂದು ಅವರು ಹೇಳಿದರು. ನೇಹಾ ಕೊಲೆ ಅತ್ಯಂತ ಅಮಾನವೀಯ ಕೃತ್ಯ. ಇಂಥ ಕೃತ್ಯ ಯಾರೇ ಮಾಡಿದರೂ ಖಂಡನೀಯ. ಇಂಥ ಪ್ರಕರಣಗಳನ್ನು ತ್ವರಿತವಾಗಿ ವಿಚಾರಣೆ ನಡೆಸಿ ಶಿಕ್ಷೆ ವಿಧಿಸಬೇಕು ಎಂದು ಆಗ್ರಹಿಸಿದರು.

ಅಂಜುಮನ್ ಸಂಸ್ಥೆಯ ವಿದ್ಯಾಲಯದ ಒಂದು ಬ್ಲಾಕ್ ಅಥವಾ ಕೊಠಡಿಗೆ ನೇಹಾ ಅವರ ಹೆಸರಿಡಲು ಚಿಂತನೆ ನಡೆದಿದೆ. ಮುಂದಿನ ಶೈಕ್ಷಣಿಕ ವರ್ಷ ಆರಂಭದೊಳಗೆ ಈ ನಿಟ್ಟಿನಲ್ಲಿ ಕ್ರಮ ವಹಿಸುತ್ತೇವೆ ಎಂದರು.

ವರ್ಗೀಕೃತ ಜಾಹೀರಾತು

ಪ್ರತಿ ಸೋಮವಾರ, ಗುರುವಾರ ಮತ್ತು ಶನಿವಾರ ರೂ. 600+30 ಮಾತ್ರ

ಜಾಹೀರಾತಿಗೆ ಸಂಪರ್ಕಿಸಿ 0821–2496522/23

ಶ್ರೀ ಗೌರಿಶಂಕರ ಟ್ರಾವೆಲ್ಸ್
28–4–24 (6 ದಿನ): ಅಯೋಧ್ಯೆ, ಕಾಶಿ, ಗಯಾ. 5–6–2024 (11 ದಿನ): ಅಯೋಧ್ಯೆ, ಕಾಶಿ, ನೇಪಾಳ್, ಕಠ್ಮಂಡು, ಮನೋಕಾಮನ ಇತ್ಯಾದಿ. 10–7–2024 (4 ದಿನ): ಭೀಮಾ ಶಂಕರ, ಶಿರಡಿ, ತ್ರ್ಯಂಬಕೇಶ್ವರ, ಎಲ್ಲೋರ ಇತ್ಯಾದಿ. (ವಿಮಾನ, ಬಸ್, ಊಟ, ರೂಂ)
Mob: 9620002114

HOME APPLIANCES SERVICE
ಫ್ರಿಡ್ಜ್, ವಾಶಿಂಗ್‌ಮೆಶೀನ್, ಮೈಕ್ರೋ ವೋವೆನ್, ಎಲ್‌ಸಿಡಿ, ಸೋಲಾರ್, ಯುಪಿಎಸ್, ಗೀಸರ್, ಸೇಲ್ಸ್ ಅಂಡ್ ಸರ್ವೀಸ್, ನಿಮ್ಮ ಮನೆಯ ಹತ್ತಿರ ದೊರೆಯುತ್ತದೆ.
Contact: Srinivas 9379699229

ಬೇಕಾಗಿದ್ದಾರೆ
ಹಿಂದುಸ್ಥಾನ್ ಯುನಿಲಿವರ್ ಡಿಸ್ಟ್ರಿಬ್ಯೂಟರ್‌ಗೆ ಡೆಲಿವರಿ ಬಾಯ್ಸ್ ಬೇಕಾಗಿದ್ದಾರೆ.
9663987722

ಬೇಕಾಗಿದ್ದಾರೆ
ಪ್ರಗತಿ ವಿದ್ಯಾಸಂಸ್ಥೆ
ಸರಗೂರು, ಮೈಸೂರು. ಜಿಲ್ಲೆ–571121
pragathi.edu.in@gmail.com
9448063043
1) ಸಮಾಜ ಶಿಕ್ಷಕರು – BA, B.Ed- 01
2) ವಿಜ್ಞಾನ ಶಿಕ್ಷಕರು– BSc, B.Ed- 01
3) ಇಂಗ್ಲೀಷ್ ಶಿಕ್ಷಕರು – PUC, D.Ed- 01
4) ಅಕೌಂಟೆಂಟ್– B.Com- 01
ಕಾರ್ಯದರ್ಶಿಗಳು/–

ತಕ್ಷಣ ಬೇಕಾಗಿದ್ದಾರೆ
ಮೈಸೂರಿನ (ಪ್ರಸಿದ್ಧ ಆಫೀಸ್, ಶೋರೂಂ, ಕಂಪನಿಗಳಿಗೆ Packing, helper, Quality, Maintenance, Cashier, Billing, Data Entry Receptionist ಮುಂತಾದ ಕೆಲಸಗಳಿಗೆ 7th, 10th, PUC, ITI, Diploma, Any Degree Pass/Fail ಆದವರು ಬೇಕಾಗಿದ್ದಾರೆ. ಸಂಬಳ: 14000/– 40000/– (ESI+PF OT) ಸೇರಿ
6364103418 9164052361

ಸಂಪು ಮತ್ತು ಟ್ಯಾಂಕ್ ಕ್ಲೀನಿಂಗ್‌ಗಾಗಿ ಸಂಪರ್ಕಿಸಿ
Mob: 8880558064

FOR SALE
ಕುವೆಂಪುನಗರದ ವಿಶ್ವಮಾನವ ಜೋಡಿ ರಸ್ತೆಯ ವಿಜಯ ಬ್ಯಾಂಕ್ ಸರ್ಕಲ್ ಬಳಿ 1.1 ಲಕ್ಷ ರೂಗಳ ಬಾಡಿಗೆ ಬರುತ್ತಿರುವ ವಾಣಿಜ್ಯ ಕಟ್ಟಡ ಮಾರಾಟಕ್ಕಿದೆ.
9620607138 8105751169


ಸ್ಕೂಲ್ ಯೂನಿಫಾರಂ ಹೋಲ್‌ಸೇಲ್ ಬೆಲೆಯಲ್ಲಿ
JSS CKC KV CFTRI DMS
ಭಾವಸಾರ್ ಶ್ರೀಗಣೇಶ್
ಅಗ್ರಹಾರ, ಬಸವೇಶ್ವರ ರಸ್ತೆ 5ನೇ ಕ್ರಾಸ್, ಮೈಸೂರು

SITE FOR SALE
40x60 Muda Allotted Site for Sale Vijaya Nagar 4th Stage 1.45 CR (Negotiable)
8197707001

Aquaguard & Kent Sales and Service
Service Charge: 300/-
9901200444

ಕಮರ್ಷಿಯಲ್ ಸೈಟು ಮಾರಾಟಕ್ಕಿದೆ
(MUDA) 2200 Sqft West South Corner ಮೈಸೂರು ಬನ್ನೂರು ರಸ್ತೆ, ವಾಜಮಂಗಲ ಸರ್ಕಲ್ ಹತ್ತಿರ
ಮನೆ ಮಾರಾಟಕ್ಕಿದೆ
(MUDA) 35x40 G/F, F/F, S/F ಆಲನಹಳ್ಳಿ ಬಡಾವಣೆ
9880929323

ಹೊಸ ಮನೆ ಮಾರಾಟಕ್ಕಿದೆ
20x30 ಉತ್ತರ ದಿಕ್ಕು ಗುರೂರು 4ನೇ ಹಂತ ಶ್ರೀನಗರ ಹತ್ತಿರ 41 ಲಕ್ಷ
9379056972


V-GUARD 10 ವರ್ಷಗಳ ವ್ಯಾರಂಟಿ
Solar Water Heater SALES & SERVICE BAJAJ FINSERV
SUNZONE SOLAR SYSTEM
VM Double Road, Kuvempunagar, Mysuru
9845175443

ಉಚಿತ ತರಬೇತಿ
ಮನೆಯಿಂದಲೇ ಬತ್ತಿಲು ಸಾಂಬ್ರಾಣಿ ಮತ್ತು ಅಣಬೆ ತಯಾರಿಸಿ ನಮಗೆ ಮರಳಿಸಿ ಪ್ರತಿದಿನ 500 ರಿಂದ 800 ರೂ. ವರೆಗೆ ಗಳಿಸಿ.
ತರಬೇತಿಗಾಗಿ: 7406375196, 9880548596

DTCP SITES FOR SALE
DTCP Sites Rs. 699 per sq.ft., Near Jayapura, H.D. Kote Road, Mysore.
9590491194,9606783264

ಮನೆ ಮಾರಾಟಕ್ಕಿದೆ
ಜೆಪಿ ನಗರ ಪಕ್ಕದಲ್ಲಿರುವ ಮಾನಂದವಾಡಿ ಮುಖ್ಯ ರಸ್ತೆಗೆ ತಾಗಿಕೊಂಡಿರುವ ಪ್ರಕೃತಿ ಬಡಾವಣೆಯಲ್ಲಿ ಸುಸಜ್ಜಿತವಾದ 20X30 ಡುಪ್ಲೆಕ್ಸ್ ಹೊಸ ಮನೆ ಮಾರಾಟಕ್ಕಿದೆ. ನೇರ ಮಾಲೀಕರನ್ನು ಸಂಪರ್ಕಿಸಲು ಕರೆ ಮಾಡಿ
7019188932

neem BOND PLATINUM
PLYWOOD DOORS 10 YEARS WARRANTY
@ FACTORY DEPOT RATES
9731591267, 9901291267

HOUSE FOR LEASE
2 BHK Houses are available for Lease in the first floor at Vijayanagar 4th Stage, near NPS School. One house having East facing Main door, another house having North facing Main door, Car parking facilities available. Interested may please contact:
7899831216 / 9686456679

ಬೋಳು ತಲೆಯ ಸಮಸ್ಯೆಯೇ?

SMART HAIR FIXING
574, 9th Cross, Anikethana Road, kuvempunagar, Mysuru
MYSURU 9611028523 MANGALORE 9343142258

ವಿವಾಹ ಭಾಗ್ಯ
MRJ ಮ್ಯಾಟ್ರಿಮೋನಿ
ಎಲ್ಲಾ ಜಾತಿಯ ವಧು / ವರರಿಗಾಗಿ ಸಂಪರ್ಕಿಸಿ:
1) ಮೊದಲನೆ ಮದುವೆ
2) ಎರಡನೆ ಮದುವೆ
3) ವಿಧವೆ / ವಿದುರರು
FREE REGISTRATION
8904890413

ಉದ್ಯೋಗ ಅವಕಾಶ
ಬಂದ ದಿನವೇ ಕೆಲಸ (ಮಾರ್ಕೆಟಿಂಗ್ ಅಲ್ಲ) ಮೈಸೂರಿನ ಪ್ರತಿಷ್ಠಿತ MNC ಹಾಗೂ IT ಕಂಪನಿಗಳಿಗೆ 4th, SSLC, PUC, ITI, Any Degree ಪಾಸ್/ಫೇಲ್ ಆದ ಯುವಕ/ಯುವತಿಯರು ಇಂದೇ ಬೇಕಾಗಿದ್ದಾರೆ. ESI/PF ನೊಂದಿಗೆ ಊಟ ವಸತಿ ಇರುತ್ತದೆ. ಸಂಬಳ + ಓಟಿ 15200–86000
6364308851 7892046990

ಸಂಪು ಮತ್ತು ಟ್ಯಾಂಕ್ ಕ್ಲೀನಿಂಗ್‌ಗಾಗಿ ಸಂಪರ್ಕಿಸಿ
Mob: 9108566022

Star Solar
JUST Easy EMI 19,499/- 200 Ltr
7/15 Years Guaranty
Limited Period Offer
Old system Exchange offer available
Manufacturing : Belawadi Industrial Sub, Mysore
9945616293 / 9449966293

ಬರವಣಿಗೆ ಕೆಲಸ
ಮನೆಯಿಂದಲೇ ಫಾರಂ ಭರ್ತಿ ಮಾಡಿ ಪ್ರತಿ ತಿಂಗಳಿಗೆ ರೂ. 15,000 ಸಂಪಾದಿಸಿ.
Mob: 9731891409

ಸಂಪು ಮತ್ತು ಟ್ಯಾಂಕ್ ಕ್ಲೀನಿಂಗ್‌ಗಾಗಿ ಸಂಪರ್ಕಿಸಿ
Mob: 7204494854

ತಕ್ಷಣ ಬೇಕಾಗಿದ್ದಾರೆ
ಮೈಸೂರಿನ ಮೇಟಗಳ್ಳಿ ಕೈಗಾರಿಕಾ ಪ್ರದೇಶದಲ್ಲಿರುವ ಕಾರ್ಖಾನೆಯೊಂದಕ್ಕೆ ತಕ್ಷಣ ಪುರುಷ & ಮಹಿಳಾ ಕಾರ್ಮಿಕರು ಬೇಕಾಗಿದ್ದಾರೆ. ವಯೋಮಿತಿ 18 ರಿಂದ 40 ರವರೆಗೆ. ವಿದ್ಯಾರ್ಹತೆ: ಕನಿಷ್ಠ ಓದು / ಬರಹ ಗೊತ್ತಿರಬೇಕು. ವೇತನ: 13,448 + 1000 attendance bonus, ESI & PF ಮತ್ತು ಊಟ ಮತ್ತು ವಸತಿ ಸೌಲಭ್ಯವಿರುತ್ತದೆ. ಅಗತ್ಯ ದಾಖಲಾತಿಗಳು: ಆಧಾರ್ ಕಾರ್ಡ್, ಬ್ಯಾಂಕ್ ಪಾಸ್‌ಬುಕ್, ಫೋಟೋ–06, ಟಿ.ಸಿ. ಅಥವಾ ಮಾರ್ಕ್ಸ್‌ಕಾರ್ಡ್ ಕಡ್ಡಾಯ.
8453408502, 9108100117
Veena: 7795104543 Legarde
0821-2303459, 4852002

ಸಸ್ಯಹಾರಿ ಕುಕ್ ಬೇಕಾಗಿದ್ದಾರೆ
ಬೆಂಗಳೂರಿನಲ್ಲಿರುವ ಸಂಸಾರಕ್ಕೆ ಅಡುಗೆ ಮಾಡಲು 40–45 ವರ್ಷದ ಮಹಿಳೆ ಬೇಕಾಗಿದ್ದಾರೆ. ಊಟ ಮತ್ತು ವಸತಿ ಸೌಲಭ್ಯ ಆಕರ್ಷಕ ಸಂಬಳ. ಕರೆ ಮಾಡಿ
Mob: 98457-58565

ಮೊಬೈಲ್‌ನಲ್ಲಿ ಕೆಲಸ ವಾರದ ಸಂಬಳ
NO TARGET, TYPING WORK
ತಿಂಗಳಿಗೆ ರೂ.10,000 ರಿಂದ ರೂ.25,000 ಗಳಿಸಬಹುದು.
8884439666

ವಧು–ವರರ ಅನ್ವೇಷಣೆ
ನಮ್ಮಲ್ಲಿ ಎಲ್ಲಾ ಜಾತಿಯ ವಧು–ವರರು, ವಿಚ್ಛೇದಿತರು, ವಿಧುರರು, ವಿಧವೆಯರು ಸಂಪರ್ಕಿಸಿ:
Mob: 8105747339

ತಕ್ಷಣ ಮನೆ ಮಾರಾಟಕ್ಕಿದೆ
100% ವಾಸ್ತು 30x40, 2 BHK, E/F ಅರವಿಂದನಗರ (ಕುವೆಂಪುನಗರ) ಪಾರ್ಕ್ ಪಕ್ಕ.
ಸಂಪರ್ಕಿಸಿ: ಮಾಲೀಕರು
Mob: 9844756558

ಹೊಸ ಮನೆ ಮಾರಾಟಕ್ಕಿದೆ
30x40 East 3BHK ಡ್ಯೂಪ್ಲೆಕ್ಸ್ – 88 ಲಕ್ಷ ಸಾತಗಳ್ಳಿ – VTU
ಸೈಟ್ 20x40 - 10.5 ಲಕ್ಷ, 30x30 - 11.5 ಲಕ್ಷ, 30x40 - 15 ಲಕ್ಷ ಕೆ.ಎಸ್.ಹುಂಡಿ, ಮೈಸೂರು
9900840025

ತಕ್ಷಣ ಬೇಕಾಗಿದ್ದಾರೆ
Age (18-23) 10th, PUC, ಮೇಲ್ಪಟ್ಟಿರುವ Traineeಗಳಾಗಿ (8500/- 16500/-) Pm Earn ಯಾವುದೇ ಪ್ರವೇಶ ಶುಲ್ಕವಿರುವುದಿಲ್ಲ ಪರಸ್ಥಳದವರಿಗೆ ಮಾತ್ರ ವಸತಿ ಖುದ್ದಾಗಿ ಸಂಪರ್ಕಿಸಿ ವಿವರಗೊಂದಿಗೆ Time (11 AM to 3PM)
ಕಾವ್ಯ: 9342827788

ತಕ್ಷಣ ಬೇಕಾಗಿದ್ದಾರೆ
ಹೂಟಗಳ್ಳಿ & ಹೆಬ್ಬಾಳ ಇಂಡಸ್ಟ್ರಿಯಲ್ ಏರಿಯಾದಲ್ಲಿ ಕೆಲಸ ಮಾಡಲು ಸೆಕ್ಯೂರಿಟಿ ಗಾರ್ಡ್‌ಗಳು ಮತ್ತು ಇಂಗ್ಲಿಷ್ ಮತ್ತು ಕಂಪ್ಯೂಟರ್ ಅನುಭವವುಳ್ಳ ಲೇಡಿ ಗಾರ್ಡ್‌ಗಳು ಬೇಕಾಗಿದ್ದಾರೆ.
ವಿದ್ಯಾರ್ಹತೆ: SSLC & PUC
ಸಂಬಳ: ಸೂಪರ್‌ವೈಸರ್ 22000+w/o (8hrs)
ಗಾರ್ಡ್ : 18500+w/o (8hrs)
ಲೇಡಿ ಗಾರ್ಡ್ : 20000+w/o (8hrs)
9880727819, 9620777819

ಬೇಕಾಗಿದ್ದಾರೆ
ಮೈಸೂರಿನ ಪ್ರತಿಷ್ಠಿತ ಸಿಟಿ ಬಸ್ ನಿಲ್ದಾಣಕ್ಕೆ ಹತ್ತಿರವಿರುವ ದಾಸ್ತಾನು ಮಳಿಗೆಯಲ್ಲಿ ಕೆಲಸ ಮಾಡಲು ಕಂಪ್ಯೂಟರ್ Tally ತರಬೇತಿ ಹೊಂದಿದ ಪುರುಷ / ಮಹಿಳಾ ಅಭ್ಯರ್ಥಿ ಬೇಕಾಗಿದ್ದಾರೆ.
9663500644

ಮನೆ ಬಾಡಿಗೆಗೆ ಇದೆ
ಸರ್ದಾರ್ ವಲ್ಲಭಾಯಿ ಪಟೇಲ್ ನಗರ 1 BHK ಮನೆ (ಸಸ್ಯಾಹಾರಿಗಳಿಗೆ ಮಾತ್ರ) # 394, ಕಾರ್ನರ್ ಮನೆ
9606343453 9980307835

ವಧು–ವರಾನ್ವೇಷಣೆ
ಒಕ್ಕಲಿಗ/ಕುರುಬ/ಲಿಂಗಾಯತ/ನಾಯಕ/SC & ಎಲ್ಲಾ ಜಾತಿಯ ವಧು–ವರರಿಗಾಗಿ ಕೂಡಲೇ ಸಂಪರ್ಕಿಸಿ: (II Marriage Also)
9343175000

ಬೇಕಾಗಿದ್ದಾರೆ
ಹೊಸ ಐಸ್ ಕ್ರೀಂ ಅಂಗಡಿಗೆ ಸೇಲ್ಸ್ ಸ್ಟಾಫ್–2 ನಂ. ಹುಡುಗರು/ಹುಡುಗಿಯರು. ಅರ್ಹತೆ: SSLC/PUC Pass or Fail ಅನುಭವ: Freshers ವಯಸ್ಸು: 18 ರಿಂದ 20 ವರ್ಷ (18 to 30 Years.) ತಿಂಗಳ ವೇತನ : ರೂ. 10,000 ರಿಂದ 12,000
7760024930

ತಕ್ಷಣ ಬೇಕಾಗಿದ್ದಾರೆ
ಸೆಕ್ಯೂರಿಟಿ ಗಾರ್ಡುಗಳು – 10 ಮಂದಿ
ಸ್ಥಳ: 1) ಸಿಟಿ ಸುತ್ತಮುತ್ತ 2) ದಟ್ಟಗಳ್ಳಿ 3) ಹೆಬ್ಬಾಳ್ ಇಂಡಸ್ಟ್ರಿಯಲ್ ಏರಿಯಾ 4) ಕೂರ್ಗಳ್ಳಿ ಇಂಡಸ್ಟ್ರಿಯಲ್ ಏರಿಯಾ
ಉಚಿತ ವಸತಿ ESI / PF ಸಂಬಳ ನಿಗದಿತ ಸಮಯದಲ್ಲೆ
9242406261 9686422400

ಬೇಕಾಗಿದ್ದಾರೆ
ಮೈಸೂರಿನ ಮೇಟಗಳ್ಳಿ ಏರಿಯಾ ಕೆ.ಆರ್.ಎಸ್ ರಸ್ತೆ ಜೆ.ಕೆ.ಟೈರ್‌ಗೆ ಹತ್ತಿರವಿರುವ ಕೆಮಿಕಲ್ ಕಾರ್ಖಾನೆಗೆ ಓದುಬರಹ ಬರುವ ಅಥವಾ ಓದುಬರಹ ಇಲ್ಲದಿರುವ 8 ಗಂಟೆ 3 ಪಾಳಿಯಲ್ಲಿ (Shift) Helper ಹೆಲ್ಪರ್ ಕೆಲಸ ಮಾಡಲು 40 ವರ್ಷ ವಯಸ್ಸು ಒಳಗಿನವರು ಹುಡುಗರು ಬೇಕಾಗಿದ್ದಾರೆ. ವೇತನ ತಿಂಗಳಿಗೆ 12000/– ರೂ. ವಾರದ ರಜಾ ESI & PF ಸೌಲಭ್ಯವಿರುತ್ತದೆ.
9731976148

ಮಳಿಗೆ ಬಾಡಿಗೆಗೆ
20x45 ನೆಲ ಮಹಡಿ ಮಳಿಗೆ ಬಾಡಿಗೆಗೆ ಲಭ್ಯವಿದೆ. ದೇವೇಗೌಡ ಸರ್ಕಲ್, ಸಾಯಿಬಾಬ ದೇವಸ್ಥಾನ ಹತ್ತಿರ ಬನ್ನೂರು ರಸ್ತೆ, ಮೈಸೂರು
MP Teakwood ಲಭ್ಯವಿದೆ
9986562429

ಬೇಕಾಗಿದ್ದಾರೆ
ವೃದ್ಧರು ರೋಗಿಗಳನ್ನು ಆರೈಕೆ ಮಾಡಲು ಯುವಕ /ಯುವತಿಯರು, ಮಹಿಳೆಯರು, ವಿಧವೆ /ವಿಚ್ಛೇದಿತೆಯರು ಹೋಂ ನರ್ಸಿಂಗ್ ಕೆಲಸಕ್ಕಾಗಿ ತಕ್ಷಣ ಬೇಕಾಗಿದ್ದಾರೆ. ಯಾವುದೇ ರೀತಿಯ ಶುಲ್ಕ ಇರುವುದಿಲ್ಲ (ನಮ್ಮಲ್ಲೇ ಉಳಿದುಕೊಳ್ಳುವವರಿಗೆ ಮಾತ್ರ ಅವಕಾಶ) ಸಂಬಳ ಉಚಿತ ಊಟ ವಸತಿಯೊಂದಿಗೆ 16000ರಿಂದ 20000 ವರೆಗೆ
7411304177 7411304176

ಹೆಲ್ತ್ ಕೇರ್ ತರಬೇತಿ
SSLC/PUC ಆದವರಿಗೆ ಡಿಪ್ಲಮೋ ಇನ್ ಹೆಲ್ತ್ ಕೇರ್ ತರಬೇತಿ ಕೊಡಲಾಗಿದೆ. ತರಬೇತಿ ಪಡೆದವರು ಉತ್ತಮ ಆಸ್ಪತ್ರೆಗಳಲ್ಲಿ ಕೆಲಸ ಮಾಡುತ್ತಿದ್ದಾರೆ. ಸೆಂಟ್ ಮೇರಿಸ್ ಆಸ್ಪತ್ರೆ ಸಿಲ್ಕ್ ಫ್ಯಾಕ್ಟರಿ ಸರ್ಕಲ್ NIE ಕಾಲೇಜ್ ಪಕ್ಕ ಮೈಸೂರು
9916908454

ಅನುಬಂಧ ಮ್ಯಾರೇಜಸ್
ವಧುವರರನ್ನು ಹುಡುಕಲು ಸಹಾಯಬೇಕೇ? ನಮಗೆ ಕರೆಮಾಡಿ
6361740552

ತಕ್ಷಣ ಬೇಕಾಗಿದ್ದಾರೆ
ನಂಜನಗೂಡಿನ ತಾಂಡವಪುರ ಕಡಕೊಳ ಬನ್ನೂರು ರಸ್ತೆ ಟಿವಿಎಸ್ ಫ್ಯಾಕ್ಟರಿ ಏರಿಯಾದಲ್ಲಿ ಕೆಲಸ ಮಾಡಲು ಸೆಕ್ಯೂರಿಟಿ ಗಾರ್ಡ್‌ಗಳು ಬೇಕಾಗಿದ್ದಾರೆ.
ವಿದ್ಯಾರ್ಹತೆ: SSLC ಮೇಲ್ಪಟ್ಟ
ವಯೋಮಿತಿ: 50 ವರ್ಷದೊಳಗೆ
ಸಂಬಳ: 16500/- 13000/-
ESI & PF ಸೌಲಭ್ಯವಿರುತ್ತದೆ.
9620777819 9620667819

ಬೇಕಾಗಿದ್ದಾರೆ
1) ಟಿಪ್ಪರ್ ಡ್ರೈವರ್ – 2
2) JCB ಆಪರೇಟರ್ – 2
ಅನುಭವವಿರುವವರು
9380728107 8431572689

ಅಡುಗೆ ಕೆಲಸಕ್ಕೆ ಹಾಗೂ ಮನೆ ಕೆಲಸಕ್ಕೆ ಮಹಿಳೆಯರು ಬೇಕಾಗಿದ್ದಾರೆ
ಇಲ್ಲೇ ಉಳಿಯುವಂತರು ಆಕರ್ಷಕ ಸಂಬಳ ಹಾಗೂ ಊಟ ವಸತಿ ಉಚಿತ
ಸ್ಥಳ: ಶೆಟ್ಟಿನಾಯಕನಹಳ್ಳಿ ಬೀರಿಹುಂಡಿ ಪೋಸ್ಟ್, ಮೈಸೂರು ಗದ್ದಿಗೆ ಮೇನ್ ರೋಡ್, ಬಸ್ ನಂ. 250, 258, 245, 257
ಅವಶ್ಯಕತೆ ಇದ್ದವರು ಮಾತ್ರ ಸಂಪರ್ಕಿಸಿ:
9686156396 9880546818

ಎಲ್ಲಾ ಜಾತಿಯ ವಧು–ವರರ ಮಾಹಿತಿ ಕೇಂದ್ರ
SSLC, PUC, Degree Master Degree, Engg., Doctor ಎಲ್ಲಾ ವಿವಾಹ ನೋಂದಣಿಗೆ ಕರೆ ಮಾಡಿ & 2nd Marriage Also
9164743059

WANTED
1. Internal Auditor
2. Computer Operator / Data Entry Operator
3. Accountant with knowledge in Tally prime
Minimum 2 year Experience
(Attractive Salary with ESI and EPF)
17/2, 1st Floor, 5th Main, 8th Cross, Saraswthipuram, Mysore
9164608888, 9844299888

ತಕ್ಷಣ ಬೇಕಾಗಿದ್ದಾರೆ
Immediate Requirement For Telecallers
10th / PUC / Any Degree/ Freshers / Experienced Female & Male
(Competitive Salary and Attractive Incentives)
9535690737, 8495866511

TEACHERS REQUIREMENT
Montossori Teachers-2
Helpers -2
Little Champs Pre-School
7795301535 9060109063

WANTED TEACHERS
PAVAMAN INNOVATIVE SCHOOL (1st std to 8th Std)
Primary : 3 Posts (Social, English & Science) Qualification: B.Ed, D.Ed or Any Degree, Computer knowledge & English Communication is a must.
105/3, 7th Cross, 3rd Main, BM Shree Nagar, Mysore-16
8197695840 8431891316

SITE FOR SALE
30x40 Corner Site at Rajajinagara, Near Sri M. Vishweshwaraya Layout
8951820020

ಬೇಕಾಗಿದ್ದಾರೆ
ಹೆಬ್ಬಾಳು ಮೇಟಗಳ್ಳಿ ಕೈಗಾರಿಕಾ ಪ್ರದೇಶಗಳಲ್ಲಿ ಕೆಲಸ ಮಾಡಲು ಹುಡುಗ, ಹುಡುಗಿಯರು ಬೇಕಾಗಿದ್ದಾರೆ.
ವಿದ್ಯಾರ್ಹತೆ : ITI, Diploma, 8th to 2nd PUC ವರೆಗೆ, ಊಟ ವಸತಿ ESI PF ಸೌಲಭ್ಯ ಇರುತ್ತದೆ.
ಸಂಬಳರಿಂದ 18000 ರಿಂದ ಇರುತ್ತದೆ.
8951869646 9902645646

ತಿರುಮಲ ಪ್ರಾಪರ್ಟೀಸ್
ರಿಯಲ್ ಎಸ್ಟೇಟ್ & ಕನ್‌ಸ್ಟ್ರಕ್ಷನ್ಸ್
20x30, 30x40, 30x50, 40x60
ಕನ್‌ಸ್ಟ್ರಕ್ಷನ್ಸ್, ಡೆಮಲಿಷನ್‌ವರ್ಕ್ಸ್ ಆಲ್ಟ್ರೇಷನ್ ವಾಸ್ತು ಪ್ರಕಾರ ಮಾಡಿಕೊಡಲಾಗುತ್ತದೆ
8217368859

ಮೈಸೂರು ಮಿತ್ರ – ಓದುಗರ ಗಮನಕ್ಕೆ

ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.

–ಜಾಹೀರಾತು ವ್ಯವಸ್ಥಾಪಕರು

ಮೈಸೂರು ಮಿತ್ರ ಸೋಮವಾರ 22 ಏಪ್ರಿಲ್ 2024

ಬಿಜೆಪಿ, ಜೆಡಿಎಸ್ ನಾಯಕರಿಂದ ಗ್ಯಾರಂಟಿ ಮುಗಿಸುವ ಹುನ್ನಾರ

ಮಂಡ್ಯದಲ್ಲಿ ಸುರ್ಜೇವಾಲಾ ಗಂಭೀರ ಆರೋಪ



ಮಂಡ್ಯದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ ಮಾತನಾಡಿದರು.

ಮಂಡ್ಯ,ಏ.21–ರಾಜ್ಯ ಕಾಂಗ್ರೆಸ್ ಸರ್ಕಾರ ನೀಡಿರುವ ಐದು ಗ್ಯಾರಂಟಿಯ ಉಪಯೋಗವನ್ನು ಪಡೆದುಕೊಂಡು ಕರ್ನಾಟಕದ ಜನ ಅಭಿವೃದ್ಧಿಯಾಗುತ್ತಿದ್ದರೆ, ಅದನ್ನು ಸಹಿಸಲಾಗದ ಬಿಜೆಪಿ ಹಾಗೂ ಜೆಡಿಎಸ್ ನಾಯಕರು ಗ್ಯಾರಂಟಿ ಯೋಜನೆಗಳನ್ನು ಮುಗಿಸಲು ಹೊರಟಿದ್ದಾರೆ ಎಂದು ಎಐಸಿಸಿ ಪ್ರಧಾನ ಕಾರ್ಯದರ್ಶಿ ಹಾಗೂ ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ ಆರೋಪಿಸಿದರು.

ಭಾನುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮಾಜಿ ಮುಖ್ಯಮಂತ್ರಿಗಳಾದ ಹೆಚ್.ಡಿ.ಕುಮಾರಸ್ವಾಮಿ, ಬಿ.ಎಸ್.ಯಡಿಯೂರಪ್ಪ ಹಾಗೂ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ತಮ್ಮ ಪ್ರಚಾರ ಭಾಷಣದಲ್ಲಿ ಗ್ಯಾರಂಟಿಗಳನ್ನು ನಿರಂತರವಾಗಿ ಟೀಕೆ ಮಾಡುತ್ತಿದ್ದಾರೆ. ಅವರು ಅಧಿಕಾರದಲ್ಲಿದ್ದಾಗ ಜನರಿಗೆ ಯಾವ ಕೊಡುಗೆಯನ್ನು ಕೊಟ್ಟಿಲ್ಲ. ಆದರೆ ಅಧಿಕಾರದಲ್ಲಿರುವ ನಾವು ಜನರಿಗೆ ಅನುಕೂಲ ಮಾಡಿಕೊಟ್ಟರೆ ಅದನ್ನು ಇವರ ಕೈಯಲ್ಲಿ ಸಹಿಸಿಕೊಳ್ಳಲು ಆಗುತ್ತಿಲ್ಲ ಎಂದು ಕಿಡಿಕಾರಿದರು.

ಗ್ಯಾರಂಟಿ ಯೋಜನೆಗಳನ್ನು ರದ್ದು ಪಡಿಸುವ ಹುನ್ನಾರ ಮೈತ್ರಿ ಮುಖಂಡರದ್ದಾಗಿದ್ದು, ಫಲಾನುಭವಿಗಳು ಇವರ ಹುನ್ನಾರದ ಬಗ್ಗೆ ಎಚ್ಚರಿಕೆಯಿಂದ ಇರಬೇಕು. ಮತದಾನದ ವೇಳೆ ಗ್ಯಾರಂಟಿ ವಿರೋಧಿಗಳಾದ ಎನ್‌ಡಿಎ ಅಭ್ಯರ್ಥಿಗಳನ್ನು ತಿರಸ್ಕರಿಸಿ ಕಾಂಗ್ರೆಸ್ ಬೆಂಬಲಿಸಬೇಕು ಎಂದು ಮನವಿ ಮಾಡಿದ ಅವರು, ಗ್ಯಾರಂಟಿ ಯೋಜನೆಗಳನ್ನು ನಾವು ಜಾತಿ ಧರ್ಮದ ಆಧಾರದಲ್ಲಿ ರೂಪಿಸಿಲ್ಲ. ಎಲ್ಲರಿಗೂ ಯೋಜನೆ ಸಿಗಬೇಕೆಂಬುದು ನಮ್ಮ ಉದ್ದೇಶವಾಗಿದೆ ಎಂದು ಸ್ಪಷ್ಟಪಡಿಸಿದರು.

ಸುದ್ದಿಗೋಷ್ಠಿಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ, ಕೆಪಿಸಿಸಿ ಕಾರ್ಯಾಧ್ಯಕ್ಷ ತನ್ವೀರ್ ಸೇಠ್, ರಾಜ್ಯ ಸಭಾ ಸದಸ್ಯ ಜಿ.ಸಿ.ಚಂದ್ರಶೇಖರ್, ಶಾಸಕರಾದ ಪಿ.ಎಂ.ನರೇಂದ್ರಸ್ವಾಮಿ, ದಿನೇಶ್‌ಗೂಳಿಗೌಡ, ರವಿಕುಮಾರ್ ಗಣಿಗ, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಸಿ.ಡಿ.ಗಂಗಾಧರ್, ಕಾರ್ಯಾಧ್ಯಕ್ಷ ಎಂ.ಎಸ್.ಚಿದಂಬರ್ ಉಪಸ್ಥಿತರಿದ್ದರು.

ಎಂಟು ವಿಧಾನಸಭಾ ಕ್ಷೇತ್ರಕ್ಕೂ ಪ್ರತ್ಯೇಕ ಪ್ರಣಾಳಿಕೆ ಬಿಡುಗಡೆ

ಮಂಡ್ಯ ಲೋಕಸಭಾ ಕ್ಷೇತ್ರ ವ್ಯಾಪ್ತಿಯ ಎಂಟು ವಿಧಾನಸಭಾ ಕ್ಷೇತ್ರಕ್ಕೂ ಪ್ರತ್ಯೇಕ ಪ್ರಣಾಳಿಕೆ ಬಿಡುಗಡೆ ಮಾಡಿದ ಸುರ್ಜೇವಾಲಾ, ಕೃಷ್ಣರಾಜನಗರಕ್ಕೆ ಕಬ್ಬು ಬೆಳೆಗಾರರಿಗೆ ಶಾಶ್ವತ ಪರಿಹಾರ, ಪ್ರವಾಸೋದ್ಯಮ ಅಭಿವೃದ್ಧಿ, ಕೋಲ್ಡ್ ಸ್ಟೋರೇಜ್ ಸ್ಥಾಪನೆ, ಸೇತುವೆಗಳ ನಿರ್ಮಾಣ, ಉದ್ಯಾನವನಗಳ ನಿರ್ಮಾಣ ಹಾಗೂ ಕ್ರೀಡಾಂಗಣ ಅಭಿವೃದ್ಧಿಗೆ ಆದ್ಯತೆ ನೀಡಲಾಗುವುದು ಎಂದು ಸುರ್ಜೇವಾಲ ಇದೇ ವೇಳೆ ತಿಳಿಸಿದರು.

ಮದ್ದೂರು ವಿಧಾಸಭಾ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಮದ್ದೂರು ಪಟ್ಟಣ ನವೀಕರಣಕ್ಕೆ ಆದ್ಯತೆ, ಒಳಚರಂಡಿ ವ್ಯವಸ್ಥೆ, ತಾಲೂಕಿನ ಕಡೆ ಭಾಗದ ರೈತರಿಗೆ ಸಮರ್ಪಕ ನೀರು, ಕೈಗಾರಿಕೆ ಸ್ಥಾಪನೆ ಹಾಗೂ ಕುಡಿಯುವ ನೀರಿಗೆ ಆದ್ಯತೆ ಕೊಡಲಾಗುವುದು ಎಂದ ಅವರು, ಕೆ.ಆರ್.ಪೇಟೆ ವಿಧಾಸಭಾ ಕ್ಷೇತ್ರದ ಶ್ರೀರಂಗಪಟ್ಟಣ–ಚನ್ನರಾಯಪಟ್ಟಣ ರಸ್ತೆ ಅಭಿವೃದ್ಧಿ, ಗ್ರಾಮಗಳಿಗೆ ರಸ್ತೆ ನಿರ್ಮಾಣ, ಹೇಮಾವತಿ, ಮಾದಾಪುರ, ಅಕ್ಕ ಹೆಬ್ಬಾಳ ನಾಲೆ ಆಧುನೀಕರಣ, ಕೆಆರ್.ಪೇಟೆಯಿಂದ ಬೆಂಗಳೂರು, ಮಂಗಳೂರಿಗೆ ರೈಲ್ವೆ ಸಂಪರ್ಕ ಒದಗಿಸಿಕೊಡಲಾಗುವುದು ಎಂದು ಪ್ರಣಾಳಿಕೆ ಮೂಲಕ ತಿಳಿಸಿದರು.

ಮಳವಳ್ಳಿ ವಿಧಾಸಭಾ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಮಳವಳ್ಳಿ ಪುರಸಭೆಯನ್ನು ನಗರ ಸಭೆಯನ್ನಾಗಿ ಮೇಲ್ದರ್ಜೆಗೇರಿಸುವುದು, ನೀರಾವರಿ ಯೋಜನೆಯಡಿ 30 ಸಾವಿರ ವಾಣಿಜ್ಯ ಬೆಳೆಗಳಿಗೆ ಹಾಗೂ ಬಿ.ಜಿ.ಪುರ, ಇಗ್ಗಲೂರಿಗೆ ಹನಿ ನೀರಾವರಿ ಯೋಜನೆ ತರಲಾಗುವುದು, ಬೆಳಕವಾಡಿ, ಹಲಗೂರಿನಲ್ಲಿ ಆರೋಗ್ಯ ಕೇಂದ್ರ ಸ್ಥಾಪನೆ, ಮಳವಳ್ಳಿಯಲ್ಲಿ ಕೈಗಾರಿಕಾ ಪ್ರದೇಶಗಳ ಅಭಿವೃದ್ಧಿ ಒತ್ತು ನೀಡಿ, ಗಾರ್ಮೆಂಟ್ಸ್ ನಿರ್ಮಾಣಕ್ಕೆ 350 ಎಕರೆ ಜಾಗ ಗುರುತಿಸಿದ್ದು, ಆ ಸ್ಥಳದಲ್ಲಿ ಶೀಘ್ರದಲ್ಲೇ ಗಾರ್ಮೆಂಟ್ಸ್ ಕಾರ್ಖಾನೆ ತೆರೆಯಲು ಆದ್ಯತೆ ಮತ್ತು ಮಳವಳ್ಳಿ, ಕಿರುಗಾವಲು, ಹಲಗೂರಿಗೆ ಕುಡಿಯಲು ಕಾವೇರಿ ನೀರು ಒದಗಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

ನಾಗಮಂಗಲ ವಿಧಾನಸಭಾ ಕ್ಷೇತ್ರಕ್ಕೆ ಸಂಬಂಧಿಸಿದಂತೆ ನೀರಾವರಿ ಯೋಜನೆ ಯಡಿ ತಾಲೂಕಿನ ಕರೆ ತುಂಬಿಸುವ ಯೋಜನೆಗೆ ಒತ್ತು, ಹೇಮಾವತಿ ಜಲಾಶಯದಿಂದ ಕುಡಿಯುವ ನೀರು ಯೋಜನೆ ಜಾರಿಗೆ ತರಲಾಗುವುದು, ತಾಲೂಕಿನಲ್ಲಿ ಗಾರ್ಮೆಂಟ್ಸ್ ಸ್ಥಾಪಿಸಿ, ಉದ್ಯೋಗ ಸೃಷ್ಟಿ, ನಾಲೆಗಳ ಆಧುನೀಕರಣ ಹಾಗೂ ರೈತರ ಬೆಳೆಗಳನ್ನು ಸಂರಕ್ಷಿಸಲು ಕೋಲ್ಡ್ ಸ್ಟೋರೇಜ್ ಸ್ಥಾಪನೆಗೆ ಒತ್ತು ನೀಡಲಾಗುವುದು ಎಂದು ತಿಳಿಸಿದರು.

ಪಾಂಡವಪುರ (ಮೇಲುಕೋಟೆ ವಿಧಾನಸಭಾ ಕ್ಷೇತ್ರ) ತಾಲೂಕಿಗೆ ಸಂಬಂಧಿಸಿದಂತೆ ಶಿಕ್ಷಣ ಮತ್ತು ಆರೋಗ್ಯ ಇಲಾಖೆಯಿಂದ ಪಂಚಾಯ್ತಿಗೊಂದು ಶಾಲೆ, ಪ್ರಾಥಮಿಕ ಆರೋಗ್ಯ ಕೇಂದ್ರಗಳ ನಿರ್ಮಾಣ ಮಾಡಲಾಗುವುದು, ರೈತರ ಬದುಕು ಹಸನು ಮಾಡುವ ಸಲುವಾಗಿ ರೈತರನ್ನು ಬರಗಾಲದಿಂದ ಪಾರು ಮಾಡಲು ಚೆಕ್ ಡ್ಯಾಂಗಳ ನಿರ್ಮಾಣ, ನೀರು ಸಂಗ್ರಹಣೆ, ಹವಾಮಾನ ವೈಪರೀತ್ಯ ಎದುರಿಸಲು ಅರಣ್ಯೀಕರಣ, ಪರಿಸರ ಸಂರಕ್ಷಣೆ, ಬಹು ಬೆಳೆ ವೈಜ್ಞಾನಿಕ ಪದ್ಧತಿ ಅಳವಡಿಕೆ ಮಾಡಿಕೊಳ್ಳಲು ರೈತರಿಗೆ ಉತ್ತೇಜನ, ಆರ್ಥಿಕ ಸ್ವಾವಲಂಬಿಗಳನ್ನಾಗಿ ರೈತರನ್ನು ಮಾಡಲು ಅರಿವು ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು ಎಂದರು.

ಶ್ರೀರಂಗಪಟ್ಟಣ ವಿಧಾನಸಭಾ ಕ್ಷೇತ್ರದ ಪ್ರವಾಸೋದ್ಯಮಕ್ಕೆ ಒತ್ತು ಕೊಡಲಾಗುವುದು. ಐತಿಹಾಸಿಕ ಹಿನ್ನೆಲೆಯುಳ್ಳ ಪ್ರತಿ ಪ್ರದೇಶವನ್ನು ಪ್ರವಾಸೋದ್ಯಮ ಕೇಂದ್ರವನ್ನಾಗಿ ಮಾಡಿ, ಮೂಲಭೂತ ಸೌಕರ್ಯ ಒದಗಿಸಲಾಗುವುದು. ತಾಲೂಕಿನ ನಾಲೆಗಳಾದ ಸಿಡಿಎಸ್, ಮಿರ್ಜಾ ನಾಲೆಗಳ ನವೀಕರಣ, ಉಪ–ನಾಲೆಗಳ ನಿರ್ಮಾಣ, ಎಲ್ಲಾ ಗ್ರಾಮಗಳಿಗೆ ಕುಡಿಯುವ ನೀರು ಹಾಗೂ ಮೂಲಸೌಕರ್ಯವನ್ನು ಒದಗಿಸಲಾಗುವುದು ಎಂದು ವಿವರಿಸಿದರು.

ಮಂಡ್ಯ ವಿಧಾಸಭಾ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಸಾಫ್ಟ್‌ವೇರ್ ಪಾರ್ಕ್ ನಿರ್ಮಾಣ, ಕೃಷಿ ವಿಶ್ವವಿದ್ಯಾನಿಲಯ ಸ್ಥಾಪನೆ, ಮೆಡಿಕಲ್ ಕಾಲೇಜು ಉನ್ನತೀಕರಣ, ಹೊಸ ಸಕ್ಕರೆ ಕಾರ್ಖಾನೆ ನಿರ್ಮಾಣ, ವಸತಿ ಹೀನರಿಗೆ 10 ಸಾವಿರ ಮನೆ ನಿರ್ಮಾಣ, ಸ್ಲಂ ನಿವಾಸಿಗಳಿಗೆ ಹಕ್ಕುಪತ್ರ ವಿತರಣೆ, ಶ್ರೀರಂಗಪಟ್ಟಣದಿಂದ ಬಸರಾಳಿಗೆ ಕುಡಿಯುವ ನೀರು ಯೋಜನೆ, ಬಸರಾಳಿನಲ್ಲಿ ಏತ ನೀರಾವರಿ ಯೋಜನೆ, ಕೋಣನಹಳ್ಳಿ, ಗುತ್ತಲು ಕೆರೆಯನ್ನು ಪ್ರವಾಸಿ ಕೇಂದ್ರಗಳನ್ನಾಗಿ ಮಾರ್ಪಾಡು, ಮಂಡ್ಯ ನಗರದಲ್ಲಿ 20 ಸಾವಿರ ಉದ್ಯೋಗ ಸೃಷ್ಟಿಗೆ ಜವಳಿ ಪಾರ್ಕ್ ಸ್ಥಾಪನೆ, 50 ಹಾಸಿಗೆ ಗುಣಮಟ್ಟದ ಆಸ್ಪತ್ರೆ ನಿರ್ಮಾಣ, ಸಾತನೂರಿನಲ್ಲಿ ದೇವಲಾಂಬ ದೇಗುಲದ ಅಭಿವೃದ್ಧಿ, ಮಂಡ್ಯ ನಗರಕ್ಕೆ ಹಳೆ ಒಳಚರಂಡಿಗೆ ಹೊಸ ವ್ಯವಸ್ಥೆ ಜೋಡಣೆ, ಮಂಡ್ಯ ತಾಲ್ಲೂಕಿನ ಕೆರೆಗಳ ಹೂಳೆತ್ತಿ ನೀರು ಸಂಗ್ರಹಕ್ಕೆ ಕ್ರಮ ವಹಿಸಲಾಗುವುದು ಎಂದ ಅವು, ಈ ಎಲ್ಲಾ ಯೋಜನೆಗಳ ಜಾರಿಗೆಗಾಗಿ ಮಂಡ್ಯ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ವೆಂಕಟರಮಣೇಗೌಡ (ಸ್ಟಾರ್‌ಚಂದ್ರು) ಅವರನ್ನು ಬೆಂಬಲಿಸಿ ಎಂದು ಮನವಿ ಮಾಡಿದರು.

ಸ್ಟಾರ್ ಚಂದ್ರು ಪರ ಸಿಎಂ ಮತಯಾಚನೆ



ಪ್ರಚಾರ ಸಭೆಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟಿಸಿದರು.

ನಾಗಮಂಗಲ,ಏ.21–ಕಳೆದ 10 ವರ್ಷಗಳಿಂದ ಆಡಳಿತ ನಡೆಸಿದ ಪ್ರಧಾನಿ ನರೇಂದ್ರ ಮೋದಿ ಯಾವುದೇ ಅಭಿವೃದ್ಧಿ ಕಾರ್ಯ ಮಾಡದ ಹಿನ್ನೆಲೆಯಲ್ಲಿ ಕಾಂಗ್ರೆಸ್ ದೇಶದ ಚುಕ್ಕಾಣಿ ಹಿಡಿಯಲು ನಿರ್ಧರಿಸಿದ್ದು ಇದಕ್ಕೆ ನಿಮ್ಮ ಸಹಕಾರ ಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು. ಪಟ್ಟಣದ ಬಡಗೂಡಮ್ಮ ದೇವಾಲಯ ಆವರಣದಲ್ಲಿ ಲೋಕಸಭಾ ಕಾಂಗ್ರೆಸ್ ಅಭ್ಯರ್ಥಿ ಪರವಾಗಿ ಬೃಹತ್ ಕಾಂಗ್ರೆಸ್ ಸಮಾವೇಶವನ್ನು ಉದ್ಘಾಟಿಸಿ ಮಾತನಾಡಿದ ಅವರು, ನಾನು ಹಲವು ಬಾರಿ ನಾಗಮಂಗಲಕ್ಕೆ ಭೇಟಿ ನೀಡಿದಾಗಲೂ ಹೃದಯಪೂರ್ವಕವಾದ ಗೌರವ ನೀಡಿದ್ದೀರಾ, ಲೋಕಸಭಾ ಚುನಾವಣೆಯಲ್ಲಿ ನೀವು ನೀಡುವ ತೀರ್ಪು ಮಹತ್ತರವಾದದ್ದು ಎಂದರು. ಈಗಾಗಲೇ ಕಳೆದ ಹತ್ತು ವರ್ಷದಲ್ಲಿ ನರೇಂದ್ರ ಮೋದಿ ಪ್ರಧಾನಮಂತ್ರಿ ಆಗಿದ್ದರು ಯಾವುದೇ ಅಭಿವೃದ್ಧಿ ಮಾಡಿಲ್ಲ. ಮನಮೋಹನ್ ಸಿಂಗ್ ಪ್ರಧಾನಿಯಾಗಿ ದೇಶದ ಅಭಿವೃದ್ಧಿಗೆ ಶ್ರಮಿಸಿದವರು, ಅವರು ಆಹಾರ ಕಾಯ್ದೆ, ರಕ್ಷಣಾ ಕಾಯ್ದೆ, ಶಿಕ್ಷಣ ಕಾಯ್ದೆ, ಮಾಹಿತಿ ಕಾಯ್ದೆ ಇನ್ನು ಹಲವಾರು ಕಾನೂನು ಕಾಯ್ದೆಗಳನ್ನು ಜಾರಿಗೆ ತಂದವರು ಮನಮೋಹನಸಿಂಗ್ ಹೊರತು ಮೋದಿ ಅಲ್ಲ ಎಂದರು.

ದೇವೇಗೌಡರ ಜೀವಿತಾವಧಿಯಲ್ಲೇ ಕಾವೇರಿ ಸಮಸ್ಯೆ ನಿವಾರಣೆ

ಶ್ರೀರಂಗಪಟ್ಟಣದಲ್ಲಿ ಮಾಜಿ ಸಿಎಂ ಕುಮಾರಸ್ವಾಮಿ ಭರವಸೆ

ಶ್ರೀರಂಗಪಟ್ಟಣ,ಏ.21(ವಿನಯ್ ಕಾರೇಕುರ)–ಹಲವು ವರ್ಷಗಳಿಂದ ಸಮಸ್ಯೆಯಾಗಿಯೇ ಉಳಿದಿರುವ ಕಾವೇರಿ ನೀರು ಹಂಚಿಕೆ ಹಾಗೂ ಮೇಕೆದಾಟು ಯೋಜನೆಯನ್ನು ಎಚ್.ಡಿ.ದೇವೇಗೌಡರ ಜೀವಿತಾವಧಿಯಲ್ಲೇ ಪೂರ್ಣಗೊಳಿಸಲಾಗುವುದು. ಅವುಗಳನ್ನು ಪೂರ್ಣಗೊಳಿಸದಿದ್ದರೆ ಇನ್ನೆಂದೂ ಮತ ಕೇಳಲು ನಿಮ್ಮ ಮುಂದೆ ಬರಲ್ಲ ಎಂದು ಮಂಡ್ಯ ಲೋಕಸಭಾ ಕ್ಷೇತ್ರದ ಮೈತ್ರಿ ಅಭ್ಯರ್ಥಿ, ಮಾಜಿ ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿ ತಿಳಿಸಿದ್ದಾರೆ.

ಪಟ್ಟಣದ ತಾಲೂಕು ಕ್ರೀಡಾಂಗಣದಲ್ಲಿ ಭಾನುವಾರ ನಡೆದ ಜಾ.ದಳ–ಬಿಜೆಪಿ ಕಾರ್ಯಕರ್ತರ ಬೃಹತ್ ಸಭೆಯನ್ನು ಉದ್ಘಾಟಿಸಿ ಮಾತನಾಡಿದ ಅವರು, ನೀರಾವರಿ ಸಮಸ್ಯೆಗಳನ್ನು ಬಗೆಹರಿಸಲೆಂದೇ ಶ್ರೀರಂಗನಾಥ ಸ್ವಾಮಿಯೇ ನನ್ನನ್ನು ಕರೆತಂದು ಮಂಡ್ಯದಲ್ಲಿ ನಿಲ್ಲಿಸಿದ್ದಾನೆ. ಅವುಗಳನ್ನು ಪೂರ್ಣಗೊಳಿಸುವುದೇ ನನ್ನ ಗುರಿಯಾಗಿದೆ ಎಂದರು.



ಶ್ರೀರಂಗಪಟ್ಟಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಜೆಡಿಎಸ್ ಮತ್ತು ಬಿಜೆಪಿ ಮೈತ್ರಿ ಕೂಟದ ಅಭ್ಯರ್ಥಿ ಹೆಚ್.ಡಿ.ಕುಮಾರಸ್ವಾಮಿ ಅವರು ಮಾತನಾಡುತ್ತಿರುವುದು.

ಈ ಚುನಾವಣೆ ದೇಶದ ಜನರ ರಕ್ಷಣೆ, ಭದ್ರತೆ, ಆರ್ಥಿಕ ಸುಧಾರಣೆ ತರುವ ಸಮರ್ಥ ನಾಯಕ ನರೇಂದ್ರ ಮೋದಿಯನ್ನು ಮತ್ತೊಮ್ಮೆ ಪ್ರಧಾನಿ ಮಾಡಲು ನಡೆಯುತ್ತಿದೆ. ದೇಶಾದ್ಯಂತ ಮೋದಿಯನ್ನು ಜನರು ಬೆಂಬಲಿಸುತ್ತಿದ್ದಾರೆ. ರಾಜ್ಯದ ನೀರಾವರಿ ಸಮಸ್ಯೆಗಳನ್ನು ಬಗೆಹರಿಸಲು ಮೈತ್ರಿ ಮಾಡಿಕೊಂಡಿದ್ದೇನೆಯೇ ಹೊರತು, ನನ್ನ ಸ್ವಾರ್ಥಕ್ಕಾಗಲ್ಲ. 20 ವರ್ಷಗಳಿಂದ ಮಂಡ್ಯ ಜಿಲ್ಲೆಯ ಜನರ ಜೊತೆ ಅವಿನಾಭಾವ ಸಂಬಂಧ ಇಟ್ಟುಕೊಂಡಿದ್ದೇನೆ. ಮೋಸ ಮಾಡುವ ಪ್ರಶ್ನೆಯೇ ಇಲ್ಲ ಎಂದು ಹೇಳಿದರು.

ನೀರಾವರಿಗೆ ಕಾಂಗ್ರೆಸ್ ಬಿಡಿಗಾಸನ್ನೂ ಕೊಟ್ಟಿಲ್ಲ: ಕೇಂದ್ರದಲ್ಲಿ ಸುಮಾರು 60 ವರ್ಷ ಅಧಿಕಾರ ನಡೆಸಿದ ಕಾಂಗ್ರೆಸ್ ಸರ್ಕಾರ ಕರ್ನಾಟಕ ರಾಜ್ಯದ ನೀರಾವರಿ ಸಮಸ್ಯೆಗಳಿಗೆ ಒಂದು ಬಿಡಿಗಾಸನ್ನೂ ಕೊಟ್ಟಿಲ್ಲ. 1977ರ ವರೆಗೂ ರಾಜ್ಯದಿಂದ 28ಕ್ಕೆ 28 ಸ್ಥಾನಗಳಲ್ಲೂ ಕಾಂಗ್ರೆಸ್ ಸಂಸದರನ್ನು ಕಳುಹಿಸಿದರೂ ನೀರಾವರಿ ಯೋಜನೆಗಳನ್ನು ಪೂರ್ಣಗೊಳಿಸಿಲ್ಲ. ಹೋಗಲಿ ಕಾವೇರಿ ಸಮಸ್ಯೆಯನ್ನಾದರೂ ಬಗೆಹರಿಸಿದರಾ? ಅದೂ ಇಲ್ಲ ಎಂದು ಕಾಂಗ್ರೆಸ್ ವಿರುದ್ಧ ಹರಿಹಾಯ್ದರು.

ಕರ್ನಾಟಕ ವೈದ್ಯಕೀಯ ಪರಿಷತ್ತಿನ ಸದಸ್ಯ, ಹೋರಾಟಗಾರ ಡಾ.ಎಚ್.ಎನ್.ರವೀಂದ್ರ, ಮಾಜಿ ಸಚಿವರಾದ ಸಿ.ಎಸ್. ಪುಟ್ಟರಾಜು, ಬಂಡೆಪ್ಪ ಕಾಶೆಂಪುರ, ಬಿಜೆಪಿ ಮುಖಂಡರಾದ ಎಸ್.ಸಚ್ಚಿದಾನಂದ, ಡಾ. ಸಿದ್ದರಾಮಯ್ಯ, ಕೇಂದ್ರ ವಕ್ಫ್ ಸಮಿತಿ ಮಾಜಿ ಸದಸ್ಯ ಅಬ್ಬಾಸ್ ಆಲಿ ಬೊಹ್ರಾ, ಜಾ.ದಳ ಜಿಲ್ಲಾಧ್ಯಕ್ಷ ಡಿ.ರಮೇಶ್, ಬಿಜೆಪಿ ಜಿಲ್ಲಾಧ್ಯಕ್ಷ ಡಾ. ಎನ್.ಎಸ್.ಇಂದ್ರೇಶ್ ಇದ್ದರು.

25 ಸಾವಿರ ರೂ. ದೇಣಿಗೆ...

ಶ್ರೀರಂಗಪಟ್ಟಣ ತಾಲೂಕಿನ ಬಾಬುರಾಯನಕೊಪ್ಪಲು ಗ್ರಾಮದ ಬಿ.ಸಿ. ಸತ್ಯನಾರಾಯಣ ಅವರು ಚುನಾವಣಾ ವೆಚ್ಚಕ್ಕಾಗಿ ಎಚ್.ಡಿ.ಕುಮಾರಸ್ವಾಮಿ ಅವರಿಗೆ 25 ಸಾವಿರ ರೂ. ದೇಣಿಗೆ ನೀಡಿದರು. ಸತ್ಯನಾರಾಯಣ ಅವರು ಈ ಹಿಂದೆ ಎಚ್.ಡಿ. ಕುಮಾರಸ್ವಾಮಿ ಅವರು 'ಪಂಚರತ್ನ ಯಾತ್ರೆ' ನಡೆಸಿದ ಸಂದರ್ಭದಲ್ಲೂ 25 ಸಾವಿರ ರೂ. ದೇಣಿಗೆ ನೀಡಿದ್ದರು ಇದೇ ವೇಳೆ ಕಡತನಾಳು ಗ್ರಾಮದ ನಿಷ್ಕಲಾ ಸುರೇಶ್ ದಂಪತಿಯ 13 ವರ್ಷದ ಮಗಳು ರೀತು ಕುಮಾರಸ್ವಾಮಿ ಅವರ ಚುನಾವಣಾ ವೆಚ್ಚಕ್ಕಾಗಿ ಆಕೆ ಕೂಡಿಟ್ಟಿದ ಹಣವನ್ನು ದೇಣಿಗೆಯಾಗಿ ನೀಡಿದ್ದು ವಿಶೇಷವಾಗಿತ್ತು

ರೋಚಕ ಸೋಲು: ಆರ್‌ಸಿಬಿ ಪ್ಲೇಆಫ್ ಕನಸು ಭಗ್ನ

ಕೋಲ್ಕತಾ, ಏ.21– ಕ್ರಿಕೆಟ್ ಅಭಿಮಾನಿಗಳನ್ನು ತುದಿಗಾಲಿನಲ್ಲಿ ನಿಲ್ಲುವಂತೆ ಮಾಡಿದ್ದ ಆರ್‌ಸಿಬಿ ಹಾಗೂ ಕೆಕೆಆರ್ ನಡುವಿನ ಹೈವೋಲ್ಟೇಜ್ ಪಂದ್ಯದಲ್ಲಿ ಕೊನೆಗೂ ಆತಿಥೇಯ ಕೋಲ್ಕತಾ ನೈಟ್ ರೈಡರ್ಸ್ ಒಂದು ರನ್ ರೋಚಕ ಜಯ ಸಾಧಿಸಿದೆ.

ಗೆಲ್ಲಲು ಕೊನೆ ಓವರ್‌ನಲ್ಲಿ ಆರ್‌ಸಿಬಿಗೆ 21 ರನ್ ಅಗತ್ಯವಿತ್ತು. ಕರ್ಣ್ ಶರ್ಮಾ 3 ಸಿಕ್ಸರ್ ಸಿಡಿಸಿದರಾದರೂ, ತಂಡವನ್ನು ರೋಚಕ ಸೋಲಿನಿಂದ ಪಾರು ಮಾಡಲು ಸಾಧ್ಯವಾಗಲಿಲ್ಲ. ಒಟ್ಟಾರೆ ಟೂರ್ನಿಯಲ್ಲಿ 7ನೇ ಸೋಲು ಕಂಡ ಆರ್‌ಸಿಬಿ ಪ್ಲೇ ಆಫ್ ಕನಸು ಬಹುತೇಕ ಭಗ್ನವಾದಂತಾಗಿದೆ.

ಇಲ್ಲಿನ ಈಡನ್ ಗಾರ್ಡನ್ಸ್ ಮೈದಾನದಲ್ಲಿ 223 ರನ್‌ಗಳ ಕಠಿಣ ಗುರಿ ಬೆನ್ನತ್ತಿದ ರಾಯಲ್ ಚಾಲೆಂಜರ್ಸ್ ಬೆಂಗಳೂರು ಉತ್ತಮ ಆರಂಭ ಪಡೆಯಲು ವಿಫಲವಾಯಿತು. ವಿರಾಟ್ ಕೊಹ್ಲಿ ಕೇವಲ 7 ಎಸೆತಗಳಲ್ಲಿ 18 ರನ್ ಗಳಿಸಿ ಹರ್ಷಿತ್ ರಾಣಾ ಬೌಲಿಂಗ್‌ನಲ್ಲಿ ವಿವಾದಾತ್ಮಕ ತೀರ್ಪಿಗೆ ಬಲಿಯಾದರು. ಇನ್ನು ಇದರ ಬೆನ್ನಲ್ಲೇ ನಾಯಕ ಫಾಫ್ ಡು ಪ್ಲೆಸಿಸ್ 7 ರನ್ ಗಳಿಸಿ ವರುಣ್ ಚಕ್ರವರ್ತಿಗೆ ವಿಕೆಟ್ ಒಪ್ಪಿಸಿದರು.

ಕೇವಲ 35 ರನ್‌ಗೆ 2 ವಿಕೆಟ್ ಕಳೆದುಕೊಂಡು ಕಂಗಾಲಾಗಿದ್ದ ತಂಡಕ್ಕೆ 3ನೇ ವಿಕೆಟ್‌ಗೆ ವಿಲ್ ಜ್ಯಾಕ್ಸ್ ಹಾಗೂ ರಜತ್ ಪಾಟೀದಾರ್ 48 ಎಸೆತಗಳಲ್ಲಿ 102 ರನ್‌ಗಳ ಜೊತೆಯಾಟವಾಡುವ ಮೂಲಕ ತಂಡಕ್ಕೆ ಆಸರೆಯಾದರು. ಸ್ಫೋಟಕ ಬ್ಯಾಟಿಂಗ್ ನಡೆಸಿದ ವಿಲ್ ಜ್ಯಾಕ್ಸ್ 29 ಎಸೆತಗಳಲ್ಲಿ ಚೊಚ್ಚಲ ಅರ್ಧಶತಕ ಸಿಡಿಸಿದರು.



ಮತ್ತೊಂದು ತುದಿಯಲ್ಲಿ ಅಮೋಘ ಬ್ಯಾಟಿಂಗ್ ನಡೆಸಿದ ರಜತ್ ಪಾಟೀದಾರ್ ಕೇವಲ 21 ಎಸೆತಗಳಲ್ಲಿ ಅರ್ಧಶತಕ ಪೂರೈಸಿದರು. ಶತಕದ ಜತೆಯಾಟವಾಡಿ ಮುನ್ನುಗ್ಗುತ್ತಿದ್ದ ಆರ್‌ಸಿಬಿ ಜೋಡಿ ಬೇರ್ಪಡಿಸುವಲ್ಲಿ ಆಂಡ್ರೆ ರಸೆಲ್ ಯಶಸ್ವಿಯಾದರು. ಜ್ಯಾಕ್ಸ್ ಕೇವಲ 32 ಎಸೆತಗಳಲ್ಲಿ 4 ಬೌಂಡರಿ, 5 ಸಿಕ್ಸರ್ ಸಹಿತ 55 ರನ್ ಬಾರಿಸಿ ವಿಕೆಟ್ ಒಪ್ಪಿಸಿದರು. ಇನ್ನು ಇದೇ ಓವರ್‌ನಲ್ಲಿ ರಜತ್ ಪಾಟೀದಾರ್ ಅವರನ್ನು ಬಲಿ ಪಡೆದರು. ಪಾಟೀದಾರ್ 23 ಎಸೆತಗಳಲ್ಲಿ 3 ಬೌಂಡರಿ, 5 ಸಿಕ್ಸರ್ ಸಹಿತ 52 ರನ್ ಬಾರಿಸಿ ಪೆವಿಲಿಯನ್ ಹಾದಿ ಹಿಡಿದರು.

ನಂತರ ಬಂದ ಕ್ಯಾಮರೋನ್ ಗ್ರೀನ್ 6, ಮಹಿಪಾಲ್ 4 ರನ್ ಗಳಿಸಿ ವಿಕೆಟ್ ಒಪ್ಪಿಸಿದರು. ಬಳಿಕ ಬಂದ ಸುಯಾಶ್ ಪ್ರಭುದೇಸಾಯಿ ಜೊತೆಗೂಡಿ ದಿನೇಶ್ ಕಾರ್ತಿಕ್ 7ನೇ ವಿಕೆಟ್‌ಗೆ 32 ರನ್ ಜತೆಯಾಟವಾಡಿದರು. ಪ್ರಭುದೇಸಾಯಿ 24 ರನ್ ಗಳಿಸಿ ರಾಣಾಗೆ ಎರಡನೇ ಬಲಿಯಾದರು. ಕೊನೆಯಲ್ಲಿ ದಿನೇಶ್ ಕಾರ್ತಿಕ್ 18 ಎಸೆತಗಳಲ್ಲಿ 25 ರನ್ ಸಿಡಿಸಿದರಾದರೂ ತಂಡವನ್ನು ಸೋಲಿನಿಂದ ಪಾರು ಮಾಡಲು ಸಾಧ್ಯವಾಗಲಿಲ್ಲ. ಕೆಕೆಆರ್ ಪರ ಆಂಡ್ರೆ ರಸೆಲ್ 3, ಸುನೀಲ್ ನರೇನ್, ಹರ್ಷಿತ್ ರಾಣಾ ತಲಾ 2, ಮಿಚೆಲ್ ಸ್ಟಾರ್ಕ್, ವರುಣ್ ಚಕ್ರವರ್ತಿ ತಲಾ ಒಂದೊಂದು ವಿಕೆಟ್ ಪಡೆದರು.

ಇದಕ್ಕೂ ಮೊದಲು ಟಾಸ್ ಸೋತು ಬ್ಯಾಟಿಂಗ್ ಮಾಡಿದ ಕೆಕೆಆರ್ 20 ಓವರ್‌ಗಳಲ್ಲಿ 6 ವಿಕೆಟ್ ನಷ್ಟಕ್ಕೆ 222 ರನ್ ಗಳಿಸಿತು.ತಂಡದ ಪರ ಫಿಲ್ ಸಾಲ್ಟ್ 48, ನರೇನ್ 10, ವೆಂಕಟೇಶ್ ಐಯ್ಯರ್ 16, ಶ್ರೇಯಸ್ ಅಯ್ಯರ್ 50, ರಿಂಕು ಸಿಂಗ್ 24, ರಸೆಲ್ 27, ರಮಣ್‌ದೀಪ್ ಸಿಂಗ್ 24 ರನ್ ಗಳಿಸಿದರು. ಯಶ್ ದಯಾಳ್, ಕ್ಯಾಮರೂನ್ ಗ್ರೀನ್ ತಲಾ 2, ಲೂಕಿ ಫರ್ಗೂಸನ್, ಸಿರಾಜ್ ತಲಾ ಒಂದೊಂದು ವಿಕೆಟ್ ಪಡೆದರು.

ಇಂದಿನ ಪಂದ್ಯ (ಏ.22)
ರಾಜಸ್ಥಾನ್ ರಾಯಲ್ಸ್ / ಮುಂಬೈ ಇಂಡಿಯನ್ಸ್
ಸ್ಥಳ: ಜೈಪುರ, ಸವಾಯ್ ಮಾನ್‌ಸಿಂಗ್ ಕ್ರೀಡಾಂಗಣ
ಸಮಯ: ಸಂಜೆ 7.30ಕ್ಕೆ

ಪಂಜಾಬ್ ವಿರುದ್ಧ ಗುಜರಾತ್‌ಗೆ ಜಯ

ಚಂಡಿಗಢ, ಏ.21– ರವಿಶ್ರೀನಿವಾಸನ್ ಸಾಯಿ ಕಿಶೋರ್ ಅವರ ಮಾರಕ ಬೌಲಿಂಗ್ ದಾಳಿ ನೆರವಿನಿಂದ ಗುಜರಾತ್ ಟೈಟಾನ್ಸ್ ಪಂಜಾಬ್ ಕಿಂಗ್ಸ್ ವಿರುದ್ಧ 3 ವಿಕೆಟ್‌ಗಳ ಜಯ ಗಳಿಸಿದೆ.

ಇಲ್ಲಿನ ಚಂಡಿಗಢ ಮಹಾರಾಜ ಯಾದವೀಂದ್ರ ಸಿಂಗ್ ಅಂತಾರಾಷ್ಟ್ರೀಯ ಕ್ರಿಕೆಟ್ ಸ್ಟೇಡಿಯಂನಲ್ಲಿ ನಡೆದ ಪಂದ್ಯದಲ್ಲಿ ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಿದ ಪಂಜಾಬ್ ಕಿಂಗ್ಸ್ 20 ಓವರ್‌ಗಳಲ್ಲಿ 142 ರನ್‌ಗಳಿಗೆ ಆಲೌಟಾಯಿತು. ತಂಡದ ಪರ ಸ್ಯಾಮ್ ಕರ್ರನ್ 20, ಪ್ರಭ್‌ಸಿಮ್ರಾನ್‌ಸಿಂಗ್ 35, ಜಿತೇಶ್ ಶರ್ಮಾ 13, ಹರ್‌ಪ್ರಿತ್ ಸಿಂಗ್ 14, ಹರ್ ಪ್ರಿತ್ ಬ್ರಾರ್ 29 ರನ್ ಗಳಿಸಿದರು. ಪಂಜಾಬ್ ಪರ ರವಿಶ್ರೀನಿವಾಸನ್ ಸಾಯಿ ಕಿಶೋರ್ 4, ನೂರ್ ಅಹಮ್ಮದ್, ಮೋಹಿತ್ ಶರ್ಮಾ ತಲಾ 2, ರಶೀದ್ ಖಾನ್ 1 ವಿಕೆಟ್ ಪಡೆದರು.

143 ರನ್‌ಗಳ ಗೆಲುವಿನ ಗುರಿ ಬೆನ್ನತ್ತಿದ ಗುಜರಾತ್ ಟೈಟಾನ್ಸ್ 19.1 ಓವರ್‌ಗಳಲ್ಲಿ 7 ವಿಕೆಟ್ ನಷ್ಟಕ್ಕೆ 146 ರನ್ ಗಳಿಸಿ ಗೆಲುವಿನ ನಗೆ ಬೀರಿತು.



ತಂಡದ ಪರ ವೃದ್ಧಿಮಾನ್ ಸಹ 13, ಶುಭ್‌ಮನ್ ಗಿಲ್ 35, ಸಾಯಿ ಸುದರ್ಶನ್ 31, ರಾಹುಲ್ ತೆವಾಟಿಯಾ 36 ರನ್ ಗಳಿಸಿದರು. ಪಂಜಾಬ್ ಪರ ಹರ್ಷಲ್ ಪಟೇಲ್ 3, ಲಿಯಾಮ್ ಲಿವಿಂಗ್‌ಸ್ಟೋನ್ 2, ಸ್ಯಾಮ್ ಕರ್ರನ್ ಹಾಗೂ ಅರ್ಷದೀಪ್ ಸಿಂಗ್ ತಲಾ ಒಂದೊಂದು ವಿಕೆಟ್ ಪಡೆದರು. ರವಿಶ್ರೀನಿವಾಸನ್ ಸಾಯಿ ಕಿಶೋರ್ ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು.

ಸ್ಟಂಟ್ ದೃಶ್ಯದ ಚಿತ್ರೀಕರಣದ ವೇಳೆ ನಟ ಶ್ರೀ ಮುರುಳಿಗೆ ಗಾಯ

ಮೈಸೂರು, ಏ.21–ಸ್ಟಂಟ್ ದೃಶ್ಯದ ಚಿತ್ರೀಕರಣದ ವೇಳೆ ಅವಘಡ ಸಂಭವಿಸಿ ಚಿತ್ರನಟ ಶ್ರೀಮುರುಳಿ ಗಾಯಗೊಂಡಿದ್ದಾರೆ.



ಹೊಂಬಾಳೆ ಸಂಸ್ಥೆಯು ನಿರ್ಮಿಸುತ್ತಿರುವ 'ಬಘೀರ' ಚಿತ್ರದ ಚಿತ್ರೀಕರಣ ಮೈಸೂರಿನಲ್ಲಿ ನಡೆಯುತ್ತಿತ್ತು. ಚಿತ್ರದಲ್ಲಿ ಬರುವ ಸ್ಟಂಟ್ ದೃಶ್ಯ ಚಿತ್ರೀಕರಿಸುತ್ತಿದ್ದ ವೇಳೆ ಅವರ ಕಾಲಿಗೆ ಪೆಟ್ಟಾಗಿದ್ದು, ಚಿತ್ರ ತಂಡದವರು ತಕ್ಷಣವೇ ಅವರನ್ನು ಮೈಸೂರಿನ ಖಾಸಗಿ ಆಸ್ಪತ್ರೆಗೆ ದಾಖಲಿಸಿದ್ದಾರೆ.

ಕ್ರಿಯಾಶೀಲ ಚಟುವಟಿಕೆಗಳಿಂದ ಸ್ವಾವಲಂಬಿಯಾಗಬೇಕೇ ಹೊರತು ಎಂದೂ ಪರಾವಲಂಬಿಯಾಗಬಾರದು



ಮೈಸೂರು, ಏ.21– ನಗರದ ವಿದ್ಯಾವರ್ಧಕ ಪ್ರಥಮ ದರ್ಜೆ ಕಾಲೇಜಿನಲ್ಲಿ ಇಂದು ಮೈಸೂರಿನ ಸಿಗ್ಮಾ ಸಹಯೋಗದೊಂದಿಗೆ ಕೆರಿಯರ್ ಗೈಡೆನ್ಸ್ ಸ್ಕಿಲ್ ಡೆವಲಪ್‌ಮೆಂಟ್ ಮತ್ತು ಪ್ಲೇಸ್‌ಮೆಂಟ್ ಸೆಲ್‌ನ ವತಿಯಿಂದ ಕಾಲೇಜಿನಲ್ಲಿ ಅಂತಿಮ ಪದವಿ ವಿಭಾಗದಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು 'ಉದ್ಯಮಲೋಕಕ್ಕೆ ವಿದ್ಯಾರ್ಥಿಗಳನ್ನು ಸಿದ್ಧಗೊಳಿಸುವ ನಿಟ್ಟಿನಲ್ಲಿ' ಒಂದು ಒಳನೋಟ ಕುರಿತು ಒಂದು ದಿನದ ತರಬೇತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಮುಖ್ಯ ಭಾಷಣಕಾರರಾದ ಹಲವು ರಾಜ್ಯಗಳ ಮುಖ್ಯಮಂತ್ರಿಗಳ ಪ್ರಧಾನ ಸಲಹೆಗಾರರಾದ ಡಾ.ಎಂ.ಬಿ. ಗುರುರಾಜ್, ಕ್ರಿಯಾಶೀಲ ಚಟುವಟಿಕೆಗಳಿಂದ ವಿದ್ಯಾರ್ಥಿಗಳು ಸ್ವಾವಲಂಬಿಯಾಗಬೇಕೇ ಹೊರತು ಎಂದೂ ಪರಾವಲಂಬಿಯಾಗಬಾರದೆಂದು ಕಿವಿಮಾತು ಹೇಳಿದರು.

ಉದ್ಯೋಗ ದಕ್ಕಿಸಿಕೊಳ್ಳುವ ನಿಟ್ಟಿನಲ್ಲಿ ಹೇಗೆ ಸಂದರ್ಶನಗಳನ್ನು ಆತ್ಮವಿಶ್ವಾಸದಿಂದ ಎದುರಿಸಬೇಕು. ಅಗತ್ಯವಾದ ಆಲೋಚನೆಗಳು ಹಾಗೂ ಕೌಶಲ್ಯಗಳೊಂದಿಗೆ ಹೊಸ ಸವಾಲುಗಳನ್ನು ಹೇಗೆ ಸ್ವೀಕರಿಸಿ ಯಶಸ್ಸು ಹೊಂದಬೇಕೆಂದು ಹತ್ತು ಹಲವು ಉದಾಹರಣೆಗಳ ಮುಖೇನಾ ತಿಳಿಸಿಕೊಟ್ಟರು. ಯಾವುದೇ ವಲಯವನ್ನು ಪ್ರವೇಶಿಸಿದರು ನೀವು ನೀವಾಗಿರಿ, ಸ್ವಯಂ ಕೇಂದ್ರಿತರಾಗಿರಿ ಮತ್ತು ವಿಷಯದ ಕೇಂದ್ರಿತವಾಗಿರಿ ಎಂದರಲ್ಲದೇ ವರ್ತಮಾನದ ಕಾರ್ಪೋರೇಟ್ ಜಗತ್ತಿನಲ್ಲಿ ದಕ್ಷ ಉದ್ಯೋಗಿಯಾಗಲು ಪ್ರತಿಯೊಬ್ಬ ಯುವ ಆಕಾಂಕ್ಷಿಗಳು ಅತ್ಯುತ್ತಮವಾದ ಭಾಷಾ ಕೌಶಲ್ಯ ಬಳಕೆಯ ಬಗ್ಗೆ ಒತ್ತಿ ಹೇಳಿದರು. ಪ್ರಸ್ತುತ ಇರುವ ಕಂಪನಿಗಳಿಗೆ ಸಂಬಂಧಿಸಿದಂತೆ ವಿದ್ಯಾರ್ಥಿಗಳಿಗೆ ಅಗತ್ಯ ಮಾಹಿತಿ ನೀಡಲು ಕಾಲೇಜಿಗೆ ಉದ್ಯಮ ಮಾಹಿತಿ ಕೇಂದ್ರವನ್ನು ಹೊಂದುವಂತೆ ಸಲಹೆ ನೀಡಿದರು. 'ನನ್ನ ಸಾಧನೆಯೇ ನನ್ನ ಗುರುತಿನ ಚೀಟಿ' ಸಂದೇಶವನ್ನು ವಿದ್ಯಾರ್ಥಿಗಳಿಗೆ ನೀಡಿದರು. ಕ್ರಿಯಾಶೀಲ ಯುವ ಶಕ್ತಿಯೇ ದೇಶದ ಭವಿಷ್ಯವೆಂದರು.

ಕಾರ್ಯಾಗಾರದ ಅಧ್ಯಕ್ಷತೆಯನ್ನು ಕಾಲೇಜಿನ ಪ್ರಾಂಶುಪಾಲ ಡಾ.ಎಸ್. ಮರೀಗೌಡ ವಹಿಸಿದ್ದು, ಮುಂಬರುವ ಸವಾಲುಗಳನ್ನು ಎದುರಿಸಲು ಉಜ್ವಲ ಆತ್ಮವಿಶ್ವಾಸದಿಂದ ಹೊರಹೊಮ್ಮಲು ವಿದ್ಯಾರ್ಥಿಗಳು ಇಂತಹ ಒಳ್ಳೆಯ ಅವಕಾಶಗಳನ್ನು ಬಳಸಿಕೊಳ್ಳುವಂತೆ ತಿಳಿಹೇಳಿದರು. ಸಂಯೋಜಕ ಪ್ರೊ.ಎಂ.ಹರ್ಷಿತಾ ಸ್ವಾಗತಿಸಿ, ಪ್ರೊ.ಎಸ್. ಶಶಿಧರ್ ಉಪಸ್ಥಿತರಿದ್ದು, ಬೋಧಕ ಮತ್ತು ಬೋಧಕೇತರ ವರ್ಗ, ಅಂತಿಮ ವರ್ಷದ ಪದವಿ ವಿದ್ಯಾರ್ಥಿಗಳು ಕಾರ್ಯಾಗಾರದಲ್ಲಿ ಪಾಲ್ಗೊಂಡಿದ್ದರು.

2 ಕೋಟಿ ನಗದು ವಶ

ಬಿಜೆಪಿ ಕಾರ್ಯದರ್ಶಿ ವಿರುದ್ಧ ಎಫ್‌ಐಆರ್

ಬೆಂಗಳೂರು, ಏ.21– ಚಾಮರಾಜಪೇಟೆ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ 2 ಕೋಟಿ ನಗದು ಸಾಗಿಸುತ್ತಿದ್ದುದನ್ನು ಚುನಾವಣಾ ಅಕ್ರಮ ತಡೆ ತಂಡ ಪತ್ತೆ ಹಚ್ಚಿದ್ದು, ಈ ಸಂಬಂಧ ಬಿಜೆಪಿ ರಾಜ್ಯ ಘಟಕದ ಕಾರ್ಯಾಲಯ ಕಾರ್ಯದರ್ಶಿ ಲೋಕೇಶ್ ಅಂಬೆಕಲ್ಲು ಮತ್ತು ಇತರ ಇಬ್ಬರ ವಿರುದ್ಧ ಕಾಟನ್‌ಪೇಟೆ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಿಸಲಾಗಿದೆ.

ಕಾಟನ್‌ಪೇಟೆ ಪೊಲೀಸ್ ಠಾಣೆ ವ್ಯಾಪ್ತಿಯ ತನಿಖಾ ಠಾಣೆಯಲ್ಲಿ ಶನಿವಾರ ಸಂಜೆ ಕಾರು ತಪಾಸಣೆ ನಡೆಸಿದಾಗ 2 ಕೋಟಿ ನಗದು ಪತ್ತೆಯಾಗಿತ್ತು. ಅದು ಬಿಜೆಪಿ ರಾಜ್ಯ ಘಟಕದ ಕಚೇರಿಗೆ ಸೇರಿದ್ದು ಎಂಬುದಾಗಿ ಕಾರಿನಲ್ಲಿದ್ದವರು ದಾಖಲೆ ಒದಗಿಸಿದ್ದರು. ಬಳಿಕ ಚುನಾವಣಾಧಿಕಾರಿಗಳು ಆದಾಯ ತೆರಿಗೆ ಇಲಾಖೆ ಅಧಿಕಾರಿಗಳ ವಶಕ್ಕೆ ನಗದನ್ನು ನೀಡಿ, ಸೂಕ್ತ ಕ್ರಮ ಜರುಗಿಸುವಂತೆ ಕೋರಿದ್ದರು.

ಹಣವನ್ನು ಬ್ಯಾಂಕ್‌ನಿಂದ ನಗದೀಕರಿಸಿರುವ ದಾಖಲೆಗಳಿರುವ ಕಾರಣದಿಂದ ಆದಾಯ ತೆರಿಗೆ (ಐ.ಟಿ) ಕಾಯ್ದೆಯ ಉಲ್ಲಂಘನೆ ಆಗಿಲ್ಲ ಎಂದು ಐ.ಟಿ ಅಧಿಕಾರಿಗಳು ಚುನಾವಣಾಧಿಕಾರಿಗಳಿಗೆ ತಿಳಿಸಿದ್ದರು. ನಗದನ್ನೂ ವಾಪಸ್ ಚುನಾವಣಾಧಿಕಾರಿಗಳ ವಶಕ್ಕೆ ಮರಳಿಸಿದ್ದರು. ಕೇಂದ್ರ ಚುನಾವಣಾ ಆಯೋಗದ ನಿರ್ದೇಶನಗಳನ್ನು ಉಲ್ಲಂಘಿಸಿ ನಗದು ಸಾಗಿಸುತ್ತಿದ್ದ ಆರೋಪದ ಮೇಲೆ ನ್ಯಾಯಾಲಯದ ಅನುಮತಿ ಪಡೆದು ಎಫ್‌ಐಆರ್ ದಾಖಲಿಸಲಾಗಿದೆ.



ನಗದನ್ನು ಬ್ಯಾಂಕ್‌ನಿಂದ ಚೆಕ್ ಮೂಲಕ ಡ್ರಾ ಮಾಡಿದ್ದು, ಬಿಜೆಪಿ ಕಾರ್ಯಕರ್ತರಿಗೆ ನೀಡಲು ಕಳುಹಿಸಲಾಗುತ್ತಿದೆ ಎಂದು ಉಲ್ಲೇಖಿಸಿದ್ದ ಬಿಜೆಪಿ ರಾಜ್ಯ ಘಟಕದ ಕಾರ್ಯಾಲಯದ ಪತ್ರ ಕಾರಿನಲ್ಲಿತ್ತು. ಈ ಕುರಿತು ಐ.ಟಿ ಇಲಾಖೆ ಅಧಿಕಾರಿಗಳು ವಿಚಾರಣೆ ನಡೆಸಿದ್ದು, ಆದಾಯ ತೆರಿಗೆ ವಂಚನೆ ಆಗಿಲ್ಲ ಎಂಬುದು ಕಂಡುಬಂದಿತ್ತು ಎಂದು ರಾಜ್ಯದ ಮುಖ್ಯ ಚುನಾವಣಾಧಿಕಾರಿ ಮನೋಜ್ ಕುಮಾರ್ ಮೀನಾ ತಿಳಿಸಿದ್ದಾರೆ.

ಚುನಾವಣೆಯಲ್ಲಿ ಪಕ್ಷದ ಪದಾಧಿಕಾರಿಗಳು ಅಥವಾ ಅಭ್ಯರ್ಥಿಗಳ ಏಜೆಂಟರ ವೆಚ್ಚಕ್ಕೆ 10,000ಕ್ಕಿಂತ ಹೆಚ್ಚು ಮೊತ್ತವನ್ನು ನಗದು ರೂಪದಲ್ಲಿ ನೀಡುವಂತಿಲ್ಲ ಎಂಬುದು ಕೇಂದ್ರ ಚುನಾವಣಾ ಆಯೋಗದ ನಿರ್ದೇಶನದಲ್ಲಿದೆ. ಮಿತಿಗಿಂತ ಹೆಚ್ಚು ಮೊತ್ತವನ್ನು ಚೆಕ್ ಅಥವಾ ಆನ್‌ಲೈನ್ ಮೂಲಕ ಪಾವತಿಸುವುದು ಕಡ್ಡಾಯ. ಆಯೋಗದ ನಿರ್ದೇಶನ ಉಲ್ಲಂಘಿಸಿರುವುದಲ್ಲದೇ, ಹಣ ಪಡೆಯುವವರ ಪಟ್ಟಿಯನ್ನೂ ಒದಗಿಸಿಲ್ಲ. ನಗದನ್ನು ಚುನಾವಣಾ ಅಕ್ರಮಕ್ಕೆ ಬಳಸುವ ಶಂಕೆಯ ಮೇಲೆ ಪ್ರಜಾಪ್ರತಿನಿಧಿ ಕಾಯ್ದೆ ಹಾಗೂ ಭಾರತೀಯ ದಂಡಸಂಹಿತೆ ಅಡಿಯಲ್ಲಿ ಎಫ್‌ಐಆರ್ ದಾಖಲಿಸಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

ಎಫ್‌ಐಆರ್ ದಾಖಲಿಸಲು ಅನುಮತಿ ಕೋರಿ ಶನಿವಾರವೇ ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸಲಾಗಿತ್ತು. ಭಾನುವಾರ ಬೆಳಿಗ್ಗೆ ನ್ಯಾಯಾಲಯದ ಅನುಮತಿ ಲಭಿಸಿತ್ತು. ಲೋಕೇಶ್ ಅಂಬೆಕಲ್ಲು, ವೆಂಕಟೇಶ್ ಪ್ರಸಾದ್ ಮತ್ತು ಗಂಗಾಧರ್ ಎಂಬುವವರ ವಿರುದ್ಧ ಎಫ್‌ಐಆರ್ ದಾಖಲು ಮಾಡಲಾಗಿದೆ ಎಂದು ತಿಳಿಸಿದ್ದಾರೆ.

ಕೊಡವ ಅಸ್ತಿತ್ವ, ಅಸ್ಮಿತೆಗೆ ಶ್ರಮಿಸಬೇಕು

ಕೊಡವ ನ್ಯಾಷನಲ್ ಕೌನ್ಸಿಲ್ ಅಧ್ಯಕ್ಷ ಎನ್.ಯು.ನಾಚಪ್ಪ ಅಭಿಮತ



ಮಡಿಕೇರಿಯಲ್ಲಿ ನಡೆದ ಸಿಎನ್‌ಸಿ ವಾರ್ಷಿಕ ಸಾಮಾನ್ಯ ಸಭೆಯಲ್ಲಿ ಕೊಡವ ನ್ಯಾಷನಲ್ ಕೌನ್ಸಿಲ್ ಅಧ್ಯಕ್ಷ ಎನ್.ಯು.ನಾಚಪ್ಪ ಮಾತನಾಡಿದರು.

ಮಡಿಕೇರಿ, ಏ.21–ರಾಜಕೀಯ ಯಜಮಾನಿಗೆ ಕೊಡವರು ಉಳಿಗಮಾನ್ಯ ನಿಷ್ಠೆ ವ್ಯಕ್ತಪಡಿಸುವುದನ್ನು ನಿಲ್ಲಿಸಬೇಕು ಎಂದು ಕೊಡವ ನ್ಯಾಷನಲ್ ಕೌನ್ಸಿಲ್ ಅಧ್ಯಕ್ಷ ಎನ್.ಯು.ನಾಚಪ್ಪ ಮನವಿ ಮಾಡಿದರು.

ನಗರದಲ್ಲಿ ನಡೆದ ಸಿಎನ್‌ಸಿ ವಾರ್ಷಿಕ ಸಾಮಾನ್ಯ ಸಭೆಯಲ್ಲಿ ನಂದಿನೆರವಂಡ ಒಕ್ಕದ ವತಿಯಿಂದ ಸನ್ಮಾನ ಸ್ವೀಕರಿಸಿ ಮಾತನಾಡಿದ ಅವರು, ಸಂವಿಧಾನ ಅದರ ನಾಗರಿಕರನ್ನು ಆಳುವ ಅತ್ಯುನ್ನತ ದಾಖಲೆಯಾಗಿದೆ. ಈ ಘನವೆತ್ತ ಸಂವಿಧಾನದಡಿಯಲ್ಲಿ ಸೂಕ್ಷ್ಮಾತಿಸೂಕ್ಷ್ಮ ಕೊಡವರ ಹೆಗ್ಗುರುತು ರಕ್ಷಿಸುವ ಸಲುವಾಗಿ ಕೊಡವ ಲ್ಯಾಂಡ್ ಸಾಧಿಸುವ ಮೂಲಕ ಅಸ್ತಿತ್ವ ಮತ್ತು ಅಸ್ಮಿತೆಗಾಗಿ ಶ್ರಮಿಸೋಣ ಎಂದರು.

ನಾವು ನಮ್ಮ ಇತಿಹಾಸವನ್ನು ತಿಳಿದುಕೊಳ್ಳಬೇಕು, ಆಗ ಮಾತ್ರ ನಾವು ಹೊಸ ಇತಿಹಾಸವನ್ನು ರಚಿಸಬಹುದು. ಇತಿಹಾಸ ಗೊತ್ತಿಲ್ಲದವರು ಇತಿಹಾಸ ಸೃಷ್ಟಿಸಲು ಸಾಧ್ಯವೇ ಇಲ್ಲ. ಸಿಎನ್‌ಸಿ ಕೊಡವ ಲ್ಯಾಂಡ್ ಭೌಗೋಳಿಕ-ರಾಜಕೀಯ ಸ್ವಾಯತ್ತತೆ, ಸ್ವಯಂ ಆಳ್ವಿಕೆ, ಆಂತರಿಕ ರಾಜಕೀಯ ಸ್ವನಿರ್ಣಯದ ಹಕ್ಕುಗಳು, ಎಸ್‌ಟಿ ಟ್ಯಾಗ್ ಮತ್ತು ಇತರ ಕಾನೂನು ಬದ್ಧ ಬೇಡಿಕೆಗಳನ್ನು ಸಾಧಿಸಲು ನಮ್ಮ ಸಮಗ್ರ ಸಬಲೀಕರಣಕ್ಕಾಗಿ ಸಂವಿಧಾನದಡಿ ಶಾಂತಿಯುತವಾಗಿ ಮತ್ತು ಪಟ್ಟುಬಿಡದೆ ಶ್ರಮಿಸಲಾಗುತ್ತಿದೆ. ಇದೊಂದು ತಪಸ್ಸು ಎಂದು ತಿಳಿಸಿದರು.

ಭಾರತ ಅತಿದೊಡ್ಡ ಜನಾಂಗೀಯ ವೈವಿಧ್ಯತೆಯನ್ನು ಹೊಂದಿದೆ. ಹಾಗೆಯೇ ವಿಶ್ವದ ಅತಿದೊಡ್ಡ ಪ್ರಜಾಪ್ರಭುತ್ವವಾಗಿದೆ. ಇಲ್ಲಿ ಯಾರೂ ಯಜಮಾನರಲ್ಲ ಮತ್ತು ಯಾರೂ ಗುಲಾಮರಲ್ಲ. ರಾಜಕೀಯ ಯಜಮಾನರಿಗೆ ಉಳಿಗಮಾನ್ಯ ನಿಷ್ಠೆಯನ್ನು ಕೊಡವರು ವ್ಯಕ್ತಪಡಿಸುವುದನ್ನು ನಿಲ್ಲಿಸಬೇಕು. ಇದು ನಮ್ಮನ್ನು ಭಕ್ತಾಸನ ಮತ್ತು ಗುಲಾಮಗಿರಿಗೆ ಕೊಂಡೊಯ್ಯುತ್ತದೆ. ನಮ್ಮ ಉಳಿಗಮಾನ್ಯ ನಿಷ್ಠೆಗಾಗಿ ಅಮೂಲ್ಯ ಭಾರಿ ಬೆಲೆ ತೆರಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಡಾ.ಸುಬ್ರಮಣಿಯನ್ ಸ್ವಾಮಿ ಅವರು ನಮ್ಮೊಂದಿಗಿರುವುದು ನಮ್ಮ ಅದೃಷ್ಟ. ವಿಶ್ವ ಪ್ರಸಿದ್ಧ ಅರ್ಥಶಾಸ್ತ್ರಜ್ಞ ಮತ್ತು ಹಾರ್ವರ್ಡ್ ಪ್ರಶಿಕ್ಷಣವಂತ ವಿದ್ವಾಂಸರಾಗಿರುವ ಅವರು ನಮ್ಮ ಬೇಡಿಕೆಗಳನ್ನು ಸಾಧಿಸಲು ಅಮೂಲ್ಯವಾದ ಸಹಾಯವನ್ನು ನೀಡುತ್ತಿದ್ದಾರೆ. ಕೊಡವರು ಅವರಿಗೆ ಋಣಿಯಾಗಿದ್ದಾರೆ. ಕೊಡವ ಕುಲದ ಪ್ರತಿಯೊಬ್ಬ ಸದಸ್ಯರು ಈ ಪವಿತ್ರ ಧ್ಯೇಯಕ್ಕೆ ತಮ್ಮ ಒಗ್ಗಟ್ಟು ಪ್ರದರ್ಶಿಸಬೇಕು ಎಂದು ಮನವಿ ಮಾಡಿದರು.

ನಂದಿನೆರವಂಡ ಒಕ್ಕದ ಅಧ್ಯಕ್ಷ ದಿನೇಶ್ ಮಾತನಾಡಿ, ಕೊಡವ ಲ್ಯಾಂಡ್ ಭೌಗೋಳಿಕ-ರಾಜಕೀಯ ಸ್ವಾಯತ್ತತೆ ಮತ್ತು ನಮ್ಮ ಅಸ್ತಿತ್ವಕ್ಕೆ ಸಾಂವಿಧಾನಿಕ ಖಾತರಿಯನ್ನು ಸಾಧಿಸಲು ನಾಚಪ್ಪ ಅವರ ನಿರಂತರ ಪ್ರಯತ್ನಕ್ಕೆ ಕುಟುಂಬದ ಪರವಾಗಿ ಶ್ಲಾಘಿಸುವುದಾಗಿ ತಿಳಿಸಿದರು.

ನಾಚಪ್ಪ ಅವರು ನಿಸ್ವಾರ್ಥವಾಗಿ ಹೋರಾಡಿ ನಮ್ಮ ಇಡೀ ಕೊಡವ ಸಮುದಾಯದ ಹಕ್ಕುಗಳನ್ನು ಎತ್ತಿ ತೋರಿಸಿದ್ದಾರೆ. ಕೊಡವರ ವೇದನೆ–ಸಂವೇದನೆ, ಆಕಾಂಕ್ಷೆಗಳು ಮತ್ತು ಹಕ್ಕೊತ್ತಾಯಗಳನ್ನು ಸಮುದಾಯಕಾರಿಯಾಗಿ ಅತ್ಯುನ್ನತ ಸಾಂವಿಧಾನಿಕ ಪ್ರಾಧಿಕಾರ ಮತ್ತು ವಿಶ್ವಸಂಸ್ಥೆಯ ಮುಂದೆ ಇರಿಸಿದ್ದಾರೆ. ಇದು ಅಪ್ರತಿಮ ಅರ್ಪಣೆಯಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿರು.

ಈ ಸಂದರ್ಭ ಕುಟುಂಬ ಸದಸ್ಯರಾದ ಪಾಲಿ ಗಣೇಶ್, ಸೀತಾ ಸೋಮಯ್ಯ, ಶಾಂತಿ ಗಣಪತಿ, ಹಿರಿಯರಾದ ಅಪ್ಪಯ್ಯ, ಗಣೇಶ್ ಚೀಯಣ್ಣ, ರವಿ ಬಸಪ್ಪ ರವಿ ಕುಟ್ಟಪ್ಪ ಅಯ್ಯಣ್ಣ, ಮಂದಪ್ಪ ಮಧು, ನಂದಾ, ಬಿದ್ದಪ್ಪ ಜಗದೀಶ್, ನಿತಿನ್, ಕಾಶಿ, ಸುರೇಶ್, ಅಚ್ಚಯ್ಯ, ಅಪ್ಪಚ್ಚು, ರಮೇಶ್, ಸೋಮಣ್ಣ, ಹಿರಿಯ, ಕಿರಿಯ ಸದಸ್ಯರು ಉಪಸ್ಥಿತರಿದ್ದರು.

ಮಾನವ-ವನ್ಯಜೀವಿ ಸಂಘರ್ಷ ತಡೆಯಲು ವಿಫಲ ಹಿನ್ನೆಲೆ; ಅಸಮಾಧಾನ

ಲೋಕಸಭಾ ಚುನಾವಣೆಯಲ್ಲಿ ಸಂಕೇತ್ ಪೂವಯ್ಯ ತಟಸ್ಥ

ಮಡಿಕೇರಿ, ಏ.21–ಮಾನವ ಮತ್ತು ವನ್ಯಜೀವಿ ಸಂಘರ್ಷ ತಡೆಯಲು ನಿರಂತರವಾಗಿ ಹೋರಾಟ ನಡೆಸುತ್ತಿರುವ ರಾಜ್ಯ ಕಾಂಗ್ರೆಸ್ ವಕ್ತಾರ ಸಂಕೇತ್ ಪೂವಯ್ಯ, ಇದಕ್ಕೆ ಶಾಶ್ವತ ಪರಿಹಾರ ಕಂಡುಹಿಡಿಯುವಲ್ಲಿ ಆಡಳಿತಾರೂಢ ಕಾಂಗ್ರೆಸ್ ಸೇರಿದಂತೆ ರಾಜಕೀಯ ಪಕ್ಷಗಳು ವಿಫಲವಾಗಿವೆ ಎಂಬ ಕಾರಣದಿಂದ ಪ್ರಸಕ್ತ ಲೋಕಸಭಾ ಚುನಾವಣೆಯಲ್ಲಿ ತಟಸ್ಥವಾಗಿರಲು ನಿರ್ಧರಿಸಿದ್ದಾರೆ ಎಂದು ತಿಳಿದುಬಂದಿದೆ.

ಕಳೆದ 25 ವರ್ಷಗಳಿಂದ ಜನತಾ ಪರಿವಾರದಲ್ಲಿ ಗುರುತಿಸಿಕೊಂಡು ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಅವರ ಆಪ್ತರಾಗಿದ್ದ ಸಂಕೇತ್ ಪೂವಯ್ಯ, ಮಾನವ ಮತ್ತು ವನ್ಯಜೀವಿ ಸಂಘರ್ಷಕ್ಕೆ ಶಾಶ್ವತ ಪರಿಹಾರ ಕಂಡುಹಿಡಿಯುವ ಸಲುವಾಗಿ ಜೆಡಿಎಸ್ ತೊರೆದು ಕಾಂಗ್ರೆಸ್ ಸೇರಿದ್ದರು.

ರಾಜ್ಯದಲ್ಲಿ ನಡೆಯುತ್ತಿರುವ ಈ ಸಂಘರ್ಷಕ್ಕೆ ಶಾಶ್ವತ ಪರಿಹಾರ ಕಂಡುಹಿಡಿಯುವ ಸಲುವಾಗಿ ಸಮಿತಿಯೊಂದನ್ನು ರಚಿಸುವಂತೆ ತಾವು ಬೆಂಬಲಿಸಿದ್ದ ಶಾಸಕ ಎ.ಎಸ್.ಪೊನ್ನಣ್ಣ ಸೇರಿದಂತೆ ಸರ್ಕಾರದ ಮುಂದೆ ಬೇಡಿಕೆ ಮುಂದಿಟ್ಟಿದ್ದರು. ಆದರೆ ಸರ್ಕಾರ ಅಧಿಕಾರಕ್ಕೆ ಬಂದು 10 ತಿಂಗಳು ಕಳೆದರೂ ಈ ವಿಚಾರವಾಗಿ ಯಾವುದೇ ಪ್ರಸ್ತಾಪವಾಗದೇ ಇದ್ದುದರಿಂದ ಸಂಕೇತ್ ಪೂವಯ್ಯ ಅಸಮಾಧಾನಗೊಂಡಿದ್ದಾರೆ ಎಂದು ತಿಳಿದು ಬಂದಿದೆ.

ಈ ವಿಚಾರದಲ್ಲಿ ಎಲ್ಲಾ ರಾಜಕೀಯ ಪಕ್ಷಗಳು ದಿವ್ಯಮೌನ ವಹಿಸಿರುವ ಕಾರಣ ಸಂಕೇತ್ ಪೂವಯ್ಯ ಬೇಸರಗೊಂಡು ತಟಸ್ಥರಾಗಿರಲು ತೀರ್ಮಾನಿಸಿದ್ದಾರೆ ಎಂದು ಹೇಳಲಾಗಿದ್ದು, ಪ್ರಸ್ತುತ ಚುನಾವಣೆಯಲ್ಲಿ ಎಲ್ಲೂ ಪ್ರಚಾರದಲ್ಲಿ ಕಾಣಿಸಿಕೊಳ್ಳದೆ ಮೌನ ವಹಿಸಿದ್ದಾರೆ. ಈ ವಿಚಾರ ತಿಳಿದ ಬಿಜೆಪಿ ಮತ್ತು ಜೆಡಿಎಸ್ ನಾಯಕರು ಅವರನ್ನು ಸಂಪರ್ಕಿಸಿ ಮಾತುಕತೆ ನಡೆಸಿ ತಮ್ಮ ಪಕ್ಷವನ್ನು ಬೆಂಬಲಿಸುವಂತೆ ಕೋರಿರುವುದು ಈಗ ಗುಟ್ಟಾಗಿ ಉಳಿದಿಲ್ಲ.

ಇದೇ ವಿಚಾರ ಈಗ ರಾಜಕೀಯ ವಲಯದಲ್ಲಿ ಸಂಕೇತ್ ಪೂವಯ್ಯ ಅವರು ಬಿಜೆಪಿ ಸೇರುತ್ತಾರೆ ಎಂಬ ವದಂತಿಗಳು ಹರಡಿವೆ. ಜೆಡಿಎಸ್‌ನಿಂದಲೂ ಅವರಿಗೆ ಆಹ್ವಾನ ಬಂದಿದೆ ಎಂಬ ಮಾತುಗಳು ಕೇಳಿ ಬರುತ್ತಿವೆ. ಎಲ್ಲಾ ರಾಜಕೀಯ ಪಕ್ಷಗಳ ನಾಯಕರ ಬಾಂಧವ್ಯ ಹೊಂದಿರುವ ಸಂಕೇತ್ ಪೂವಯ್ಯ ಯಾವುದೇ ಗುಟ್ಟು ಬಿಟ್ಟುಕೊಡದೆ ಮೌನ ವಹಿಸಿದ್ದಾರೆ.

ಕಳೆದ 10 ತಿಂಗಳುಗಳಲ್ಲಿ ಕೊಡಗು ಜಿಲ್ಲೆಯಲ್ಲಿ 35ಕ್ಕೂ ಹೆಚ್ಚು ವನ್ಯಜೀವಿ ದಾಳಿಗಳು ನಡೆದಿದ್ದು, 9 ಮಂದಿ ಸಾವನ್ನಪ್ಪಿ, 17 ಮಂದಿ ಶಾಶ್ವತ ಅಂಗವಿಕಲರಾಗಿದ್ದು, ಇದನ್ನು ತಡೆಯಲು ಶಾಶ್ವತ ಪರಿಹಾರ ಕಂಡುಹಿಡಿಯಲು ಸಮಿತಿಯೊಂದನ್ನು ರಚಿಸಿ ಎಂದು ಸರ್ಕಾರಕ್ಕೆ ಮನವಿ ಮಾಡಿದ್ದರೂ ಯಾವುದೇ ಪ್ರಯೋಜನವಾಗದೆ ಇರುವುದು ತಮಗೆ ನೋವನ್ನುಂಟು ಮಾಡಿದೆ ಎಂದು ಸಂಕೇತ್ ಪೂವಯ್ಯ ಅವರು ತಮ್ಮ ಆಪ್ತರ ಬಳಿ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಈ ಸಂಬಂಧ ಪ್ರತಿಕ್ರಿಯೆಗಾಗಿ ಅವರನ್ನು ಸಂಪರ್ಕಿಸಲು 'ಮೈಸೂರು ಮಿತ್ರ' ಸಂಪರ್ಕಿಸಿದಾಗ ಪ್ರತಿಕ್ರಿಯೆ ನೀಡಲು ನಿರಾಕರಿಸಿ, ನನಗೆ ರಾಜಕೀಯ ಪಕ್ಷಗಳ ಮೇಲೆ ಅಸಮಾಧಾನವಿದೆ ಎಂದಷ್ಟೇ ಹೇಳಿದರು.

ಜೆಡಿಎಸ್ ರಾಷ್ಟ್ರೀಯ ವಕ್ತಾರರಾಗುವರೇ ಸಂಕೇತ್ ಪೂವಯ್ಯ



ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ ಮತ್ತು ಜೆಡಿಎಸ್ ಮೈತ್ರಿ ಮಾಡಿಕೊಂಡು ಎನ್‌ಡಿಎ ಒಕ್ಕೂಟದಲ್ಲಿ ಗುರುತಿಸಿಕೊಂಡಿದ್ದು, ತಮ್ಮ ಪಕ್ಷದ ಪರವಾಗಿ ಸಮರ್ಪಕವಾಗಿ ಮಾತನಾಡಬಲ್ಲ ರಾಷ್ಟ್ರೀಯ ವಕ್ತಾರರೊಬ್ಬರ ಹುಡುಕಾಟದಲ್ಲಿ ತೊಡಗಿರುವ ಜೆಡಿಎಸ್ ನಾಯಕರು ಈ ಸಂಬಂಧ ಸಂಕೇತ್ ಪೂವಯ್ಯ ಅವರ ಮೇಲೆ ಒಲವು ತೋರಿ ಮಾತುಕತೆ ನಡೆಸಿದ್ದಾರೆ ಎಂದು ತಿಳಿದುಬಂದಿದೆ.

ಕಾಂಗ್ರೆಸ್ ಪರ ಸಿಐಟಿಯು ಪ್ರಚಾರ



ಸಿದ್ದಾಪುರದಲ್ಲಿ ನಡೆದ ಕಾಂಗ್ರೆಸ್ ಪರ ಬಹಿರಂಗ ಪ್ರಚಾರ ಸಭೆಯಲ್ಲಿ ಸಿಐಟಿಯು ಜಿಲ್ಲಾಧ್ಯಕ್ಷ ಪಿ.ಆರ್.ಭರತ್ ಮಾತನಾಡಿದರು.

ಸಿದ್ದಾಪುರ, ಏ.21– ಹತ್ತು ವರ್ಷ ಜನವಿರೋಧಿ ನೀತಿ ಅನುಸರಿಸಿ ಬಡವರ್ಗವನ್ನು ಸಂಕಷ್ಟಕ್ಕೆ ಸಿಲುಕಿಸಿರುವ ಬಿಜೆಪಿಯನ್ನು ಅಧಿಕಾರದಿಂದ ಹೊರಗಿಡಲು ಸಿಐಟಿಯು ಕಾರ್ಮಿಕ ಸಂಘಟನೆ ಕಾಂಗ್ರೆಸ್ ಬೆಂಬಲಿಸುತ್ತಿದ್ದು, ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಮತದಾರರು ಕಾಂಗ್ರೆಸ್ ಅಭ್ಯರ್ಥಿ ಎಂ.ಲಕ್ಷ್ಮಣ್‌ಗೆ ಮತ ನೀಡಬೇಕು ಎಂದು ಸಿಐಟಿಯು ಜಿಲ್ಲಾಧ್ಯಕ್ಷ ಪಿ.ಆರ್.ಭರತ್ ಮನವಿ ಮಾಡಿದರು.

ಪಟ್ಟಣದಲ್ಲಿ ಸಿಐಟಿಯು ಕಾರ್ಮಿಕ ಸಂಘಟನೆ ವತಿಯಿಂದ ನಡೆದ ಕಾಂಗ್ರೆಸ್ ಪರ ಬಹಿರಂಗ ಪ್ರಚಾರ ಸಭೆಯಲ್ಲಿ ಮಾತನಾಡಿದ ಅವರು, ದೇಶದಲ್ಲಿ ಬಡವರು, ಕಾರ್ಮಿಕರು, ಕೃಷಿಕರು ಹಾಗೂ ಜನಸಾಮಾನ್ಯರು ಬೆಲೆ ಏರಿಕೆಯಿಂದ ತತ್ತರಿಸಿ ಹೋಗಿದ್ದಾರೆ. ಕಾರ್ಮಿಕರಿಗೆ ನೀಡಲಾಗುತ್ತಿರುವ ಕನಿಷ್ಠ ವೇತನವನ್ನು ಏರಿಕೆ ಮಾಡಿ ಎಂದು ನಾವು ಹೋರಾಟ ನಡೆಸುತ್ತಿದ್ದರೆ, ಕೇಂದ್ರ ಸರ್ಕಾರ ಈಗಿರುವ ಅಲ್ಪ ಮೊತ್ತದ ವೇತನವನ್ನೇ ಕಡಿಮೆ ಮಾಡುವ ಚಿಂತನೆ ನಡೆಸಿದೆ ಎಂದು ಆರೋಪಿಸಿದರು.

ಕಾರ್ಮಿಕ ಕಾನೂನಿಗೆ ತಿದ್ದುಪಡಿ ತರುವ ಮೂಲಕ ಕಾರ್ಮಿಕರಿಗೆ ಅನ್ಯಾಯ ಮಾಡಲಾಗಿದೆ. ದೇಶದಲ್ಲಿ ನಿರುದ್ಯೋಗದ ಸಮಸ್ಯೆ ಕಾಡುತ್ತಿದ್ದು, ಕಡುಬಡವರ ಹಸಿವಿನ ಪ್ರಶ್ನೆ, ಒಕ್ಕೂಟ ವ್ಯವಸ್ಥೆಯ ರಕ್ಷಣೆ, ರೈತರ ಆತ್ಮಹತ್ಯೆ, ವನ್ಯಜೀವಿಗಳ ದಾಳಿ. ಈ ಎಲ್ಲಾ ಸಮಸ್ಯೆಗಳಿಗೆ ಇದುವರೆಗೆ ಪರಿಹಾರ ದೊರೆತ್ತಿಲ್ಲ. ರಾಷ್ಟ್ರದ ಆರ್ಥಿಕ ಶಕ್ತಿಗೆ ಪೂರಕವಾಗಿದ್ದ ಸರ್ಕಾರಿ ಸಂಸ್ಥೆಗಳನ್ನು ಖಾಸಗೀಕರಣಗೊಳಿಸಿ ಬಂಡವಾಳ ಶಾಹಿಗಳನ್ನು ರಕ್ಷಿಸುವ ಪ್ರಯತ್ನಗಳನ್ನಷ್ಟೇ ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರ ಮಾಡಿದೆ ಎಂದರು.

ಸಂಸದ ಪ್ರತಾಪ್ ಸಿಂಹ ಕೊಡಗಿನ ಬಗ್ಗೆ ಯಾವುದೇ ಕಾಳಜಿ ತೋರಿಲ್ಲ. ವನ್ಯಜೀವಿಗಳ ದಾಳಿಯನ್ನು ನಿಯಂತ್ರಿಸಿಲ್ಲ. ಡಾ. ಕಸ್ತೂರಿ ರಂಗನ್ ವರದಿಯ ಗೊಂದಲವನ್ನು ನಿವಾರಿಸಿಲ್ಲ. ರೈಲು ಮಾರ್ಗ ತರಲಿಲ್ಲ ಮತ್ತು ಮೂಲ ಸಮಸ್ಯೆಗಳಿಗೆ ಸ್ಪಂದಿಸಿಲ್ಲವೆಂದು ಟೀಕಿಸಿದರು. ಸಭೆಯಲ್ಲಿ ಸಿಐಟಿಯು ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎ.ಸಿ.ಸಾಬು, ಜಿಲ್ಲಾ ಖಜಾಂಚಿ ಎನ್.ಡಿ.ಕುಟ್ಟಪ್ಪನ್, ಉಪ ಕಾರ್ಯದರ್ಶಿಗಳಾದ ಶಾಜಿ ರಮೇಶ್, ಕೆ.ಕೆ.ಹರಿದಾಸ್, ಪ್ರಾಂತ ರೈತ ಸಂಘದ ರಾಜ್ಯ ಕಾರ್ಯದರ್ಶಿ ಎನ್.ಎಲ್.ಭರತ್ ರಾಜ್ ಮಂಡ್ಯ ಇತರರು ಪಾಲ್ಗೊಂಡಿದ್ದರು.

ಕಾರು ಡಿಕ್ಕಿ: ಮಹಿಳೆ ಸ್ಥಳದಲ್ಲೇ ಸಾವು

ಮಡಿಕೇರಿ, ಏ.21–ಮದುವೆ ಮುಗಿಸಿ ಊರಿಗೆ ತೆರಳಲು ವಾಹನಕ್ಕಾಗಿ ರಸ್ತೆಬದಿ ನಿಂತಿದ್ದ ಮಹಿಳೆ ಕಾರು ಡಿಕ್ಕಿ ಹೊಡೆದ ಪರಿಣಾಮ ಸ್ಥಳದಲ್ಲೇ ಮೃತಪಟ್ಟಿರುವ ಘಟನೆ 7ನೇ ಹೊಸಕೋಟೆಯ ಗದ್ದೆಹಳ್ಳದಲ್ಲಿ ಭಾನುವಾರ ನಡೆದಿದೆ.

ಕಾಸರಗೋಡುವಿನ ರಾಬಿಯ ಮೃತ ಮಹಿಳೆ. ಈಕೆ 7ನೇ ಹೊಸಕೋಟೆಯ ಗದ್ದೆಹಳ್ಳದಲ್ಲಿ ಭಾನುವಾರ ನಡೆದ ತಮ್ಮ ಸಂಬಂಧಿಕರ ವಿವಾಹ ಸಮಾರಂಭದಲ್ಲಿ ಭಾಗವಹಿಸಿ, ಊರಿಗೆ ತೆರಳಲು ವಾಹನಕ್ಕಾಗಿ ಕಾಯುತ್ತ ನಿಂತಿದ್ದರು. ಈ ವೇಳೆ ಗಿರಿಯಪ್ಪ ಮನೆ ನಿವಾಸಿ ಪೊನ್ನಪ್ಪ ಎಂಬುವರ ಪುತ್ರ ಶರತ್ ವೇಗವಾಗಿ ಬಂದು ಕಾರಿನಲ್ಲಿ ಡಿಕ್ಕಿ ಹೊಡೆದಿದ್ದಾನೆ. ಇದರಿಂದ ರಾಬಿಯ ಸ್ಥಳದಲ್ಲೇ ಮೃತಪಟ್ಟಿದ್ದಾರೆ.

ಇದಕ್ಕೂ ಮೊದಲು ಈತ ಮೂವರು ಮಹಿಳೆಯರಿಗೆ ಡಿಕ್ಕಿ ಹೊಡೆದು, ನಂತರ ರಾಬಿಯಗೆ ಡಿಕ್ಕಿ ಹೊಡೆದಿದ್ದಾನೆ. ಗಾಯಗೊಂಡಿರುವ ಮೂವರು ಮಹಿಳೆಯರು ಹಾಗೂ ಕಾರಿನ ಚಾಲಕ ಶರತ್‌ನನ್ನು ಮಡಿಕೇರಿ ಜಿಲ್ಲಾಸ್ಪತ್ರೆಗೆ ದಾಖಲಿಸಲಾಗಿದೆ.

ಈ ಸಂಬಂಧ ಸುಂಟಿಕೊಪ್ಪ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಸೇವಾ ಕೇಂದ್ರದಲ್ಲಿ ಮಕ್ಕಳ ಬೇಸಿಗೆ ಶಿಬಿರ



ವಿರಾಜಪೇಟೆ ಸೇವಾ ಕೇಂದ್ರದಲ್ಲಿ ನಡೆದ ಬೇಸಿಗೆ ಶಿಬಿರದಲ್ಲಿ ಭಾವಗಹಿಸಿದ್ದ ಮಕ್ಕಳು.

ವಿರಾಜಪೇಟೆ, ಏ.21–ಪಟ್ಟಣದ ಅಪ್ಪಯ್ಯ ಸ್ವಾಮಿ ರಸ್ತೆಯ ಪ್ರಜಾಪಿತ ಬ್ರಹ್ಮ ಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದ ಜ್ಞಾನಗಂಗಾ ಭವನದ ಸೇವಾ ಕೇಂದ್ರದ ಸಭಾಂಗಣದಲ್ಲಿ ಮಕ್ಕಳ ಬೇಸಿಗೆ ಶಿಬಿರದ ಸಮಾರೋಪ ನಡೆಯಿತು.

ಸಮಾರೋಪದ ಅಧ್ಯಕ್ಷತೆ ವಹಿಸಿದ್ದ ಸೇವಾ ಕೇಂದ್ರದ ಮುಖ್ಯ ಸಂಚಾಲಕಿ ಬಿ.ಕೆ. ಕೋಮಲ ಮಾತನಾಡಿ, ಮಕ್ಕಳು ತಮ್ಮ ಮನಸನ್ನು ಸ್ವಚ್ಛ ಹಾಗೂ ಶಕ್ತಿಶಾಲಿಯಾಗಿ ಇಟ್ಟುಕೊಳ್ಳಬೇಕು. ವ್ಯರ್ಥ ಯೋಚನೆಗಳಿಂದ ಮುಕ್ತರಾಗಿ ಸ್ವಚ್ಛ ಮನಸ್ಸು, ಸ್ವಚ್ಛ ಜೀವನದಿಂದ ಸದಾ ಉತ್ತಮ ಶ್ರೇಷ್ಠ ಚಿಂತೆಗಳ ಕಡೆ ಗಮನಹರಿಸಬೇಕು ಎಂದರು.

ತ್ರಿವೇಣಿ ಶಾಲೆ ಮುಖ್ಯ ಶಿಕ್ಷಕಿ ಬಿ.ಈ. ಪ್ರತಿಮಾ, ಮಕ್ಕಳು ನಿತ್ಯ ಕಠಿಣ ಶ್ರಮದ ಬಗ್ಗೆ ಹೇಗಿರಬೇಕೆಂದು ಕಥೆಗಳ ಮೂಲಕ ತಿಳಿಸಿದರು. ಗೋಣಿಕೊಪ್ಪಲು ಕೂರ್ಗ್ ಪಬ್ಲಿಕ್ ಶಾಲೆಯ ಆಪ್ತ ಸಮಾಲೋಚಕಿ ಮನವಿ ಮುತ್ತಮ್ಮ, ಆಧ್ಯಾತ್ಮಕತೆ ಮತ್ತು ಕರಕುಶಲತೆಯಲ್ಲಿ ಸುಂದರ ವೃಕ್ಷ ಕುರಿತು ತರಬೇತಿ ನೀಡಿದರು.

ಶಿಬಿರದಲ್ಲಿ ಗೀತಗಾಯನ, ನೃತ್ಯ, ಯೋಗ, ವಿವಿಧ ಸ್ಪರ್ಧೆಗಳನ್ನು ಏರ್ಪಡಿಸಲಾಗಿತ್ತು. ವಿಜೇತ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು. ಬ್ರಹ್ಮ ಕುಮಾರಿ ಶಿವಾನಿ ಹಾಗೂ ಪೊನ್ನಂಪೇಟೆ ಸಾಯಿಶಂಕರ್ ಶಾಲೆಯ ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಕೊಳ್ಳೇಗಾಲದ ದಲಿತರ ಬಗ್ಗೆ ವಿವಾದಾತ್ಮಕ ಪದ ಬಳಕೆ

ಮಾಜಿ ಸಚಿವ ಎನ್.ಮಹೇಶ್ ವಿರುದ್ಧ ಕೆರಳಿದ ದಲಿತರು



ಕೊಳ್ಳೇಗಾಲದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ನಗರಸಭೆ ಮಾಜಿ ಅಧ್ಯಕ್ಷೆ ರೇಖಾ ರಮೇಶ್ ಮಾತನಾಡಿದರು.

ಕೊಳ್ಳೇಗಾಲ, ಏ.21–ವಿಧಾನಸಭೆಯಲ್ಲಿ ರಬೇಕಾದ ನನ್ನನ್ನು ಕೊಳ್ಳೇಗಾಲದ ದಲಿತರು ಸೋಲಿಸಿಬಿಟ್ಟರು ಎಂದು ವಿವಾದಾತ್ಮಕ ಪದ ಬಳಸಿ ಹೇಳಿಕೆ ನೀಡಿರುವ ಮಾಜಿ ಸಚಿವ ಎನ್.ಮಹೇಶ್ ಅವರು ಬಹಿರಂಗ ಕ್ಷಮೆ ಕೇಳದಿದ್ದರೆ ಉಗ್ರ ಹೋರಾಟ ನಡೆಸಲಾಗುವುದು ಎಂದು ದಲಿತ ಮುಖಂಡರು ಎಚ್ಚರಿಸಿದರು.

ಕೊಳ್ಳೇಗಾಲದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ನಗರಸಭೆ ಮಾಜಿ ಅಧ್ಯಕ್ಷೆ ರೇಖಾ ರಮೇಶ್, ರಾಮನಗರದಲ್ಲಿ ಭಾನುವಾರ ನಡೆದ ಬಿಜೆಪಿ ಪ್ರಚಾರ ಸಭೆಯಲ್ಲಿ ಮಾಜಿ ಸಚಿವ ಎನ್.ಮಹೇಶ್ ವಿವಾದಾತ್ಮಕ ಪದವನ್ನು ದಲಿತರ ವಿರುದ್ಧ ಬಳಸಿ ಹೀನಾಯವಾಗಿ ನಿಂದಿಸಿರುವುದು ಸರಿಯಾದ ಬೆಳವಣಿಯಲ್ಲ. ಇದು ಘೋರ ಅಪರಾಧವಾಗಿದೆ. ಅವರು ನಾಳೆ (ಸೋಮವಾರ) ಯೊಳಗೆ ಬಹಿರಂಗ ಕ್ಷಮೆ ಕೇಳದಿದ್ದರೆ

ಬಹಿರಂಗ ಕ್ಷಮೆ ಕೇಳದಿದ್ದರೆ ಉಗ್ರ ಹೋರಾಟದ ಎಚ್ಚರಿಕೆ

ದಲಿತರ ಬೀದಿಗೆ ಬರದಂತೆ ಬಹಿಷ್ಕಾರ ಹಾಕಿ, ಉಗ್ರ ಹೋರಾಟ ನಡೆಸಲಾಗುವುದು ಎಂದು ತಿಳಿಸಿದರು.

ಕೊಳ್ಳೇಗಾಲದ ದಲಿತರಿಂದಲೇ ಗೆದ್ದು ಎನ್.ಮಹೇಶ್ ಸಚಿವರಾಗಿದ್ದರು. 1999 ರಿಂದ 2018ರ ಚುನಾವಣೆ ತನಕ ಎನ್. ಮಹೇಶ್ ಅವರಿಗೆ ಮತ ನೀಡಿ, ಸಚಿವರಾಗುತನಕ ಅವರನ್ನು ಬೆಳೆಸಿದ್ದು ಕೊಳ್ಳೇಗಾಲದ ದಲಿತ ಸಮಾಜದವರೇ. 2018ರ ಚುನಾವಣೆಯಲ್ಲಿ ಅವರಿಗೆ 72 ಸಾವಿರ ಮತ ದೊರೆತಿದ್ದು, ಅದರಲ್ಲಿ ಹೆಚ್ಚು ಮತಗಳು ದಲಿತರದ್ದೆ. ಇದನ್ನು ಮರೆತ ಮಾಜಿ ಸಚಿವರು ಈ ರೀತಿ ಕೊಳ್ಳೇಗಾಲದ ದಲಿತರ ಬಗ್ಗೆ ಲಘುವಾಗಿ ಮಾತನಾಡಿ ವ್ಯಂಗ್ಯವಾಡಿರುವುದು ಸರಿಯಾದ ಬೆಳವಣಿಗೆಯಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಮಾಜಿ ಶಾಸಕರು ಬಹಿರಂಗ ಕ್ಷಮೆ ಕೇಳದಿದ್ದದಲ್ಲಿ ಜಿಲ್ಲಾದ್ಯಂತ ಸಭೆ, ಸಮಾರಂಭಗಳಲ್ಲಿ ಮತ ಕೇಳಲು ಬಂದರೆ ಅವರನ್ನು ಬಹಿಷ್ಕರಿಸಲಾಗುವುದು. ಅಲ್ಲದೆ, ದಲಿತ ಬಡಾವಣೆಗೆಗಳಿಗೆ ಪ್ರವೇಶಿಸಲು ಬಿಡುವುದಿಲ್ಲ. ಎನ್.ಮಹೇಶ್ ಅಸ್ಪೃಶ್ಯರ ಮತಗಳಿಂದಲೇ ಗೆದ್ದು, ಈಗ ಮೇಲ್ವರ್ಗದ ಜನರ ಪ್ರೀತಿ ಗಳಿಸಲು ಈ ರೀತಿ ಹೇಳಿಕೆ ನೀಡಿರುವುದು ಖಂಡನೀಯ. ಕೂಡಲೇ ದಲಿತ ಸಮಾಜದವರ ಕ್ಷಮೆಯಾಚಿಸಬೇಕು ಎಂದು ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಕೊಳ್ಳೇಗಾಲ ಭೀಮನಗರ ರಮೇಶ್, ದಲಿತ ಮುಖಂಡ ನಟರಾಜ ಮಾಳಿಗೆ, ವರದರಾಜು, ಆಟೋ ಶಿವ, ಯಜಮಾನ ಸಿದ್ದಾರ್ಥ, ನಗರಸಭೆ ಸದಸ್ಯ ಮಂಜುನಾಥ್, ಗುರು, ಪ್ರೇಮ್, ಪ್ರಭುಸ್ವಾಮಿ ಇನ್ನಿತರರಿದ್ದರು.

ಸಂವಿಧಾನ ಉಳಿವಿಗೆ ಕಾಂಗ್ರೆಸ್ ಬೆಂಬಲಿಸಿ

ಕಾಂಗ್ರೆಸ್ ಪ್ರಚಾರ ಸಭೆಯಲ್ಲಿ ಶಾಸಕ ಎ.ಆರ್.ಕೃಷ್ಣಮೂರ್ತಿ ಮನವಿ

ಚಾಮರಾಜನಗರ, ಏ.21– ಸಂವಿಧಾನ ಹಾಗೂ ಪ್ರಜಾಪ್ರಭುತ್ವ ಉಳಿವಿಗಾಗಿ ಕಾಂಗ್ರೆಸ್ ಬೆಂಬಲಿಸಬೇಕು ಎಂದು ಶಾಸಕ ಎ.ಆರ್.ಕೃಷ್ಣಮೂರ್ತಿ ಮನವಿ ಮಾಡಿದರು.

ತಾಲೂಕಿನ ಹೊಂಗನೂರು ಗ್ರಾಮದಲ್ಲಿ ನಡೆದ ಕಾಂಗ್ರೆಸ್ ಪ್ರಚಾರ ಸಭೆ ಉದ್ಘಾಟಿಸಿ ಮಾತನಾಡಿದ ಅವರು, 10 ವರ್ಷಗಳ ಬಿಜೆಪಿ ಆಡಳಿತದಲ್ಲಿ ದೇಶ ಅದೋಗತಿಗೆ ಹೋಗಿದೆ. ರೈತರ ಸ್ಥಿತಿ ಶೋಚನೀಯವಾಗಿದೆ. ಬಡವರು, ಶ್ರಮಿಕರು, ಕಾರ್ಮಿಕರು ಮಹಿಳೆಯರಿಗೆ ಜೀವನದ ಭದ್ರತೆ ಇಲ್ಲ. ಅವರ ಬದುಕು ಕಟ್ಟಿಕೊಳ್ಳುವಂತಹ ಯಾವುದೇ ಯೋಜನೆಗಳನ್ನು ಪ್ರಧಾನಿ ನರೇಂದ್ರ ಮೋದಿ ರೂಪಿಸಲಿಲ್ಲ. ಕೇವಲ ಧರ್ಮ, ಜಾತಿ ಆಧಾರದ ಮೇಲೆ ಜನರನ್ನು ಭಾವನಾತ್ಮಕವಾಗಿ ಕೆರಳಿಸಿ, ಮತ ಪಡೆಯುವ ಹುನ್ನಾರ ನಡೆಸುತ್ತಿದ್ದಾರೆ. ಈ ಬಾರಿ ಮತದಾರರು ಜಾಗೃತರಾಗಿದ್ದಾರೆ. ಬಿಜೆಪಿಯ ಯಾವುದೇ ಬಣ್ಣದ ಮಾತುಗಳಿಗೆ ಮರುಳಾಗುವುದಿಲ್ಲ ತಿಳಿಸಿದರು.

ನನಗೊಂದು ಅವಕಾಶ ಕೊಡಿ: ಕಾಂಗ್ರೆಸ್ ಅಭ್ಯರ್ಥಿ ಸುನೀಲ್ ಬೋಸ್ ಮಾತನಾಡಿ, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಚಿವರು, ಕ್ಷೇತ್ರದ ಶಾಸಕರ ಆಶೀರ್ವಾದದಿಂದ ನಾನು ಸ್ಪರ್ಧೆ ಮಾಡಿದ್ದೇನೆ. ಈಗಾಗಲೇ ಕ್ಷೇತ್ರದಲ್ಲಿ ದಿ.ಆರ್.ಧ್ರುವನಾರಾಯಣ್, ವಿ.ಶ್ರೀನಿವಾಸಪ್ರಸಾದ್, ಕಾಗಲವಾಡಿ ಶಿವಣ್ಣ ಅವರು ಸಂಸದರಾಗಿ ಉತ್ತಮ ಕೆಲಸ ಮಾಡಿದ್ದಾರೆ. ಅವರ ಹಾದಿಯಲ್ಲೇ ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ನನಗೊಂದು ಅವಕಾಶ ನೀಡಿ ಎಂದು ಮನವಿ ಮಾಡಿದರು.

ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಹೊಂಗನೂರು ಚಂದ್ರು ಮಾತನಾಡಿದರು. ಮಾಜಿ ಶಾಸಕರಾದ ಜಿ.ಎನ್.ನಂಜುಂಡಸ್ವಾಮಿ, ಎಸ್. ಜಯಣ್ಣ, ಮಾಜಿ ಸಂಸದ ಕಾಗಲವಾಡಿ ಶಿವಣ್ಣ, ಜಿಪಂ ಮಾಜಿ ಸದಸ್ಯರಾದ ಸದಾಶಿವಮೂರ್ತಿ, ಲಕ್ಷ್ಮಿ ಪುಟ್ಟಸ್ವಾಮಿ, ಕನಿಷ್ಠ ವೇತನ ಸಲಹಾ ಸಮಿತಿ ಮಾಜಿ ಅಧ್ಯಕ್ಷ ಚಿನ್ನಸ್ವಾಮಿ, ಸೋಮಣ್ಣೇಗೌಡ, ಯೋಗೇಶ್, ಬ್ಲಾಕ್ ಅಧ್ಯಕ್ಷ ತೋಟೇಶ್ ಮತ್ತಿತರರಿದ್ದರು.



ಹೊಂಗನೂರು ಗ್ರಾಮದಲ್ಲಿ ನಡೆದ ಕಾಂಗ್ರೆಸ್ ಪ್ರಚಾರ ಸಭೆಯನ್ನು ಶಾಸಕ ಎ.ಆರ್.ಕೃಷ್ಣಮೂರ್ತಿ ಉದ್ಘಾಟಿಸಿದರು.

28 ಕ್ಷೇತ್ರಗಳಲ್ಲೂ ಎನ್‌ಡಿಎಗೆ ಜಯ

ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ವಿಶ್ವಾಸ



ಗುಂಡ್ಲುಪೇಟೆಯಲ್ಲಿ ನಡೆದ ಬಿಜೆಪಿ ಪ್ರಚಾರ ಸಭೆಯನ್ನು ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಉದ್ಘಾಟಿಸಿದರು.

ಗುಂಡ್ಲುಪೇಟೆ, ಏ.21–ರಾಜ್ಯದ ಎಲ್ಲಾ 28 ಲೋಕಸಭಾ ಕ್ಷೇತ್ರಗಳಲ್ಲಿ ಬಿಜೆಪಿ–ಜೆಡಿಎಸ್ ಮೈತ್ರಿಕೂಟ ಜಯಗಳಿಸಲಿದೆ ಎಂದು ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ವಿಶ್ವಾಸ ವ್ಯಕ್ತಪಡಿಸಿದರು.

ಪಟ್ಟಣದಲ್ಲಿ ಭಾನುವಾರ ನಡೆದ ಬಿಜೆಪಿ ಪ್ರಚಾರ ಸಭೆಗೂ ಮುನ್ನ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಎಲ್ಲಾ 28 ಕ್ಷೇತ್ರಗಳಲ್ಲೂ ಮೈತ್ರಿ ಅಭ್ಯರ್ಥಿಗಳನ್ನು ಗೆಲ್ಲಿಸಲು ಪ್ರಯತ್ನಿಸಲಾಗುತ್ತಿದೆ. ಪ್ರಧಾನಿ ನರೇಂದ್ರ ಮೋದಿ ಪ್ರವಾಸದಿಂದ ರಾಜ್ಯದಲ್ಲಿ ಎನ್‌ಡಿಎ ಮೈತ್ರಿಕೂಟಕ್ಕೆ ಪೂರಕವಾಗದ ವಾತಾವರಣವಿದೆ. ಎಲ್ಲಾ ಕ್ಷೇತ್ರಗಳಲ್ಲೂ 2 ರಿಂದ 2.5 ಲಕ್ಷ ಅಂತರದಲ್ಲಿ ಮೈತ್ರಿ ಅಭ್ಯರ್ಥಿಗಳು ಗೆಲುವು ಸಾಧಿಸಲಿದ್ದಾರೆ ಎಂದರು.

ಚುನಾವಣೆಯಲ್ಲಿ ಹಣ ಮತ್ತು ಹೆಂಡದ ಹೊಳೆ ಹರಿಯುತ್ತಿದೆಯೇ ಎಂಬ ಸುದ್ದಿಗಾರರ ಪ್ರಶ್ನೆಗೆ ಉತ್ತರಿಸಿದ ಅವರು, ಅವೆಲ್ಲಾ ನಡೆಯುತ್ತಲೇ ಇವೆ. ತಾವು ಮಾತ್ರ ಪ್ರಾಮಾಣಿಕವಾಗಿ ಚುನಾವಣೆ ನಡೆಸುತ್ತಿದ್ದೇವೆ ಎಂದು ಪ್ರತಿಕ್ರಿಯಿಸಿದರು.

ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹಾಳಾಗಿದೆಯೇ ಎಂಬ ಪ್ರಶ್ನೆಗೆ, ರಾಜ್ಯದಲ್ಲಿ ಕೊಲೆ ಸುಲಿಗೆ, ಅತ್ಯಾಚಾರ, ಹೆಣ್ಣು ಮಕ್ಕಳ ಮೇಲೆ ದೌರ್ಜನ್ಯ ನಡೆಯುತ್ತಿದೆ. ಇದಾವುದನ್ನೂ ಕಾಂಗ್ರೆಸ್ ಸರ್ಕಾರ ತಡೆಗಟ್ಟುತ್ತಿಲ್ಲ. ಇದರಿಂದ ರಾಜ್ಯದಲ್ಲಿ ಸರ್ಕಾರ ಬದುಕಿದೆಯೋ, ಇಲ್ಲವೋ ಎಂಬ ಅನುಮಾನ ಮೂಡುತ್ತಿದೆ ಎಂದು ತಿಳಿಸಿದರು.

ಇದೇ ವೇಳೆ ಬಿಜೆಪಿ ಜಿಲ್ಲಾಧ್ಯಕ್ಷ ಸಿ.ಎಸ್. ನಿರಂಜನಕುಮಾರ್, ವಿಧಾನ ಪರಿಷತ್ ಮಾಜಿ ಸದಸ್ಯ ಪ್ರೊ.ಕೆ.ಆರ್. ಮಲ್ಲಿಕಾರ್ಜುನಪ್ಪ, ಯುವ ಮೋರ್ಚಾ ಜಿಲ್ಲಾಧ್ಯಕ್ಷ ಪ್ರಣಯ್, ಹಂಗಳ ನಂದೀಶ್ ಅವರು ಯಡಿಯೂರಪ್ಪ ಅವರನ್ನು ಸ್ವಾಗತಿಸಿದರು.

ಕರ್ನಾಟಕದಲ್ಲಿ ಮನಿ ಲ್ಯಾಂಡರಿಂಗ್

ಬಿಜೆಪಿ ವಿರುದ್ಧ ರಣದೀಪ್ ಸಿಂಗ್ ಸುರ್ಜೇವಾಲ ಆರೋಪ



ಚಾಮರಾಜನಗರದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ ಮಾತನಾಡಿದರು.

ಚಾಮರಾಜನಗರ, ಏ.21–ಕರ್ನಾಟಕದಲ್ಲಿ ಮನಿ ಲ್ಯಾಂಡರಿಂಗ್ ಆಗುತ್ತಿದೆ. ಇದರ ಬಗ್ಗೆ ಬಿಜೆಪಿ ರಾಜ್ಯದ ಜನತೆಗೆ ಉತ್ತರಿಸಬೇಕಾಗಿದೆ ಎಂದು ರಾಜ್ಯ ಕಾಂಗ್ರೆಸ್ ಉಸ್ತುವಾರಿ ಹಾಗೂ ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲ ತಿಳಿಸಿದರು.

ನಗರದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮನಿ ಲ್ಯಾಂಡರಿಂಗ್ ಬಗ್ಗೆ ನೇರವಾಗಿ ಮಾಜಿ ಸಿಎಂ ಬಿ.ಎಸ್. ಯಡಿಯೂರಪ್ಪ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಹಾಗೂ ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಉತ್ತರಿಸಬೇಕಾಗಿದೆ. ಬಿಜೆಪಿಗೆ ಸೇರಿದ 2 ಕೋಟಿ ರೂ. ಅನ್ನು ಏ.20ರಂದು ಬೆಂಗಳೂರಲ್ಲಿ ಸೀಜ್ ಮಾಡಲಾಗಿದ್ದು, ಈ ಹಣವನ್ನು ಮೈಸೂರು ಹಾಗೂ ಚಾಮರಾಜನಗರಕ್ಕೆ ತೆಗೆದುಕೊಂಡು ಹೋಗಲಾಗುತ್ತಿತ್ತು. ಈ ಬಗ್ಗೆ ಎರಡು ಪತ್ರಗಳು ಕೂಡ ಕಾರಿನಲ್ಲಿ ಲಭ್ಯವಾಗಿವೆ ಎಂದರು.

ಮಾ.27ರಂದು ಕೋದಂಡ ರಾಮಪುರದ ಕೆನರಾ ಬ್ಯಾಂಕ್ ಬ್ರಾಂಚ್‌ನಿಂದ 5 ಕೋಟಿ ರೂ. ಡ್ರಾ ಮಾಡಲಾಗಿದೆ. 50 ಸಾವಿರಕ್ಕೂ ಹೆಚ್ಚು ಹಣ ಸಾಗಿಸಿದರೆ ಎಲೆಕ್ಷನ್ ಕಮಿಷನ್ ಸೀಜ್ ಮಾಡುತ್ತದೆ. ಆದರೆ, ಬಿಜೆಪಿ ಕೋಟಿ ಕೋಟಿಯನ್ನು ಸಾಗಿಸುತ್ತಿದೆ. ಇನ್ನು ಡ್ರಾ ಮಾಡಿದ ಹಣವನ್ನು 10 ಕಿ.ಮೀ. ಸಾಗಿಸಲು ಒಂದು ತಿಂಗಳು ಬೇಕಾಗಿತ್ತಾ? ಎಂದು ಪ್ರಶ್ನಿಸಿದರು.

ಬಿಜೆಪಿ ಕೊಟ್ಟಿದ್ದು ಖಾಲಿ ಚೊಂಬು: ಪ್ರಧಾನಿ ನರೇಂದ್ರ ಮೋದಿ ಗ್ಯಾರಂಟಿಗಳೆಲ್ಲವೂ ನಕಲಿ ಹಾಗೂ ಸುಳ್ಳು. ಹತ್ತು ವರ್ಷಗಳಿಂದ ಅವರು ಹೇಳಿಕೊಂಡು ಬಂದಿರುವ ಯಾವುದೇ ಭರವಸೆ ಈಡೇರಿಲ್ಲ. ಅವರು ರಾಜ್ಯದ ಜನರಿಗೆ ಕೊಟ್ಟಿದ್ದು ಬರೀ ಚೊಂಬು. ಹೀಗಾಗಿ, ಬಿಜೆಪಿಯದ್ದು ಚೊಂಬು ಸರ್ಕಾರ ಎಂದು ವ್ಯಂಗ್ಯವಾಡಿದರು.

ರಾಜ್ಯದಲ್ಲಿ ಕಾಂಗ್ರೆಸ್ ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿದೆ. ದೇಶದಲ್ಲಿ ನುಡಿದಂತೆ ನಡೆಯುವ ಏಕೈಕ ಪಕ್ಷ ಕಾಂಗ್ರೆಸ್. ಕರ್ನಾಟಕದಲ್ಲಿ ಅನುಷ್ಠಾನಗೊಳಿಸಿರುವ ಐದು ಗ್ಯಾರಂಟಿಗಳು ಜನರ ಬದುಕು ಹಸನುಗೊಳಿಸಿವೆ. ಕೇಂದ್ರದಲ್ಲಿ ಕಾಂಗ್ರೆಸ್ ಸರ್ಕಾರ ರಚನೆಯಾಗುತ್ತಿದ್ದಂತೆ ಗ್ಯಾರಂಟಿ ಜಾರಿ ಮಾಡುತ್ತೇವೆ ಎಂದು ಭರವಸೆ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಸಚಿವ ಡಾ.ಎಚ್. ಸಿ.ಮಹದೇವಪ್ಪ, ಕಾಂಗ್ರೆಸ್ ಅಭ್ಯರ್ಥಿ ಸುನೀಲ್ ಬೋಸ್, ಶಾಸಕರಾದ ಸಿ.ಪುಟ್ಟರಂಗಶೆಟ್ಟಿ, ಎ.ಆರ್.ಕೃಷ್ಣಮೂರ್ತಿ, ತನ್ವೀರ್ ಸೇಠ್, ಮಾಜಿ ಶಾಸಕರಾದ ಯತೀಂದ್ರ, ಜಿ.ಎನ್.ನಂಜುಂಡಸ್ವಾಮಿ, ಕಾಡಾ ಅಧ್ಯಕ್ಷ ಪಿ.ಮರಿಸ್ವಾಮಿ, ಜಿಲ್ಲಾ ಕಾಂಗ್ರೆಸ್ ಉಪಾಧ್ಯಕ್ಷ ಬಿ.ಕೆ.ರವಿಕುಮಾರ್, ಮುಖಂಡರಾದ ಮಷ್ಟಾ ಅಮರನಾಥ್, ಭಾರತಿ ಶಂಕರ್, ಶಿವರಾಜು, ನರೇಂದ್ರ ಹಾಜರಿದ್ದರು.



ಚಾ.ನಗರದ ಭುವನೇಶ್ವರಿ ವೃತ್ತದ ಪೇಟೆ ಪ್ರೈಮರಿ ಶಾಲಾ ಆವರಣದಲ್ಲಿ ನಡೆದ ಮತದಾನ ಜಾಗೃತಿ ಕಾರ್ಯಕ್ರಮದಲ್ಲಿ ನಗರಸಭೆ ಪೌರಾಯುಕ್ತ ಎಸ್.ವಿ.ರಾಮದಾಸ್ ಪ್ರತಿಜ್ಞಾವಿಧಿ ಬೋಧಿಸಿದರು. ಜಿಲ್ಲಾ ಸ್ವೀಪ್ ಸಮಿತಿ ನೋಡಲ್ ಅಧಿಕಾರಿ ಪಿ.ಲಕ್ಷ್ಮೀ ಇದ್ದರು.

ದಾಂಡೇಲಿಯಲ್ಲಿ ಒಂದೇ ಕುಟುಂಬದ ಆರು ಮಂದಿ ನೀರು ಪಾಲು

ಕಾರವಾರ, ಏ.21– ನೀರಿನಲ್ಲಿ ಮುಳುಗಿ ಒಂದೇ ಕುಟುಂಬದ 6 ಮಂದಿ ನೀರು ಪಾಲಾದ ಘಟನೆ ದಾಂಡೇಲಿ ತಾಲೂಕಿನ ಅಕ್ವಾಡ ಗ್ರಾಮದ ಕಾಳಿ ನದಿಯಲ್ಲಿ ನಡೆದಿದೆ. ಹುಬ್ಬಳ್ಳಿಯ ಈಶ್ವರ ನಗರದ ನಿವಾಸಿಗಳಾದ ನಜೀರ್ ಅಹ್ಮದ್ (40),ಅಲ್ಫೀಯಾ ಅಹ್ಮದ್ (10), ಮೋಹಿನ್ ಅಹ್ಮದ್ (6), ರೇಷಾ ಉನ್ನಿಸಾ (38),ಇಫ್ರಾ ಅಹ್ಮದ್ (15), ಅಬೀದ್ ಅಹ್ಮದ್ (12) ಮೃತಪಟ್ಟಿದ್ದು ದಡದಲ್ಲಿದ್ದ ಇಬ್ಬರು ಸುರಕ್ಷಿತರಾಗಿದ್ದಾರೆ. ಮೃತರು ಒಂದೇ ಕಯಟುಂಬದವರಾಗಿದ್ದು ಎಂಟು ಜನರು ವಾಹನ ಮಾಡಿಕೊಂಡು ದಾಂಡೇಲಿ ಭಾಗಕ್ಕೆ ಪ್ರವಾಸ ಬಂದಿದ್ದರು. ಈಜುವ ವೇಳೆ ಮುಳುಗಿ ಸಾವನ್ನಪ್ಪಿದ್ದಾರೆ. ದಾಂಡೇಲಿ ಪೊಲೀಸರು ಆರು ಜನರ ದೇಹಗಳನ್ನು ಹೊರತೆಗೆದಿದ್ದಾರೆ. ಮೃತ ದೇಹಗಳನ್ನು ದಾಂಡೇಲಿ ಆಸ್ಪತ್ರೆಗೆ ರವಾನಿಸಿದ್ದು ಮರಣೋತ್ತರ ಪರೀಕ್ಷೆಗೆ ಕಳುಹಿಸಲಾಗಿದೆ. ಘಟನೆ ಸಂಬಂಧ ದಾಂಡೇಲಿ ಗ್ರಾಮೀಣ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಪ್ರಕರಣ ದಾಖಲಾಗಿದೆ.

ಒಂದನೇ ಪುಟದಿಂದ

ಬದುಕಿಗೆ ಗ್ಯಾರಂಟಿ ಇಲ್ಲ

ಹಣ ಇಲ್ಲ. ನೀರಾವರಿ ವ್ಯವಸ್ಥೆ ನೆಲ ಕಚ್ಚಿದೆ. ಕನಿಷ್ಠ ಒಂದು ಕಿಮೀನಷ್ಟೂ ರಸ್ತೆ ಮಾಡಿಲ್ಲ ಎಂದು ಹೇಳಿದರು. ಕಾಂಗ್ರೆಸ್ ನಾಯಕರ ಕಾರ್ಯಕ್ರಮಗಳಲ್ಲಿ ಜನ ಸೇರುತ್ತಿಲ್ಲ. ಅದಕ್ಕೆ ಜಾಹೀರಾತು ನೀಡುತ್ತಿದ್ದಾರೆ. ಪೊಳ್ಳು ಭರವಸೆ ನೀಡುವ ಜಾಹೀರಾತು ಯಾರು ನಂಬಲ್ಲ. ಚುನಾವಣೆ ಬಳಿಕ ನಾವೆಲ್ಲ ಸೇರೋಣ. ಆಗ ವಾತಾವರಣ ಸ್ಪಷ್ಟವಾಗಿ ತಿಳಿಯುತ್ತೆ. ಜನ ಮೋದಿ ಮೋದಿ ಅಂತಿದ್ದಾರೆ. ಕಾಂಗ್ರೆಸ್‌ನವರು ಹತಾಶರಾಗಿದ್ದಾರೆ. ಕಾಂಗ್ರೆಸ್‌ನವರು ಗೆಲ್ಲುವ ನಾಲ್ಕೈದು ಕ್ಷೇತ್ರ ಯಾವುದು ಅಂತ ತಿಳಿಸಲಿ ಎಂದರು.

ಇಡೀ ದೇಶದಲ್ಲಿ ಮೋದಿ ವಾತಾವರಣವಿದೆ. ಕರ್ನಾಟಕದಲ್ಲಿ ಕಾಂಗ್ರೆಸ್ ಒಂದೂ ಕ್ಷೇತ್ರ ಕೂಡ ಗೆಲ್ಲಲ್ಲ. ಇಂದಿನಿಂದ ನಾನು ಮತ್ತೆ ಪ್ರವಾಸ ಮಾಡುತ್ತಿದ್ದೇನೆ. ನಮ್ಮ ಕಾರ್ಯಕ್ರಮಗಳಲ್ಲಿ ಜನರು ನಿರೀಕ್ಷೆಗೆ ಮೀರಿ ಸೇರುತ್ತಿದ್ದಾರೆ. ಜನರು ನಮ್ಮ ಪರವಾಗಿ ಇದ್ದಾರೆ ಎಂದರು.

ಪೂಜೆ ಸಲ್ಲಿಸಿದ ಮಹಿಳಾಮಣಿಯರು

ಯದುವೀರ್ ಅವರ ಗೆಲುವಿಗಾಗಿ ಮಹಿಳಾ ಮೋರ್ಚಾ ಕಾರ್ಯಕರ್ತರು ಮೆಟ್ಟಿಲು ಮೂಲಕ ಬೆಟ್ಟ ಹತ್ತುತ್ತಿರುವುದು ಶ್ಲಾಘನೀಯ ಎಂದರು. ಮೈಸೂರು–ಕೊಡಗು ಲೋಕಸಭಾ ಮಹಿಳಾ ಕಾರ್ಯದ ಸಂಚಾಲಕಿ ಹೇಮಾ ನಂದೀಶ್ ಮಾತನಾಡಿ, ಮಹಿಳಾ ಸಬಲೀಕರಣ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಆದ್ಯತೆ ನೀಡಿದ್ದು, ಸುಕನ್ಯಾ ಸಮೃದ್ಧಿ ಯೋಜನೆ, ಸೇರಿದಂತೆ ಹಲವು ಯೋಜನೆಗಳನ್ನು ಸ್ತ್ರೀ ಸಂಕುಲಕ್ಕಾಗಿ ಪರಿಚಯಿಸಿದ್ದು, ಇದರಿಂದ ಮಹಿಳಾ ಸಬಲೀಕರಣವಾಗಿದೆ. ಈ ನಿಟ್ಟಿನಲ್ಲಿ ಮತ್ತೊಮ್ಮೆ ನರೇಂದ್ರ ಮೋದಿ ಪ್ರಧಾನಿಯಾಗಿಸಲು ಬಿಜೆಪಿ ಅಭ್ಯರ್ಥಿ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಗೆಲುವಿಗಾಗಿ ಪ್ರಾರ್ಥಿಸಿ ಪೂಜೆ ಸಲ್ಲಿಸಲು ಬೆಟ್ಟ ಹತ್ತುತ್ತಿರುವುದಾಗಿ ತಿಳಿಸಿದರು.

ಇದೇ ಸಂದರ್ಭದಲ್ಲಿ ಮುಖಂಡ ಸುರೇಶ್ ಬಾಬು, ಬಿಜೆಪಿ ಪ್ರಧಾನ ಕಾರ್ಯದರ್ಶಿ ಕೇಬಲ್ ಮಹೇಶ್, ಹೆಚ್.ಜಿ.ಗಿರಿಧರ್, ಮಾಜಿ ಉಪಮೇಯರ್ ಡಾ.ರೂಪ, ಮುಖಂಡರಾದ ರಶ್ಮಿ, ಕಾವೇರಿ, ಸವಿತಾ ಘಾಟ್ಕೆ, ಉಮಾ ಜಾದವ್, ನಳಿನಿ, ಮಮತಾ ಚಂದ್ರಶೇಖರ್, ಇಂದ್ರ, ಹಾಗೂ ಇನ್ನಿತರ ಮಹಿಳಾ ಸಂಘಟನೆಗಳ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು ಭಾಗವಹಿಸಿದ್ದರು.

ಸಂವಿಧಾನ ಬದಲಿಸುವ ಗುಣವಿದೆ

ಯುವ ನಿಧಿ, ಅನ್ನಭಾಗ್ಯ ಯೋಜನೆಗಳನ್ನು ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ.ವಿಜಯೇಂದ್ರ, ಜೆಡಿಎಸ್ ಅಧ್ಯಕ್ಷ ಹೆಚ್.ಡಿ. ಕುಮಾರಸ್ವಾಮಿ ವಿರೋಧಿಸುತ್ತಿದ್ದಾರೆ. ಇವರ ನಡವಳಿಕೆ ಮಹಿಳಾ ವಿರೋಧಿಯಲ್ಲವೇ? ಎಂದು ಪ್ರಶ್ನಿಸಿದರಲ್ಲದೆ, ಲೋಕಸಭಾ ಚುನಾವಣೆ ನಂತರ ಗ್ಯಾರಂಟಿ ಯೋಜನೆಗಳನ್ನು ನಿಲ್ಲಿಸುತ್ತಾರೆ ಎಂದು ಬಿಜೆಪಿ ಅಪಪ್ರಚಾರ ಮಾಡುತ್ತಿದೆ. ಆದರೆ ಮುಖ್ಯಮಂತ್ರಿ ಸಿದ್ಧರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸೇರಿದಂತೆ ಕಾಂಗ್ರೆಸ್ ನಾಯಕರು ಗ್ಯಾರಂಟಿ ಯೋಜನೆಯನ್ನು ಮುಂದುವರೆಸಲು ಬದ್ದರಾಗಿದ್ದಾರೆ ಎಂದು ಸ್ಪಷ್ಟಪಡಿಸಿದರು.

ಕೇಂದ್ರದಲ್ಲಿ ಅಕ್ಕಿ ಇದ್ದರೂ ಅನ್ನ ಭಾಗ್ಯ ಅಕ್ಕಿ ಕೊಡಲು ಕೇಂದ್ರ ಸರ್ಕಾರ ನಿರಾಕರಿಸಿತು. ಆಗ ಯಾಕೆ ಮಾಜಿ ಸಿಎಂಗಳಾದ ಬಿ.ಎಸ್.ಯಡಿಯೂರಪ್ಪ, ಹೆಚ್.ಡಿ.ಕುಮಾರಸ್ವಾಮಿ ಕೇಂದ್ರ ಸರ್ಕಾರವನ್ನು ಪ್ರಶ್ನೆ ಮಾಡಲಿಲ್ಲ? ಇವರು ಏನೇ ಹೇಳಿದರು ಗ್ಯಾರಂಟಿ ಯೋಜನೆಗಳು ಐದು ವರ್ಷ ಮುಂದುವರೆಯುತ್ತವೆ ಎಂದು ಹೇಳಿದರು.

ರಾಜ್ಯದಲ್ಲಿ ಬರ ಉಂಟಾಗಿ ರೈತರು, ಬಡವರು ತತ್ತರಿಸುತ್ತಿದ್ದಾರೆ. ಕೇಂದ್ರ ಸರ್ಕಾರ ರಾಜ್ಯಕ್ಕೆ ನೀಡಬೇಕಿರುವ ಅನುದಾನವನ್ನು ನೀಡಲಿಲ್ಲ. 15 ನೇ ಹಣಕಾಸು ಯೋಜನೆ ಪ್ರಕಾರ ರಾಜ್ಯಕ್ಕೆ ಕೊಡಬೇಕಿರುವ ತೆರಿಗೆ ಪಾಲನ್ನು ಕೊಡಲಿಲ್ಲ. ಈ ಸಂಬಂಧ ಕೇರಳ, ತಮಿಳು ನಾಡು ಸರ್ಕಾರ ಕೂಡ ದನಿ ಎತ್ತಿವೆ. ಅಷ್ಟಾದರೂ ಮೋದಿ ಸರ್ವಾಧಿಕಾರಿಯಂತೆ ವರ್ತಿಸುತ್ತಿದ್ದಾರೆ. ನಾವು ಕೇಳುತ್ತಿರುವುದು ಭಿಕ್ಷೆಯಲ್ಲ, ನಮ್ಮ ಹಕ್ಕು ಎಂದು ಹೇಳಿದರು. ಜೂನ್ 4ರ ನಂತರ ಕೇಂದ್ರದಲ್ಲಿ ಕಾಂಗ್ರೆಸ್ ಸರ್ಕಾರ ಬರುತ್ತೆ. ಮೋದಿ ಅಧಿಕಾರ ಅಂತ್ಯವಾಗಲಿದೆ. ಬಳಿಕ ಕೇಂದ್ರದ ಕಾಂಗ್ರೆಸ್ ಸರ್ಕಾರ ಮಹಿಳೆಯರಿಗೆ ಮಹಾಲಕ್ಷ್ಮಿ ಯೋಜನೆ ಮೂಲಕ 1 ಲಕ್ಷ ಕೊಡುತ್ತೇವೆ. ರಾಜ್ಯದ 2 ಸಾವಿರದ ಜೊತೆ ಕೇಂದ್ರದ 8 ಸಾವಿರ ಹಣ ಮಹಿಳೆಯರಿಗೆ ಸಿಗಲಿದೆ. ರಾಜ್ಯದ ಮಹಿಳೆಯರಿಗೆ ಡಬಲ್ ಧಮಾಕ ಸಿಗಲಿದೆ ಎಂದು ಹೇಳಿದರು.

ಚುನಾವಣೆ ಆಯೋಗಕ್ಕೆ ಆಯುಕ್ತರನ್ನು ನೇಮಕ ಮಾಡುವ ಸಮಿತಿಯಲ್ಲಿ ಮೋದಿ ಇದ್ದಾರೆ. ಇವರು ಹೇಳಿದಂತೆ, ಚುನಾವಣೆ ಆಯೋಗ ನಡೆದುಕೊಳ್ಳುತ್ತಿದೆ. ಇವಿಎಂ ಸರಿ ಇದ್ದ ಮೇಲೆ ವಿವಿ ಪ್ಯಾಟ್ ಖರೀದಿಸಿದ್ದು ಏಕೆ. ಇವಿಎಂನಲ್ಲಿ ಸರಿಯಾಗಿ ವೋಟ್ ಆಗಿದ್ದರೆ, ವಿವಿ ಪ್ಯಾಟ್‌ನಲ್ಲಿ ಶೇ.5ರಷ್ಟು ಏಕೆ ಎಣಿಸಬೇಕಾಗಿತ್ತು. ಕೇವಲ ಶೇ.5 ಎಣಿಸಲು ಕೋಟ್ಯಾಂತರ ರೂ. ಖರ್ಚು ಮಾಡಿ ವಿವಿ ಪ್ಯಾಟ್ ಏಕೆ ಖರೀದಿ ಮಾಡಬೇಕಿತ್ತು. ವಿವಿ ಪ್ಯಾಟ್ ಎಣಿಕೆಗೆ ಬಿಜೆಪಿ ವಿರೋಧಿಸುತ್ತಿರೋದು ಏಕೆ? ಇದೆಲ್ಲವೂ ದೇಶದ ಜನತೆಗೆ ಅರ್ಥವಾಗಿದೆ ಎಂದು ಹೇಳಿದರು. ಸುದ್ದಿಗೋಷ್ಠಿಯಲ್ಲಿ ಕೆಪಿಸಿಸಿ ಕಾರ್ಯಾಧ್ಯಕ್ಷ ತನ್ವೀರ್ ಸೇಠ್, ಸಚಿವ ಕೆ.ವೆಂಕಟೇಶ್, ಶಾಸಕ ಕೆ.ಹರೀಶ್ ಗೌಡ, ಮಾಜಿ ಶಾಸಕ ಡಾ.ಯತೀಂದ್ರ ಸಿದ್ಧರಾಮಯ್ಯ, ಕೆಪಿಸಿಸಿ ಮಹಿಳಾ ಘಟಕದ ಅಧ್ಯಕ್ಷೆ ಡಾ.ಪುಷ್ಪ ಅಮರ ನಾಥ್, ನಗರ ಕಾಂಗ್ರೆಸ್ ಅಧ್ಯಕ್ಷ ಆರ್.ಮೂರ್ತಿ, ಜಿಲ್ಲಾ ಗ್ರಾಮಾಂತರ ಕಾಂಗ್ರೆಸ್ ಅಧ್ಯಕ್ಷ ಡಾ.ಬಿ.ಜೆ.ವಿಜಯ ಕುಮಾರ್, ಮುಖಂಡ ಹೆಚ್.ವಿ.ರಾಜೀವ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ತುಷ್ಟೀಕರಣದಿಂದ ಹಾಡಹಗಲೇ ಕೊಲೆ

ಹಾಗೂ ದೇಶಕ್ಕೆ ನೀಡಿರುವ ಕೊಡುಗೆಗಳನ್ನು ಪರಿಗಣಿಸಿದ ಕಾರಣ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಅಪೇಕ್ಷೆಯಂತೆ ಯದುವೀರ್ ಇಂದು ಚುನಾವಣೆಯಲ್ಲಿ ಸ್ಪರ್ಧೆ ಮಾಡಿದ್ದಾರೆ. ತಾನು ರಾಜವಂಶಸ್ಥ ಎಂಬುವುದನ್ನು ಬದಿಗಿಟ್ಟು ಯದುವೀರ್ ಇಂದು ಬಿರುಸಿನ ಪ್ರಚಾರ ಮಾಡುತ್ತಿದ್ದಾರೆ. ಜನ ಸೇವೆಗಾಗಿ ರಾಜಕೀಯಕ್ಕೆ ಬಂದಿರುವುದಾಗಿ ತಿಳಿಸಿದ್ದಾರೆ. ಆದ ಕಾರಣ ಯದುವೀರ್ ಅವರನ್ನು ಗೆಲ್ಲಿಸಬೇಕು ಎಂದು ಕೋರಿದರು.

ಈಗ ನಡೆಯುತ್ತಿರುವ ಲೋಕಸಭಾ ಚುನಾವಣೆ ಜಾತಿ ಅಥವಾ ಪಕ್ಷಕ್ಕಾಗಿ ನಡೆಯುತ್ತಿರುವ ಚುನಾವಣೆಯಲ್ಲ. ಬದಲಿಗೆ ದೇಶದ ಭವಿಷ್ಯದ ರೂಪಿಸುವ ಚುನಾವಣೆಯಾಗಿದೆ. ಆದ ಕಾರಣ ದೇಶದ ಉತ್ತಮ ಭವಿಷ್ಯಕ್ಕಾಗಿ ಬಿಜೆಪಿ ಬೆಂಬಲಿಸಿ ಎಂದು ವಿಜಯೇಂದ್ರ ಮತದಾರರಲ್ಲಿ ಮನವಿ ಮಾಡಿಕೊಂಡರು. ನರೇಂದ್ರ ಮೋದಿ ಕಳೆದ ಹತ್ತು ವರ್ಷಗಳ ಕಾಲ ಒಂದು ದಿನವೂ ವಿಶ್ರಾಂತಿ ಪಡೆಯದೆ ದೇಶದ ಒಳಿತಿಗೆ ಶ್ರಮಿಸಿದ್ದಾರೆ. ತಾಯಿಯ ಅಂತ್ಯ ಸಂಸ್ಕಾರ ಮುಗಿಸಿದ ನಂತರ ದೆಹಲಿಯಲ್ಲಿ ತಮ್ಮ ಕಚೇರಿಯಲ್ಲಿ ಕುಳಿತು ಕೆಲಸ ಮಾಡಿದ್ದಾರೆ. ಇಂತಹ ಸಮಾಜ ಸೇವಾ ಪರಿಕಲ್ಪನೆ ಇರುವ ನಾಯಕನನ್ನು ಗೆಲ್ಲಿಸಿ ಎಂದು ಕೇಳಿದರು. ಕಾಯಕ ಸಮಾಜದ ಕುಲಕಸುಬು ಉಳಿಯಬೇಕೆಂದು ನರೇಂದ್ರ ಮೋದಿ ವಿಶಿಷ್ಟ ಯೋಜನೆ ಜಾರಿಗೊಳಿಸಿದ್ದಾರೆ. ಮಧ್ಯವರ್ತಿಗಳ ಹಾವಳಿ ಇಲ್ಲದೆ ನೇರವಾಗಿ ಸೌಲಭ್ಯ ದೊರೆಯುತ್ತಿದೆ. ಲೋಕಸಭಾ ಚುನಾವಣೆ ಸಂದರ್ಭದಲ್ಲಿ ಪ್ರಣಾಳಿಕೆಯಲ್ಲಿ ಮತ್ತಷ್ಟು ವಿಶಿಷ್ಟ ಯೋಜನೆ ಪ್ರಕಟಿಸಿದ್ದು, ದೇಶದ ಪ್ರಗತಿ ಪಥವನ್ನು ಬದಲಿಸಲಿದೆ. ಈ ಎಲ್ಲಾ ಕಾರಣ ರಾಜ್ಯದ ಜನರು ಬಿಜೆಪಿ ಬೆಂಬಲಿಸಬೇಕು ಎಂದು ವಿಜಯೇಂದ್ರ ಮನವಿ ಮಾಡಿದರು. ಶಾಸಕ ಟಿ.ಎಸ್.ಶ್ರೀವತ್ಸ ವಿಧಾನ ಪರಿಷತ್ ಸದಸ್ಯ ಹೆಚ್.ವಿಶ್ವನಾಥ್, ಮಾಜಿ ಸಂಸದ ಸಿ.ಹೆಚ್.ವಿಜಯಶಂಕರ್, ನಗರ ಬಿಜೆಪಿ ಅಧ್ಯಕ್ಷ ಎಲ್.ನಾಗೇಂದ್ರ, ಜಿಲ್ಲಾಧ್ಯಕ್ಷ ಎಲ್.ಆರ್.ಮಹದೇವಸ್ವಾಮಿ, ಬಿಜೆಪಿ ರಾಜ್ಯ ಉಪಾಧ್ಯಕ್ಷ ರಾಜೇಂದ್ರ, ಬಿಜೆಪಿ ಮುಖಂಡರಾದ ಸುರೇಶ್ ಬಾಬು, ಸೋಮಶೇಖರ್, ಬಸವರಾಜು, ರಾಜಶೇಖರ್ ಸೇರಿದಂತೆ ಇತರರು ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಸೂಕ್ಷ್ಮತೆಯಿಂದ ಮಾತನಾಡಬೇಕು

ಆತಂಕ ಮೂಡುತ್ತದೆ. ಈ ಹಿನ್ನೆಲೆಯಲ್ಲಿ ಮಹಿಳಾ ಆಯೋಗದಿಂದ ಎಲ್ಲ ಜಿಲ್ಲಾಧಿಕಾರಿಗಳಿಗೆ ಪತ್ರ ಬರೆದು, ಶಾಲಾ–ಕಾಲೇಜುಗಳಿಗೆ ಭದ್ರತೆ ಒದಗಿಸಲು ಸೂಚನೆ ನೀಡಲಾಗುವುದು ಎಂದು ಹೇಳಿದರು. ಇತ್ತೀಚೆಗೆ ಮಹಿಳೆಯರ ಮೇಲಿನ ದೌರ್ಜನ್ಯ ಪ್ರಕರಣಗಳ ಸಂಖ್ಯೆ ಸಹ ಹೆಚ್ಚುತ್ತಿವೆ. ಠಾಣೆಗಳಲ್ಲಿ ದೂರು ನೀಡಲು ಹೋದರೆ ಪೊಲೀಸರು ಸರಿಯಾಗಿ ಸ್ಪಂದಿಸುವುದಿಲ್ಲ ಎನ್ನುವ ಆರೋಪಗಳು ಕೇಳಿಬರುತ್ತಿವೆ. ಈ ಕುರಿತು ಸೂಕ್ತ ಕ್ರಮ ಕೈಗೊಳ್ಳಲು ಸರ್ಕಾರಕ್ಕೆ ಮನವಿ ಮಾಡಲಾಗುವುದು ಎಂದರು.

ಮಹಿಳಾ ಆಯೋಗದ ಕೆಲಸ ಹಾಗೂ ಕರ್ತವ್ಯದ ಬಗ್ಗೆ ರಾಜ್ಯದ ಪ್ರತಿಯೊಂದು ಮನೆ ಹಾಗೂ ಮಹಿಳೆಗೆ ಗೊತ್ತಾಗಬೇಕು. ಮುಂದೆ ಇಂತಹ ಪ್ರಕರಣಗಳು ನಡೆಯಲೇಬಾರದು. ಪ್ರಕರಣಕ್ಕೆ ಸಂಬಂಧಿಸಿ ಸಾಕ್ಷಿ ಹೇಳಲು ಮುಕ್ತವಾಗಿ ಬರುವಂತಹ ವಾತಾವರಣ ಸೃಷ್ಟಿಯಾಗಬೇಕು. ಈ ನಿಟ್ಟಿನಲ್ಲಿ ನೇಹಾ ಪ್ರಕರಣಕ್ಕೆ ಸಂಬಂಧಿಸಿ ತ್ವರಿತ ಕೋರ್ಟ್(ಫಾಸ್ಟ್ ಟ್ರ್ಯಾಕ್ ಕೋರ್ಟ್) ಸ್ಥಾಪಿಸಲು ಸರ್ಕಾರವನ್ನು ಆಗ್ರಹಿಸಲಾಗುವುದು ಎಂದರು. ಕಾಂಗ್ರೆಸ್ ನಾಯಕಿ ದೇವಕಿ ಯೋಗಾನಂದ ಹಾಗೂ ಹು–ಧಾ ಮಹಾನಗರ ಕಾಂಗ್ರೆಸ್ ಘಟಕದ ಜಿಲ್ಲಾಧ್ಯಕ್ಷ ಅಲ್ತಾಫ್ ಹಳ್ಳೂರ ಇದ್ದರು.

ಮತದಾನ ಜಾಗೃತಿಗಾಗಿ 'ನಮ್ಮ ನಡೆ ಮತಗಟ್ಟೆ ಕಡೆ' ಅಭಿಯಾನಕ್ಕೆ ಚಾಲನೆ

ಮತಗಟ್ಟೆಗಳಲ್ಲಿ ಕುಡಿಯುವ ನೀರು, ಶೌಚಾಲಯ, ವ್ಹೀಲ್‌ಚೇರ್ ವ್ಯವಸ್ಥೆಗೆ ಸೂಚನೆ



ಮೈಸೂರಿನ ಕುವೆಂಪುನಗರದ ಜ್ಞಾನಗಂಗಾ ಶಾಲೆ ಆವರಣದಲ್ಲಿ ಭಾನುವಾರ ನಮ್ಮ ನಡೆ ಮತಗಟ್ಟೆ ಕಡೆ ಅಭಿಯಾನಕ್ಕೆ ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ ಚಾಲನೆ ನೀಡಿದರು.

ಮೈಸೂರು, ಏ.21(ಎಂಟಿವೈ)– ಲೋಕಸಭಾ ಚುನಾವಣೆಯಲ್ಲಿ ಹೆಚ್ಚಿನ ಪ್ರಮಾಣದ ಮತದಾನವಾಗುವಂತೆ ಜನರಲ್ಲಿ ಜಾಗೃತಿ ಮೂಡಿಸುವುದರೊಂದಿಗೆ ಮತಗಟ್ಟೆಗಳಲ್ಲಿ ಮೂಲ ಸೌಲಭ್ಯ ಕಲ್ಪಿಸಲು ಕೈಗೊಂಡಿರುವ 'ನಮ್ಮ ನಡೆ ಮತಗಟ್ಟೆ ಕಡೆ' ಅಭಿಯಾನಕ್ಕೆ ಮೈಸೂರಲ್ಲಿ ಜಿಲ್ಲಾ ಚುನಾವಣಾಧಿಕಾರಿಯೂ ಆದ ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ ಚಾಲನೆ ನೀಡಿದರು.

ಚುನಾವಣಾ ಆಯೋಗದ ಸೂಚನೆ ಮೇರೆಗೆ ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದಲ್ಲಿರುವ 2925 ಮತಗಟ್ಟೆಗಳ ಮೇಲೂ ನಮ್ಮ ನಡೆ ಮತಗಟ್ಟೆಯ ಕಡೆ ಅಭಿಯಾನದ ಅಂಗವಾಗಿ 'ಚುನಾವಣಾ ಪರ್ವ ದೇಶದ ಗರ್ವ' ಘೋಷವಾಕ್ಯವುಳ್ಳ ಬಾವುಟ ಹಾರಿಸಲು ಕ್ರಮ ಕೈಗೊಳ್ಳಲಾಗಿದ್ದು, ಮೈಸೂರಿನ ಕುವೆಂಪುನಗರದ ಜ್ಞಾನಗಂಗಾ ಶಾಲಾ ಆವರಣದಲ್ಲಿ ಭಾನುವಾರ ಸ್ವೀಪ್ ಸಮಿತಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಮತದಾನದ ಜಾಗೃತಿ ಮೂಡಿಸುವ ಬಾವುಟ ಹಾರಿಸಿ, ಅಭಿಯಾನಕ್ಕೆ ಚಾಲನೆ ನೀಡಲಾಯಿತು.

ಈ ವೇಳೆ ಜಿಲ್ಲಾಧಿಕಾರಿ ಡಾ.ಕೆ.ವಿ. ರಾಜೇಂದ್ರ ಮಾತನಾಡಿ, ಭಾರತದಲ್ಲಿ ನಡೆಯುವ ಚುನಾವಣೆ ಪ್ರಪಂಚದಲ್ಲಿ ಅತ್ಯಂತ ದೊಡ್ಡ ಸಾರ್ವತ್ರಿಕ ಚುನಾವಣೆಯಾಗಿದೆ. ಲೋಕಸಭಾ ಚುನಾವಣೆ ಪರ್ವದಲ್ಲಿ ಪ್ರತಿಯೊಬ್ಬರು ಗರ್ವದಿಂದ ಭಾಗವಹಿಸಿ ಪ್ರಜಾಪ್ರಭುತ್ವವನ್ನು ಸದೃಢ ಮಾಡಲು ಮುಂದಾಗಬೇಕು. ಚುನಾವಣೆಯಲ್ಲಿ ಮತ ನೀಡುವುದು ಪ್ರತಿಯೊಬ್ಬ ಮತದಾರನ ಹಕ್ಕು. ಪ್ರತಿಯೊಬ್ಬ ಮತದಾರು ಕಡ್ಡಾಯವಾಗಿ ಮತ ಹಾಕುವ ಮೂಲಕ ಚುನಾವಣೆಯ ಹಬ್ಬವನ್ನು ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದರು.

ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ವ್ಯಾಪ್ತಿಗೆ ಬರುವ 2925 ಮತಗಟ್ಟೆಗಳಲ್ಲಿ ಮತದಾರರಿಗೆ ಅಗತ್ಯ ಸೌಲಭ್ಯ ಕಲ್ಪಿಸಿ, ಮತದಾನದ ಬಗ್ಗೆ ಜಾಗೃತಿ ಮೂಡಿಸಲು 'ನಮ್ಮ ನಡೆ ಮತಗಟ್ಟೆಗಳ ಕಡೆ' ಅಭಿಯಾನ ಆರಂಭಿಸಲಾಗಿದೆ. ಪ್ರತಿಯೊಂದು ಮತಗಟ್ಟೆಗಳಲ್ಲೂ ಮತಗಟ್ಟೆ ಅಧಿಕಾರಿಗಳು ಧ್ವಜಾರೋಹಣ ನೆರವೇರಿಸಿ, ಮತಗಟ್ಟೆಗಳ ಬಗ್ಗೆ ಜನರಲ್ಲಿ ಹಾಗೂ ಮತದಾರರಲ್ಲಿ ಜಾಗೃತಿ ಮೂಡಿಸುವ ಕೆಲಸ ಮಾಡಬೇಕು. ಮತದಾರರಿಗೆ ಯಾವುದೇ ರೀತಿಯ ತೊಂದರೆ ಉಂಟಾಗದಂತೆ ಕಟ್ಟೆಚ್ಚರ ವಹಿಸಬೇಕು. ಮತದಾನದ ದಿನ ಮೂಲಭೂತ ಸೌಲಭ್ಯಗಳಾದ ಕುಡಿಯುವ ನೀರು, ಶೌಚಾಲಯದ ವ್ಯವಸ್ಥೆ ಹಾಗೂ ಹಿರಿಯರು ಮತ್ತು ವಿಶೇಷಚೇತನರಿಗೆ ವ್ಹೀಲ್‌ಚೇರ್ ವ್ಯವಸ್ಥೆ ಮಾಡಲಾಗುವುದು. ಬಿಸಿಲು ಹೆಚ್ಚಾದರೆ ಮತದಾರರ ಹಿತದೃಷ್ಟಿಯಿಂದ ಆಸನದ ವ್ಯವಸ್ಥೆ ಇರುವ ವೈಟಿಂಗ್ ರೂಮ್ ವ್ಯವಸ್ಥೆ ಮಾಡಲು ಕ್ರಮ ಕೈಗೊಳ್ಳಲಾಗಿದೆ. ಈ ಸೌಲಭ್ಯವನ್ನು ಮತದಾರರು ಉಪಯೋಗಿಸಿಕೊಂಡು ಮತದಾನ ಮಾಡಲು ಮುಂದೆ ಬರಬೇಕು ಎಂದು ಸಲಹೆ ನೀಡಿದರು.

ಕ್ಯೂ ಮ್ಯಾನೇಜ್ಮೆಂಟ್ ಆ್ಯಪ್ ಮೂಲಕ ಸರದಿ ಸಾಲುಗಳಿಂದ ಜನರಿಗೆ ಆಗುವ ಪ್ರತ್ಯೇಕ ಸಾಲುಗಳ ನಿರ್ಮಾಣ ಮಾಡಿ ಯಾರಿಗೂ ತೊಂದರೆಯಾಗದಂತೆ ನೋಡಿಕೊಳ್ಳಲು ಪೂರ್ವ ಸಿದ್ಧತೆ ಮಾಡಿಕೊಳ್ಳಲಾಗುತ್ತಿದೆ. ಮೂರು ಬೂತ್‌ಗಿಂತ ಹೆಚ್ಚಾಗಿರುವ ಸ್ಥಳದಲ್ಲಿ ವೋಟರ್ ಅಸಿಸ್ಟೆಂಟ್ ಬೂತ್‌ಗಳನ್ನು ಸ್ಥಾಪನೆ ಮಾಡಲಾಗುತ್ತಿದ್ದು, ಇದರಿಂದ ಮತದಾರರಿಗೆ ಸಹಾಯವಾಗಲಿದೆ. ಮತದಾರರಲ್ಲಿ ಮತದಾನ ಜಾಗೃತಿ ಮೂಡಿಸುವುದು, ಕಡ್ಡಾಯವಾಗಿ ಮತದಾನ ಅರಿವು ಮೂಡಿಸುವುದು ಕೇವಲ ಅಧಿಕಾರಿಗಳದ್ದಷ್ಟೇ ಕೆಲಸವಲ್ಲ. ಪ್ರತಿಯೊಬ್ಬ ಯುವಕರು ಚುನಾವಣೆಯ ಹಬ್ಬದಲ್ಲಿ ಇತರರಿಗೂ ಅದರ ಮಹತ್ವವನ್ನು ತಿಳಿಸಿ ಕಡ್ಡಾಯವಾಗಿ ಮತದಾನ ಮಾಡುವಂತೆ ಸುತ್ತಮುತ್ತಲಿನ ಜನರಲ್ಲಿ ಜಾಗೃತಿ ಮೂಡಿಸಬೇಕು. ಜಿಲ್ಲಾ ಸ್ವೀಪ್ ಐಕಾನ್‌ಗಳಿಂದ ಮತದಾನ ಪ್ರಾತ್ಯಕ್ಷಿಕೆಯ ಮೂಲಕ ಪ್ರತಿ ಮತಗಟ್ಟೆಗಳಲ್ಲಿಯೂ ಮತದಾರರಲ್ಲಿ ಮತದಾನ ಮಾಡುವ ಕ್ರಮಗಳನ್ನು ತಿಳಿಸಲಾಗುವುದು ಎಂದು ತಿಳಿಸಿದರು.

ಏ.26ರಂದು ರಾಷ್ಟ್ರೀಯ ಹಬ್ಬವಾದ ಸಾರ್ವತ್ರಿಕ ಚುನಾವಣೆ ನಡೆಯುವುದರಿಂದ ಎಲ್ಲಾ ಕಚೇರಿಗಳಿಗೂ ಸಾರ್ವತ್ರಿಕ ರಜೆ ಘೋಷಿಸಲಾಗಿದೆ. ಹಾಗಾಗಿ ಪ್ರತಿಯೊಬ್ಬ ಕಾರ್ಮಿಕರು ಹಾಗೂ ಯಾವುದೇ ಸಂಸ್ಥೆಯಲ್ಲಿ ಕೆಲಸ ಮಾಡುವವರು ಮತದಾನದಲ್ಲಿ ಪಾಲ್ಗೊಂಡು ಮತದಾನವನ್ನು ತಮ್ಮ ಮೊದಲ ಆಯ್ಕೆಯನ್ನಾಗಿ ಮಾಡಿ, ಕಡ್ಡಾಯವಾಗಿ ಮತ ಚಲಾಯಿಸಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಜಿ.ಪಂ. ಸಿಇಓ ಹಾಗೂ ಜಿಲ್ಲಾ ಸ್ವೀಪ್ ಸಮಿತಿಯ ಅಧ್ಯಕ್ಷರಾದ ಕೆ.ಎಂ ಗಾಯತ್ರಿ ಮತದಾರರ ಪ್ರತಿಜ್ಞಾ ವಿಧಿಯನ್ನು ಬೋಧಿಸಿದರು. ಕಾರ್ಯಕ್ರಮದಲ್ಲಿ ಪಾಲಿಕೆ ಆಯುಕ್ತೆ ಡಾ.ಎನ್.ಎನ್.ಮಧು, ಚುನಾವಣಾ ರಾಯಭಾರಿ ತನಿಷ್ಕಾ ಮೂರ್ತಿ, ಪ್ಯಾರಾ ಅಥ್ಲೆಟಿಕ್ಸ್ ಆಟಗಾರ ಮಹೇಂದ್ರ ಎಂ.ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

ಯದುವೀರ್ ಗೆಲುವಿಗಾಗಿ ಎನ್‌ಆರ್ ಕ್ಷೇತ್ರದಲ್ಲಿ ಮಹಾ ಸಂಪರ್ಕ ಅಭಿಯಾನ



ಮೈಸೂರಿನ ನರಸಿಂಹರಾಜ ವಿಧಾನಸಭಾ ಕ್ಷೇತ್ರದ ಗಾಯತ್ರಿಪುರಂನಲ್ಲಿ ಮಹಾ ಸಂಪರ್ಕ ಅಭಿಯಾನಕ್ಕೆ ಚಾಲನೆ ನೀಡಿದ ಬಳಿಕ ಸಂದೇಶ್ ಸ್ವಾಮಿ ಮತ್ತಿತರರ ಮುಖಂಡರು ಮನೆ ಮನೆಗೆ ತೆರಳಿ ಬಿಜೆಪಿ 'ಸಂಕಲ್ಪ ಪತ್ರ' ವಿತರಿಸಿ, ಯದುವೀರ್ ಪರ ಮತಯಾಚಿಸಿದರು.

ಮೈಸೂರು, ಏ.21(ಎಸ್‌ಬಿಡಿ)– ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಯದುವೀರ್ ಗೆಲುವಿಗಾಗಿ ಬಿಜೆಪಿ ಹಮ್ಮಿಕೊಂಡಿರುವ ಮಹಾಸಂಪರ್ಕ ಅಭಿಯಾನಕ್ಕೆ ನರಸಿಂಹರಾಜ ವಿಧಾನಸಭಾ ಕ್ಷೇತ್ರದಲ್ಲಿ ಬಿಜೆಪಿ ಮುಖಂಡ, ಮಾಜಿ ಮೇಯರ್ ಸಂದೇಶ್ ಸ್ವಾಮಿ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ನರಸಿಂಹರಾಜ ಕ್ಷೇತ್ರ ವ್ಯಾಪ್ತಿ ಯಲ್ಲಿ ಒಟ್ಟು 280 ಬೂತ್‌ಗಳಿದ್ದು ಎಲ್ಲೆಡೆ ಹೆಚ್ಚು ಮತ ಸಿಗಬೇಕು. ಇಲ್ಲಿನ ಜ್ಯೋತಿ ನಗರದ ಸ್ಲಂ, ಜಲಪುರಿ ಪೊಲೀಸ್ ಕ್ವಾರ್ಟರ್ಸ್, ಗಾಯತ್ರಿಪುರಂನಲ್ಲಿ ಸಾಮಾನ್ಯ ಜನರಿಗೆ ವಸತಿ ಸೌಲಭ್ಯ ಕಲ್ಪಿಸಿ, ಈ ಪ್ರದೇಶವನ್ನು ಅಭಿವೃದ್ಧಿಪಡಿಸಿದ್ದು ಮಹಾರಾಜರು ಎಂಬುದನ್ನು ಸದಾ ಸ್ಮರಿಸಿಕೊಳ್ಳಬೇಕು. ಚಾಮರಾಜೇಂದ್ರ ಒಡೆಯರ್ ಅವರ ಪುತ್ರಿ ಗಾಯತ್ರಿದೇವಿ ಅವರ ಹೆಸರಿನಲ್ಲಿ ಇಲ್ಲಿನ ಗಾಯತ್ರಿಪುರಂ ರಚನೆಯಾಗಿರುವುದು ವಿಶೇಷ ಎಂದರು.

ನಾನು ಮೂರು ಬಾರಿ ನಗರ ಪಾಲಿಕೆ ಸದಸ್ಯನಾಗಿ, ಒಮ್ಮೆ ಮೇಯರ್ ಆಗಿ ನರಸಿಂಹರಾಜ ಕ್ಷೇತ್ರದ ಅಭಿವೃದ್ಧಿಗೆ ಪ್ರಾಮಾಣಿಕವಾಗಿ ಶ್ರಮಿಸಿದ್ದೇನೆ. ಎರಡು ಬಾರಿ ವಿಧಾನಸಭಾ ಚುನಾವಣೆಯಲ್ಲಿ ಸ್ಪರ್ಧಿಸಿದಾಗ ಕ್ಷೇತ್ರದ ಜನ ಹೆಚ್ಚು ಮತ ನೀಡಿ ನನ್ನನ್ನು ಆಶೀರ್ವದಿಸಿದ್ದಾರೆ. ಹೀಗಿರುವಾಗ ಸುಂದರ ಮೈಸೂರು ಕಟ್ಟಿ, ಎಲ್ಲಾ ವರ್ಗದ ಜನರ ಶ್ರೇಯೋಭಿವೃದ್ಧಿಗಾಗಿ ದುಡಿದ ಮಹಾರಾಜರುಗಳನ್ನು ಹೇಗೆ ಮರೆಯಲು ಸಾಧ್ಯ. ರಾಜಮನೆತನದ ಬಗ್ಗೆ ಅಭಿಮಾನ, ಗೌರವ ಹೊಂದಿರುವ ಈ ಭಾಗದ ಜನ ಚುನಾವಣೆಯಲ್ಲಿ ಖಂಡಿತವಾಗಿ ಯದುವೀರ್ ಅವರಿಗೆ ಹೆಚ್ಚು ಮತಗಳನ್ನು ನೀಡಿ, ಗೆಲ್ಲಿಸುವ ಪಣ ತೊಟ್ಟಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಅತಿ ಹಿಂದುಳಿದವರು ಮತ್ತು ಅಲ್ಪಸಂಖ್ಯಾತರು ಹೆಚ್ಚಿನ ಸಂಖ್ಯೆಯಲ್ಲಿ ನೆಲೆಸಿರುವ ನರಸಿಂಹರಾಜ ಕ್ಷೇತ್ರದ ಸಮಗ್ರ ಅಭಿವೃದ್ಧಿ ದೃಷ್ಟಿಯಿಂದ ಬಿಜೆಪಿಯನ್ನು ಬೆಂಬಲಿಸಬೇಕು. ಮೋದಿ ಅವರ ಹತ್ತು ವರ್ಷದ ಜನಪರ ಆಡಳಿತದ ಬಗ್ಗೆ ಜನರಿಗೆ ತಿಳಿಸಬೇಕು. ಮೋದಿ ಅವರ ಬಗ್ಗೆ ಅಪಪ್ರಚಾರ ಮಾಡುತ್ತಿರುವ ಬಗ್ಗೆಯೂ ತಿಳಿಸಿ, ವಾಸ್ತವತೆಯನ್ನು ಮನವರಿಕೆ ಮಾಡಿಕೊಡಬೇಕು. ಈ ನಿಟ್ಟಿನಲ್ಲಿ ಎಲ್ಲಾ ಕಾರ್ಯಕರ್ತರೂ ಶ್ರಮವಹಿಸಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಬಿಜೆಪಿ ವಾರ್ಡ್ ಅಧ್ಯಕ್ಷ ಶರತ್, ವಾರ್ಡ್ ಪ್ರಭಾರಿ ಮಣಿರತ್ನಮ್ಮ, ಮೋಹನ, ಮುಖಂಡ ಸುಬ್ರಹ್ಮಣಿ ಮತ್ತಿತರರು ಉಪಸ್ಥಿತರಿದ್ದರು.



ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಬಿಜೆಪಿ–ಜೆಡಿಎಸ್ ಮೈತ್ರಿ ಅಭ್ಯರ್ಥಿ ಯದುವೀರ್ ಪರ ಮೈಸೂರಿನ ಮಹದೇಶ್ವರ ಬಡಾವಣೆಯಲ್ಲಿ ನಗರ ಪಾಲಿಕೆ ಮಾಜಿ ಸದಸ್ಯ ಕೆ.ವಿ.ಶ್ರೀಧರ್, ಮುಖಂಡರಾದ ಕುಮಾರಸ್ವಾಮಿ, ಮಹೇಶ್, ರಾಮಚಂದ್ರು, ಉಮೇಶ್, ಅರುಣ ಕುಮಾರಿ, ನಿಧಿ ಮತ್ತಿತರರು ಬಿರುಸಿನ ಪ್ರಚಾರ ನಡೆಸಿದರು.

ಕಾಂಗ್ರೆಸ್ ಬೆಂಬಲಿಸುವಂತೆ ವೀರಶೈವ ಲಿಂಗಾಯತ ಮುಖಂಡರ ಮನವಿ



ಮೈಸೂರಿನ ಖಾಸಗಿ ಹೋಟೆಲ್‌ನಲ್ಲಿ ಕಾಂಗ್ರೆಸ್ ಪಕ್ಷದಲ್ಲಿ ಗುರುತಿಸಿಕೊಂಡಿರುವ ವೀರಶೈವ ಲಿಂಗಾಯತ ಸಮುದಾಯದ ಮುಖಂಡರು ಸಭೆ ನಡೆಸಿದರು.

ಮೈಸೂರು, ಏ.21(ಜಿಎ)–ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳನ್ನು ಬೆಂಬಲಿಸುವಂತೆ ಕಾಂಗ್ರೆಸ್ ಪಕ್ಷದಲ್ಲಿ ಗುರುತಿಸಿಕೊಂಡಿರುವ ವೀರಶೈವ ಲಿಂಗಾಯತ ಸಮುದಾಯದ ಮುಖಂಡರು ಮೈಸೂರಿನ ಖಾಸಗಿ ಹೋಟೆಲ್‌ನಲ್ಲಿ ನಡೆದ ಸಭೆಯಲ್ಲಿ ಮನವಿ ಮಾಡಿದ್ದಾರೆ.

ಸಭೆಯಲ್ಲಿ ಮುಖಂಡರಾದ ಚಂದ್ರಮೌಳಿ ಮಾತನಾಡಿ, ದೇಶದಲ್ಲಿ ಸಂವಿಧಾನವನ್ನು ಬದಲಾಯಿಸುತ್ತೇವೆಂದು ಹೇಳುವ ಬಿಜೆಪಿಗೆ ಮತ ಹಾಕಿದರೆ, ವೀರಶೈವ ಲಿಂಗಾಯತ ಸಮುದಾಯಕ್ಕೂ ಸಮಸ್ಯೆ ಆಗಲಿದೆ. ಬಸವಣ್ಣ ಅವರ ಅನುಭವ ಮಂಟಪದ ಆಧಾರದ ಮೇಲೆ ದೇಶದ ಪ್ರಜಾಪ್ರಭುತ್ವ ನಡೆಯುತ್ತಿದ್ದು, ಇಂತಹ ಸಂವಿಧಾನವನ್ನು ಬದಲಾಯಿಸುತ್ತೇವೆಂದು ಪದೇ ಪದೆ ಹೇಳುತ್ತಿರುವುದನ್ನು ಬೆಂಬಲಿಸಬೇಡಿ ಎಂದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಪ್ರತಿಯೊಂದು ಸರ್ಕಾರಿ ಕಚೇರಿಯಲ್ಲಿ ಬಸವಣ್ಣ ಅವರ ಭಾವಚಿತ್ರವನ್ನು ಇಡಬೇಕೆಂದು ಆದೇಶಿಸಿ, ಬಸವಣ್ಣ ಸಂಸ್ಕೃತಿ ನಾಯಕ ಎಂದು ಘೋಷಿಸಿರುವುದು ಇಡೀ ಸಮುದಾಯಕ್ಕೆ ಸಂತಸ ಮೂಡಿಸಿದೆ. ಆದ್ದರಿಂದ ಎಲ್ಲರೂ ಕಾಂಗ್ರೆಸ್ ಅಭ್ಯರ್ಥಿಗಳನ್ನು ಬೆಂಬಲಿಸಿ ಎಂದು ಕರೆ ನೀಡಿದರು.

ಸಭೆಯಲ್ಲಿ ಕಾಂಗ್ರೆಸ್ ನಗರಾಧ್ಯಕ್ಷ ಆರ್.ಮೂರ್ತಿ, ಶಿವಣ್ಣ, ಮಾಜಿ ಶಾಸಕ ಎಂ.ಕೆ.ಸೋಮಶೇಖರ್, ಪ್ರದೀಪ್ ಕುಮಾರ್, ಮಾಜಿ ಮೇಯರ್ ದಕ್ಷಿಣಮೂರ್ತಿ, ಹೆಚ್.ಎಸ್.ನಂಜಪ್ಪ, ಮಲ್ಲಿಗೆ ವೀರೇಶ್, ಓಂ ಪ್ರಕಾಶ್, ಗುರುಮಲ್ಲೇಶ್ ಮತ್ತಿತರರು ಉಪಸ್ಥಿತರಿದ್ದರು.



ಚಾಮರಾಜನಗರ ಲೋಕಸಭಾ ಕ್ಷೇತ್ರ ವ್ಯಾಪ್ತಿಯ ವರುಣ ಗ್ರಾಮದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಸುನಿಲ್ ಬೋಸ್ ಪರ ಮುಖಂಡ ವರುಣ ಮಹೇಶ್ ನೇತೃತ್ವದಲ್ಲಿ ಮತಯಾಚಿಸಲಾಯಿತು. ಮಲ್ಲಿಕಾರ್ಜುನ ಆರಾಧ್ಯ, ಸತೀಶ್, ಕುಮಾರ್, ಮಹದೇವಸ್ವಾಮಿ, ಸಂತೋಷ್, ಶ್ರೀನಿವಾಸ್, ಪ್ರಕಾಶ, ಶಿವು, ಸುರೇಶ್, ನಾಗರಾಜು, ಮಹೇಶ್ ಮತ್ತಿತರರು ಮತಯಾಚನೆಯಲ್ಲಿ ಪಾಲ್ಗೊಂಡಿದ್ದರು.

ಡಾ.ಹೆಚ್.ಎಸ್.ರುದ್ರೇಶ್ ಅವರ ಕೃತಿಗಳ ಲೋಕಾರ್ಪಣೆ

ಪುಸ್ತಕ ಓದುವುದರಿಂದ ವ್ಯಕ್ತಿಯ ಹೇಳಿಗೆ ಸಾಧ್ಯ



ಮೈಸೂರಿನ ಕುವೆಂಪುನಗರದ ರೋಟರಿ ಪಶ್ಚಿಮದ ಸಭಾಂಗಣದಲ್ಲಿ ಉಷಾ ಸಾಹಿತ್ಯ ಮಾಲೆ, ಮೈಸೂರು ಸಂವಹನ ಪ್ರಕಾಶಕರ ಸಂಯುಕ್ತಾಶ್ರಯದಲ್ಲಿ ಭಾನುವಾರ ಆಯೋಜಿಸಿದ್ದ ವಿಶ್ರಾಂತ ಜಿಲ್ಲಾ ಆರೋಗ್ಯಾಧಿಕಾರಿ ಡಾ.ಹೆಚ್.ಎಸ್.ರುದ್ರೇಶ್ ಅವರ ಸ್ವಯಂವರ (ಕಾದಂಬರಿ), ಜಗದೇಕ ವೀರ(ಕಥಾಸಂಕಲನ) ಮತ್ತು ಜಾನಕಿ ವೈಭವ(ಕಥಾಸಂಕಲನ) ಪುಸ್ತಕಗಳನ್ನು ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ ವಿಶ್ರಾಂತ ಕುಲಪತಿ ಡಾ.ಪದ್ಮಾಶೇಖರ್ ಲೋಕಾರ್ಪಣೆಗೊಳಿಸಿದರು.

ಮೈಸೂರು, ಏ.21(ಜಿಎ)–ಪ್ರತಿಯೊಂದು ವಿಷಯವು ಗೂಗಲ್‌ನಲ್ಲಿ ಸಿಕ್ಕಿದರೂ ಸಹ ಪುಸ್ತಕವನ್ನು ಪರಿಪೂರ್ಣವಾಗಿ ಓದಿದಷ್ಟು ಮನಸ್ಸಿಗೆ ಸಮಾಧಾನ ಸಿಗುವುದಿಲ್ಲ ಎಂದು ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ ವಿಶ್ರಾಂತ ಕುಲಪತಿ ಡಾ.ಪದ್ಮಾಶೇಖರ್ ಅಭಿಪ್ರಾಯಪಟ್ಟರು.

ಮೈಸೂರಿನ ಕುವೆಂಪುನಗರದ ರೋಟರಿ ಪಶ್ಚಿಮದ ಸಭಾಂಗಣದಲ್ಲಿ ಉಷಾ ಸಾಹಿತ್ಯ ಮಾಲೆ, ಮೈಸೂರು ಸಂವಹನ ಪ್ರಕಾಶಕರ ಸಂಯುಕ್ತಾಶ್ರಯದಲ್ಲಿ ಭಾನುವಾರ ಆಯೋಜಿಸಿದ್ದ ವಿಶ್ರಾಂತ ಜಿಲ್ಲಾ ಆರೋಗ್ಯಾಧಿಕಾರಿ ಡಾ.ಹೆಚ್.ಎಸ್. ರುದ್ರೇಶ್ ಅವರ ಸ್ವಯಂವರ (ಕಾದಂಬರಿ), ಜಗದೇಕ ವೀರ(ಕಥಾಸಂಕಲನ) ಮತ್ತು ಜಾನಕಿ ವೈಭವ(ಕಥಾಸಂಕಲನ) ಈ ಮೂರು ಪುಸ್ತಕಗಳನ್ನು ಲೋಕಾರ್ಪಣೆಗೊಳಿಸಿ ಮಾತನಾಡಿದ ಅವರು, ಇಂದು ಪುಸ್ತಕ ಓದುಗರ ಸಂಖ್ಯೆ ಕ್ಷೀಣಿಸುತ್ತಿದೆ. ಪುಸ್ತಕ ಓದುವುದರಿಂದ ವ್ಯಕ್ತಿಯ ಏಳಿಗೆ ಸಾಧ್ಯ. ಓದು ಬದುಕನ್ನು ವಿಸ್ತರಿಸುತ್ತದೆ. ಹಾಗಾಗಿ ಓದು ವ್ಯಕ್ತಿತ್ವದ ಭಾಗವಾಗಬೇಕು. ಜಗತ್ತಿನ ನೂರು ಬದುಕುಗಳನ್ನು ಅನುಭವಿಸಲು ಪುಸ್ತಕ ಓದಬೇಕು ಎಂದರು.

ಸೃಜನಶೀಲ ಒತ್ತಡ ಎಂಬುದು ಪ್ರತಿಯೊಬ್ಬರನ್ನು ಕಾಡುತ್ತದೆ. ಅನುಭವ ಎಲ್ಲರಿಗೂ ಆದರೂ ಅಭಿವ್ಯಕ್ತ ಕೆಲವರಿಗೆ ಮಾತ್ರ ಇರುವಂತದ್ದು. ಅದು ಕೂಡ ಒಂದು ಕಲೆ ಎನ್ನಬಹುದು. ವೃತ್ತಿಗೂ ಹದ್ದೋ ಸಂಬಂಧವಿಲ್ಲದಿದ್ದರು ತಾಳ್ಮೆಯಿಂದ ಪುಸ್ತಕವನ್ನು ರುದ್ರೇಶ್ ಅವರು ಬರೆದಿರುವುದು ತುಂಬಾ ವಿಶೇಷ ಎಂದು ತಿಳಿಸಿದರು.

ಕನ್ನಡದಲ್ಲಿ ವರ್ಷಕ್ಕೆ ನೂರಕ್ಕೂ ಅಧಿಕ ಪುಸ್ತಕ ಪ್ರಕಟವಾದರೆ ಹೆಚ್ಚೆಂಬ ಕಾಲವೊಂದಿತ್ತು ಈಗ ನಮ್ಮ ಸಾಂಸ್ಕೃತಿಕ ನಗರಿಯಲ್ಲಿ ವರ್ಷಕ್ಕೆ ಪಟ್ಟಿ ಮಾಡಲಾಗದಷ್ಟು ಪುಸ್ತಕಗಳು ಹೊರಬರುತ್ತಿವೆ. ಈಗಂತೂ ಮೈಸೂರಿನಲ್ಲಿ ವಾರವಾರವೂ ಪುಸ್ತಕ ಬಿಡುಗಡೆ ಕಾರ್ಯಕ್ರಮ ನಡೆಯುವುದು ಕಡ್ಡಾಯವಾಗಿಬಿಟ್ಟಂತಿದೆ. ಬಿಡುಗಡೆ ಎಂಬ ಕನ್ನಡ ಶಬ್ದಕ್ಕಿಂತ ಲೋಕಾರ್ಪಣೆ ಹೆಚ್ಚು ತೂಕವುಳ್ಳ ಸಂಸ್ಕೃತ ಶಬ್ದವೆಂದು ಹೇಳುವುದಕ್ಕೆ ಸಂತೋಷವಾಗುತ್ತದೆ ಎಂದರು.

ಕೃತಿಗಳ ಕುರಿತು ಜೆಎಸ್‌ಎಸ್ ಪ್ರಕಟಣಾ ವಿಭಾಗದ ನಿರ್ದೇಶಕ ಪ್ರೊ.ಮೊರಬದ ಮಲ್ಲಿಕಾರ್ಜುನ ಮಾತನಾಡಿ, ವೈದ್ಯರು ನಿಜವಾದ ಅಂತಃಕರಣ ಹೊಂದಿದ್ದ ಮಹಾನ್ ವ್ಯಕ್ತಿಯಾಗಿದ್ದರು, ವೈದ್ಯರಾದವರು ಪುಸ್ತಕವನ್ನು ಬರೆಯುವ ಹವ್ಯಾಸ ಮಾಡಿಕೊಂಡಿರುವುದು ನಿಜಕ್ಕೂ ವಿಶೇಷವಾಗಿದೆ. ಎಲ್ಲಿ ತಾತ್ಸಾರ, ಇರುತ್ತದೆಯೋ ಅಲ್ಲಿ ಪ್ರೀತಿ ವಿಶ್ವಾಸ ಹೊರತು ಅಸೂಯೆ ಇರುತ್ತದೆ. ಆದರೆ ಅದೇ ಅಸೂಯೆ ಒಂದಲ್ಲ ಒಂದು ರೀತಿಯಲ್ಲಿ ತಮ್ಮನ್ನೇ ಸುಡುತ್ತಿರುತ್ತದೆ ಎಂಬುದನ್ನು ನಾವು ಮೊದಲು ಅರಿಯಬೇಕಿದೆ ಎಂದರು.

ನೆಲಮೂಲದ ಚಿಂತನೆಯನ್ನು ರುದ್ರೇಶ್ ಅವರು ಈ ಕಾದಂಬರಿಯಲ್ಲಿ ಬರವಣಿಗೆ ಮೂಲಕ ತೋರಿಸಿರುವುದು ಹಾಗೂ ನಮ್ಮ ಬದುಕಿನಲ್ಲಿ ನಕಾರಾತ್ಮಕ ದೃಷ್ಟಿಯನ್ನು ಕಳೆದುಕೊಂಡರಷ್ಟೇ ನೆಮ್ಮದಿಯಿಂದ ಜೀವಿಸಲು ಸಾಧ್ಯವಾಗುತ್ತದೆ ಎಂಬುದನ್ನು ವಿಶಿಷ್ಟವಾಗಿ ತಿಳಿಸಿದ್ದಾರೆ. ಸಮಾಜಕ್ಕೆ ಉತ್ತಮ ಸಂದೇಶ ಮತ್ತು ಮಾನವೀಯ ಜಾಗೃತಿ ಮೂಡಿಸಿ, ಪರಿಪೂರ್ಣ ಜೀವನ ಪದ್ಧತಿಗೆ ಬೇಕಾದ ಸಂದೇಶವನ್ನು ಈ ಮೂರು ಕೃತಿಗಳು ಆಧುನಿಕ ದಿನಮಾನಗಳಲ್ಲಿ ಬಹಳಷ್ಟು ಅವಶ್ಯವಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಕುವೆಂಪು ಕನ್ನಡ ಅಧ್ಯಯನ ಸಂಸ್ಥೆಯ ನಿರ್ದೇಶಕರಾದ ಡಾ.ವಿಜಯಕುಮಾರಿ ಎಸ್.ಕರಿಕಲ್, ಕೆ.ಆರ್.ನಗರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಹಪ್ರಾಧ್ಯಾಪಕ ಪ್ರೊ ಮೈಸೂರು ಕೃಷ್ಣಮೂರ್ತಿ, ಕೃತಿಗಳ ಲೇಖಕರಾದ ಡಾ.ಹೆಚ್.ಎಸ್.ರುದ್ರೇಶ್, ಪ್ರಕಾಶಕರಾದ ಡಿ ಎನ್ ಲೋಕಪ್ಪ, ಉಪಸ್ಥಿತರಿದ್ದರು.

ಮೈಸೂರು ಮಿತ್ರ
ಸೋಮವಾರ 22 ಏಪ್ರಿಲ್ 2024

ಬಾಲರಾಜ್ ಪರ ವಿಜಯೇಂದ್ರ ಬೃಹತ್ ರೋಡ್ ಶೋ

ಕಾಂಗ್ರೆಸ್ ಸರ್ಕಾರದ ವಿರುದ್ಧ ವಾಗ್ದಾಳಿ

ಸರಗೂರು, ಏ.21– ಚಾಮರಾಜನಗರ ಲೋಕಸಭಾ ಕ್ಷೇತ್ರದ ಮೈತ್ರಿ ಅಭ್ಯರ್ಥಿ ಬಾಲರಾಜ್ ಪರ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ಭಾನುವಾರ ಪಟ್ಟಣದಲ್ಲಿ ಬೃಹತ್ ರೋಡ್ ಶೋ ನಡೆಸುವ ಮೂಲಕ ಮತಯಾಚಿಸಿದರು.

ಪಟ್ಟಣದ ಸಂತೇಮಾಸ್ತಮ್ಮ ದೇವಾಲಯದಲ್ಲಿ ಪೂಜೆ ಸಲ್ಲಿಸಿ ಅಲ್ಲಿಂದ ಆರಂಭವಾದ ರೋಡ್ ಶೋ ಒಂದನೇ ಮುಖ್ಯ ರಸ್ತೆ ಮಾರ್ಗವಾಗಿ ಬಸವೇಶ್ವರ ದೇವಸ್ಥಾನ, ಚಿಕ್ಕದೇವಮ್ಮನ ವೃತ್ತ, ಮಹಾವೀರ ವೃತದ ಮೂಲಕ ಪ್ರವಾಸಿ ಮಂದಿರದ ಬಳಿ ಕೊನೆಗೊಂಡಿತು. ರೋಡ್ ಶೋ ವೇಳೆ ಬಿಜೆಪಿ, ಜೆಡಿಎಸ್ ಕಾರ್ಯಕರ್ತರು ಪ್ರಧಾನಿ ಮೋದಿ ಭಾವಚಿತ್ರ ಹಿಡಿದು ಮೆರವಣಿಗೆಯಲ್ಲಿ ಸಾಗಿದರು. ಇದೇ ವೇಳೆ ಕಾರ್ಯಕರ್ತರು ಬಿ.ವೈ.ವಿಜಯೇಂದ್ರ ಅವರಿಗೆ ಸೇಬಿನ ಹಾರ ಹಾಕಿ ಸಂಭ್ರಮಿಸಿದರು.

ಕಾಂಗ್ರೆಸ್ ವಿರುದ್ಧ ವಾಗ್ದಾಳಿ: ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಮಾತನಾಡಿ, ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದರೆ ಬರ ಬರಲಿದೆ. ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಜನವಿರೋಧಿಯಾಗಿದೆ. ಗ್ಯಾರಂಟಿ ಯೋಜನೆಗಳಿಂದ ಜನ ಬೇಸತ್ತಿದ್ದಾರೆ. ಮನೆಗಳಿಗೆ ವಿದ್ಯುತ್ ಉಚಿತ ನೀಡಿ, ವಾಣಿಜ್ಯ ಬಳಕೆ ಹೆಚ್ಚು ಮಾಡಿದ್ದಾರೆ. ಮಹಿಳೆಯರಿಗೆ ಉಚಿತ ಬಸ್ ಸೌಲಭ್ಯ ನೀಡಿ, ಪುರುಷರಿಗೆ ಬಸ್ ಪ್ರಯಾಣ ದರ ಹೆಚ್ಚಿಸಲಾಗಿದೆ. ಇಂತಹ ಕೆಟ್ಟ ಸರ್ಕಾರವನ್ನು ತೊಲಗಿಸಬೇಕಿದೆ ಎಂದು ವಾಗ್ದಾಳಿ ನಡೆಸಿದರು. ಕೇಂದ್ರದಲ್ಲಿ ಪ್ರಧಾನಿ ಮೋದಿ ಅವರ 10 ವರ್ಷಗಳ ಆಡಳಿತ ವೈಖರಿ ದೇಶಾದ್ಯಂತ ಮನೆ ಮಾತಾಗಿದೆ. ಹೀಗಾಗಿ ಪ್ರಜ್ಞಾವಂತ ಮತದಾರರು ಮೋದಿ ಅವರನ್ನು ಮತ್ತೊಮ್ಮೆ ಪ್ರಧಾನಿ ಮಾಡಲು ತೀರ್ಮಾನಿಸಿದ್ದಾರೆ. ಖಾಲಿ ಚೊಂಬು ಕಾಂಗ್ರೆಸ್ ಪಕ್ಷದ ಸಂಕೇತ ಎಂದು ವ್ಯಂಗ್ಯವಾಡಿದರು.

ದೇಶದ ಮತದಾರರು ಮೋದಿ ಅವರನ್ನು ಮೆಚ್ಚಿಕೊಂಡಿದ್ದು, ಅಭಿವೃದ್ಧಿ ಕಾರ್ಯಗಳನ್ನು ಒಪ್ಪಿಕೊಂಡಿದ್ದಾರೆ. ರಾಜ್ಯದ ಬಡವರಿಗೆ ಉಚಿತವಾಗಿ ನೀಡುತ್ತಿರುವ ಅನ್ನಭಾಗ್ಯ ಯೋಜನೆ ಪ್ರಧಾನಿ ಮೋದಿ ಕೊಡುಗೆ. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದರೆ 10 ಕೆಜಿ ಅಕ್ಕಿ ಕೊಡುವುದಾಗಿ ಭರವಸೆ ನೀಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಧಿಕಾರಕ್ಕೆ ಬಂದ ಬಡವರಿಗೆ ಒಂದು ಕೆಜಿ ಅಕ್ಕಿ ಕೊಡುತ್ತಿದ್ದಾರಾ ಎಂದು ಪ್ರಶ್ನಿಸಿದ ಅವರು ಸರಗೂರು, ಹೆಚ್.ಡಿ.ಕೋಟೆ ಸೇರಿದಂತೆ ರಾಜ್ಯದ ಜನತೆಗೆ ಮೋದಿ ಅವರ ಅಕ್ಕಿ ನೀಡಲಾಗುತ್ತಿದೆ ಎಂದರು.

ಇದಕ್ಕೂ ಮುನ್ನಾ ಬಿಡುಗಲು ಪಡುವಲು ವಿರಕ್ತ ಮಠಕ್ಕೆ ವಿಜಯೇಂದ್ರ ಭೇಟಿ ನೀಡಿ ಮಹದೇವ ಸ್ವಾಮೀಜಿ ಅವರಿಂದ ಆಶೀರ್ವಾದ ಪಡೆದರು. ಚಾಮರಾಜನಗರ ಲೋಕಸಭಾ ಕ್ಷೇತ್ರದ ಮೈತ್ರಿ ಅಭ್ಯರ್ಥಿ ಬಾಲರಾಜ್ ಮಾತನಾಡಿದರು. ಮಾಜಿ ಶಾಸಕ ಬೀಚನಹಳ್ಳಿ ಚಿಕ್ಕಣ್ಣ, ಬಿಜೆಪಿ ಮುಖಂಡ ಕೃಷ್ಣನಾಯಕ, ಜೆಡಿಎಸ್ ಮುಖಂಡ ಜಯಪ್ರಕಾಶ್, ಸರಗೂರು ಬಿಜೆಪಿ ಘಟಕದ ಅಧ್ಯಕ್ಷ ಗುರುಸ್ವಾಮಿ, ಕೋಟೆ ಘಟಕದ ಅಧ್ಯಕ್ಷ ಶಂಭೇಗೌಡ, ಸಿ.ಕೆ.ಗಿರೀಶ್, ಶಿವಕುಮಾರ್, ಪಪಂ ಅಧ್ಯಕ್ಷೆ ರಾಧಿಕಾ, ಉಪಾಧ್ಯಕ್ಷ ವಿನಾಯಕ, ಸ್ಥಾಯಿ ಸಮಿತಿ ಅಧ್ಯಕ್ಷೆ ಉಮಾರಾಮು, ಸದಸ್ಯರಾದ ನೂರಾಳಸ್ವಾಮಿ, ಶಿವಕುಮಾರ್, ದಿವ್ಯಾ, ಜೆಡಿಎಸ್ ತಾಲೂಕು ಅಧ್ಯಕ್ಷ ಜಿ.ಗೋಪಾಲ ಸ್ವಾಮಿ, ಕೋಟೆ ಅಧ್ಯಕ್ಷ ಎಂ.ರಾಜೇಂದ್ರ, ರುದ್ರಣ್ಣ, ಬಸವರಾಜು, ಸಿ.ವಿ.ನಾಗರಾಜು, ಶಾಂತಕುಮಾರ್, ಸುರೇಂದ್ರ ಡಿ.ಗೌಡ. ವೆಂಕಟಸ್ವಾಮಿ, ಟಿ.ವೆಂಕಟೇಶ್, ದೊಡ್ಡರಾಜು, ಗಣಪತಿ, ನಾಗನಾಯಕ, ಯತೀಶ್ ಕುಮಾರ್, ಮಹಿಳಾ ಮೋರ್ಚಾ ಸುನಂದರಾಜು, ಮಂಜುಳ, ಚಿಕ್ಕಮ್ಮ, ಪ್ರಚಾರಕ ಸತೀಶ್ ಸೇರಿದಂತೆ ಬಿಜೆಪಿ, ಜೆಡಿಎಸ್ ಕಾರ್ಯಕರ್ತರು ಹಾಜರಿದ್ದರು.


ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ಅಭ್ಯರ್ಥಿ ಬಾಲರಾಜು ಪರ ಬೃಹತ್ ರೋಡ್ ಶೋ ನಡೆಸಿದರು.

ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಸರ್ಕಾರ ಅಧಿಕಾರದಲ್ಲಿದ್ದಾಗ ರಾಜ್ಯದಲ್ಲಿ ನೆರೆ ಹಾವಳಿ ಹೆಚ್ಚಾಗಿತ್ತು. ಆಗ ಅವರು ಕೇಂದ್ರದ ಅನುದಾನ ಬಯಸದೇ ರಾಜ್ಯದ ಜನತೆಗೆ ಪರಿಹಾರ ನೀಡಿದ್ದರು. ಆದರೆ ಸಿದ್ದರಾಮಯ್ಯ ಸರ್ಕಾರ ಮೋದಿ ಅವರು ಬರ ಪರಿಹಾರ ನೀಡುತ್ತಿಲ್ಲ ಎಂದು ಆರೋಪಿಸುತ್ತಿರುವುದು ಸರಿಯಲ್ಲ. ರಾಜ್ಯದ ಜನತೆಗೆ ಮೋದಿ ಅವರ ಜನಪರ ಯೋಜನೆಗಳ ಬಗ್ಗೆ ಗೊತ್ತಿದೆ. ಹೀಗಾಗಿ ಚಾಮರಾಜನಗರ ಲೋಕಸಭಾ ಕ್ಷೇತ್ರದ ಮೈತ್ರಿ ಅಭ್ಯರ್ಥಿ ಬಾಲರಾಜ್ ಅವರಿಗೆ ಮತ ನೀಡಿ ಗೆಲುವಿಗೆ ಸಹಕರಿಸಬೇಕು.

– **ಬಿ.ವೈ.ವಿಜಯೇಂದ್ರ**, *ಬಿಜೆಪಿ ರಾಜ್ಯಾಧ್ಯಕ್ಷ.*

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	(ದೂ: 2521923)
ಮಗಧೀರ (ತೆ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ಯುವ (ಕ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಸೂರ್ಯ (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ರತ್ನ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಯುವ (ಕ)	4 ಪ್ರದರ್ಶನಗಳು
ರಾಜಕಮಲ್	
ರೂಬನ್ (ತ)	4 ಪ್ರದರ್ಶನಗಳು
ಸಂಗಂ	
ಅವತಾರ ಪುರುಷ 2 (ಕ)	4 ಪ್ರದರ್ಶನಗಳು
ಲಿಡೋ	
ಚಿರತೆ ಬಂತು ಚಿರತೆ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ಲಿಯೋ (ತ)	4 ಪ್ರದರ್ಶನಗಳು
ಪ್ರಭಾ	
ರತ್ನ (ಕ)	2 ಪ್ರದರ್ಶನಗಳು
ಲವ್ ಯೂ ಶಂಕರ (ಕ)	2 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	ಕುಂಗ್ ಫೂ ಪಾಂಡ 4 (3ಡಿ) (ಇಂ): ಬೆ.11.40ಕ್ಕೆ, ಗಾಡ್ಜಿಲ್ಲಾ ಎಕ್ಸ್ ಕಾಂಗ್ ದಿ ನ್ಯೂ ಎಂಪೈರ್ (3ಡಿ) (ಇಂ): ಮ.1.45ಕ್ಕೆ, ದಾಸವರೇಣ್ಯ ಶ್ರೀ ವಿಜಯದಾಸರು (ಕ): ಸಂ.4.10ಕ್ಕೆ, ಆವೇಶಂ (ಮ): ರಾ.7ಕ್ಕೆ, ರಾ.10.05ಕ್ಕೆ.
ಸ್ಕ್ರೀನ್ 2	ಜೈ ಗಣೇಶ (ಮ): ಬೆ.10.50ಕ್ಕೆ, ರಾ.10.10ಕ್ಕೆ, O2 (ಕ): ಮ.1.20ಕ್ಕೆ, ಮೈದಾನ್ (ಹಿಂ): ಮ.3.35ಕ್ಕೆ, ವರ್ಷನ್‌ಗಲ್ಕು ಶೇಷಂ (ಮ): ರಾ.7ಕ್ಕೆ.
ಸ್ಕ್ರೀನ್ 3	ಅವತಾರ ಪುರುಷ 2 (ಕ): ಬೆ.10.45ಕ್ಕೆ, ಬಡೇ ಮಿಯಾನ್ ಚೋಟೆ ಮಿಯಾನ್ (ಹಿಂ): ಮ.1.10ಕ್ಕೆ, ಯುವ (ಕ): ಸಂ.4.15ಕ್ಕೆ, ರಾ.7.10ಕ್ಕೆ, ರಾ.10.05ಕ್ಕೆ.
ಸ್ಕ್ರೀನ್ 4	ದೋ ಔರ್ ದೋ ಪ್ಯಾರ್ (ಹಿಂ): ಬೆ.10.55ಕ್ಕೆ, ಸಂ.4.30ಕ್ಕೆ, ರಾ.7.15ಕ್ಕೆ, ರಾ.9.55ಕ್ಕೆ, ಮಂಜುಮ್ಮೆಲ್ ಬಾಯ್ಸ್ (ಮ): ಮ.1.45ಕ್ಕೆ.

ಐನಾಕ್ಸ್ ಮೂವೀಸ್
INOX LIVE THE MOVIE
ದೂ : 2533444 / 2433456

ಸ್ಕ್ರೀನ್ 1	ಗಾಡ್ಜಿಲ್ಲಾ ಎಕ್ಸ್ ಕಾಂಗ್ ದಿ ನ್ಯೂ ಎಂಪೈರ್ (3ಡಿ) (ಇಂ): ಬೆ.10.25ಕ್ಕೆ, ರಾ.10ಕ್ಕೆ, ಯುವ (ಕ): ಮ.1ಕ್ಕೆ, ಸಂ.4.15ಕ್ಕೆ, O2 (ಕ): ರಾ.7.30ಕ್ಕೆ.
ಸ್ಕ್ರೀನ್ 2	ಬಡೇ ಮಿಯಾನ್ ಚೋಟೆ ಮಿಯಾನ್ (ಹಿಂ): ಬೆ.10.45ಕ್ಕೆ, ಸಂ.5.55ಕ್ಕೆ, ಮೈದಾನ್ (ಹಿಂ): ಮ.2.10ಕ್ಕೆ, ಮಂಜುಮ್ಮೆಲ್ ಬಾಯ್ಸ್ (ಮ): ರಾ.9.20ಕ್ಕೆ.
ಸ್ಕ್ರೀನ್ 3	ಯುವ (ಕ): ಬೆ.10.10ಕ್ಕೆ, O2 (ಕ): ಮ.1.25ಕ್ಕೆ, ಪಾರಿಜಾತ ಪರ್ವಂ (ತೆ): ಮ.3.55ಕ್ಕೆ, ಆವೇಶಂ (ಮ): ಸಂ.6.50ಕ್ಕೆ, ಬಡೇ ಮಿಯಾನ್ ಚೋಟೆ ಮಿಯಾನ್ (ಹಿಂ): ರಾ.10.10ಕ್ಕೆ.
ಸ್ಕ್ರೀನ್ 4	ಮೈದಾನ್ (ಹಿಂ): ಬೆ.11.25ಕ್ಕೆ, ರಾ.9.50ಕ್ಕೆ, ವರ್ಷನ್‌ಗಲ್ಕು ಶೇಷಂ (ಮ): ಮ.3.10ಕ್ಕೆ, ಯುವ (ಕ): ಸಂ.6.35ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821–2973519

ಸ್ಕ್ರೀನ್ 1	ಪಾರ್ಕಿಂಗ್ (ಕ): ಬೆ.10.35ಕ್ಕೆ ಸಪ್ತಸಾಗರದಾಚೆ ಎಲ್ಲೋ 2 (ಕ): ಮ.1.10ಕ್ಕೆ, ಬ್ಯಾಡ್ ಮ್ಯಾನರ್ಸ್ (ಕ): ಸಂ.4ಕ್ಕೆ, ಅರ್ಧಂಬರ್ಧ ಪ್ರೇಮಕಥೆ (ತ): ಸಂ.6.35ಕ್ಕೆ, ಅನ್ನಪೂರ್ಣಿ (ತ): ರಾ.9.15ಕ್ಕೆ.
ಸ್ಕ್ರೀನ್ 2	ಅನಿಮಲ್ (ಹಿಂ): ಬೆ.10ಕ್ಕೆ, ಸಂ.6ಕ್ಕೆ, ರಾ.9.45ಕ್ಕೆ, ಸ್ಯಾಮ್ ಬಹದ್ದೂರ್ (ಹಿಂ): ಮ.1.45ಕ್ಕೆ.
ಸ್ಕ್ರೀನ್ 3	ಸ್ಯಾಮ್ ಬಹದ್ದೂರ್ (ಹಿಂ): ಬೆ.10.10ಕ್ಕೆ, ಸಂ.4.50ಕ್ಕೆ, ಅನಿಮಲ್ (ಹಿಂ): ಮ.1.05ಕ್ಕೆ, ರಾ.7.45ಕ್ಕೆ.
ಸ್ಕ್ರೀನ್ 4	ಸಪ್ತ ಸಾಗರದಾಚೆ ಎಲ್ಲೋ 2 (ತೆ): ಬೆ.10.45ಕ್ಕೆ, ಅನಿಮಲ್ (ಹಿಂ): ಮ.2.40ಕ್ಕೆ, ನೆಪೋಲಿಯನ್ (ಇಂ): ಸಂ.6.25ಕ್ಕೆ, ಸ್ಯಾಮ್ ಬಹದ್ದೂರ್ (ಹಿಂ): ರಾ.9.35ಕ್ಕೆ.

ಪಿವಿಆರ್ ಸಿನಿಮಾಸ್
ನೆಕ್ಸಸ್ ಸೆಂಟರ್‌ಸಿಟಿ ಮಾಲ್,
2ನೇ ಮಹಡಿ, ಮೊ.ನಂ: 8951357139

ದಿ ಫ್ಯಾಮಿಲಿ ಸ್ಟಾರ್ (ತೆ): ಬೆ.9.10ಕ್ಕೆ, ಮ.12.30ಕ್ಕೆ, ಮ.3.50ಕ್ಕೆ, ರಾ.7.10ಕ್ಕೆ, ರಾ.10.30ಕ್ಕೆ, ಯುವ (ಕ): ಬೆ.10.20ಕ್ಕೆ, ಬೆ.11.35ಕ್ಕೆ, ಮ.12.45ಕ್ಕೆ, ಮ.3.20ಕ್ಕೆ, ಸಂ.5.45ಕ್ಕೆ, ಸಂ.6.45ಕ್ಕೆ, ರಾ.10ಕ್ಕೆ, ಗಾಡ್ಜಿಲ್ಲಾ ಎಕ್ಸ್ ಕಾಂಗ್ ದಿ ನ್ಯೂ ಎಂಪೈರ್ (3ಡಿ) (ಇಂ): ಬೆ.10.45ಕ್ಕೆ, ಮ.1.25ಕ್ಕೆ, ಸಂ.6.50ಕ್ಕೆ, ರಾ.9.30ಕ್ಕೆ, ಅವತಾರ ಪುರುಷ 2 (ಕ): ಮ.12.40ಕ್ಕೆ, ಸಂ.6.35ಕ್ಕೆ, ಮ್ಯಾಟ್ನಿ (ಕ): ಮ.1.35ಕ್ಕೆ, ಭರ್ಜರಿ ಗಂಡು (ಕ): ಮ.2.50ಕ್ಕೆ, ದಿ ಫಸ್ಟ್ ಓಮನ್ (ಇಂ): ಸಂ.4ಕ್ಕೆ, ರಾ.9ಕ್ಕೆ, ಕ್ರೂವ್ (ಹಿಂ): ಸಂ.4.05ಕ್ಕೆ, ರಾ.9.15ಕ್ಕೆ, ಮಂಜುಮ್ಮೆಲ್ ಬಾಯ್ಸ್ (ಮ): ಸಂ.4.30ಕ್ಕೆ, ಮಾರಿಗೋಲ್ಡ್ (ಕ): ರಾ.7.25ಕ್ಕೆ, ಆಡುಜೀವಿತಂ (ಮ): ರಾ.10.15ಕ್ಕೆ.

ಗರುಡ ಮಾಲ್,
1ನೇ ಮಹಡಿ, ಮೊ.ನಂ: 9901373210

ಯುವ (ಕ): ಬೆ.9.30ಕ್ಕೆ, ಮ.12.25ಕ್ಕೆ, ಮ.3.40ಕ್ಕೆ, ಸಂ.6.30ಕ್ಕೆ, ರಾ.10.30ಕ್ಕೆ, ದಿ ಫ್ಯಾಮಿಲಿ ಸ್ಟಾರ್ (ತೆ): ಬೆ.9.50ಕ್ಕೆ, ಮ.12ಕ್ಕೆ, ಮ.3.20ಕ್ಕೆ, ಸಂ.6.40ಕ್ಕೆ, ರಾ.10ಕ್ಕೆ, ಗಾಡ್ಜಿಲ್ಲಾ ಎಕ್ಸ್ ಕಾಂಗ್ ದಿ ನ್ಯೂ ಎಂಪೈರ್ (3ಡಿ) (ಇಂ): ಮ.1.10ಕ್ಕೆ, ಮ.3.50ಕ್ಕೆ, ರಾ.9.45ಕ್ಕೆ, ಅವತಾರ ಪುರುಷ 2 (ಕ): ಮ.2ಕ್ಕೆ, ರಾ.7.35ಕ್ಕೆ, ಮ್ಯಾಟ್ನಿ (ಕ): ಸಂ.4.40ಕ್ಕೆ, ಆಡುಜೀವಿತಂ (ಮ): ಸಂ.6.55ಕ್ಕೆ, ರಾ.10.15ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಹಂಪಾಪುರ ವ್ಯಾಪ್ತಿ ಸ್ಟಾರ್ ಚಂದ್ರು ಬಿರುಸಿನ ಪ್ರಚಾರ


ಮಾರಗೌಡನಹಳ್ಳಿಯಲ್ಲಿ ಸ್ಟಾರ್ ಚಂದ್ರು ರೋಡ್ ಶೋ ಮೂಲಕ ಮತಯಾಚಿಸಿದರು.

ಭೇರ್ಯ, ಏ.21– ಮಂಡ್ಯ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ವೆಂಕಟರಮಣೇಗೌಡ (ಸ್ಟಾರ್ ಚಂದ್ರು) ಹಂಪಾಪುರ ಜಿಪಂ ವ್ಯಾಪ್ತಿಯಲ್ಲಿ ಬಿರುಸಿನ ಪ್ರಚಾರ ಮಾಡಿದರು.

ತಾಲೂಕಿನ ಮಾರಗೌಡನಹಳ್ಳಿ ಗ್ರಾಮದ ಪುರಾಣ ಪ್ರಸಿದ್ಧ ಶ್ರೀಬಸವೇಶ್ವರ ದೇವಾಲಯಲ್ಲಿ ಗೆಲುವಿಗಾಗಿ ಪೂಜೆ ಸಲ್ಲಿಸಿ, ರೋಡ್ ಶೋ ನಡೆಸಿ ಮಾತನಾಡಿದ ವೆಂಕಟರಮಣೇಗೌಡ, ಮಂಡ್ಯ ಮಣ್ಣಿನ ಮಗನಾದ ನನ್ನನ್ನು ಚುನಾವಣೆಯಲ್ಲಿ ಬೆಂಬಲಿಸಿ ಆಶೀರ್ವದಿಸಿ. ಜಿಲ್ಲೆ ಅಭಿವೃದ್ಧಿಯೇ ನನ್ನ ಗುರಿ. ಲೋಕಸಭೆಯಲ್ಲಿ ನಿಮ್ಮೆಲ್ಲರ ದನಿಯಾಗಿ, ಅನ್ನದಾತನ ಬೆನ್ನಿಗೆ ನಿಂತು ಕೆಲಸ ಮಾಡಲು ನನಗೊಂದು ಅವಕಾಶ ಕೊಡಿ ಎಂದು ಮನವಿ ಮಾಡಿದರು.

ಸ್ಥಳೀಯ ಶಾಸಕ ಡಿ.ರವಿಶಂಕರ್ ಅವರಿಗೆ ಬೆನ್ನೆಲುಬಾಗಿ ನಿಂತು ಅವರ ಜೊತೆಗೂಡಿ ಅಭಿವೃದ್ಧಿ ಕಾರ್ಯಗಳಿಗೆ ಶ್ರಮಿಸುತ್ತೇನೆ ಎಂದು ಕೈ ಮುಗಿದು ಮತಯಾಚಿಸಿದರು.

ಶಾಸಕ ಡಿ.ರವಿಶಂಕರ್ ಮಾತನಾಡಿ, ಪಂಚ ಗ್ಯಾರಂಟಿಗಳನ್ನು ಜಾರಿಗೊಳಿಸುವ ಮೂಲಕ ರಾಜ್ಯ ಕಾಂಗ್ರೆಸ್ ಸರ್ಕಾರ ನುಡಿದಂತೆ ನಡೆದಿದೆ. ಮೋದಿ ಸರ್ಕಾರ ಏನು ಮಾಡಿದೆ? ರಾಜ್ಯದಲ್ಲಿ ಜೆಡಿಎಸ್ ಎಲ್ಲಿದೆ ಎಂದು ಪ್ರಶ್ನಿಸಿದ ಅವರು ಚುನಾವಣೆಯಲ್ಲಿ ಸ್ಟಾರ್ ಚಂದ್ರು ಅವರನ್ನು ಗೆಲ್ಲಿಸಬೇಕು ಎಂದು ಮನವಿ ಮಾಡಿದರು.

ಕೇಂದ್ರದ ಮೋದಿ ಸರ್ಕಾರ ದೇಶದ ರೈತರಿಗೆ ಅನ್ಯಾಯ ಮಾಡಿದೆ ರೈತರ ಹೋರಾಟದ ಧ್ವನಿ ಕಸಿದಿದೆ. ದೇಶದ ಬೆನ್ನೆಲುಬು ರೈತ. ಹೀಗಾಗಿ ಕೇಂದ್ರದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದರೆ ರೈತರ ಸಂಪೂರ್ಣ ಸಾಲ ಮನ್ನಾ ಮಾಡಲಾಗುವುದು. ಜೊತೆಗೆ 25 ಗ್ಯಾರಂಟಿ ಯೋಜನೆ ಜಾರಿಗೆ ತರಲಾಗುವುದು. ನಾವು ನುಡಿದಂತೆ ನಡೆದಿದ್ದೇವೆ. ಆದ್ದರಿಂದ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಸ್ಟಾರ್ ಚಂದ್ರು ಅವರಿಗೆ ಅಧಿಕ ಮತ ನೀಡಿ ಗೆಲ್ಲಿಸಿ ಎಂದರು.

ಇದೇ ವೇಳೆ ಕೆ.ಆರ್.ನಗರ ತಾಲೂಕಿನ ಹೊಸ ಅಗ್ರಹಾರ, ಕಂಚಿನಕೆರೆ, ಗಂಧನಹಳ್ಳಿ, ಚಿಕ್ಕವಡ್ಡರಗುಡಿ, ಬಾಲೂರು, ಹಂಪಾಪುರ, ಸನ್ಯಾಸಿಪುರ, ಚಂದಗಾಲು, ಚೀರ್ನಹಳ್ಳಿ, ಹೆಬ್ಬಾಳು, ಸಿದ್ದನಕೊಪ್ಪಲು, ಸಿದ್ದಾಪುರ, ಮಾವತ್ತೂರು, ಕೆಸ್ತೂರು ಕೊಪ್ಪಲು ಗ್ರಾಮದಲ್ಲಿ ರೋಡ್ ಶೋ ನಡೆಸಿ ಮತಯಾಚಿಸಲಾಯಿತು. ಈ ವೇಳೆ ಪಕ್ಷದ ಮುಖಂಡರು ವೆಂಕಟರಮಣೇಗೌಡರನ್ನು ಸನ್ಮಾನಿಸಿದರು.

ಇದೇ ವೇಳೆ ಬೆಂಗಳೂರಿನ ಭವ್ಯ, ಜಿಪಂ ಮಾಜಿ ಸದಸ್ಯ ಶಿವರಾಮ್, ತಾಲೂಕು ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಸಿ.ಪಿ. ರಮೇಶ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎಂ.ಎಸ್. ಮಹದೇವ್, ನಗರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎಂ.ಜೆ.ರಮೇಶ್, ಜಿಲ್ಲಾ ಕಾಂಗ್ರೆಸ್ ಕಾರ್ಯದರ್ಶಿ ಸಂದೇಶ್, ಮುಖಂಡ ವೆಂಕಟೇಶ್, ಪ್ರಶಾಂತ್ ಜೈನ್, ತಾ.ಕಾಂಗ್ರೆಸ್ ವಕ್ತಾರ ಜಾಬೀರ್, ಟಿಎಪಿಎಂಎಸ್ ನಿರ್ದೇಶಕ ರವಿ, ಸಾಕರಾಜ್, ರಮೇಶ್ ಇತರರಿದ್ದರು.


ಪಿರಿಯಾಪಟ್ಟಣ ತಾಲೂಕಿನ ಎ.ಜಿ.ಕೊಪ್ಪಲು ಸೇರಿದಂತೆ ವಿವಿಧೆಡೆ ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಯದುವೀರ್ ಪರ ಮಾಜಿ ಶಾಸಕ ಕೆ.ಮಹದೇವ ಬಿರುಸಿನ ಪ್ರಚಾರ ನಡೆಸಿದರು. ಈ ವೇಳೆ ತಾಲೂಕು ಜೆಡಿಎಸ್ ಅಧ್ಯಕ್ಷ ಅಣ್ಣಯ್ಯಶೆಟ್ಟಿ, ಮುಖಂಡರಾದ ಮಂಜುನಾಥ್, ವಕೀಲ ನಾಗರಾಜ್ ಇತರರಿದ್ದರು.

ವ್ಯಕ್ತಿ ಅನುಮಾನಾಸ್ಪದ ಸಾವು

ನಂಜನಗೂಡು, ಏ.21– ವ್ಯಕ್ತಿಯೋರ್ವ ಅನುಮಾನಾಸ್ಪದವಾಗಿ ಸಾವನ್ನಪ್ಪಿರುವ ಘಟನೆ ತಾಲೂಕಿನ ರಾಂಪುರದಲ್ಲಿ ನಡೆದಿದೆ.

ಗ್ರಾಮದ ನಿವಾಸಿ ನಾಗೇಂದ್ರ(38) ಸಾವನ್ನಪ್ಪಿದವರು. ಈತ ವಿದ್ಯುತ್ ಕಂಬ ಅಳವಡಿಸುವ ಕೆಲಸ ಮಾಡಿಕೊಂಡಿದ್ದು, ಕೆಲಸ ನಿಮಿತ್ತ ಹೊರಗಡೆ ಹೋದರೆ ಒಂದು ತಿಂಗಳಾದರೂ ಮನೆಗೆ ಬರುತ್ತಿರಲಿಲ್ಲ. ಏ.19ರಂದು ಗ್ರಾಮಕ್ಕೆ ಬಂದಿದ್ದ ನಾಗೇಂದ್ರ ತನ್ನ ಸಹೋದರ ಕರಿಯಯ್ಯನ ಮನೆಗೆ ಹೋಗಿದ್ದು, ಅವರು ಮನೆಗೆ ಹೋಗುವಂತೆ ಹೇಳಿದ್ದಾರೆ. ಆದರೆ ಮನೆಗೆ ಬಂದಿರಲಿಲ್ಲ. ಭಾನುವಾರ ಬೆಳಗ್ಗೆ ಬಟ್ಟೆ ಒಣಗಾಕಲು ಮನೆ ತಾರಸಿಗೆ ಹೋದಾಗ ಪತಿ ನಾಗೇಂದ್ರ ಮೃತದೇಹ ಪತ್ತೆಯಾಗಿದೆ ಎಂದು ಸಾವಿನ ಬಗ್ಗೆ ಅನುಮಾನ ವ್ಯಕ್ತಪಡಿಸಿ ಮೃತನ ಪತ್ನಿ ಮಂಗಳ ಹುಲ್ಲಹಳ್ಳಿ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ. ಸ್ಥಳಕ್ಕೆ ಹುಲ್ಲಹಳ್ಳಿ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ನಾಗೇಂದ್ರನ ಮುಖದ ಮೇಲೆ ರಕ್ತದ ಕಲೆಗಳು ಪತ್ತೆಯಾಗಿದ್ದು, ಪೊಲೀಸರು ಕೊಲೆ ಶಂಕೆ ವ್ಯಕ್ತಪಡಿಸಿದ್ದಾರೆ. ಬಳಿಕ ಸರ್ಕಾರ ಪರೀಕ್ಷೆಯಲ್ಲಿ ದೇಹದ ಮರಣೋತ್ತರ ಪರೀಕ್ಷೆ ನಡೆಸಲಾಯಿತು.

ನಿರಂಕುಶ ಆಡಳಿತ ಕೊನೆಗಾಣಿಸಲು ‘ಕೈ’ಗೆ ಮತ ನೀಡಿ

ಜಿಲ್ಲಾ ಉಸ್ತುವಾರಿ ಸಚಿವ ಹೆಚ್.ಸಿ.ಮಹದೇವಪ್ಪ



ನಂಜನಗೂಡು, ಏ.21– ಬಿಜೆಪಿ 400 ಸ್ಥಾನಗಳನ್ನು ಗೆದ್ದು ಕೇಂದ್ರದಲ್ಲಿ ಅಧಿಕಾರಕ್ಕೆ ಬಂದರೆ ಸಂವಿಧಾನ ಬದಲಾಯಿಸುವುದಾಗಿ ಹೇಳುತ್ತಿದೆ. ಪ್ರಜಾಪ್ರಭುತ್ವದ ಉಳಿವಿಗಾಗಿ, ನಿರಂಕುಶ ಆಡಳಿತ ಕೊನೆಗಾಣಿಸಲು ಕಾಂಗ್ರೆಸ್ ಪಕ್ಷಕ್ಕೆ ಮತ ನೀಡಿ ಎಂದು ಜಿಲ್ಲಾ ಉಸ್ತುವಾರಿ ಸಚಿವ ಹೆಚ್.ಸಿ. ಮಹದೇವಪ್ಪ ಮನವಿ ಮಾಡಿದರು.

ತಾಲೂಕಿನ ವರುಣ ಕ್ಷೇತ್ರ ವ್ಯಾಪ್ತಿಯ ತಗಡೂರು, ನಗರ್ಲೆ, ಸುತ್ತೂರು, ಬಿಳಿಗೆರೆ, ಹೊಸಕೋಟೆ ಗ್ರಾಮದಲ್ಲಿ ಭಾನುವಾರ ರೋಡ್ ಶೋ ನಡೆಸಿ ಕಾಂಗ್ರೆಸ್ ಅಭ್ಯರ್ಥಿ ಸುನೀಲ್ ಬೋಸ್ ಪರ ಮತಯಾಚನೆ ಮಾಡಿ ಮಾತನಾಡಿದರು. ಕೇಂದ್ರ ಸರ್ಕಾರ ಬರ ಪರಿಹಾರ ನೀಡದೆ ಗಣತಂತ್ರ ವ್ಯವಸ್ಥೆಗೆ ವಿರೋಧವಾಗಿ ಸರ್ವಾಧಿಕಾರ ನಡೆಸುತ್ತಿದೆ. ಈ ಹಿನ್ನೆಲೆಯಲ್ಲಿ ದೇಶದ ಪ್ರಜಾಪ್ರಭುತ್ವದ ಅಳಿವು–ಉಳಿವನ್ನು ನಿರ್ಧರಿಸುವ ಚುನಾವಣೆ ಇದಾಗಿದ್ದು, ಕೇಂದ್ರದ ಮೋದಿ ನೇತೃತ್ವದ ಸರ್ವಾಧಿಕಾರಿ ಆಡಳಿತ ಕೊನೆಗಾಣಿಸಲು ಕಾಂಗ್ರೆಸ್ ಅಭ್ಯರ್ಥಿಗಳಿಗೆ ಮತ ನೀಡಿ. ಬಿಜೆಪಿ ಅದಾನಿ, ಅಂಬಾನಿಗಳ ಪಕ್ಷ. ಇವರಿಗೆ ಬಡವರ ಬಗ್ಗೆ ಕಾಳಜಿ ಇಲ್ಲ. ರೈತರ ಜಮೀನನ್ನು ಬಂಡವಾಳಶಾಹಿಗಳು ಎಷ್ಟು ಬೇಕಾದರೂ ಖರೀದಿಸಬಹುದಾದ ಶಾಸನವನ್ನು ಬಿಜೆಪಿ ತಂದಿದೆ. ಕೇಂದ್ರದ ರೈತ ವಿರೋಧಿ ನೀತಿ ವಿರುದ್ಧ ಪ್ರತಿಭಟನೆ ನಡೆಸಿದ 100ಕ್ಕೂ ಹೆಚ್ಚು ರೈತರು ಪ್ರಾಣ ಕಳೆದುಕೊಂಡಿದ್ದಾರೆ. ರೈತರ ಜೀವಕ್ಕೆ ಯಾವುದೇ ಬೆಲೆ ಇಲ್ಲ ಎಂದರು.

25 ವರ್ಷಗಳಿಂದ ಕ್ಷೇತ್ರದ ಮತದಾರರ ಸೇವೆ ಮಾಡುತ್ತಿದ್ದೇನೆ. ವರುಣ ಕ್ಷೇತ್ರದ ಮತದಾರರು ಸತತವಾಗಿ ಕಾಂಗ್ರೆಸ್‌ಗೆ ಬೆಂಬಲ ನೀಡುತ್ತಾ ಬಂದಿದ್ದೀರಿ. ಸಿದ್ದರಾಮಯ್ಯನವರು ಕ್ಷೇತ್ರವನ್ನು ಸಾಕಷ್ಟು ಅಭಿವೃದ್ಧಿಪಡಿಸಿದ್ದಾರೆ. ಸರ್ಕಾರ ಜನರಿಗೆ ಭರವಸೆ ನೀಡಿದಂತೆ 5 ಗ್ಯಾರಂಟಿಗಳನ್ನು ಯಶಸ್ವಿಯಾಗಿ ಈಡೇರಿಸಿದೆ. ಹೀಗಾಗಿ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಸುನೀಲ್ ಬೋಸ್ ಅವರನ್ನು ಹೆಚ್ಚಿನ ಮತಗಳಿಂದ ಜಯಶೀಲರನ್ನಾಗಿ ಮಾಡಬೇಕು ಎಂದು ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ವಾಲ್ಮೀಕಿ ನಿಗಮ ಮಾಜಿ ಅಧ್ಯಕ್ಷ ಹೆಚ್.ಸಿ.ಬಸವರಾಜು, ಕಾಂಗ್ರೆಸ್ ಮುಖಂಡ ವರುಣ ಮಹೇಶ್, ಜಿಪಂ ಮಾಜಿ ಅಧ್ಯಕ್ಷ ಬಿ.ಎಂ. ರಾಮು, ತಗಡೂರು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ರಂಗಸ್ವಾಮಿ, ಯುವ ಕಾಂಗ್ರೆಸ್ ಅಧ್ಯಕ್ಷ ಗಿರೀಶ್, ಮುಖಂಡರಾದ ದಕ್ಷಿಣಮೂರ್ತಿ, ನಂದೀಶ, ಆಲಂಬೂರು ಮೋಹನ, ಚಿನ್ನಂಬಳ್ಳಿ ರಾಜು, ಸಿ.ಆರ್.ಮಹದೇವು, ನಗರ್ಲೆ ಗುರುಪಾದಸ್ವಾಮಿ, ಗೋನಹಳ್ಳಿ ಕುಮಾರ್, ಹೊಸಕೋಟೆ ಕುಮಾರ್, ಕಲ್ಮಳ್ಳಿ ಬಾಬು ಉಪಸ್ಥಿತರಿದ್ದರು.

ಪ್ರಜಾಪ್ರಭುತ್ವ, ಸಂವಿಧಾನ ಉಳಿವಿಗಾಗಿ ಕಾಂಗ್ರೆಸ್ ಬೆಂಬಲಿಸಿ

ವಿಧಾನಪರಿಷತ್ ಸದಸ್ಯ ಡಾ.ಡಿ.ತಿಮ್ಮಯ್ಯ ಮನವಿ


ಹುಣಸೂರಲ್ಲಿ ನಡೆದ ಸಭೆಯಲ್ಲಿ ಎಂಎಲ್‌ಸಿ ಡಾ.ಡಿ.ತಿಮ್ಮಯ್ಯ ಮಾತನಾಡಿದರು.

ಹುಣಸೂರು, ಏ.21– ಪ್ರಜಾಪ್ರಭುತ್ವ, ಸಂವಿಧಾನ ಉಳಿವಿಗಾಗಿ ಕಾಂಗ್ರೆಸ್ ಬೆಂಬಲಿಸಿ ಎಂದು ವಿಧಾನ ಪರಿಷತ್ ಸದಸ್ಯ ಡಾ.ಡಿ. ತಿಮ್ಮಯ್ಯ ಮನವಿ ಮಾಡಿದರು.

ನಗರದ ವಜ್ರಮ್ಮ ಕಲ್ಯಾಣ ಮಂಟಪದಲ್ಲಿ ನಡೆದ ಆದಿಜಾಂಬವ ತಾಲೂಕು ಮಟ್ಟದ ಮುಖಂಡರ ಸಭೆಯಲ್ಲಿ ಮಾತನಾಡಿದ ಅವರು, ರಾಜ್ಯ ಕಾಂಗ್ರೆಸ್ ಸರ್ಕಾರ ಬಡವರ ಬದುಕನ್ನು ಸುಧಾರಿಸಲು ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿದೆ. ಅದೇ ರೀತಿ ಕೇಂದ್ರದಲ್ಲಿ ಪಕ್ಷ ಅಧಿಕಾರಕ್ಕೆ ಬಂದರೆ ಮಹಾಲಕ್ಷ್ಮಿ ಯೋಜನೆಯಡಿ ವರ್ಷಕ್ಕೆ ಮನೆಯೊಡತಿಗೆ ಒಂದು ಲಕ್ಷ ನೀಡಲಾಗುವುದು. ಅಲ್ಲದೇ ವಿದ್ಯಾವಂತ ಯುವಜನರಿಗೆ ತರಬೇತಿ ಮತ್ತು ಒಂದು ಲಕ್ಷ ವೇತನ, ರೈತ ಯೋಜನೆಯಡಿ ರೈತರ ಸಾಲ ಮನ್ನಾ ಮತ್ತು ಸೂಕ್ತ ಬೆಂಬಲ ಬೆಲೆ ನೀಡಲಾಗುವುದು ನರೇಗಾ ಯೋಜನೆಯಡಿ ದಿನಕ್ಕೆ 400 ರೂ. ನೀಡಲಾಗುವುದು ಹಾಗೂ ಸಾಮಾಜಿಕ ಸಮಾನತೆಗಾಗಿ ಜಾತಿ ಗಣತಿ ನಡೆಸಲಾಗುವುದು ಎಂದರು.

ಮಾಜಿ ಶಾಸಕ ಹೆಚ್.ಪಿ.ಮಂಜುನಾಥ್ ಮಾತನಾಡಿ, ತಾಲೂಕಿನಲ್ಲಿ ಆದಿಜಾಂಬವ ಸಮುದಾಯವನ್ನು ಕಾಂಗ್ರೆಸ್ ಪಕ್ಷ ಗೌರವಯುತವಾಗಿ ನಡೆಸಿಕೊಂಡಿದೆ. ಕಳೆದ ವಿಧಾನಪರಿಷತ್ ಚುನಾವಣೆಯಲ್ಲಿ ಸಮುದಾಯದವರನ್ನು ಪರಿಷತ್‌ಗೆ ಆಯ್ಕೆ ಮಾಡಿ ಕಳುಹಿಸಲಾಗಿದೆ. ಆದ್ದರಿಂದ ಸಮುದಾಯದವರು ಚುನಾವಣೆಯಲ್ಲಿ ಕಾಂಗ್ರೆಸ್ ಬೆಂಬಲಿಸಬೇಕೆಂದು ಕರೆ ನೀಡಿದರು. ಕಾಂಗ್ರೆಸ್ ಪಕ್ಷ ತನ್ನ ಪ್ರಣಾಳಿಕೆಯಲ್ಲಿ ಹಲವು ಗ್ಯಾರಂಟಿಗಳನ್ನು ಘೋಷಣೆ ಮಾಡಿದ್ದು, ಕೇಂದ್ರದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಅಷ್ಟು ಗ್ಯಾರಂಟಿಗಳನ್ನು ಅನುಷ್ಠಾನಗೊಳಿಸಲಾಗುವುದು ಎಂದರು. ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಎಂ.ಲಕ್ಷ್ಮಣ ಮಾತನಾಡಿ, ಕೋಮುವಾದಿ ಬಿಜೆಪಿ ಸರ್ಕಾರವನ್ನು ಅಧಿಕಾರದಿಂದ ಕಿತ್ತೊಗೆಯುವ ಸಂಕಲ್ಪವನ್ನು ಜನ ಮಾಡಬೇಕು ಎಂದು ಮನವಿ ಮಾಡಿದರು.

ಸಭೆಯಲ್ಲಿ ಮುಖಂಡರಾದ ಎಡತೊರೆ ನಿಂಗರಾಜು, ಕೆಇಬಿ ರಾಜಪ್ಪ ಮಾತನಾಡಿದರು. ನಗರಸಭೆ ಮಾಜಿ ಅಧ್ಯಕ್ಷರಾದ ಸೌರಬ ಸಿದ್ದರಾಜು, ಲಕ್ಷ್ಮಣ್, ರಮೇಶ್, ಮಾಜಿ ಪುರಸಭೆ ಉಪಾಧ್ಯಕ್ಷ ಎಸ್.ಜಯರಾಮ್, ದಲಿತ ಮುಖಂಡ ಆನಂದಸ್ವಾಮಿ, ತಾಲೂಕು ಕಾರ್ಯಾಧ್ಯಕ್ಷ ಪುಟ್ಟರಾಜು, ಡಿ.ಕುಮಾರ್, ಭೋಜರಾಜ್, ಶಿವರಾಜು, ಜಾಕಿರ್ ಹುಸೇನ್, ರಾಘು, ಸಂತೋಷ್ ಮತ್ತಿತರರಿದ್ದರು.

ಮೋದಿ ಮತ್ತೊಮ್ಮೆ ಪ್ರಧಾನಿಯಾಗಲು ಬಿಜೆಪಿ ಬೆಂಬಲಿಸಿ

ಮುಸ್ಲಿಂ ಸಮುದಾಯಕ್ಕೆ ರಾಜ್ಯ ಅಲ್ಪ ಸಂಖ್ಯಾತರ ವಿಭಾಗದ ಮಾಜಿ ಜಿಲ್ಲಾಧ್ಯಕ್ಷ ಇಲ್ಯಾಸ್ ಅಹಮದ್ ಕರೆ


ಸುದ್ದಿಗೋಷ್ಠಿಯಲ್ಲಿ ಇಲ್ಯಾಸ್ ಅಹಮದ್ ಮಾತನಾಡಿದರು.


ತಿ.ನರಸೀಪುರ, ಏ.21– ಸಬ್ ಕಾ ಸಾಥ್ ಸಬ್ ಕಾ ವಿಕಾಸ್ ಧ್ಯೇಯ ವಾಕ್ಯದೊಂದಿಗೆ ಭಾರತವನ್ನು ವಿಶ್ವ ಗುರುವಾಗಿಸಲು ಪಣತೊಟ್ಟಿರುವ ದೇಶದ ಹೆಮ್ಮೆಯ ಪ್ರಧಾನಿ ಮೋದಿ ಅವರನ್ನು ಮತ್ತೆ ಪ್ರಧಾನಿ ಮಾಡಲು ಮುಸ್ಲಿಂ ಬಾಂಧವರು ಬಿಜೆಪಿ ಪಕ್ಷಕ್ಕೆ ಮತ ನೀಡಬೇಕೆಂದು ರಾಜ್ಯ ಅಲ್ಪ ಸಂಖ್ಯಾತರ ವಿಭಾಗದ ಮಾಜಿ ಜಿಲ್ಲಾಧ್ಯಕ್ಷ ಇಲ್ಯಾಸ್ ಅಹಮದ್ ಕರೆ ನೀಡಿದ್ದಾರೆ.

ಪಟ್ಟಣದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೇಂದ್ರದ ಬಿಜೆಪಿ ಸರ್ಕಾರ ಕಳೆದ 10 ವರ್ಷಗಳಲ್ಲಿ 142ಕ್ಕೂ ಹೆಚ್ಚು ಜನೋಪಯೋಗಿ ಯೋಜನೆಗಳನ್ನು ಜಾರಿಗೆ ತಂದಿದೆ. ಯಾವುದೇ ಧರ್ಮ, ಜಾತಿ, ಪಂಗಡದ ಭೇದ ಬಾವವಿಲ್ಲದೇ ಸರ್ವ ಧರ್ಮೀಯರು ಯೋಜನೆಯ ಫಲಾನುಭವಿಗಳಾಗಿದ್ದಾರೆ. ಮೋದಿ ಪ್ರಧಾನಿಯಾದ ನಂತರ ದೇಶದಲ್ಲಿ ಶಾಂತಿ ನೆಲಸಿದೆ. ಯಾವುದೇ ಕೋಮು ಗಲಭೆಗಳಾಗಿಲ್ಲ. ಅಲ್ಪ ಸಂಖ್ಯಾತರ ಮೇಲೆ ಹಲ್ಲೆಗಳಾಗಿಲ್ಲ. ಮೊದಲೆಲ್ಲಾ ಕೋಮು ದ್ವೇಷ ಹರಡಿದರೆ ತಿಂಗಳು ಗಟ್ಟಲೆ ಗಲಾಟೆಗಳಾಗುತ್ತಿದ್ದವು. ಪಟ್ಟಣಕ್ಕೆ ಪಟ್ಟಣವೇ ಹೊತ್ತಿ ಉರಿಯುವಂತ ಪರಿಸ್ಥಿತಿ ಇತ್ತು. ಆದರೀಗ ಅಂತಹ ಪರಿಸ್ಥಿತಿಗೆ ಅವಕಾಶವೇ ಇಲ್ಲ. ಮೋದಿ ಸರ್ಕಾರದಲ್ಲಿ ಅಲ್ಪಸಂಖ್ಯಾತರು ಯಾವುದೇ ಆತಂಕವಿಲ್ಲದೇ ನೆಮ್ಮದಿಯ ಜೀವನ ನಡೆಸುತ್ತಿದ್ದಾರೆ. ಹಾಗಾಗಿ ಬಿಜೆಪಿ ಎಂದರೆ ಅಲ್ಪ ಸಂಖ್ಯಾತರ ವಿರೋಧಿಗಳ ಪಕ್ಷ ಎಂಬ ತಪ್ಪು ಕಲ್ಪನೆಯನ್ನು ಬದಿಗಿಟ್ಟು ಮುಸಲ್ಮಾನ್ ಬಂಧುಗಳು ಬಿಜೆಪಿ ಪಕ್ಷ ಬೆಂಬಲಿಸಿ ಎಂದು ಮನವಿ ಮಾಡಿದರು.

ಸಿಎಎ, ಎನ್‌ಆರ್‌ಸಿ ಕಾಯ್ದೆಯಿಂದ ತೊಂದರೆ ಇಲ್ಲ: ಸಿಎಎ ಹಾಗೂ ಎನ್‌ಆರ್‌ಸಿ ಕಾಯ್ದೆಯಿಂದ ಮುಸ್ಲಿಮರಿಗೆ ಯಾವುದೇ ತೊಂದರೆ ಇಲ್ಲ. ವಿಪಕ್ಷದವರು ಓಟ್ ಬ್ಯಾಂಕ್‌ಗಾಗಿ ಜನರಲ್ಲಿ ಕಾಯ್ದೆ ಬಗ್ಗೆ ತಪ್ಪು ಕಲ್ಪನೆ ಮೂಡಿಸುತ್ತಿದ್ದಾರೆ. ಡಿಟೆನ್ಷನ್ ಸೆಂಟರ್ ತೆರೆದು ಅಲ್ಲಿಗೆ ಮುಸ್ಲಿಮರನ್ನು ಹಾಕುತ್ತಾರೆ ಎಂಬ ಸುದ್ದಿ ಹಬ್ಬಿಸುತ್ತಿದ್ದಾರೆ. ದೇಶದಿಂದ ಯಾವುದೇ ವ್ಯಕ್ತಿಯನ್ನು ಗಡಿ ಪಾರು ಮಾಡುವುದು ಸುಲಭದ ಮಾತಲ್ಲ. ಕಾಯ್ದೆ ಅರ್ಥೈಸಿಕೊಳ್ಳಬೇಕಿದೆ. ಹೊರ ದೇಶದಿಂದ ಭಾರತಕ್ಕೆ ಬಂದು ಕಾಯ್ದೆ ಉಲ್ಲಂಘಿಸಿ ಅಕ್ರಮವಾಗಿ ನೆಲೆಸಿರುವವರನ್ನು ಗುರುತಿಸಲಷ್ಟೆ ಕಾಯ್ದೆ ಜಾರಿಗೊಳಿಸಲಾಗುತ್ತಿದೆ. ದೇಶದಲ್ಲಿ ನೆಲೆಸಿರುವ ಮುಸ್ಲಿಂರಿಗೆ ಕಾಯ್ದೆಯಿಂದ ಯಾವುದೇ ತೊಂದರೆಯಾಗುವುದಿಲ್ಲ ಎಂದರು.

ಕಾಂಗ್ರೆಸ್‌ನಿಂದ ಸುಳ್ಳು ಭರವಸೆ: ಕಾಂಗ್ರೆಸ್ ಪಕ್ಷದವರಿಗೆ ಗ್ಯಾರಂಟಿಯೇ ಮುಳುವಾಗಲಿದೆ. ರಾಜ್ಯದಲ್ಲಿ ಗ್ಯಾರಂಟಿ ಯೋಜನೆಗಳಿಗೆ ಬಜೆಟ್‌ನಲ್ಲಿ ಹಣ ಹೊಂದಿಸಲು ಸಾಧ್ಯವಾಗುತ್ತಿಲ್ಲ. ಹಣಕಾಸಿನ ಪರಿಸ್ಥಿತಿ ಹದಗೆಟ್ಟಿದೆ. ಕೇಂದ್ರ ಸರ್ಕಾರದ ಬಜೆಟ್‌ನ ಗಾತ್ರವೇ 45 ಲಕ್ಷ ಕೋಟಿ. ಕಾಂಗ್ರೆಸ್ ಪಕ್ಷ ನೀಡಿರುವ ಆಶ್ವಾಸನೆಯ ಪ್ರಕಾರ ಮಹಿಳೆಯರ ಖಾತೆಗೆ ವರ್ಷಕ್ಕೆ ಒಂದು ಲಕ್ಷ ಹಣ ಹಾಕಬೇಕಾದರೆ ವರ್ಷಕ್ಕೆ 60 ಲಕ್ಷ ಕೋಟಿ ರೂ. ಬೇಕಾಗುತ್ತದೆ. ಹಾಗಾಗಿ ಈ ಯೋಜನೆ ಸಾಧ್ಯವಿಲ್ಲ. ಸುಳ್ಳು ಭರವಸೆಗಳನ್ನು ನೀಡುವ ಮೂಲಕ ಕಾಂಗ್ರೆಸ್ ಕೇಂದ್ರದಲ್ಲಿ ಅಧಿಕಾರಕ್ಕೆ ಬರಲು ಯತ್ನಿಸುತ್ತಿದೆ ಎಂದರು.

ಕೇಂದ್ರದಲ್ಲಿ 400, ರಾಜ್ಯದಲ್ಲಿ 25 ಸ್ಥಾನ: ಪ್ರಸಕ್ತ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷಕ್ಕೆ ತೀವ್ರ ಮುಖಭಂಗವಾಗಲಿದ್ದು, ಬಿಜೆಪಿ ಪಕ್ಷ ಕೇಂದ್ರದಲ್ಲಿ 400ಕ್ಕೂ ಹೆಚ್ಚು ಸ್ಥಾನ ಗೆಲ್ಲುವ ಮೂಲಕ ಮತ್ತೆ ಅಧಿಕಾರ ಹಿಡಿಯಲಿದೆ. ರಾಜ್ಯದಲ್ಲಿ ನಾವು 25 ಸ್ಥಾನ ಗೆಲ್ಲಲಿದ್ದೇವೆ. ಮೈಸೂರು– ಕೊಡಗು ಕ್ಷೇತ್ರದಲ್ಲಿ ಯದುವೀರ್ ಹಾಗೂ ಚಾಮರಾಜನಗರ ಕ್ಷೇತ್ರದಲ್ಲಿ ಬಾಲರಾಜು ಬಹುಮತಗಳಿಂದ ಗೆಲುವು ಸಾಧಿಸಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ಜಿಲ್ಲಾ ಉಪಾಧ್ಯಕ್ಷ ನಗರ್ಲೆ ಎಂ.ಡಿ. ಉಮರ್ ಮಾತನಾಡಿದರು. ಸುದ್ದಿಗೋಷ್ಠಿಯಲ್ಲಿ ಜಿಯಾ ಉಲ್ಲಾ, ಇರ್ಫಾನ್ ಅಹಮದ್, ಹನೀಫ್, ಮೊಹಮ್ಮದ್ ನೇಮತ್, ಆದಿಲ್ ಪಾಷಾ, ಫಾರೂಕ್ ಪಾಷಾ ಮತ್ತಿತರರಿದ್ದರು.


ಹೆಚ್.ಡಿ.ಕೋಟೆ ತಾಲೂಕಿನ ಜಿನ್ನಹಳ್ಳಿಯಲ್ಲಿ ಶಾಸಕ ಅನಿಲ್ ಅವರ ಸಮ್ಮುಖದಲ್ಲಿ ಮುಖಂಡ ಮರಳೂರುನಾಯಕ ತಮ್ಮ ಅಪಾರ ಬೆಂಬಲಿಗರೊಂದಿಗೆ ಜೆಡಿಎಸ್ ತೊರೆದು ಕಾಂಗ್ರೆಸ್‌ಗೆ ಸೇರ್ಪಡೆಯಾದರು. ಈ ವೇಳೆ ಕೋಟೆ, ಸರಗೂರು ಚಿಕ್ಕಮಾದು ಅಭಿಮಾನಿ ಬಳಗದ ತಾಲೂಕು ಅಧ್ಯಕ್ಷ ಜಿನ್ನಹಳ್ಳಿ ರಾಜನಾಯಕ, ಮೈಮುಲ್ ನಿರ್ದೇಶಕ ಈರೇಗೌಡ, ಸಿಂಡಿಕೇಟ್ ಸದಸ್ಯ ಕ್ಯಾತನಹಳ್ಳಿ ನಾಗರಾಜು, ತಾಪಂ ಸದಸ್ಯರಾದ ನಟರಾಜ್, ಕೆಂಡಗಣ್ಣೇಗೌಡ, ಗ್ರಾಪಂ ಅಧ್ಯಕ್ಷ ಕುಮಾರ್, ಮಾಜಿ ಅಧ್ಯಕ್ಷ ಶ್ರೀನಿವಾಸ್, ಮುಖಂಡರಾದ ಅಜೀಜ್, ಕೆಂಡಗಣ್ಣಸ್ವಾಮಿ, ಚಿಕ್ಕನಾಯಕ, ಮಂಜು ಇನ್ನಿತರರಿದ್ದರು.

ಸರ್ವಮಂಗಳಮ್ಮ ನಿಧನ



ಹುಣಸೂರು, ಏ.21– ಪಟ್ಟಣದ ಸ್ಟೋರ್ ಬೀದಿ ನಿವಾಸಿ ಲೇ.ಎಸ್.ಎಂ.ಮಹದೇವಪ್ಪ ಅವರ ಪತ್ನಿ ಸರ್ವಮಂಗಳಮ್ಮ(68) ಭಾನುವಾರ ರಾತ್ರಿ ನಿಧನರಾದರು. ಅಂತ್ಯಕ್ರಿಯೆ ಸೋಮವಾರ ಮಧ್ಯಾಹ್ನ 12 ಗಂಟೆಗೆ ನಗರದ ಬೈಪಾಸ್ ರಸ್ತೆಯಲ್ಲಿರುವ ರುದ್ರಭೂಮಿಯಲ್ಲಿ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ವೀರಶೈವ–ಲಿಂಗಾಯತರು ಬಿಜೆಪಿ ಬೆಂಬಲಿಸಿ

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಮನವಿ



ಮೈಸೂರಿನ ಶ್ರೀಕಂಠೀರವ ನರಸಿಂಹರಾಜ ಸ್ಪೋರ್ಟ್ಸ್ ಕ್ಲಬ್ ಸಭಾಂಗಣದಲ್ಲಿ ಭಾನುವಾರ ನಡೆದ ವೀರಶೈವ–ಲಿಂಗಾಯತ ಮುಖಂಡರ ಪ್ರಬುದ್ಧರ ಸಭೆಯಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಮಾತನಾಡಿದರು.

ಮೈಸೂರು,ಏ.21(ಎಂಟಿವೈ)–ಮೈಸೂರು–ಕೊಡಗು ಹಾಗೂ ಚಾಮರಾಜನಗರ ಲೋಕಸಭಾ ಕ್ಷೇತ್ರದಲ್ಲಿ ಬಿಜೆಪಿ ಅಭ್ಯರ್ಥಿಗಳನ್ನು ವೀರಶೈವ–ಲಿಂಗಾಯತ ಸಮುದಾಯ ಬೆಂಬಲಿಸಬೇಕು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಮನವಿ ಮಾಡಿದ್ದಾರೆ.

ಮೈಸೂರಿನ ಲಲಿತಮಹಲ್ ರಸ್ತೆಯಲ್ಲಿರುವ ಶ್ರೀಕಂಠೀರವ ನರಸಿಂಹರಾಜ ಸ್ಪೋರ್ಟ್ಸ್ ಕ್ಲಬ್ ಸಭಾಂಗಣದಲ್ಲಿ ಭಾನುವಾರ ನಡೆದ ವೀರಶೈವ–ಲಿಂಗಾಯತ ಮುಖಂಡರ ಪ್ರಬುದ್ಧರ ಸಭೆಯಲ್ಲಿ ಮಾತನಾಡಿದ ಅವರು, ಕಳೆದ ನಾಲ್ಕೈದು ದಶಕಗಳಿಂದ ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಯಲ್ಲಿ ಬಿ.ಎಸ್.ಯಡಿಯೂರಪ್ಪ ಅವರ ಮೇಲೆ ತೋರಿದ ಪ್ರೀತಿ, ವಿಶ್ವಾಸ, ನಂಬಿಕೆಯನ್ನು ನನ್ನ ಮೇಲೂ ಇಡಬೇಕು. ಇದನ್ನು ಉಳಿಸಿಕೊಂಡು ನಿಮ್ಮ ನಂಬಿಕೆಗೆ ಧಕ್ಕೆ ಬರದಂತೆ ಕೆಲಸ ಮಾಡುತ್ತೇನೆ. ಈ ಕ್ಷೇತ್ರಗಳಲ್ಲಿ ಹಿನ್ನಡೆಯಾಗದಂತೆ ನೋಡಿಕೊಳ್ಳಿ ಎಂದು ಮನವಿ ಮಾಡಿದರು.

ಹುಬ್ಬಳ್ಳಿಯಲ್ಲಿ ನಡೆದ ನೇಹಾ ಹತ್ಯೆ ಪ್ರಕರಣವನ್ನು ಸಮಾಜ ಗಮನಿಸಬೇಕು. ವೈಯಕ್ತಿಕ ಕಾರಣದಿಂದ ಕೊಲೆ ನಡೆದಿದೆ ಎಂದು ಮುಖ್ಯಮಂತ್ರಿಗಳು ಹೇಳಿದ್ದಾರೆ. ಅವರ ಮಾನಸಿಕ ಸ್ಥಿತಿ ಹೇಗಿರಬೇಕು. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ ಅಭಿವೃದ್ಧಿ ಕಾರ್ಯ ಸಂಪೂರ್ಣ ನಿಂತು ಹೋಯಿತು. ಕಾಂಗ್ರೆಸ್ ಸರ್ಕಾರದ ಗ್ಯಾರಂಟಿ ಶಾಶ್ವತವಲ್ಲ. ಕಾಂಗ್ರೆಸ್ ಅಧಿಕಾರಕ್ಕೆ ಬಂದ ಮೇಲೆ ಸಾಲ ಮಾಡಲಾಗುತ್ತಿದೆ. ಹೊರತು ಅಭಿವೃದ್ಧಿ ಮಾಡುತ್ತಿಲ್ಲ. ಎರಡು ಮೂರು ತಿಂಗಳು ಕಳೆದರೆ ಸರ್ಕಾರಿ ನೌಕರರಿಗೆ ವೇತನ ಕೊಡಲು ಆಗಲ್ಲ. ಗ್ಯಾರಂಟಿಯಿಂದ ಸ್ವಲ್ಪ ದಿನಗಳ ಕಾಲ ಖುಷಿಪಡಿಸಬಹುದು ಎಂದರು.

ಚಾಮರಾಜನಗರ ಕ್ಷೇತ್ರದಲ್ಲಿ ಸ್ಪರ್ಧೆ ಮಾಡಿರುವ ಬಿಜೆಪಿ ಅಭ್ಯರ್ಥಿ ಎಸ್.ಬಾಲರಾಜ್ ಸಭ್ಯ ರಾಜಕಾರಣಿ. ಕಾಂಗ್ರೆಸ್ ಅಭ್ಯರ್ಥಿ ಬಗ್ಗೆ ಜನರು ಏನು ಮಾತನಾಡುತ್ತಿದ್ದಾರೆ ಅಂತ ನಾನು ಹೇಳುವುದಲ್ಲ. ಜನರೇ ಅದನ್ನು ಹೇಳುತ್ತಿದ್ದಾರೆ ಎಂದು ಟೀಕಿಸಿದರು.

ಕನ್ನಡ ಪುಸ್ತಕ ಪ್ರಾಧಿಕಾರದ ಮಾಜಿ ಅಧ್ಯಕ್ಷ ನಂದೀಶ್ ಹಂಚೆ ಪ್ರಾಸ್ತಾವಿಕ ಮಾತನಾಡಿ, ನೇಹಾ ಹತ್ಯೆ ನಾಗರಿಕ ಸಮಾಜ ತಲೆತಗ್ಗಿಸುವಂತಾಗಿದೆ. ಜಾತ್ಯತೀತತೆ ಬಗ್ಗೆ ಮಾತನಾಡುವ ಮುಖ್ಯಮಂತ್ರಿಗಳು ಅಧಿಕಾರಿಗಳನ್ನು ವರ್ಗಾವಣೆ ಮಾಡುವಾಗ ಜಾತಿಯನ್ನು ನೋಡಿ ಮಾಡುತ್ತಾರೆ. ಆದರೆ ಯಡಿಯೂರಪ್ಪ ಅವರು ಎಂದಿಗೂ ಜಾತಿ ಮಾಡಲಿಲ್ಲ ಎಂದರು.

ಸಭೆಯಲ್ಲಿ ಮುಖಂಡರಾದ ಶಿವಮೂರ್ತಿ ಚಿಕ್ಕಕಾನ್ಯ, ಮಾರ್ಬಳ್ಳಿ ಮೂರ್ತಿ, ಸುನಂದ ಪಾಲನೇತ್ರ, ಚಂದ್ರಶೇಖರ್, ಬ್ಯಾತಹಳ್ಳಿ ನಾಗರಾಜು, ತೋಂಟದಾರ್ಯ, ಯು.ಎಸ್.ಶೇಖರ್, ಹೆಳವರಹುಂಡಿ ಸಿದ್ದಪ್ಪ, ಎಸ್.ಸಿ.ಅಶೋಕ್, ಕಾ.ಪು.ಸಿದ್ದವೀರಪ್ಪ ಮುಗೂರು ನಂಜುಂಡಸ್ವಾಮಿ, ಬಿ.ವಿ.ಮಂಜುನಾಥ್, ಗಿರೀಶ್, ರೇಣುಕಾರಾಜ್, ಬಿ.ನಿರಂಜನಮೂರ್ತಿ, ಜಗದೀಶ್, ಪುಟ್ಟರಾಜು ಹಾಜರಿದ್ದರು.

ಲೋಕಸಭಾ ಚುನಾವಣೆ ನಂತರ ಕಾಂಗ್ರೆಸ್‌ಗೆ ಚೊಂಬು ಹಿಡಿಯುವ ಪರಿಸ್ಥಿತಿ

ಬಿ.ವೈ.ವಿಜಯೇಂದ್ರ ಲೇವಡಿ

ಮೈಸೂರು,ಏ.21(ಬಿಎಲ್‌ಯು)–ಲೋಕಸಭಾ ಚುನಾವಣೆ ನಂತರ ಕಾಂಗ್ರೆಸ್‌ನವರಿಗೆ ಖಾಲಿ ಚೊಂಬು ಹಿಡಿದುಕೊಳ್ಳುವ ಪರಿಸ್ಥಿತಿ ಬರುತ್ತದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಇಂದಿಲ್ಲಿ ಲೇವಡಿ ಮಾಡಿದ್ದಾರೆ.

ಮೈಸೂರಿನ ಪ್ರೆಸಿಡೆಂಟ್ ಹೋಟೆಲ್‌ನಲ್ಲಿ ಪತ್ರಕರ್ತರ ಜೊತೆ ಮಾತನಾಡಿದ ಅವರು, ಕಾಂಗ್ರೆಸ್ ಮುಖಂಡ ನಲಪಾಡ್ ಸೇರಿದಂತೆ ಇತರರು ಬೆಂಗಳೂರಿನಲ್ಲಿ ನಿನ್ನೆ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಖಾಲಿ ಚೆಂಬು ಪ್ರದರ್ಶಿಸಿ ನಡೆಸಿದ ಪ್ರತಿಭಟನೆಗೆ ಹೀಗೆ ತಿರುಗೇಟು ನೀಡಿದರು.

ಕಾಂಗ್ರೆಸ್ ಚೆಂಬು ಜಾಹಿರಾತಿಗೆ ಕವಡೆ ಕಾಸಿನ ಕಿಮ್ಮತ್ತು ಇಲ್ಲ. ಕಾಂಗ್ರೆಸ್‌ನವರು ಏನಾದರೂ ಜಾಹಿರಾತು ನೀಡಲಿ. ಆದರೆ ಈ ಬಾರಿ ನರೇಂದ್ರ ಮೋದಿ ನೇತೃತ್ವದ ಬಿಜೆಪಿ ಸರ್ಕಾರ ಅಧಿಕಾರಕ್ಕೆ ಬರುತ್ತದೆ. ಇದರಿಂದ ಲೋಕಸಭಾ ಚುನಾವಣೆ ತರುವಾಯ ಕಾಂಗ್ರೆಸ್‌ಗೆ ಖಾಲಿ ಚೆಂಬು ಹಿಡಿದುಕೊಳ್ಳುವ ಪರಿಸ್ಥಿತಿ ಎದುರಾಗುತ್ತದೆ ಎಂದು ಹೇಳಿದರು.

ಮಹಿಳೆಯರಿಗೆ ಒಂದು ಲಕ್ಷ ಪಾವತಿ, ರೈತರ ಸಾಲ ಮನ್ನಾ ಸೇರಿದಂತೆ ಹೊಸ ಗ್ಯಾರಂಟಿ ಯೋಜನೆಗಳನ್ನು ಟೀಕಿಸಿದ ವಿಜಯೇಂದ್ರ, ಇಡೀ ದೇಶದಲ್ಲೆ ಕಾಂಗ್ರೆಸ್ 50 ಸ್ಥಾನ ಕೂಡ ಗೆಲ್ಲುವುದಿಲ್ಲ. ಇದರಿಂದ ಅವರು ಕೊಟ್ಟ ಭರವಸೆ ಹೇಗೆ ಈಡೇರುತ್ತದೆ ಎಂದು ಪ್ರಶ್ನಿಸಿದರು.

ಗ್ಯಾರಂಟಿ ಹೆಸರಿನಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಿದೆ. ಚುನಾವಣೆ ನಂತರ ಗ್ಯಾರಂಟಿ ನಿಲ್ಲಿಸಿದರೆ ಇವರಿಗೆ ಬಡಿಗೆ ತೆಗೆದುಕೊಂಡು ಜನರು ಬಡಿಯುತ್ತಾರೆ ಎಂದು ಎಚ್ಚರಿಸಿದರು. ಮಾತೆತ್ತಿದರೆ ಗ್ಯಾರಂಟಿ ಅಂತ ಹೇಳಿ ಪ್ರಚಾರ ಪಡೆಯುತ್ತಿದ್ದಾರೆ. ಆದರೆ ಈ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಯಾವುದೇ ಅಭಿವೃದ್ಧಿ ಕಾರ್ಯಕ್ಕೂ ನಯಾ ಪೈಸೆ ಬಿಡುಗಡೆಯಾಗಿಲ್ಲ. ಇದರಿಂದ ರಾಜ್ಯದಲ್ಲಿ ಅಭಿವೃದ್ಧಿ ಶೂನ್ಯವಾಗಿದೆ ಎಂದು ಟೀಕಿಸಿದರು.

ಲವ್ ಜಿಹಾದ್‌ನಿಂದ ನೇಹಾ ಕೊಲೆ

ಹುಬ್ಬಳ್ಳಿಯ ನೇಹಾ ಕೊಲೆಗೆ ಲವ್ ಜಿಹಾದ್ ಕಾರಣ ಎಂದು ಆಕೆಯ ಪೋಷಕರೆ ಹೇಳುತ್ತಿದ್ದಾರೆ. ಆದರೆ ವೈಯಕ್ತಿಕ ವಿಚಾರಕ್ಕೆ ಕೊಲೆಯಾಗಿದೆ ಎಂದು ಸರ್ಕಾರ ಹೇಳುತ್ತಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಕಿಡಿಕಾರಿದರು.

ಮಗಳನ್ನು ಕಳೆದುಕೊಂಡ ನೇಹಾ ಪೋಷಕರು ದುಖಃದಲ್ಲಿದ್ದಾರೆ. ಹೀಗಿರುವಾಗ ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಸರ್ಕಾರದಲ್ಲಿ ಉನ್ನತ ಸ್ಥಾನದಲ್ಲಿರುವವರು ಅವರಿಗೆ ಸಾಂತ್ವನ ಹೇಳಬೇಕು. ಈ ಮೂಲಕ ಹೆಣ್ಣು ಮಕ್ಕಳಿಗೆ ರಕ್ಷಣೆ ನೀಡುತ್ತೇವೆ ಎಂದು ಭರವಸೆ ನೀಡಬೇಕು. ಅದು ಬಿಟ್ಟು ದುರಹಂಕಾರ ಹಾಗೂ ಬೇಜವಾಬ್ದಾರಿಯಿಂದ ಹೇಳಿಕೆ ನೀಡುತ್ತಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಅಲ್ಪ ಸಂಖ್ಯಾತರನ್ನು ಓಲೈಸಲು ಕಾಂಗ್ರೆಸ್ ಸರ್ಕಾರ ಇಂತಹ ಹೇಳಿಕೆಗಳನ್ನು ನೀಡುತ್ತಿದೆ. ಇದನ್ನು ಸೂಕ್ಷ್ಮವಾಗಿ ಅವಲೋಕಿಸುತ್ತಿರುವ ಜನರು ಕರ್ನಾಟಕದಲ್ಲಿ ತಾಲಿಬಾನ್ ಸರ್ಕಾರ ಅಧಿಕಾರದಲ್ಲಿದೆ ಎಂದು ಮಾತನಾಡಿಕೊಳ್ಳುತ್ತಿದ್ದಾರೆ. ಕಾಂಗ್ರೆಸಿಗರ ಇಂತಹ ನಡವಳಿಕೆಗಳಿಂದ ಚುನಾವಣೆ ನಂತರ ರಾಜ್ಯ ಸರ್ಕಾರದ ಮೇಲೆ ಪರಿಣಾಮ ಬೀರುತ್ತದೆ ಎಂದು ಎಚ್ಚರಿಸಿದರು. ನೇಹ ಫೋಟೋ ವೈರಲ್ ಹಿಂದೆ ಕೂಡ ಕಾಂಗ್ರೆಸ್ ಕೈವಾಡವಿದೆ. ವಾಸ್ತವತೆ ಜನರಿಗೂ ತಿಳಿದಿದೆ. ಆದ ಕಾರಣ ಲೋಕಸಭಾ ಚುನವಣೆಯಲ್ಲಿ ರಾಜ್ಯದ ಜನರು ಕಾಂಗ್ರೆಸ್‌ಗೆ ತಕ್ಕ ಉತ್ತರ ನೀಡುತ್ತಾರೆ ಎಂದು ವಿಜಯೇಂದ್ರ ಮತ್ತೊಮ್ಮೆ ಎಚ್ಚರಿಕೆ ನೀಡಿದರು.



ಮೈಸೂರಿನ ಇಟ್ಟಿಗೆಗೂಡು, ನಜರ್‌ಬಾದ್‌ನಲ್ಲಿ ಮಾಜಿ ಶಾಸಕ ಎಂ.ಕೆ.ಸೋಮಶೇಖರ್, ಮುಡಾ ಮಾಜಿ ಅಧ್ಯಕ್ಷ ಹೆಚ್.ವಿ.ರಾಜೀವ್, ಕಾಂಗ್ರೆಸ್ ಅಭ್ಯರ್ಥಿ ಎಂ.ಲಕ್ಷ್ಮಣ್ ಪರವಾಗಿ ಮತಯಾಚನೆ ಮಾಡಿದರು. ನಗರಾಧ್ಯಕ್ಷ ಆರ್.ಮೂರ್ತಿ, ಪ್ರಧಾನ ಕಾರ್ಯದರ್ಶಿ ಎಂ.ಶಿವಣ್ಣ, ಲೋಕೇಶ್ ರಾವ್, ಮಾಜಿ ಪಾಲಿಕೆ ಸದಸ್ಯರಾದ ಪಲ್ಲವಿ ಬೇಗಂ, ಆರ್.ಹೆಚ್.ಕುಮಾರ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಜಿ.ಸೋಮಶೇಖರ್, ಟೈಲ್ಸ್ ಮಹೇಶ್, ಫುಟ್ಬಾಲ್ ಮಂಜು, ಪ್ರಭಾಕರ್, ಸಿದ್ದಲಿಂಗಣ್ಣ, ನರೇಂದ್ರ, ಚಿಕ್ಕಲಿಂಗಯ್ಯ, ಪೈ.ಮಹೇಶ್, ಧರ್ಮ, ದೀಪು, ರವೀಶ್, ಕ್ರಿಯೇಟಿವ್ ಕುಮಾರ್, ಫಾರೂಕ್, ನಾಸೀರ್, ಮಧುರಾಜ್ ಮತ್ತಿತರರು ಉಪಸ್ಥಿತರಿದ್ದರು.

ಕಾಂಗ್ರೆಸ್‌ನಿಂದ ಮಾತ್ರ ಬಡವರ ಬದುಕು ಹಸನು

ಮೈಸೂರು-ಕೊಡಗು ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಲಕ್ಷ್ಮಣ ಪರ ಸಚಿವ ವೆಂಕಟೇಶ್ ಮತಯಾಚನೆ

ಪಿರಿಯಾಪಟ್ಟಣ,ಏ.21(ಎಂಟಿವೈ)–ದೇಶದ ಅಭಿವೃದ್ಧಿ ಹಾಗೂ ಬಡಜನರ ಏಳ್ಗೆ ಕಾಂಗ್ರೆಸ್‌ನಿಂದ ಮಾತ್ರ ಸಾಧ್ಯ. ಕೇಂದ್ರದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಕುಟುಂಬದ ಯಜಮಾನಿಗೆ ವಾರ್ಷಿಕ ಒಂದು ಲಕ್ಷ ರೂ. ನೀಡುವ ಯೋಜನೆ ಸೇರಿದಂತೆ ಪ್ರಮುಖ 5 ನ್ಯಾಯ ಯೋಜನೆಗಳು, 25 ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿ ಬಡಜನರ ಬದುಕನ್ನು ಹಸನುಗೊಳಿಸುತ್ತೇವೆ ಎಂದು ಸಚಿವ ಕೆ.ವೆಂಕಟೇಶ್ ತಿಳಿಸಿದ್ದಾರೆ.



ಪಿರಿಯಾಪಟ್ಟಣದ ವಿವಿಧ ಗ್ರಾಮಗಳಲ್ಲಿ ಸಚಿವ ಕೆ.ವೆಂಕಟೇಶ್, ಕಾಂಗ್ರೆಸ್ ಅಭ್ಯರ್ಥಿ ಎಂ.ಲಕ್ಷ್ಮಣ ಪರ ಮತಯಾಚಿಸಿದರು.

ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಎಂ.ಲಕ್ಷ್ಮಣ ಪರ ಪಿರಿಯಾಪಟ್ಟಣ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಪಂಚವಳ್ಳಿ, ಮಾಲಂಗಿ, ಲಕ್ಷ್ಮೀಪುರ, ಚೌತಿ, ಮುತ್ತೂರು, ಚಿಟ್ಟೇನಹಳ್ಳಿ, ಕೋಮಲಾಪುರ, ಭುವನಹಳ್ಳಿ, ಹುಣಸವಾಡಿ, ಬೈಲಕುಪ್ಪೆ ಸೇರಿದಂತೆ ವಿವಿಧ ಗ್ರಾಮಗಳಲ್ಲಿ ಬಿರುಸಿನ ಪ್ರಚಾರ ನಡೆಸಿದರು.

ಈ ವೇಳೆ ಮಾತನಾಡಿದ ಅವರು, ದೇಶಕ್ಕೆ ಸ್ವಾತಂತ್ರ್ಯ ದೊರಕಿಸಿಕೊಡುವಲ್ಲಿ ಪ್ರಮುಖ ಪಾತ್ರವಹಿಸಿದ ಕಾಂಗ್ರೆಸ್ ದೇಶದ ಅಭಿವೃದ್ಧಿಯೊಂದಿಗೆ ಸರ್ವಜನಾಂಗದ ಹಿತ ಬಯಸುವ ಏಕೈಕ ಪಕ್ಷ. ಕಳೆದ 10 ವರ್ಷದಿಂದ ದೇಶದಲ್ಲಿ ಆಡಳಿತ ನಡೆಸಿದ ಪ್ರಧಾನಿ ಮೋದಿ ಬಡವರು, ರೈತರು, ಕೂಲಿ ಕಾರ್ಮಿಕರು, ಶೋಷಿತ ಸಮುದಾಯ, ಅಸಂಘಟಿತ ವರ್ಗಗಳ ಹಿತವನ್ನು ಬಲಿಕೊಟ್ಟು ಶ್ರೀಮಂತರ ಹಿತ ಕಾಯುವುದಕ್ಕೆ ಮಾತ್ರ ಸೀಮಿತವಾಗಿದ್ದಾರೆ. ಶ್ರೀಮಂತ ಉದ್ಯಮಿಗಳ ಸಾವಿರಾರು ಕೋಟಿ ರೂ. ಸಾಲ ಮನ್ನಾ ಮಾಡಲು ಮೋದಿ ಅವರು ತೋರಿದ ಉತ್ಸಾಹ, ರೈತರ ಸಾಲ ಮನ್ನಾ ಮಾಡಲು ಹಿಂದೇಟು ಹಾಕಿದ್ದಾರೆ. ರಾಜ್ಯದ ಜನರು, ರೈತರು, ಜಾನುವಾರುಗಳು ಬರಗಾಲದಿಂದ ತೀವ್ರ ತತ್ತರಿಸಿದ್ದರೂ, ಪರಿಹಾರ ನೀಡಲು ಅನುದಾನ ನೀಡಲಿಲ್ಲ. ರಾಜ್ಯದ ತೆರಿಗೆ ಪಾಲಿನ ಹಣವನ್ನೂ ನೀಡದೇ ಮಲತಾಯಿ ಧೋರಣೆ ಅನುಸರಿಸಿ ರಾಜ್ಯಕ್ಕೆ ದ್ರೋಹ ಬಗೆದಿದ್ದಾರೆ ಎಂದು ವೆಂಕಟೇಶ್ ಕಿಡಿಕಾರಿದರು.

ಅಭ್ಯರ್ಥಿ ಎಂ.ಲಕ್ಷ್ಮಣ ಮಾತನಾಡಿ, ಅಮೆರಿಕದ ಸಂಸ್ಥೆಯೊಂದು ನಡೆಸಿದ ಚುನಾವಣಾ ಸಮೀಕ್ಷೆಯಲ್ಲಿ ರಾಜ್ಯದಲ್ಲಿ ಬಿಜೆಪಿ 6 ಕ್ಷೇತ್ರ ಗೆಲ್ಲಬಹುದು ಎಂದು ತಿಳಿಸಿದೆ. ಅದಕ್ಕೆ ಬಿಜೆಪಿಯವರು ವಿಚಲಿತರಾಗಿದ್ದಾರೆ. ಯಾವುದೇ ಅಭಿವೃದ್ಧಿ ಕೆಲಸ ಮಾಡದೆ ಮತ ಕೇಳುತ್ತಿದ್ದಾರೆ. ಕೋಮು ಗಲಭೆ ಸೃಷ್ಟಿ ಮಾಡುವುದನ್ನು ಬಿಟ್ಟರೆ ಇನ್ನೇನೂ ಮಾಡಿಲ್ಲ. ಚುನಾವಣಾ ಸಂದರ್ಭದಲ್ಲಿ ಕೋಮುಗಲಭೆ ಸೃಷ್ಟಿಸಲು ಮುಂದಾಗಿದ್ದಾರೆ. ರೈತರ ಸಾಲ ಮನ್ನಾ ಮಾಡದೆ, ಶ್ರೀಮಂತರು ಮಾಡಿದ್ದ 16 ಲಕ್ಷ ಕೋಟಿ ಸಾಲ ಮನ್ನಾ ಮಾಡಿದ್ದಾರೆ. ಚುನಾವಣೆ ಸಂದರ್ಭದಲ್ಲಿ ಮಾತ್ರ ರೈತರು ಬೇಕು. ಇದನ್ನು ಜನ ಅರ್ಥ ಮಾಡಿಕೊಂಡು ಬಿಜೆಪಿಯನ್ನು ತಿರಸ್ಕರಿಸಿ ಕಾಂಗ್ರೆಸ್‌ಗೆ ಬೆಂಬಲ ನೀಡಿ ನಿಮ್ಮ ಸೇವೆ ಮಾಡುವ ಅವಕಾಶ ಮಾಡಿಕೊಡುವಂತೆ ಕೋರಿದರು.

ಬಿಜೆಪಿಯಿಂದ 2 ಬಾರಿ ಸಂಸದರಾಗಿದ್ದ ಪ್ರತಾಪ್ ಸಿಂಹ ಅವರನ್ನು ಏಕಾಏಕಿ ಕಿತ್ತು ಹಾಕಿ, ರಾಜಮನೆತನದ ದತ್ತು ಪುತ್ರರಿಗೆ ಟಿಕೆಟ್ ಕೊಟ್ಟಿದ್ದಾರೆ. ಕಾರಣವೇನು ಎಂಬುದು ಇನ್ನೂ ತಿಳಿದು ಬಂದಿಲ್ಲ. ನಾನು ಚುನಾವಣಾ ಸಂದರ್ಭದಲ್ಲಿ ಮಾತ್ರ ನಿಮ್ಮ ಗ್ರಾಮಗಳಿಗೆ ಬಂದು, ಹೋಗುವವ ನಲ್ಲಾ. ಗೆದ್ದ ಮೇಲೂ ನಿಮ್ಮ ಪರವಾಗಿ ಕೆಲಸ ಮಾಡುತ್ತೇನೆ ಎಂದು ಭರವಸೆ ನೀಡಿದರು.

ಯುವ ಮುಖಂಡ ನಿತಿನ್, ಬ್ಲಾಕ್ ಕಾಂಗ್ರೆಸ್ ಹಾಲಿ, ಮಾಜಿ ಅಧ್ಯಕ್ಷರು, ಮಾಜಿ ಜಿಪಂ ಸದಸ್ಯರು, ಪದಾಧಿಕಾರಿಗಳು, ಮಾಜಿ ಯುವ ಕಾಂಗ್ರೆಸ್ ಜಿಲ್ಲಾಧ್ಯಕ್ಷರು, ಕಾರ್ಯಕರ್ತರು ಇದ್ದರು.



ಚಾಮರಾಜನಗರ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಸುನೀಲ್ ಬೋಸ್ ಪರ ನಂಜನಗೂಡು ಸರಸ್ವತಿ ಕಾಲೋನಿ, ರಾಜಾಜಿ ಕಾಲೋನಿ ಮತ್ತು ಶಂಕರಪುರದಲ್ಲಿ ಸಚಿವ ಹೆಚ್.ಸಿ.ಮಹದೇವಪ್ಪ, ಶಾಸಕ ದರ್ಶನ್, ಮಾಜಿ ಶಾಸಕ ಕಳಲೆ ಕೇಶವಮೂರ್ತಿ ಮತ್ತಿತರ ಮುಖಂಡರು ಪ್ರಚಾರ ನಡೆಸಿದ ನಂತರ ಕೆಪಿಸಿಸಿ ಸಂಯೋಜಕ ಎನ್.ಭಾಸ್ಕರ್ ಮನೆ ಮನೆಗೆ ತೆರಳಿ ಗ್ಯಾರಂಟಿ ಕಾರ್ಡ್ ಹಂಚುವ ಮೂಲಕ ಮತಯಾಚಿಸಿದರು.

RESIDENTIAL SITE FOR SALE

50/80 South Facing
Calm Location Site
adjacent to Kuvempunagar
Serious buyers please call
+91 98457 67065

10ನೇ ವರ್ಷದ ಪುಣ್ಯಸ್ಮರಣೆ



ಜನನ: 20.01.1993
ಮರಣ: 22.04.2014

ನೀವು ನಮ್ಮನ್ನಗಲಿ ಇಂದಿಗೆ 10 ವರ್ಷ ಕಳೆದರೂ ನಿಮ್ಮ ನೆನಪು ಸದಾ ನಮ್ಮ ಮನದಲ್ಲಿದೆ

ದುಃಖತಪ್ತರು:
ಹನುಮಂತಯ್ಯ ಮತ್ತು ಜಯಲಕ್ಷ್ಮಿ
ಶ್ರೀ ಚೆನ್ನಕೇಶ್ವರ ಸ್ವಾಮಿ ಇಂಡಸ್ಟ್ರೀಸ್, ಮೈಸೂರು
ಕುಟುಂಬವರ್ಗದವರು ಹಾಗೂ ಸ್ನೇಹಿತರು

ಸಂತೋಷ್ ಕುಮಾರ್.ಹೆಚ್

ಅಕ್ರಮವಾಗಿ ಸಾಗಿಸುತ್ತಿದ್ದ 5 ಲಕ್ಷ ರೂ. ಮೌಲ್ಯದ ಮದ್ಯ ವಶ

ಮೈಸೂರು, ಏ.21(ಎಸ್‌ಬಿಡಿ)– ಅಕ್ರಮವಾಗಿ ಸಾಗಿಸುತ್ತಿದ್ದ ಸುಮಾರು 5 ಲಕ್ಷ ರೂ. ಮೌಲ್ಯದ ಮದ್ಯವನ್ನು ಅಬಕಾರಿ ವಿಚಕ್ಷಣ ದಳ ವಶಪಡಿಸಿಕೊಂಡಿದೆ.

ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಮೈಸೂರು ಹೊರವಲಯದ ಹಲವೆಡೆ ಭಾನುವಾರ ವಿಶೇಷ ದಾಳಿ ನಡೆಸಿ, ಪ್ಯಾಸೆಂಜರ್ ಆಟೋ ಹಾಗೂ ದ್ವಿಚಕ್ರ ವಾಹನಗಳಲ್ಲಿ ಸಾಗಿಸುತ್ತಿದ್ದ ಮದ್ಯವನ್ನು ವಶಪಡಿಸಿಕೊಳ್ಳಲಾಗಿದೆ.

ಅಬಕಾರಿ ಜಂಟಿ ಆಯುಕ್ತ ಎಫ್.ಎಚ್.ಛಲವಾದಿ ಹಾಗೂ ಉಪ ಆಯುಕ್ತ ನಾಗರಾಜಪ್ಪ ಮಾರ್ಗದರ್ಶನದಲ್ಲಿ ಜಿಲ್ಲಾ ವಿಚಕ್ಷಣ ದಳದ ನಿರೀಕ್ಷಕ ಎ.ಎ.ಮುಜಾವರ, ಸಿಬ್ಬಂದಿ ಗುರುಮಲ್ಲೇಶ್, ಅಜಯ್ ಹಾಗೂ ಪ್ರತಾಪ್ ಲಕ್ಷ್ಮೀಪುರ, ನಾಗನಹಳ್ಳಿ ಇನ್ನಿತರ ಗ್ರಾಮಗಳಲ್ಲಿ ದಾಳಿ ನಡೆಸಿ, ದ್ವಿಚಕ್ರ ವಾಹನಗಳಲ್ಲಿ ಸಾಗಿಸುತ್ತಿದ್ದ ಸುಮಾರು 3 ಲಕ್ಷ ರೂ. ಮೌಲ್ಯದ ಮದ್ಯ ವಶಪಡಿಸಿಕೊಂಡು, ಉಮೇಶ್, ಶಿವಕುಮಾರ್, ದೇವರಾಜ್, ಮಹೇಶ್ ಹಾಗೂ ಶಿವರಾಮು ವಿರುದ್ಧ ಅಬಕಾರಿ ಕಾಯ್ದೆಯಡಿ ಪ್ರಕರಣ ದಾಖಲಿಸಿದ್ದಾರೆ.

ಮತ್ತೊಂದು ಪ್ರಕರಣದಲ್ಲಿ ಅಬಕಾರಿ ಉಪ ಅಧೀಕ್ಷಕರಾದ ಕೆ.ಮೋಹನ ನೇತೃತ್ವದಲ್ಲಿ ಬೆಳವಾಡಿ ಗೇಟ್‌ನಲ್ಲಿ ದಾಳಿ ನಡೆಸಿ, ಪ್ಯಾಸೆಂಜರ್ ಆಟೋದಲ್ಲಿ ಸಾಗಿಸುತ್ತಿದ್ದ ಸುಮಾರು 2 ಲಕ್ಷ ರೂ. ಮೌಲ್ಯದ ಮದ್ಯ ವಶಪಡಿಸಿಕೊಳ್ಳಲಾಗಿದೆ. ಕಾರ್ಯಾಚರಣೆಯಲ್ಲಿ ಉಪ ವಿಭಾಗದ ನಿರೀಕ್ಷಕ ಚಂದ್ರಶೇಖರ್, ಉಪ ನಿರೀಕ್ಷ ರಂಗನಾಥ್ ಸಿಬ್ಬಂದಿ ಮೋಹನ್, ರಾಜೇಶ್, ರಮೇಶ್ ಭಾಗವಹಿಸಿದ್ದರು.




ಅಕ್ರಮ ಮಾರಾಟಕ್ಕೆ ಸಾಗಿಸುತ್ತಿದ್ದ ಮದ್ಯ ವಶಪಡಿಸಿಕೊಂಡ ಅಬಕಾರಿ ವಿಚಕ್ಷಣ ದಳ.

HOME TUTOR REQUIRED

- For CBSE Class 8th to 10th
- For all Subject and Languages

Raghavendranagar, Near Kendriya Vidyalay School
Ph: 9611119622

ಸಾಕು ಪ್ರಾಣಿ ಕಾಣೆಯಾಗಿದೆ



21.04.2024ರ ಭಾನುವಾರ 9ರ ಸಮಯದಲ್ಲಿ ಚಾಮುಂಡಿ ಬೆಟ್ಟದ ಪಾದದ ಬಳಿ ನಮ್ಮ ನಾಯಿ ಚಾರ್ಲಿ ಕಾಣೆಯಾಗಿದೆ ತಳಿ: ಬೀಗಲ್, ವಯಸ್ಸು : 01 ವರ್ಷ. ಹುಡುಕಿ ಕೊಟ್ಟವರಿಗೆ ಸೂಕ್ತ ಬಹುಮಾನ ನೀಡಲಾಗುವುದು.

ಸಂಪರ್ಕಿಸಿ: 7353268339, 8746813193

ಚಾರ್ಲಿ

ಸಾರ್ವಜನಿಕ ಪ್ರಕಟಣೆ

ನಮ್ಮ ಕಕ್ಷಿದಾರರಾದ ಮೈಸೂರು ತಾಲ್ಲೂಕು, ಮೈಸೂರುಜಿಲ್ಲೆ, ಗಾಯಿತ್ರಿಪುರಂನಲ್ಲಿ ವಾಸವಾಗಿರುವ ಎನ್.ಕಿರಣಕುಮಾರ್ ಹಾಗೂ ವಿಶ್ವೇಶ್ವರ ನಗರದಲ್ಲಿ ವಾಸವಾಗಿರುವ ಯಶ್ವಂತ್. ಎಸ್ ರವರು ಷೆಡ್ಯೂಲ್‌ನಲ್ಲಿ ನಮೂದಿಸಿರುವ ಸ್ವತ್ತುಗಳನ್ನು ಅದರ ಮಾಲೀಕರಾದ ಮೈಸೂರು ಜಿಲ್ಲೆ, ಜಯಪುರ ಹೋಬಳಿ ಧನಗಳ್ಳಿ ಗ್ರಾಮದಲ್ಲಿ ವಾಸವಾಗಿರುವ ಬಸವರಾಜಪ್ಪ ಮಕ್ಕಳಾದ ನಾಗರಾಜು ಬಿ ಮತ್ತು ಕುಮಾರ್ ಬಿ ರವರಿಂದ ಷೆಡ್ಯೂಲ್ ಸ್ವತ್ತಿಗೆ ಸಂಬಂಧಿಸಿದಂತೆ ಯಾರಿಗಾದರು ಯಾವುದೇ ರೀತಿಯಾದ ಮಾಲೀಕತ್ವದ ಹಕ್ಕು, ಹಿತಾಸಕ್ತಿ ಇದ್ದ ಪಕ್ಷದಲ್ಲಿ ಈ ಪತ್ರಿಕೆ ಪ್ರಕಟಣವಾದ 15 ದಿನಗಳ ಒಳಗಾಗಿ ತಮ್ಮ ತಕರಾರು ಮತ್ತು ಹಕ್ಕು ಬಾಧ್ಯತೆಗೆ ಸಂಬಂಧಿಸಿದಂತೆ ಲಿಖಿತವಾಗಿ ಹಾಗೂ ಖುದ್ದಾಗಿ ಅಥವಾ ವಕೀಲರ ಮೂಲಕ ಸಂಬಂಧಪಟ್ಟ ದಾಖಲಾತಿಗಳೊಡನೆ ಈ ಕೆಳಕಂಡ ವಿಳಾಸಕ್ಕೆ ಸಲ್ಲಿಸತಕ್ಕದ್ದು ತಪ್ಪಿದಲ್ಲಿ ಒಂದು ವೇಳೆ ಈ ಮೇಲ್ಕಂಡ 15 ದಿನಗಳ ಒಳಗಾಗಿ ಯಾವುದೇ ತಂಟೆ ತಕರಾರು ಬರದಿದ್ದಲ್ಲಿ ನಮ್ಮ ಕಕ್ಷಿದಾರರು ಷೆಡ್ಯೂಲ್ ಸ್ವತ್ತಿನ ಮಾಲೀಕರೊಡನೆ ನೋಂದಾಯಿತ ಶುದ್ಧ ಕ್ರಯಪತ್ರವನ್ನು ಮಾಡಿಕೊಳ್ಳುತ್ತಾರೆ. ಆನಂತರ ಬರುವ ಯಾವುದೇ ರೀತಿಯ ವ್ಯವಹಾರ, ತಂಟೆತಕರಾರುಗಳು ನಮ್ಮ ಕಕ್ಷಿದಾರರನ್ನು ಬಧ್ಧಪಡಿಸುವುದಿಲ್ಲ ಎಂದು ತಿಳಿಯಪಡಿಸಲಾಗಿದೆ.

ಷೆಡ್ಯೂಲ್

1. ಮೈಸೂರು ಜಿಲ್ಲೆ, ನಂಜನಗೂಡು ತಾಲ್ಲೂಕು, ಹುಲ್ಲಹಳ್ಳಿ ಹೋಬಳಿ, ಇಬ್ಜಾಲ ಗ್ರಾಮಕ್ಕೆ ಸೇರಿದ್ದ ಖುಷ್ಕಿ ಸರ್ವೆ ನಂಬರ್ 162 2/ಎ ಒ: ವಿ: 2 ಎಕರೆ 36 ಗುಂಟೆ, ಪೂಟ್ ಖರಾಬು 0.02 ಜಾತಾ ಉಳಿಕೆ 2 ಎಕರೆ 36 ಗುಂಟೆ ಆಕಾರ 6.02 ಪೈಸೆವುಳ್ಳದರ ಪೈಕಿ (ನಕ್ಷೆ ಸಂಖ್ಯೆ : 26061221810430001) 1 ಎಕರೆ 30 ಗುಂಟೆ ಕೃಷಿ ಜಮೀನಿಗೆ ಚಕ್ಕುಬಂದಿ:–
ಪೂರ್ವಕ್ಕೆ : ಬ್ಲಾಕ್ 1 (ಉಳಿಕೆ ಜಮೀನು)ಸ.ನಂ.
ಪಶ್ಚಿಮಕ್ಕೆ : 164(ಚರಂಡಿ ಮತ್ತು ರಾಚನಾಯಕ ರವರ ಜಮೀನು) ಉತ್ತರಕ್ಕೆ : ರಸ್ತೆ,
ದಕ್ಷಿಣಕ್ಕೆ : ಸ. ಹಿ..1.2ಃ (ಕೆಂಪಬಾಮ್ಮ ಮತ್ತು ಶ್ರೀಕಂಠನಾಯಕ ರವರ ಜಮೀನು)

Sd/- C.K.RUDRAMURTHY
R.UMESH
Advocates (KAR/1814/08)
No.8, 2nd Floor, Behind Maramma Temple, Bajjanna Lane, Chamarajapuram, Mysore-570005. Mob: 9481008246

ADVANCED grohair Hair Regrowth Forever gloskin Skin Glow Forever
50+ CLINICS MAKING INDIA BOUNTIFUL

MYSURU'S LEADING HAIR TRANSPLANT AT 25% OFF*
&
GET 1 MONTH MAINTENANCE SESSION FREE*



- GFC HAIR TREATMENT • COSMETIC HAIR SYSTEM • OXYGEN LASER THERAPY
- HYDRAFACIAL • GLUTATHIONE • BOTOX & FILLERS

* ABOVE TARIFF IS EXCLUDING GST | * CANNOT BE COMBINED WITH ANY OTHER OFFERS | VALID TILL – 30TH APRIL, 2024

+91 96269 56789
#20, 1st Floor, Kalidasa Road, Jayalakshmipuram, Mysuru – 570002 (Landmark: Above Kotak Mahindra Bank)
www.adgrohair.com
www.adgloskin.com
adgrohairclinicmysuru
adgloskinclinicmysuru

ರತ್ನ ಪ್ಯಾರಾ ಮೆಡಿಕಲ್ ಕಾಲೇಜ್
ರಮಾವಿಲಾಸ್ ರಸ್ತೆ, ಸೆಂಟ್ರಲ್ ಬ್ಯಾಂಕ್ ಆಫ್ ಇಂಡಿಯಾ ಹತ್ತಿರ, ಮೈಸೂರು
ಪ್ರವೇಶ ತೆರೆದಿದೆ
ಡಿಪ್ಲೋಮಾ ಇನ್ ಮೆಡಿಕಲ್ ಲ್ಯಾಬ್ ಟೆಕ್ನಾಲಜಿ (DMLT)
SSLC / PUC Pass / Fail
ಬ್ಯಾಚುಲರ್ಸ್ ಇನ್ ಮೆಡಿಕಲ್ ಲ್ಯಾಬ್ ಟೆಕ್ನಾಲಜಿ (B.Voc)
Mob: 9886654463

PROPERTY FOR SALE
(PRIME COMMERCIAL)
Heart of the City (East Face)
28 x 92 Feet (2576 sft.)
Deviation Road
(Near Pachchappa Circle)
CHAMARAJANAGARA
97313 00999
Brokers Excuse

2 BHK HOME INTERIORS
Starting @ ₹2.5 Lacs*
Home Space Mart™
TALK TO OUR DESIGN TEAM
9108923123

APARTMENT FOR SALE
Lakshmipuram 1st Cross,
1050 sq.ft.,
East Facing
Contact : Dr. Sreenivas V.
Call : 80951 15547

ಉಚಿತ ಹೆಲ್ತ್‌ಕೇರ್ ತರಬೇತಿ
ಎಸ್‌ಎಸ್‌ಎಲ್‌ಸಿ/ಪಿಯುಸಿ ಆದವರಿಗೆ ಉಚಿತ ಡಿಪ್ಲಮೋ ಇನ್ ಹೆಲ್ತ್ ಕೇರ್ ತರಬೇತಿ ಕೊಡಲಾಗುತ್ತದೆ. ಟೆಲಿಕಾಲರ್ಸ್ ಬೇಕಾಗಿದ್ದಾರೆ – 5 ಹುದ್ದೆ
8904170193

ಮೈಸೂರು ಮಿತ್ರ ಓದುಗರ ಗಮನಕ್ಕೆ
ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
-ಜಾಹೀರಾತು ವ್ಯವಸ್ಥಾಪಕರು